24 ವರ್ಷಗಳಿಂದ ದೆಹಲಿಯಲ್ಲಿ ಪ್ರಕಟವಾಗುತ್ತಿರುವ ಪ್ರಪ್ರಥಮ ರಾಷ್ಟ್ರೀಯ ಕನ್ನಡ ದಿನಪತ್ರಿಕೆ

# ದೆಹಲಿ ವಾರ್ತೆ

www.dehalivaarthe.com

EDITION: NEW DELHI / CIRCULATION IN U.P. & HARYANA | EDITOR : K.R. RENU | RNI No. DELKAN/2003/10363 | ಪುಟ 8 | ಸಂಪುಟ 24 | ಸಂಚಿಕೆ 47 | ನವದೆಹಲಿ | ಬೆಲೆ ₹ 10 | ಆಗಸ್ಟ್ 12, 2026, ಬುಧವಾರ

## ಒಳಪುಟಗಳಲ್ಲಿ

ರೆಡ್‌ಜೋನ್‌ನಿಂದ ಮುಕ್ತಿ: ಟೌನ್‌ಶಿಪ್‌ಗೆ ಭೂಮಿ ನೀಡಲು ಸಿದ್ಧ- ಪು.3

10 ರೂ, 20 ರೂ. ಪಾಲಿಮರ್ ನೋಟುಗಳ ಪ್ರಾಯೋಗಿಕ ಬಳಕೆ: ಕೇಂದ್ರದ ಅನುಮೋದನೆ- ಪು.4

ನಾನು, ಸಚಿವರು ಸೇರಿ ಎಲ್ಲರೂ ಸರ್ಕಾರಿ ನೌಕರರು, ನಾವೆಲ್ಲಾ ಟೀಮ್ ಕರ್ನಾಟಕವಾಗಿ ಕೆಲಸ ಮಾಡೋಣ: ಸಿಎಂ ಡಿ.ಕೆ.ಶಿವಕುಮಾರ್- ಪು.5

# ಪ್ರತಿದಿನ 12 ಸಾವಿರ ಕ್ಯೂಸೆಕ್ ನೀರು ಹರಿಸಿ: ಕರ್ನಾಟಕಕ್ಕೆ ಸೂಚನೆ

**ನವದೆಹಲಿ, ಆ.11 : ಕಾವೇರಿ ನೀರು ಹಂಚಿಕೆ ವಿಚಾರದಲ್ಲಿ ಕರ್ನಾಟಕಕ್ಕೆ ಮತ್ತೆ ಸಂಕಷ್ಟ ಎದುರಾಗಿದೆ. ತಮಿಳುನಾಡಿಗೆ ಮುಂದಿನ 15 ದಿನಗಳ ಕಾಲ ಪ್ರತಿದಿನ 12,000 ಕ್ಯೂಸೆಕ್ ನೀರು ಹರಿಸುವಂತೆ ಕಾವೇರಿ ನೀರು ನಿಯಂತ್ರಣ ಸಮಿತಿ (ಸಿಡಬ್ಲ್ಯೂಆರ್‌ಸಿ) ಮಾಡಿದ್ದ ಶಿಫಾರಸನ್ನು ಪಾಲಿಸುವಂತೆ ಕಾವೇರಿ ನೀರು ನಿರ್ವಹಣಾ ಪ್ರಾಧಿಕಾರ (ಸಿಡಬ್ಲ್ಯೂಎಂಎ) ಕರ್ನಾಟಕಕ್ಕೆ ಸೂಚಿಸಿದೆ.**

ಸಿಡಬ್ಲ್ಯೂಆರ್‌ಸಿ ಸಭೆಯಲ್ಲಿ ಕರ್ನಾಟಕ ತನ್ನ ಜಲಸಂಕಷ್ಟದ ವಾಸ್ತವ ಸ್ಥಿತಿಯನ್ನು ವಿವರವಾಗಿ ಮಂಡಿಸಿತ್ತು. ರಾಜ್ಯದ ನಾಲ್ಕು ಪ್ರಮುಖ ಕಾವೇರಿ ಜಲಾಶಯಗಳಿಗೆ ಪ್ರಸಕ್ತ ಒಳಹರಿವು ಕೇವಲ 77.74 ಟಿಎಂಸಿ ಇದ್ದು, ಇದು ಕಳೆದ 30 ವರ್ಷಗಳ ಸರಾಸರಿಗಿಂತ ಶೇ.47ರಷ್ಟು ಕಡಿಮೆ ಎಂದು ತಿಳಿಸಿತು. ಒಳಹರಿವು ತೀವ್ರವಾಗಿ ಇಳಿಯುತ್ತಿರುವುದರಿಂದ ಮುಂದಿನ ದಿನಗಳಲ್ಲಿ ಹೆಚ್ಚುವರಿ ನೀರು ಬಿಡುಗಡೆ ಮಾಡುವುದು ಕಷ್ಟ ಎಂದು ರಾಜ್ಯ ವಾದಿಸಿತು.

ಆಗಸ್ಟ್ 10ರವರೆಗೆ ಬಿಳಿಗುಂಡ್ಲುವಿನಲ್ಲಿ 86,942 ಕ್ಯೂಸೆಕ್ ನೀರು ಹರಿದುಬಂದಿದ್ದು, ನಿಗದಿತ 52,500 ಕ್ಯೂಸೆಕ್ಗಿಂತ ಹೆಚ್ಚಾಗಿದೆ. ಇನ್ನಷ್ಟು ನೀರು ಮಾರ್ಗದಲ್ಲಿದೆ. ಹೀಗಾಗಿ ಸದ್ಯ ಹೆಚ್ಚುವರಿ ನೀರು ಬಿಡುಗಡೆ ಕುರಿತು ನಿರ್ಧಾರ ಕೈಗೊಳ್ಳದೆ, ಮುಂಗಾರು ಪರಿಸ್ಥಿತಿ ಹಾಗೂ ಜಲಾಶಯಗಳ ಮಟ್ಟವನ್ನು ಗಮನಿಸಿ ನಂತರ ಮರು ಪರಿಶೀಲಿಸಬೇಕು ಎಂದು ಕರ್ನಾಟಕ ಮನವಿ ಮಾಡಿತು.

ಕುಡಿಯುವ ನೀರು, ಅಗತ್ಯ ಬಳಕೆ ಮತ್ತು ಕೃಷಿಗಾಗಿ ಲಭ್ಯವಿರುವ ಜಲಸಂಗ್ರಹವನ್ನು ಸಂರಕ್ಷಿಸಬೇಕಾಗಿದೆ. ನೀರು ಹಂಚಿಕೆಯಲ್ಲಿ ಕೇವಲ ಕಠಿಣ ಪ್ರಮಾಣಾನುಪಾತದ ಸೂತ್ರ ಅನುಸರಿಸುವ ಬದಲು ವಾಸ್ತವ ಮಳೆ, ಒಳಹರಿವು ಮತ್ತು ಹವಾಮಾನ ಪರಿಸ್ಥಿತಿಯನ್ನು ಪರಿಗಣಿಸಬೇಕು ಎಂದು ಕರ್ನಾಟಕ ವಾದಿಸಿತು.

### ತಮಿಳುನಾಡಿನ 36 ಟಿಎಂಸಿ ಬೇಡಿಕೆ: ಸುಪ್ರೀಂ ಮೆಟ್ಟಿಲೇರಲು ರಾಜ್ಯದ ಚಿಂತನೆ



ಇನ್ನೊಂದೆಡೆ ತಮಿಳುನಾಡು ತನ್ನ ಪಾಲಿನ ನೀರು ಸಂಪೂರ್ಣವಾಗಿ ದೊರೆತಿಲ್ಲ ಎಂದು ವಾದಿಸಿತು. ಜುಲೈ 29ರಿಂದ ಆಗಸ್ಟ್ 12ರವರೆಗೆ ದಿನಕ್ಕೆ 3,500 ಕ್ಯೂಸೆಕ್ ನೀರು ಬಿಡುವ ಹಿಂದಿನ ನಿರ್ದೇಶನವನ್ನು ಪರಿಷ್ಕರಿಸಿ, ಕೆಆರ್‌ಎಸ್ ಮತ್ತು ಕಬಿನಿ ಜಲಾಶಯಗಳಿಂದ ನೀರು ಬಿಡಬೇಕು ಎಂದು ಆಗ್ರಹಿಸಿತು.

ಆಗಸ್ಟ್ 12ಕ್ಕೆ ಕರ್ನಾಟಕದಿಂದ 21.357 ಟಿಎಂಸಿ ಬಾಕಿ ಇದೆ ಎಂದು ತಮಿಳುನಾಡು ಲೆಕ್ಕ ನೀಡಿದೆ. ಆಗಸ್ಟ್ 13ರಿಂದ 31ರವರೆಗೆ ಪ್ರಮಾಣಾನುಪಾತದಂತೆ ನೀಡಬೇಕಾದ 15.278 ಟಿಎಂಸಿ ಜೊತೆಗೆ ಬಾಕಿ ನೀರನ್ನೂ ಬಿಡುಗಡೆ ಮಾಡಬೇಕು ಎಂದು ಒತ್ತಾಯಿಸಿದೆ. ಆಗಸ್ಟ್ ಅಂತ್ಯದ ವೇಳೆಗೆ ಬಿಳಿಗುಂಡ್ಲುವಿನಲ್ಲಿ ಒಟ್ಟು 36.472 ಟಿಎಂಸಿ, ಅಂದರೆ ಸುಮಾರು 37 ಟಿಎಂಸಿ ನೀರು ಖಚಿತಪಡಿಸಬೇಕು ಎಂಬುದು ತಮಿಳುನಾಡಿನ ಬೇಡಿಕೆಯಾಗಿತ್ತು.

ಕಳೆದ ಬಾರಿ ಕಬಿನಿಯಿಂದ ನೀರು ಹರಿಸುವ ಮೂಲಕ ಪರಿಸ್ಥಿತಿಯನ್ನು ನಿರ್ವಹಿಸಲಾಗಿತ್ತು. ಆದರೆ ಈ ಬಾರಿ ಹೆಚ್ಚುವರಿ ನೀರು ಹರಿಸುವಂತೆ ಸೂಚಿಸಲಾಗಿದೆ. ಕರ್ನಾಟಕ ತನ್ನ ವಾದವನ್ನು ಪ್ರಾಧಿಕಾರದ ಮುಂದೆ ದಾಖಲಿಸಿದೆ. ಹೀಗಾಗಿ ಸಿಡಬ್ಲ್ಯೂಎಂಎ ನಿರ್ದೇಶನ ಪಾಲಿಸಬೇಕೇ ಅಥವಾ ಸುಪ್ರೀಂಕೋರ್ಟ್‌ನಲ್ಲಿ ಪ್ರಶ್ನಿಸಬೇಕೇ ಎಂಬುದು ರಾಜ್ಯ ಸರ್ಕಾರದ ಮುಂದಿರುವ ಪ್ರಮುಖ ಪ್ರಶ್ನೆಯಾಗಿದೆ.


### ಕಾನೂನು ಹೋರಾಟದ ಬಗ್ಗೆ ಪರಿಶೀಲನೆ: ಗೌರವ್‌ಗುಪ್ತ



ಸಭೆಯಲ್ಲಿ ಭಾಗವಹಿಸಿದ್ದ ಹೆಚ್ಚುವರಿ ಮುಖ್ಯ ಕಾರ್ಯದರ್ಶಿ ಗೌರವ್ ಗುಪ್ತ ಮಾತನಾಡಿ, ಪ್ರಾಧಿಕಾರದ ಶಿಫಾರಸು ಪಾಲಿಸುವಂತೆ ಸೂಚಿಸಿರುವ ಹಿನ್ನೆಲೆಯಲ್ಲಿ ಕರ್ನಾಟಕ ಸರ್ಕಾರ ಕಾನೂನು ಹೋರಾಟದ ಆಯ್ಕೆಯನ್ನೂ ಪರಿಶೀಲಿಸುತ್ತಿದೆ. ಜಲಸಂಪನ್ಮೂಲ ಇಲಾಖೆ ಅಧಿಕಾರಿಗಳ ಪ್ರಕಾರ, ಈ ಬಗ್ಗೆ ಚರ್ಚೆ ಆರಂಭವಾಗಿದ್ದು ಶೀಘ್ರದಲ್ಲೇ ಅಂತಿಮ ನಿರ್ಧಾರ ಕೈಗೊಳ್ಳುವ ಸಾಧ್ಯತೆಯಿದೆ. ನಾವು ಕಾನೂನು ಹೋರಾಟದ ಬಗ್ಗೆ ಚರ್ಚಿಸಿದ್ದೇವೆ. ಶೀಘ್ರದಲ್ಲಿ ನಿರ್ಧಾರ ತೆಗೆದುಕೊಳ್ಳುತ್ತೇವೆ. ಇದೊಂದು ರೀತಿ ಇಕ್ಕಟ್ಟಿನ ಪರಿಸ್ಥಿತಿ ಎಂದು ಗೌರವ್ ಗುಪ್ತ ಹೇಳಿದ್ದಾರೆ.

# ರಾಜ್ಯದ ನೀರಿನ ಪರಿಸ್ಥಿತಿ ಪರಿಶೀಲಿಸಿ ಮುಂದಿನ ತೀರ್ಮಾನ

**ಬೆಂಗಳೂರು, ಆ.11:** ರಾಜ್ಯದ ನೀರಿನ ಪರಿಸ್ಥಿತಿಯನ್ನು ಕೂಲಂಕಷವಾಗಿ ಪರಿಶೀಲಿಸಿದ ನಂತರ ತಮಿಳುನಾಡಿಗೆ 12,000 ಕ್ಯೂಸೆಕ್ಸ್ ಕಾವೇರಿ ನೀರು ಹರಿಸುವ, ಹಾಗೂ ಕಾವೇರಿ ನೀರು ನಿಯಂತ್ರಣ ಸಮಿತಿ ಆದೇಶದ ಬಗ್ಗೆ ಕ್ರಮ ಕೈಗೊಳ್ಳಲಾಗುವುದು ಎಂದು ಸಿಎಂ ಡಿ.ಕೆ. ಶಿವಕುಮಾರ್ ತಿಳಿಸಿದ್ದಾರೆ.



■ ರೈತರ ಹಿತಕಾಯುವ ಜತೆಗೆ ನ್ಯಾಯಾಲಯ ಆದೇಶವನ್ನು ಪಾಲಿಸಬೇಕು: ಸಿಎಂ ಡಿ.ಕೆ ಶಿವಕುಮಾರ್

ವಿಧಾನಸೌಧದಲ್ಲಿ ಮಾಧ್ಯಮಗಳ ಪ್ರಶ್ನೆಗಳಿಗೆ ಪ್ರತಿಕ್ರಿಯಿಸಿದ ಅವರು, ನ್ಯಾಯಾಲಯದ ಆದೇಶಗಳನ್ನು ಪಾಲಿಸುವ ಮತ್ತು ರೈತರ ಹಿತಾಸಕ್ತಿಗಳನ್ನು ರಕ್ಷಿಸುವ ಜೊತೆಗೆ, ನೀರು ಬಿಡುಗಡೆ ಮಾಡುವ ಬಗ್ಗೆ ನಿರ್ಧರಿಸುವ ಮೊದಲು ಸರ್ಕಾರವು ನೀರಿನ ಲಭ್ಯತೆಯನ್ನು ಮೌಲ್ಯಮಾಪನ ಮಾಡುತ್ತದೆ ಎಂದು ಹೇಳಿದರು.

ರಾಜ್ಯದ ಜಲಾಶಯಗಳಿಗೆ ಹರಿದುಬರುತ್ತಿರುವ ಒಳಹರಿವನ್ನು ತಾವು ಗಮನಿಸುತ್ತಿರುವುದಾಗಿ ಹೇಳಿದ ಅವರು, ಬೆಳೆಗಳನ್ನು ಸಹ ರಕ್ಷಿಸುವ ಅಗತ್ಯವಿದೆ ಎಂದು ಒತ್ತು ನೀಡಿದರು. ನೀರಾವರಿಗೆ ನೀರು ಬಿಡುವ ಕುರಿತು ತೀರ್ಮಾನ ಕೈಗೊಳ್ಳುವ ಮುನ್ನ ಸರ್ಕಾರ ಜಲಾಶಯಗಳ ನೀರಿನ ಪರಿಸ್ಥಿತಿಯನ್ನು ಪರಿಗಣಿಸಿ ರೈತರು ಹಾಗೂ ಇತರ ಪಾಲುದಾರರೊಂದಿಗೆ ಸಮಾಲೋಚನೆ ನಡೆಸಸಲಾಗುವುದು ಎಂದು ಹೇಳಿದರು.

### ತಾಳ್ಮೆಯಿಂದಿದ್ದರೆ ಎಲ್ಲ ಸಮಸ್ಯೆಗಳೂ ಬಗೆಹರಿಯಲಿವೆ

ರೈತರು ಪ್ರತಿಭಟನೆ ಕುರಿತು ಮಾತನಾಡಿದ ಡಿ.ಕೆ. ಶಿವಕುಮಾರ್, ನಾನು ಪಾರದರ್ಶಕವಾಗಿ ಕೆಲಸ ಮಾಡುತ್ತೇನೆ. ರಾಜಕೀಯ ಮಾಡುವವರು, ಮಾಧ್ಯಮಗಳ ಮುಂದೆ ಮಾತನಾಡುವವರಿಗಾಗಿ ನಿರ್ಧಾರ ಕೈಗೊಳ್ಳುವುದಿಲ್ಲ. ಯಾರೂ ನೀರನ್ನು ತಡೆಹಿಡಿಯಲು ಸಾಧ್ಯವಿಲ್ಲ. ಜನರು ಸಂಯಮದಿಂದಿರಬೇಕು. ರೈತರನ್ನು ರಕ್ಷಿಸಲು ಅಧಿಕಾರ ನೀಡಿದ್ದಾರೆ. ಯಾವುದೇ ಕಾರಣಕ್ಕೂ ರೈತರಿಗೂ ತೊಂದರೆಯಾಗಲು ಬಿಡುವುದಿಲ್ಲ. ಸಮಾಧಾನದಿಂದಿದ್ದರೆ, ಎಲ್ಲ ಸಮಸ್ಯೆಗಳೂ ಸೌಹಾರ್ದಯುತವಾಗಿ ಬಗೆಹರಿಯಲಿವೆ. ಪ್ರಕೃತಿಯೇ ನಮ್ಮನ್ನು ಕಾಪಾಡುತ್ತದೆ ಎಂದರು. ಬುಧವಾರ ಕರೆಯಲಾಗಿರುವ ಸಚಿವರುಗಳ ಸಭೆ ಬಗ್ಗೆ ಕೇಳಿದಾಗ, "ಮಾರ್ಗದರ್ಶನ ನೀಡಲು ಮತ್ತು ಪಕ್ಷದ ಮುಂದಿನ ಯೋಜನೆಗಳ ಕುರಿತು ಚರ್ಚಿಸಲು ಸಚಿವರು ಹಾಗೂ ಪಕ್ಷದ 15 ನಾಯಕರುಗಳೊಂದಿಗೆ ಬುಧವಾರ ರಾಜಕೀಯ ಸಭೆಯನ್ನು ಕರೆಯಲಾಗಿದೆ. ಗುರುವಾರ ಸಂಪುಟ ಸಭೆ ನಿಗದಿಯಾಗಿದೆ" ಎಂದು ತಿಳಿಸಿದರು.

## ತಮಿಳುನಾಡಿಗೆ 3.5 ಟಿಎಂಸಿ ನೀರು ಹರಿಸಬೇಕಿದೆ: ರಾಮಲಿಂಗಾರೆಡ್ಡಿ

**ಕೋಲಾರ, ಆ.11:** ತಮಿಳುನಾಡಿಗೆ ಮುಂದಿನ 15 ದಿನ ನಿತ್ಯ 12 ಸಾವಿರ ಕ್ಯುಸೆಕ್ ನೀರು ಹರಿಸಲು ಆದೇಶವಾಗಿದೆ. ಅದರಂತೆ ಒಟ್ಟು 15.50 ಟಿಎಂಸಿ ಅಡಿ ನೀರು ಹರಿಸಬೇಕಾಗುತ್ತದೆ. ಬುಧವಾರ ಈ ಸಂಬಂಧ ಸುಪ್ರೀಂ ಕೋರ್ಟ್‌ನಲ್ಲಿ ವಿಚಾರಣೆ ನಡೆಯಲಿದ್ದು, ಅಲ್ಲಿ ಏನಾಗುತ್ತದೆ ಕಾದು ನೋಡೋಣ ಎಂದು ಜಲಸಂಪನ್ಮೂಲ ಸಚಿವ ರಾಮಲಿಂಗಾರೆಡ್ಡಿ ತಿಳಿಸಿದರು.



ಮಂಗಳವಾರ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ನಮ್ಮ ಅಧಿಕಾರಿಗಳು, ವಕೀಲರು ಹಾಗೂ ತಜ್ಞರು ದೆಹಲಿಯಲ್ಲಿದ್ದು, ಈ ವಿಚಾರ ನೋಡಿಕೊಳ್ಳುತ್ತಿದ್ದಾರೆ. ಈಗಾಗಲೇ ತಮಿಳುನಾಡಿಗೆ 3.5 ಟಿಎಂಸಿ ಅಡಿ ನೀರು ಹರಿಸಲಾಗಿದೆ ಎಂಬ ಪ್ರಶ್ನೆಗೆ, '3.5 ಟಿಎಂಸಿ ಅಡಿ ನೀರು ಸಹಜವಾಗಿ ಹರಿಯುವಂಥದ್ದು. ಅಲ್ಲದೇ, ಕಬಿನಿ ಜಲಾಶಯ ತುಂಬಿದ ಕಾರಣ ಅನಿವಾರ್ಯವಾಗಿ ನದಿಗೆ ಹರಿಸಲಾಯಿತು. ರಾಜ್ಯದಲ್ಲಿ ಮುಂಗಾರು ಮಳೆ ಕಡಿಮೆ ಆಗುತ್ತಿದೆ. ತಮಿಳುನಾಡಿಗೆ ಹಿಂಗಾರು ಮಳೆ ಆಗಲಿದೆ. ಅವರಿಗೆ ಇನ್ನೂ ಅವಕಾಶವಿದೆ ಎಂದರು. ತಮಿಳುನಾಡು ಮುಖ್ಯಮಂತ್ರಿ ಜೋಸೆಫ್ ವಿಜಯ್ ಅವರು ಕಾವೇರಿ ನೀರಿನ ವಿಚಾರದ ಬಗ್ಗೆ ರಾಜ್ಯದೊಂದಿಗೆ ಮಾತನಾಡಲು ಸಿದ್ಧರಿರುವುದಾಗಿ ನೀಡಿರುವ ಹೇಳಿಕೆಗೆ ಪ್ರತಿಕ್ರಿಯಿಸಿ, 'ಹಿಂದೆಯೇ ಅವರು ಮಾತುಕತೆಗೆ ಬರಬೇಕಿತ್ತು. ರಾಜ್ಯದಲ್ಲಿ ಕೆಲವರ ವಿರೋಧ ಇದ್ದ ಕಾರಣ ಮುಂದೂಡಲಾಗಿತ್ತು. ಮಾತುಕತೆ ಮೂಲಕ ಸಮಸ್ಯೆ ಬಗೆಹರಿಸಿಕೊಂಡರೆ ಬಹಳ ಒಳ್ಳೆಯದು. ಬರೀ ಕಾವೇರಿ, ಮೇಕೆದಾಟು ವಿಚಾರವಲ್ಲ; ಕೃಷ್ಣಾ, ಮಹದಾಯಿ ಸೇರಿ ಅನೇಕ ನದಿಗಳ ವಿಚಾರದಲ್ಲಿ ಸಮಸ್ಯೆ ಇದೆ. ಅಕ್ಕಪಕ್ಕದ ರಾಜ್ಯಗಳು ಕೇಂದ್ರ ಸರ್ಕಾರದ ಸಮ್ಮುಖದಲ್ಲಿ ಚರ್ಚಿಸಿ ಸಮಸ್ಯೆ ಬಗೆಹರಿಸಿಕೊಳ್ಳಬೇಕು. ನ್ಯಾಯಾಲಯಕ್ಕೆ ಹೋದರೆ ದಶಕಗಳೇ ಹಿಡಿಯುತ್ತದೆ' ಎಂದರು. ಆ.13ಕ್ಕೆ ಕೆಲ ಸಂಘಟನೆಗಳು ಹಮ್ಮಿಕೊಂಡಿರುವ ರಾಜ್ಯ ಬಂದ್ಗೆ ಪ್ರತಿಕ್ರಿಯಿಸಿ, 'ಯಾರೂ ಬಂದ್ ಅಥವಾ ಪ್ರತಿಭಟನೆ ಮಾಡಲ್ಲ ಅಂದುಕೊಂಡಿದ್ದೇವೆ' ಎಂದು ನುಡಿದರು.

### ಕಾಶ್ಮೀರಿ ಪಂಡಿತ ನೌಕರರಿಗೆ ಉಗ್ರರ ಬೆದರಿಕೆ

# ರಜೆ ನೀಡಿ ಸುರಕ್ಷಿತ ತಾಣಕ್ಕೆ ಸ್ಥಳಾಂತರ

**ಶ್ರೀನಗರ, ಆ.11:** ಉಗ್ರರ ಬೆದರಿಕೆಯಿಂದಾಗಿ ಪ್ರಧಾನ ಮಂತ್ರಿಗಳ ವಿಶೇಷ ಉದ್ಯೋಗ ಪ್ಯಾಕೇಜ್ ಅಡಿಯಲ್ಲಿ ನೇಮಕಗೊಂಡ ಕಾಶ್ಮೀರಿ ಪಂಡಿತ ನೌಕರರನ್ನು ಆ.25ರ ವರೆಗೆ ರಜೆ ಮೇಲೆ ಕಳುಹಿಸಲಾಗಿದೆ. ಅವರನ್ನೆಲ್ಲ ಸುರಕ್ಷಿತ ಸ್ಥಳದಲ್ಲಿ ಇರಿಸಲಾಗಿದೆ ಎಂದು ಮೂಲಗಳು ತಿಳಿಸಿವೆ.

ಪಾಕಿಸ್ತಾನ ಮೂಲದ ಭಯೋತ್ಪಾದಕ ಸಂಘಟನೆ ಲಷ್ಕರ್–ಎ–ತೈಬಾ ಹೆಸರಿನಲ್ಲಿ ಬೆದರಿಕೆ ಪತ್ರ ಹರಿದಾಡಿತ್ತು. ಅದರಲ್ಲಿ ಕೆಲವು ಉದ್ಯೋಗಿಗಳನ್ನು ಹೆಸರಿಸಲಾಗಿತ್ತು. ಬೆದರಿಕೆ ಪತ್ರದಲ್ಲಿ ಹೆಸರಿಸಲಾದ ಎಲ್ಲರನ್ನೂ ಸುರಕ್ಷಿತವಾಗಿ ಜಮ್ಮುವಿಗೆ ಸ್ಥಳಾಂತರಿಸಲಾಗಿದೆ. ಈ ಬಗ್ಗೆ ತನಿಖೆ ನಡೆಸಲಾಗುತ್ತಿದೆ. ನೌಕರರ ಸುರಕ್ಷತೆಯನ್ನು ಖಚಿತಪಡಿಸಿಕೊಳ್ಳಲು ಅಗತ್ಯ ಭದ್ರತಾ ಕ್ರಮಗಳನ್ನು ಕೈಗೊಳ್ಳಲಾಗಿದೆ ಎಂದು ಪೊಲೀಸರು ತಿಳಿಸಿದ್ದಾರೆ. ಈ ಬಗ್ಗೆ ಪ್ರತಿಕ್ರಿಯಿಸಿರುವ ಕಾಶ್ಮೀರಿ ಪಂಡಿತ ಉದ್ಯೋಗಿ ಅಮಿತ್ ಕೌಲ್, ಬೆದರಿಕೆ ಬಂದ ನಂತರ, ಪೊಲೀಸರು ಕೆಲಸಕ್ಕೆ ಹೋಗದಂತೆ ನಮಗೆ ಸೂಚಿಸಿದ್ದಾರೆ. ಅಲ್ಲದೇ ಕಣಿವೆಯಲ್ಲಿ ವಾಸಿಸುತ್ತಿರುವವರಿಗೆ ತಮ್ಮ ಮನೆಗಳಿಂದ ಹೊರಗೆ ಬರದಂತೆ ಸೂಚಿಸಲಾಗಿದೆ ಎಂದು ತಿಳಿಸಿದ್ದಾರೆ.



2010 ರಲ್ಲಿ ಜಾರಿಗೆ ತರಲಾದ ಪ್ರಧಾನ ಮಂತ್ರಿಗಳ ವಿಶೇಷ ಉದ್ಯೋಗ ಪ್ಯಾಕೇಜ್ ಅಡಿಯಲ್ಲಿ 6,000 ಕಾಶ್ಮೀರಿ ಪಂಡಿತರಿಗೆ ಸರ್ಕಾರಿ ಉದ್ಯೋಗ ನೀಡಲಾಗಿದೆ. 1990 ರಲ್ಲಿ ಪ್ರತ್ಯೇಕತಾವಾದಿ ಚಳವಳಿ ಭುಗಿಲೆದ್ದ ನಂತರ ತಮ್ಮ ತಾಯ್ನಾಡಿನಿಂದ ಸ್ಥಳಾಂತರಗೊಂಡ ಕಾಶ್ಮೀರಿ ಪಂಡಿತರ ಮರಳುವಿಕೆ ಮತ್ತು ಪುನರ್ವಸತಿಗೆ ಅನುಕೂಲವಾಗುವಂತೆ ಈ ಕ್ರಮಕೈಗೊಳ್ಳಲಾಗಿತ್ತು.

2022 ರಲ್ಲಿ ಭಯೋತ್ಪಾದಕರು ಈ ಉದ್ಯೋಗಿಗಳನ್ನು ಗುರಿಯಾಗಿಸಿಕೊಂಡು ದಾಳಿ ನಡೆಸಿದ್ದರು. ಈ ದಾಳಿಯಲ್ಲಿ ಐದು ಕಾಶ್ಮೀರಿ ಪಂಡಿತರು ಸಾವನ್ನಪ್ಪಿದ್ದರು. ಬಳಿಕ ಜಮ್ಮುವಿಗೆ ವರ್ಗಾಯಿಸುವಂತೆ ಒತ್ತಾಯಿಸಿ ಪಿಎಂ ಪ್ಯಾಕೇಜ್ ನೌಕರರಿಂದ ಏಳು ತಿಂಗಳ ಕಾಲ ಬೃಹತ್ ಪ್ರತಿಭಟನೆ ನಡೆದಿತ್ತು. ಸರ್ಕಾರ ಈ ಉದ್ಯೋಗಿಗಳನ್ನು ಜಮ್ಮುವಿನಲ್ಲಿ ನಿಯೋಜಿಸಲು ನಿರಾಕರಿಸಿತ್ತು. ಬಳಿಕ ಅವರನ್ನು ಶ್ರೀನಗರ ಮತ್ತು ಕಣಿವೆಯ ಇತರ ಪ್ರಮುಖ ಪಟ್ಟಣಗಳ ಸುರಕ್ಷಿತ ಸ್ಥಳಗಳಲ್ಲಿ ನಿಯೋಜಿಸಲಾಗಿತ್ತು.


ಜುಲೈ 22 ರಂದು ಅನಂತನಾಗ್‌ನಲ್ಲಿ ನಡೆದ ಇತ್ತೀಚಿನ ದಾಳಿಯಲ್ಲಿ ಒಬ್ಬ ಪೊಲೀಸ್ ಸಿಬ್ಬಂದಿ ಸಾವನ್ನಪ್ಪಿದ್ದರು. ಇದಾದ ಬಳಿಕ ಅಲ್ಪಸಂಖ್ಯಾತರು ಮತ್ತು ಪಂಡಿತ ನೌಕರರು ವಾಸಿಸುವ ಪ್ರದೇಶಗಳಲ್ಲಿ ಭದ್ರತೆ ಮತ್ತು ಗಸ್ತು ಹೆಚ್ಚಿಸಲಾಗಿತ್ತು. ಭದ್ರತೆ ಹೆಚ್ಚಿಸಿದ ಬಳಿಕ 3,000 ಕ್ಕೂ ಹೆಚ್ಚು ಶಂಕಿತರನ್ನು ಬಂಧಿಸಲಾಗಿದೆ.

ಬಂಧಿತ ವ್ಯಕ್ತಿಗಳನ್ನು ಓವರ್ ಗ್ರೌಂಡ್ ವರ್ಕರ್ಸ್ ಎಂದು ಪೊಲೀಸರು ಕರೆದಿದ್ದಾರೆ. ಇತ್ತೀಚೆಗೆ ಭಯೋತ್ಪಾದಕ ಗುಂಪುಗಳಿಗೆ ಸ್ಥಳೀಯ ಯುವಕರ ನೇಮಕಾತಿಗಳ ಸಂಖ್ಯೆ ಬಹುತೇಕ ಶೂನ್ಯಕ್ಕೆ ತಲುಪಿದೆ ಎಂದು ಪೊಲೀಸ್ ಮೂಲಗಳು ತಿಳಿಸಿವೆ.

# ಸಿರಿಯಾದ ಮಾಜಿ ಅಧ್ಯಕ್ಷ ಅಸ್ಸಾದ್‌ಗೆ ಮರಣದಂಡನೆ

ಡಮಾಸ್ಕಸ್, ಆ.11: ಸಿರಿಯಾದ 14 ವರ್ಷಗಳ ಸುದೀರ್ಘ ಸಂಘರ್ಷಕ್ಕೆ ಕಾರಣವಾದ ಮಾನವೀಯತೆಯ ವಿರುದ್ಧದ ಅಪರಾಧಗಳು ಮತ್ತು ಯುದ್ಧ ಅಪರಾಧಗಳಿಗಾಗಿ ಸಿರಿಯಾದ ನ್ಯಾಯಾಲಯ ಮಾಜಿ ಅಧ್ಯಕ್ಷ ಬಷರ್ ಅಸ್ಸಾದ್ ಮತ್ತು ಆತನ ಸಹೋದರನಿಗೆ ಮರಣದಂಡನೆ ವಿಧಿಸಿದೆ. ಇದು ಸುಮಾರು 5 ಲಕ್ಷ ಸಾವುಗಳಿಗೆ ಕಾರಣವಾಗಿದೆ.

ಅದೇ ಪ್ರಕರಣದಲ್ಲಿ, ಅಸ್ಸಾದ್ ಅವರ ಸೋದರಸಂಬಂಧಿ ಅತೆಫ್ ನಜೀಬ್ ಅವರಿಗೂ ದಂಗೆಯಲ್ಲಿ ಪಾತ್ರ ಇರುವುದಕ್ಕಾಗಿ ಮರಣದಂಡನೆ ವಿಧಿಸಲಾಗಿದೆ. ಸುರಕ್ಷಿತವಾದ ನ್ಯಾಯಾಲಯದ ಕೋಣೆಯಲ್ಲಿ, ತೀರ್ಪು ನೀಡುವಾಗ ನಜೀಬ್ ಕೈದಿಯ ಸಮವಸ್ತ್ರದಲ್ಲಿ ಕಾಣಿಸಿಕೊಂಡರು.



ಬಷರ್ ಅಸ್ಸಾದ್ ಮತ್ತು ಅವರ ಸಹೋದರ ಮಹೇರ್, ಡಿಸೆಂಬರ್ 2014 ರಲ್ಲಿ ಡಮಾಸ್ಕಸ್‌ಗೆ ದಂಗೆಕೋರ ಪಡೆಗಳ ದಾಳಿಯ ನಂತರ ಸಿರಿಯಾದಿಂದ ಪಲಾಯನ ಮಾಡಿ ರಷ್ಯಾದಲ್ಲಿದ್ದಾರೆ. ಏತನ್ಮಧ್ಯೆ, ನಜೀಬ್ ಅವರನ್ನು ಬಂಧಿಸಲಾಗಿದೆ ಮತ್ತು ವಿಚಾರಣೆಯನ್ನು ಎದುರಿಸಬೇಕಾದ ಅತ್ಯುನ್ನತ ಅಧಿಕಾರಿಗಳಲ್ಲಿ ಒಬ್ಬರಾಗಿದ್ದಾರೆ. ನಜೀಬ್ ಈ ಹಿಂದೆ ಸಿರಿಯನ್ ಸೈನ್ಯದಲ್ಲಿ ಬ್ರಿಗೇಡಿಯರ್ ಜನರಲ್ ಆಗಿ ಸೇವೆ ಸಲ್ಲಿಸಿದ್ದರು ಮತ್ತು 2011 ರಲ್ಲಿ ದಾರಾದಲ್ಲಿ ರಾಜಕೀಯ ಭದ್ರತಾ ಶಾಖೆಯನ್ನು ಮುನ್ನಡೆಸಿದ್ದರು.

# ಕೊಲಂಬಿಯಾ ಭೂಕಂಪ: ಸತ್ತವರ ಸಂಖ್ಯೆ 132ಕ್ಕೆ ಏರಿಕೆ

ಬೊಗೋಟಾ, ಆ.11: ಕೊಲಂಬಿಯಾದ ಪಶ್ಚಿಮ ಭಾಗದಲ್ಲಿ ಸೋಮವಾರ 7.4 ತೀವ್ರತೆಯ ಪ್ರಬಲ ಭೂಕಂಪ ಸಂಭವಿಸಿದ್ದು, ಸತ್ತವರ ಸಂಖ್ಯೆ 132ಕ್ಕೆ ಏರಿದೆ. ನೂರಾರು ಕಟ್ಟಡಗಳು ಹಾನಿಗೊಳಗಾಗಿದ್ದು, ಅವಶೇಷಗಳಡಿ ಹಲವರು ಸಿಲುಕಿಕೊಂಡಿದ್ದಾರೆ. ತಮ್ಮ ಪ್ರೀತಿಪಾತ್ರರು ಹಾಗೂ ರಕ್ಷಣಾ ಕಾರ್ಯಕರ್ತರು ಅವಶೇಷಗಳ ನಡುವೆ ಶೋಧ ಕಾರ್ಯ ನಡೆಸುತ್ತಿದ್ದಾರೆ.

ಕೊಲಂಬಿಯಾ ಅಧ್ಯಕ್ಷ ಅಬೆಲಾರ್ಡೊ ದೆ ಲಾ ಎಸ್ಪ್ರಿಯೆಲ್ಲಾ ಅವರು ಕನಿಷ್ಠ 87 ಮಂದಿ ಗಾಯಗೊಂಡಿದ್ದಾರೆ ಎಂದು ತಿಳಿಸಿದರು. ಭೂಕಂಪದಿಂದ ಉಂಟಾದ ಹಾನಿಯ ಪರಿಹಾರ ಕಾರ್ಯಗಳಿಗೆ ತ್ವರಿತವಾಗಿ ಹಣ ಬಿಡುಗಡೆ ಮಾಡಲು ತುರ್ತು ಪರಿಸ್ಥಿತಿ ಘೋಷಿಸಿದರು. ಅಲ್ಲದೆ, ತಾವು ಭೂಕಂಪ ಪೀಡಿತ ಪ್ರದೇಶಕ್ಕೆ ಭೇಟಿ ನೀಡುವುದಾಗಿ ಹೇಳಿದರು.

ನಾವು ಜನರನ್ನು ಏಕಾಂಗಿಯಾಗಿ ಬಿಡುವುದಿಲ್ಲ. ಅವರು ನಮ್ಮ ಹೃದಯದಲ್ಲಿದ್ದಾರೆ. ಸಂಪೂರ್ಣ ಸಂಕಲ್ಪದೊಂದಿಗೆ ನಾವು ಅವರ ನೆರವಿಗೆ ಧಾವಿಸುತ್ತೇವೆ, ಎಂದು ಅವರು ಹೇಳಿದರು.

ಅಮೆರಿಕದ ಭೂವೈಜ್ಞಾನಿಕ ಸಮೀಕ್ಷೆ ಪ್ರಕಾರ, ಭೂಕಂಪದ ಕೇಂದ್ರಬಿಂದು ಬೊಗೋಟಾದಿಂದ ಸುಮಾರು 250 ಮೈಲಿ (400 ಕಿ.ಮೀ.) ಪಶ್ಚಿಮದಲ್ಲಿರುವ ಚೋಕೋ ಪ್ರದೇಶದ ಸುಮಾರು 4,800 ಜನಸಂಖ್ಯೆಯ ಸ್ಯಾನ್ ಜೋಸ್ ಡೆಲ್ ಪಾಲ್ಮಾರ್ ಸಮುದಾಯವಾಗಿತ್ತು.

ಅಧಿಕಾರಿಗಳು ಭೂಕಂಪದ ನಂತರದ ಕಂಪನಗಳ (ಆಫ್ಟರ್‌ಶಾಕ್) ಆತಂಕ ವ್ಯಕ್ತಪಡಿಸಿರುವ ಹಿನ್ನೆಲೆಯಲ್ಲಿ ನಿವಾಸಿಗಳು ಮತ್ತು ರಕ್ಷಣಾ ತಂಡಗಳು ಕುಸಿದ ಕಟ್ಟಡಗಳ ಅವಶೇಷಗಳ ನಡುವೆ ಸಿಲುಕಿರುವವರಿಗಾಗಿ ಶೋಧ ನಡೆಸಿದರು. ದೇಶದಾದ್ಯಂತ 20ಕ್ಕೂ ಹೆಚ್ಚು ಪುರಸಭೆಗಳು ಭೂಕಂಪದಿಂದ ಹಾನಿಗೊಳಗಾಗಿವೆ ಎಂದು ಕೊಲಂಬಿಯಾದ ಆಂತರಿಕ ಸಚಿವರು ತಿಳಿಸಿದ್ದಾರೆ. ಭೂಕಂಪದ ಕೇಂದ್ರಬಿಂದು ಇರುವ ಕೊಲಂಬಿಯಾದ ಪೆಸಿಫಿಕ್ ಕರಾವಳಿ ಪ್ರದೇಶವು ಪೆಸಿಫಿಕ್ ಸಾಗರವನ್ನು ಸುತ್ತುವರಿದಿರುವ ಭೂಕಂಪನ ದೋಷರೇಖೆಗಳ ವಲಯವಾದ ರಿಂಗ್ ಆಫ್ ಫೈರ್‌ನಲ್ಲಿದೆ. ವಿಶ್ವದ ಬಹುತೇಕ ಭೂಕಂಪಗಳು ಈ ವಲಯದಲ್ಲೇ ಸಂಭವಿಸುತ್ತವೆ.

# ಚಿತ್ರದುರ್ಗ ವೈದ್ಯ ಕಾಲೇಜಿನಲ್ಲಿ ಪಿಜಿ ಕೋರ್ಸ್‌ಗಳಿಗೆ ಮಂಜೂರಾತಿ ನೀಡುವಂತೆ ಮನವಿ

### ಕೇಂದ್ರ ಆರೋಗ್ಯ ಸಚಿವ ಜೆ.ಪಿ ನಡ್ಡಾ ಜತೆ ಸಂಸದ ಗೋವಿಂದ ಕಾರಜೋಳ ಚರ್ಚೆ

**ನವದೆಹಲಿ, ಆ.11:** ಚಿತ್ರದುರ್ಗ ವೈದ್ಯಕೀಯ ಕಾಲೇಜು ಮತ್ತು ಸಂಶೋಧನಾ ಸಂಸ್ಥೆ (CMCRI)ಯಲ್ಲಿ 2026–27ನೇ ಶೈಕ್ಷಣಿಕ ಸಾಲಿನಿಂದ ಸ್ನಾತಕೋತ್ತರ (MD/MS) ವೈದ್ಯಕೀಯ ಕೋರ್ಸ್‌ಗಳನ್ನು ಪ್ರಾರಂಭಿಸಲು ಮಂಜೂರಾತಿ ನೀಡುವಂತೆ ಕೇಂದ್ರ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವ ಜೆ.ಪಿ. ನಡ್ಡಾ ಅವರಿಗೆ ಚಿತ್ರದುರ್ಗ ಲೋಕಸಭಾ ಕ್ಷೇತ್ರದ ಸದಸ್ಯ ಗೋವಿಂದ ಎಂ. ಕಾರಜೋಳ ಮನವಿ ಮಾಡಿದ್ದಾರೆ. ಕ್ಷೇತ್ರದ ಜನರಿಗೆ ಗುಣಮಟ್ಟದ ತಜ್ಞ ವೈದ್ಯಕೀಯ ಸೇವೆಗಳನ್ನು ಸ್ಥಳೀಯವಾಗಿಯೇ ಒದಗಿಸುವ ಅಗತ್ಯವಿದ್ದು, ಈ ಹಿನ್ನೆಲೆಯಲ್ಲಿ CMCRIಯಲ್ಲಿ PG ವೈದ್ಯಕೀಯ ಶಿಕ್ಷಣ ಆರಂಭಿಸುವುದು ಅತ್ಯಂತ ಮಹತ್ವದ್ದಾಗಿದೆ. ನಾಲ್ಕು ರಾಷ್ಟ್ರೀಯ ಹೆದ್ದಾರಿಗಳ ಪ್ರಮುಖ ಸಂಗಮ ಪ್ರದೇಶವಾಗಿರುವ ಚಿತ್ರದುರ್ಗದಲ್ಲಿ ಅಪಘಾತ ಹಾಗೂ ತುರ್ತು ಚಿಕಿತ್ಸೆಯ ಪ್ರಕರಣಗಳು ಹೆಚ್ಚಿನ ಸಂಖ್ಯೆಯಲ್ಲಿವೆ. CMCRIಗೆ ಪ್ರತಿತಿಂಗಳು 525ಕ್ಕೂ ಹೆಚ್ಚು ಟ್ರಾಮಾ ಪ್ರಕರಣಗಳು ದಾಖಲಾಗುತ್ತಿದ್ದು, ಹಾವುಕಡಿತ, ನಾಯಿಕಡಿತ, ವಿಷಸೇವನೆ ಸೇರಿದಂತೆ ಹಲವು ತುರ್ತು ಪ್ರಕರಣಗಳಿಗೂ ಚಿಕಿತ್ಸೆ ನೀಡಲಾಗುತ್ತಿದೆ.

CMCRI ಬೋಧನಾ ಆಸ್ಪತ್ರೆಯಲ್ಲಿ ಪ್ರತಿದಿನ 1,200ಕ್ಕೂ ಹೆಚ್ಚು OPD ರೋಗಿಗಳು ಚಿಕಿತ್ಸೆ ಪಡೆಯುತ್ತಿದ್ದು, 690 ಹಾಸಿಗೆಗಳ ಆಸ್ಪತ್ರೆ ಸುಮಾರು ಶೇ.100ರಷ್ಟು ಸಾಮರ್ಥ್ಯದಲ್ಲಿ ಕಾರ್ಯನಿರ್ವಹಿಸುತ್ತಿದೆ. ಪ್ರತಿವರ್ಷ 16,000ಕ್ಕೂ ಹೆಚ್ಚು ಶಸ್ತ್ರಚಿಕಿತ್ಸೆಗಳು ನಡೆಯುತ್ತಿವೆ. ಆಸ್ಪತ್ರೆಯಲ್ಲಿ 50 ಹಾಸಿಗೆಗಳ ಕ್ರಿಟಿಕಲ್ ಕೇರ್ ಬ್ಲಾಕ್ ಹಾಗೂ ಟ್ರಾಮಾ ಕೇರ್ ಸೆಂಟರ್ ಕಾರ್ಯನಿರ್ವಹಿಸುತ್ತಿದ್ದು, ಹೆಚ್ಚುವರಿಯಾಗಿ 100 ಹಾಸಿಗೆಗಳ ಟ್ರಾಮಾ ಕೇರ್ ಸೆಂಟರ್‌ಗೆ ಮಂಜೂರಾತಿ ದೊರೆತಿದೆ. ಸಂಸ್ಥೆಯ ಬೋಧನಾ ಸಾಮರ್ಥ್ಯವನ್ನು ಮತ್ತಷ್ಟು ಬಲಪಡಿಸಲು ಕರ್ನಾಟಕ ಸರ್ಕಾರವು 123 ಹೆಚ್ಚುವರಿ ಬೋಧಕ ಹುದ್ದೆಗಳಿಗೆ ಮಂಜೂರಾತಿ ನೀಡಿದ್ದು, ಈಗಾಗಲೇ 97 ಬೋಧಕ ಹುದ್ದೆಗಳು ಭರ್ತಿಯಾಗಿವೆ. ಹೆಚ್ಚುವರಿ ಹುದ್ದೆಗಳ ನೇಮಕಾತಿ ಪ್ರಕ್ರಿಯೆಯೂ ಆರಂಭಗೊಂಡಿದೆ.

CMCRIಯು ರಾಜೀವ್‌ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯದಿಂದ (RGUHS) PG ಕೋರ್ಸ್‌ಗಳಿಗೆ Consent of Affiliation ಪಡೆದಿದೆ. ಒಟ್ಟು 10 ವಿಭಾಗಗಳಲ್ಲಿ 40 PG ಸೀಟುಗಳನ್ನು ಪ್ರಸ್ತಾಪಿಸಲಾಗಿದ್ದು, 2026–27ನೇ ಸಾಲಿಗೆ 7 ವಿಭಾಗಗಳಲ್ಲಿ 23 PG ಸೀಟುಗಳಿಗೆ NMC ಶುಲ್ಕ ಪಾವತಿ ಪ್ರಕ್ರಿಯೆ ಕೈಗೊಳ್ಳಲಾಗಿದೆ.

**ಪ್ರಸ್ತಾವಿತ 23 ಪಿಜಿ ಸೀಟು**

- **MD Anaesthesiology: 3**
- **MS General Surgery: 5**
- **MD Paediatrics: 3**
- **MD General Medicine: 5**
- **MS Orthopaedics: 3**
- **MD Forensic Medicine & Toxicology: 2**
- **MS Obstetrics & Gynaecology: 2**



**ತಜ್ಞ ವೈದ್ಯರ ಲಭ್ಯತೆ ಹೆಚ್ಚಳ**

ಈ PG ಕೋರ್ಸ್‌ಗಳು ಆರಂಭವಾದರೆ ಚಿತ್ರದುರ್ಗ ಮತ್ತು ಸುತ್ತಮುತ್ತಲಿನ ಜಿಲ್ಲೆಗಳಲ್ಲಿ ತಜ್ಞ ವೈದ್ಯರ ಲಭ್ಯತೆ ಹೆಚ್ಚುವುದರ ಜೊತೆಗೆ, ಟ್ರಾಮಾ, ತುರ್ತು ಚಿಕಿತ್ಸೆ ಮತ್ತು ಕ್ರಿಟಿಕಲ್ ಕೇರ್ ಸೇವೆಗಳು ಮತ್ತಷ್ಟು ಬಲಗೊಳ್ಳಲಿವೆ. ವಿಶೇಷ ಚಿಕಿತ್ಸೆಗಳಿಗಾಗಿ ಬೆಂಗಳೂರು ಹಾಗೂ ಇತರೆ ನಗರಗಳಿಗೆ ತೆರಳಬೇಕಾಗಿರುವ ರೋಗಿಗಳ ಸಮಸ್ಯೆಯೂ ಕಡಿಮೆಯಾಗಲಿದೆ. ಈ ಹಿನ್ನೆಲೆಯಲ್ಲಿ ಕೇಂದ್ರ ಆರೋಗ್ಯ ಸಚಿವ ಜೆ.ಪಿ. ನಡ್ಡಾ ವೈಯಕ್ತಿಕವಾಗಿ ಮಧ್ಯಪ್ರವೇಶಿಸಿ, ರಾಷ್ಟ್ರೀಯ ವೈದ್ಯಕೀಯ ಆಯೋಗ ಸೇರಿ ಸಂಬಂಧಿಸಿದ ಅಧಿಕಾರಿಗಳಿಗೆ ಈ ಪ್ರಸ್ತಾವನೆಯನ್ನು ಆದ್ಯತೆಯ ಮೇರೆಗೆ ಪರಿಗಣಿಸಿ, 2026–27ನೇ ಶೈಕ್ಷಣಿಕ ಸಾಲಿನಿಂದಲೇ ಪಿಜಿ ಕೋರ್ಸ್‌ಗಳಿಗೆ ಮಂಜೂರಾತಿ ನೀಡಲು ಅಗತ್ಯ ಕ್ರಮ ಕೈಗೊಳ್ಳುವಂತೆ ನಿರ್ದೇಶನ ನೀಡಬೇಕು ಎಂದು ಗೋವಿಂದ ಕಾ ರಜೋಳ ಮನವಿ ಮಾಡಿದ್ದಾರೆ.

## ನಿತ್ಯ ಪಂಚಾಂಗ 12.08.2026 ಬುಧವಾರ



ಶ್ರೀಶಕ 1949 ಶ್ರೀ ಪರಾಭವ ನಾಮ ಸಂವತ್ಸರ, ಉತ್ತರಾಯಣ-ವಸಂತ ಋತು, ಚಾಂದ್ರಮಾನ, ಚೈತ್ರ-ವೈಶಾಖ ಮಾಸ

ಭೀಮನ ಅಮಾವಸೆ, ಜ್ಯೋರ್ತಿಭೀಮೇಶ್ವರ ವ್ರತ, ದಿವಸೀ ಗೌರೀಪೂಜೆ, ನರಹರಿಪರ್ವತ ತೀಥ, ಮರವಂತೆ/ಪಂಜ ಜಾತ್ರೆ

| ದಿನ | ರಾಹುಕಾಲ | ಯಮಗಂಡ | ಗುಳಿಕಕಾಲ |
|---|---|---|---|
| ಭಾನು | 4.30 – 6.00 | 12.00 – 1.30 | 3.00 – 4.30 |
| ಸೋಮ | 7.30 – 9.00 | 10.30 – 12.00 | 1.30 – 3.00 |
| ಮಂಗಳ | 3.00 – 4.30 | 9.00 – 10.30 | 12.00 – 1.30 |
| ಬುಧ | 12.00 – 1.30 | 7.30 – 9.00 | 10.30 – 12.00 |
| ಗುರು | 1.30 – 3.00 | 6.00 – 7.30 | 9.00 – 10.30 |
| ಶುಕ್ರ | 10.30 – 12.00 | 3.00 – 4.30 | 7.30 – 9.00 |
| ಶನಿ | 9.00 – 10.30 | 1.30 – 3.00 | 6.00 – 7.30 |

## ಸರ್ಕಾರಿ ನೌಕರರೊಂದಿಗೆ ಸಂವಾದ: 750 ಕಡೆ 2.50 ಲಕ್ಷ ಅಧಿಕಾರಿಗಳು, ನೌಕರರು ಭಾಗಿ

# ಕಾವೇರಿ: ಕಾನೂನು ಸುವ್ಯವಸ್ಥೆ ಕಾಪಾಡಿ–ಸಿಎಂ ಡಿ.ಕೆ.ಶಿವಕುಮಾರ್ ಸೂಚನೆ

**ಬೆಂಗಳೂರು, ಆ.11:** "ಕಾವೇರಿ ನೀರಿನ ವಿಚಾರದಲ್ಲಿ ಮಂಡ್ಯ ಜಿಲ್ಲೆಯಲ್ಲಿ ಕಾನೂನು ಸುವ್ಯವಸ್ಥೆ ಕಾಪಾಡಬೇಕು. ಅರ್ಹ ಮತದಾರರ ಹೆಸರು ಕೈಬಿಡದಂತೆ ಎಚ್ಚರವಹಿಸಬೇಕು, ಭಾರತ್ ಜೋಡೋ ಸಂಘ ರಚನೆಗೆ ಗಮನಹರಿಸಬೇಕು. ಕುಡಿಯುವ ನೀರಿನ ಸಮಸ್ಯೆಯಾಗದಂತೆ ಎಚ್ಚರಿಕೆ ವಹಿಸಬೇಕು" ಎಂದು ಅಧಿಕಾರಿಗಳ ಜೊತೆಗಿನ ಸಂವಾದದ ವೇಳೆ ಸಿಎಂ ಡಿ ಕೆ ಶಿವಕುಮಾರ್ ಅವರು ಖಡಕ್ ಸೂಚನೆ ನೀಡಿದರು.



ವಿಧಾನಸೌಧದಲ್ಲಿ ವಿಡಿಯೋ ಕಾನ್ಫರೆನ್ಸ್ ಮೂಲಕ ಅಧಿಕಾರಿಗಳು, ನೌಕರರ ಜತೆ ಮಂಗಳವಾರ ಸಂವಾದ ನಡೆಸಿದರು. ಮಂಡ್ಯ ಜಿಲ್ಲಾಧಿಕಾರಿ ಹಾಗೂ ಎಸ್ ಪಿ ಅವರನ್ನು ಉದ್ದೇಶಿಸಿ "ತಮಿಳುನಾಡಿಗೆ ಎಷ್ಟು ನೀರು ಬಿಡಬೇಕು, ಬಿಡಬಾರದು ಎಂಬ ತೀರ್ಮಾನದ ಜವಾಬ್ದಾರಿ ನಮ್ಮದು. ಕಾವೇರಿ ವಿಚಾರದಲ್ಲಿ ಮಂಡ್ಯದಲ್ಲಿ ಯಾವುದೇ ಅಹಿತಕರ ಘಟನೆ ನಡೆಯಬಾರದು. ಕಾನೂನು ಸುವ್ಯವಸ್ಥೆ ಕಾಪಾಡುವ ಜವಾಬ್ದಾರಿ ನಿಮ್ಮದು ಎಂದು ನಿರ್ದೇಶನ ನೀಡಿದರು. "ನೀರನ್ನು ಹಿಡಿದಿಟ್ಟುಕೊಳ್ಳುವುದಕ್ಕೆ ಸಾಧ್ಯವಿಲ್ಲ. ಕಬಿನಿ ಸಂಪೂರ್ಣ ಭರ್ತಿಯಾದರೆ ನೀರು ಹರಿಯುತ್ತದೆ. ಜಲಾಶಯದಲ್ಲಿ ನೀರು ಎಷ್ಟು ಸಂಗ್ರಹವಾಗುತ್ತದೆ ಎನ್ನುವುದರ ಆಧಾರದ ಮೇಲೆ ರೈತರು ಬೆಳೆ ಬೆಳೆಯಬೇಕಾಗುತ್ತದೆ. ಈ ವಿಚಾರದ ಬಗ್ಗೆ ಹಾಗೂ ನೀರಿನ ಸಂಗ್ರಹದ ಬಗ್ಗೆ ರೈತರಿಗೆ ಅರಿವು ಮೂಡಿಸಬೇಕು. ಈಗ ನಾವು ಸಂದಿಗ್ಧ ಸ್ಥಿತಿಯಲ್ಲಿದ್ದೇವೆ. ಇಡೀ ವಿಶ್ವದಲ್ಲಿ ಹವಾಮಾನ ವೈಪರೀತ್ಯ ವಾಗಿದೆ. ಹಾಗಾಗಿ, ವಾಡಿಕೆಯ ಮಳೆ ನಿರೀಕ್ಷೆ ಮಾಡಲು ಆಗುತ್ತಿಲ್ಲ. ಮಳೆ ಬರಬಹುದು, ಬರದೇ ಇರಬಹುದು ಎಂದರು.

**'ಜನ ಮತಹಕ್ಕು ಕಳೆದುಕೊಳ್ಳಬಾರದು':** ಎಸ್ ಐಆರ್ ಬಗ್ಗೆ ಎಲ್ಲಾ ಅಧಿಕಾರಿಗಳು ಎಚ್ಚರಿಕೆಯಿಂದ ಕೆಲಸ ಮಾಡಬೇಕು. ನಿಜವಾದ ಮತದಾರರು ಯಾವುದೇ ಕಾರಣಕ್ಕೂ ಸಂವಿಧಾನದತ್ತ ಹಕ್ಕನ್ನು ಕಳೆದುಕೊಳ್ಳಬಾರದು. ಅದಕ್ಕೆ ನೆರವಾಗುವುದು ನಿಮ್ಮ ಕರ್ತವ್ಯ ಎಂದರು. "ಜಿಲ್ಲಾ ಪಂಚಾಯಿತಿ ಮಟ್ಟದಲ್ಲಿ ಭಾರತ್ ಜೋಡೋ ಸಂಘಗಳ ಸ್ಥಾಪನೆ ಹಾಗೂ ಪ್ರಜಾಸೇವೆಯ ಬಗ್ಗೆ ಜಾಗೃತಿ ಮೂಡಿಸಲು ಅಗತ್ಯವಿರುವ ಮಾಹಿತಿಗಳನ್ನು ಒಳಗೊಂಡ ಕರಪತ್ರ ಸಿದ್ಧಪಡಿಸಿ ವಿತರಿಸಬೇಕು" ಎಂದು ಸೂಚನೆ ನೀಡಿದರು.

**750 ಕಡೆ 2.50 ಲಕ್ಷ ಅಧಿಕಾರಿಗಳು, ನೌಕರರು ಭಾಗಿ:** ಇಂದು ವಿಧಾನಸೌಧದಲ್ಲಿ ಮುಖ್ಯಮಂತ್ರಿಗಳೊಂದಿಗೆ ನಡೆದ ಸರ್ಕಾರಿ ನೌಕರರೊಂದಿಗಿನ ವೀಡಿಯೋ ಸಂವಾದವು ರಾಜ್ಯದ 750 ಸ್ಥಳಗಳ ನಡೆಯಿತು. ಒಟ್ಟು 2.50 ಲಕ್ಷಕ್ಕೂ ಹೆಚ್ಚು ಅಧಿಕಾರಿಗಳು, ನೌಕರರು ಭಾಗವಹಿಸಿದ್ದರು. ಸಂವಾದವು ಆಯಾ ಜಿಲ್ಲೆಯಲ್ಲಿ ಆಗಿರುವ ಕಾರ್ಯಪ್ರಗತಿ ಚಿತ್ರಣವನ್ನು ತೆರೆದಿಟ್ಟಿದ್ದಲ್ಲದೇ ಎದುರಾಗಿರುವ ವಾಸ್ತವ ಸಮಸ್ಯೆಗಳನ್ನು ಮುಖ್ಯಮಂತ್ರಿಗಳ ಗಮನಕ್ಕೆ ತಂದಿತು. ಎಷ್ಟೋ ಸಮಸ್ಯೆಗಳಿಗೆ ಮುಖ್ಯಮಂತ್ರಿಗಳು ಅಲ್ಲೇ ಪರಿಹಾರವನ್ನೂ ಸೂಚಿಸಿದರು, ಭವಿಷ್ಯದ ಎದುರಾಗಬಹುದಾದ ಸಮಸ್ಯೆಗಳ ಬಗ್ಗೆ ಅಧಿಕಾರಿಗಳಿಗೆ ಎಚ್ಚರಿಕೆಯನ್ನೂ ನೀಡಿದರು.

# ಒತ್ತಡ ಹೇರಿ ರಾಜೀನಾಮೆ ಪಡೆದಿದ್ದು ನೋವು ತರಿಸಿದೆ: ಬಸವರಾಜ ಹೊರಟ್ಟಿ

ಹುಬ್ಬಳ್ಳಿ, ಆ.11: ಆ.14ರಂದು ಸಭಾಪತಿ ಸ್ಥಾನಕ್ಕೆ ರಾಜೀನಾಮೆ ನೀಡುವುದಾಗಿ ಸ್ಪಷ್ಟಪಡಿಸಿದ್ದರೂ ತೀವ್ರ ಒತ್ತಡ ತಂದು ರಾಜೀನಾಮೆ ಪಡದಿದ್ದು, ನೋವು ತರಿಸಿದೆ. ರಾಜೀನಾಮೆ ಪಡೆದ ಸನ್ನಿವೇಶದ ಕುರಿತಾಗಿ ರಾಜ್ಯಪಾಲರಿಗೆ ಪತ್ರ ಬರೆದಿದ್ದು ನಿಜ ಎಂದು ವಿಧಾನಪರಿಷತ್ತು ನಿರ್ಗಮಿತ ಸಭಾಪತಿ ಬಸವರಾಜ ಹೊರಟ್ಟಿ ಹೇಳಿದರು.



ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಸಿಎಂ, ಕೆಪಿಸಿಸಿ ಅಧ್ಯಕ್ಷರು ಸೇರಿ ಅನೇಕ ಕಾಂಗ್ರೆಸ್ ಮುಖಂಡರು ನನ್ನ ಕಚೇರಿಗೆ ಆಗಮಿಸಿ ಇಂದೇ ರಾಜೀನಾಮೆ ನೀಡಲೇಬೇಕೆಂದು ತೀವ್ರ ಒತ್ತಡ ಹಾಕಿದರು. ಈಗಾಗಲೇ ಘೋಷಿಸಿದಂತೆ ಆ.14ರಂದು ರಾಜೀನಾಮೆ ನೀಡುವುದಾಗಿ ಹೇಳಿದರೂ ಕೇಳದೆ ತಾವೇ ರಾಜೀನಾಮೆ ಪತ್ರ ಸಿದ್ಧಪಡಿಸಿ ನಂತರ ನನ್ನ ಕೈಯಿಂದ ದಿನಾಂಕ ನಮೂದಿಸಿ, ಸಹಿ ಪಡೆದರು ಎಂದು ಆರೋಪಿಸಿದರು.

ಅಂದಿನ ಘಟನೆ ಪ್ರಸ್ತಾಪಿಸಿ ಆ.7ರಂದೇ ರಾಜ್ಯಪಾಲರಿಗೆ ಪತ್ರ ಬರೆದು ವಿವರಿಸಿದ್ದೇನೆ. ವಿಧಾನ ಪರಿಷತ್ತು ಇತಿಹಾಸದಲ್ಲಿಯೇ ಈ ರೀತಿ ನಡೆದಿಲ್ಲ. ಕಾಂಗ್ರೆಸ್ ನವರ ನಡೆ ಪರಿಷತ್ತುಗೆ ಕಪ್ಪುಚುಕ್ಕೆ ತಂದಿದೆ. ನನ್ನ ಕಚೇರಿಯಲ್ಲಿ ಒಂದೂವರೆ ಎರಡು ತಾಸು ಕುಳಿತು ನನಗೆ ಹೊರಹೋಗಲು ಅವಕಾಶ ನೀಡದೆ ಸಿದ್ಧಪಡಿಸಿದ ರಾಜೀನಾಮೆ ಪತ್ರಕ್ಕೆ ಸಹಿ ಪಡೆದ ದಿಢೀರ್ ಘಟನೆ ನನಗೆ ಅಚ್ಚರಿ ಮೂಡಿಸಿದೆ ಎಂದು ಹೊರಟ್ಟಿ ಹೇಳಿದರು.

ಸಭಾಪತಿಯಾಗಿದ್ದ ಪ್ರತಾಪಚಂದ್ರ ಶೆಟ್ಟಿ ಅವರ ವಿರುದ್ಧ ಅವಿಶ್ವಾಸಕ್ಕೆ ಜೆಡಿಎಸ್‌ನ ಹಿರಿಯ ಸದಸ್ಯನಾಗಿ ಮೊದಲು ಸಹಿ ಮಾಡಿದ್ದು ನಿಜ ಅದರಲ್ಲಿ ತಪ್ಪೇನಿದೆ. ನನ್ನ ವಿರುದ್ಧ ಅವಿಶ್ವಾಸ ಮಂಡಿಸಿದ್ದರೆ ಸದನದಲ್ಲಿಯೇ ರಾಜೀನಾಮೆ ನೀಡುತ್ತಿದ್ದೆ. ಗೌರವಯುತವಾಗಿ ಸ್ಥಾನ ಬಿಡಲು ಒಪ್ಪಿದ್ದೆ ಆದರೆ ಒತ್ತಡದಿಂದ ರಾಜೀನಾಮೆ ಪಡೆದರು, ಈ ಬಗ್ಗೆ ಕಾನೂನು ಹೋರಾಟಕ್ಕೆ ಮುಂದಾಗುವುದಿಲ್ಲ. ವಿದಾಯ ಭಾಷಣಕ್ಕೂ ಅವಕಾಶ ನೀಡಲಿಲ್ಲವೆಂಬ ನೋವಿದೆ ಎಂದರು. ರಾಜ್ಯಪಾಲರು ಈಗಾಗಲೇ ಹಂಗಾಮಿ ಸಭಾಪತಿ ಹೆಸರನ್ನು ಘೋಷಣೆ ಮಾಡಿದ್ದಾರೆ. ಸದಸ್ಯನಾಗಿ ಕಲಾಪದಲ್ಲಿ ಪಾಲ್ಗೊಳ್ಳುವೆ ಎಂದರು.

### ಹೊರಟ್ಟಿ ರಾಜೀನಾಮೆ ವಿಚಾರದಲ್ಲಿ ಬಿಜೆಪಿ ರಾಜಕಾರಣ: ಖಾದರ್ ವಾಗ್ದಾಳಿ

**ವಿಧಾನ ಪರಿಷತ್ ಸಭಾಪತಿ ಬಸವರಾಜ್ ಹೊರಟ್ಟಿ ಅವರ ರಾಜೀನಾಮೆ ವಿಚಾರದಲ್ಲಿ ಬಿಜೆಪಿ ನಾಯಕರು ರಾಜಕಾರಣ ಮಾಡುತ್ತಿರುವುದು ರಾಜ್ಯಕ್ಕೆ ಕಪ್ಪುಚುಕ್ಕೆ ಎಂದು ಸಚಿವ ಯು.ಟಿ. ಖಾದರ್ ತೀವ್ರ ವಾಗ್ದಾಳಿ ನಡೆಸಿದ್ದಾರೆ. ಮೈಸೂರಿನಲ್ಲಿ ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, "ವಿಧಾನ ಪರಿಷತ್ತಿನಲ್ಲಿ ಬಿಜೆಪಿಗೆ ಸ್ಪಷ್ಟ ಬಹುಮತವಿಲ್ಲ. ಹೊರಟ್ಟಿ ಅವರೇ ಸ್ವತಃ ಮುಖ್ಯಮಂತ್ರಿಗಳನ್ನು ಭೇಟಿಯಾಗಿ ರಾಜೀನಾಮೆ ನೀಡಿದ್ದಾರೆ. ಸಾಂವಿಧಾನಿಕ ಹಾಗೂ ಗೌರವಯುತವಾದ ಸಭಾಪತಿ ಹುದ್ದೆಯನ್ನು ದುರ್ಬಳಕೆ ಮಾಡಿಕೊಂಡು ಬಿಜೆಪಿ ಕೆಳಮಟ್ಟದ ರಾಜಕೀಯ ಮಾಡುತ್ತಿದೆ" ಎಂದು ಕಿಡಿಕಾರಿದರು.**

# ಜೆಡಿಎಸ್‌ನವರದ್ದು ಪಾದಯಾತ್ರೆಯಲ್ಲ, ಜಾಲಿ ಟ್ರಿಪ್: ಯಾತ್ರೆ ಮುಗಿದ ರಾತ್ರಿ ಎಲ್ಲಿ ಮಲಗಿದ್ದರು– ಸಚಿವ ಎಚ್.ಸಿ.ಬಾಲಕೃಷ್ಣ ಪ್ರಶ್ನೆ

ಬೆಂಗಳೂರು, ಆ.11: ಬಿಡದಿ ಟೌನ್‌ಶಿಪ್ ಯೋಜನೆ ವಿರೋಧಿಸಿ ಜೆಡಿಎಸ್‌ನವರು ಕೈಗೊಂಡಿದ್ದು ಪಾದಯಾತ್ರೆಯಲ್ಲ ಬದಲಾಗಿ ಜಾಲಿ ಟ್ರಿಪ್. ಬಡವರ ಪರ ಎನ್ನುವವರು ಪಾದಯಾತ್ರೆ ಮುಗಿದ ತಕ್ಷಣ ರಾತ್ರಿ ಎಲ್ಲಿ ಮಲಗಿದ್ದರು ಎಂದು ಪ್ರಶ್ನಿಸುವ ಮೂಲಕ ಸಚಿವ ಎಚ್.ಸಿ. ಬಾಲಕೃಷ್ಣ ವಾಗ್ದಾಳಿ ನಡೆಸಿದ್ದಾರೆ.



ರಾಮನಗರ ತಾಲೂಕಿನ ಕರಲಮಂಗಲ ಗ್ರಾಮದಲ್ಲಿ ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, ಪಾದಯಾತ್ರೆಯ ಗಾಂಭೀರ್ಯವನ್ನು ಪ್ರಶ್ನಿಸಿದ ಸಚಿವರು, 'ಪಾದಯಾತ್ರೆ ಮುಗಿಸಿ ನಿಖಿಲ್ ರಾತ್ರಿ ಎಲ್ಲಿ ಮಲಗಿದ್ದರು, ಕಾರ್ಯಕರ್ತರ ಜೊತೆ ಕಲ್ಯಾಣ ಮಂಟಪದಲ್ಲಿ ವಾಸ್ತವ್ಯ ಮಾಡಿದ್ದರಾ, ರೈತರ ಪರವಾಗಿ ಹೋರಾಟ ಮಾಡುವವರು ಎಲ್ಲಿರಬೇಕು, ದೇವೇಗೌಡರು ಮತ್ತು ಕುಮಾರಸ್ವಾಮಿಯವರು ಬಂದು ಮಗನಿಗೆ ಪಟ್ಟಾಭಿಷೇಕ ಮಾಡಿ ಹೋದರು ಅಷ್ಟೇ. ಐಕ್ಯ ತೋರಿಸೋಕೆ ಕಾಟಾಚಾರಕ್ಕೆ ಅಶೋಕ್ ಬಂದು ಹೋದರು, ಕಾಸು ಕೊಟ್ಟು ಬಸ್ಸಿನಲ್ಲಿ ಜನರನ್ನು ಕರ್ಕೊಂಡು ಬಂದಿರಲಿಲ್ವಾ ಎಂದು ಪ್ರಶ್ನಿಸಿದರು.

### ನಿಖಿಲ್ ಒಪ್ಪಿದರೆ ತಕ್ಷಣವೇ ಆತನ ಖಾತೆಗೆ ಹಣ ಜಮಾ

ಯೋಜನೆ ಜಾರಿಗೊಳಿಸಲು ಸರ್ಕಾರದ ಬಳಿ ಹಣವಿಲ್ಲ ಎಂಬ ನಿಖಿಲ್ ಸವಾಲಿಗೆ ತಿರುಗೇಟು ನೀಡಿದ ಸಚಿವರು, 'ನಿಖಿಲ್ ಕುಮಾರಸ್ವಾಮಿ ಒಪ್ಪಿಗೆ ನೀಡಿದರೆ, ನಾಳೆಯೇ ಅವರ ಅಕೌಂಟ್‌ಗೆ ಹಣ ಹಾಕಿಸ್ತೀನಿ. ಬಿಡದಿ ಭಾಗದಲ್ಲಿ ನಿಖಿಲ್ ಅವರದ್ದು 4 ಎಕರೆ ಹಾಗೂ ಅನಿತಾ ಕುಮಾರಸ್ವಾಮಿ ಅವರದ್ದು 31 ಎಕರೆ ಸೇರಿ ಒಟ್ಟು 35 ಎಕರೆ ಜಮೀನಿದೆ. ಅವರು ಸಮ್ಮತಿಸಿದರೆ ಒಂದೇ ದಿನದಲ್ಲಿ ಹಣ ಜಮಾ ಮಾಡ್ತೀವಿ ಎಂದು ಸಚಿವ ಎಚ್.ಸಿ. ಬಾಲಕೃಷ್ಣ ಸವಾಲು ಹಾಕಿದರು. ಮುಂದುವರಿದು, ನಿಖಿಲ್ ಮತ್ತು ಅನಿತಾ ಕುಮಾರಸ್ವಾಮಿ ಹೆಸರಿನಲ್ಲಿರುವ 35 ಎಕರೆ ಜಮೀನು ವಿವಾದದಲ್ಲಿದೆ. ಅದು ಎಸ್‌ಸಿ/ ಎಸ್‌ಟಿ ಸಮುದಾಯಕ್ಕೆ ಸೇರಿದ ಜಮೀನು ಎಂದು ಯಾರೋ ದೂರು ಕೊಟ್ಟಿದ್ದಾರೆ. ನಿಖಿಲ್ ಜಮೀನಿಗೆ ಮೂಲ ಮಂಜೂರಾತಿ ಪತ್ರವೇ ಇಲ್ಲ. ಅದು ಹೇಗೆ ಮಂಜೂರಾಯಿತು ಎಂಬುದರ ಬಗ್ಗೆ ಈಗಾಗಲೇ ತನಿಖೆ ನಡೆಯುತ್ತಿದೆ ಎಂದು ಬಾಂಬ್ ಸಿಡಿಸಿದರು.

# ಮತ್ತೆರಡು ಡಿಸಿಎಂ ಹುದ್ದೆ ಸೃಷ್ಟಿಗೆ ಹೈಕಮಾಂಡ್ ಮಟ್ಟದಲ್ಲಿ ಚರ್ಚೆ: ಸಚಿವ ಸತೀಶ್ ಜಾರಕಿಹೊಳಿ

**ಬೆಳಗಾವಿ, ಆ.11:** ಸರ್ಕಾರದಲ್ಲಿ ಮೂರು ಡಿಸಿಎಂ ಹುದ್ದೆ ವಿಚಾರವಾಗಿ ಹೈಕಮಾಂಡ್ ಮಟ್ಟದಲ್ಲಿ ಚರ್ಚೆ ನಡೆಯುತ್ತಿದೆ. ಈಗಾಗಲೇ ಡಾ.ಜಿ.ಪರಮೇಶ್ವರ್ ಡಿಸಿಎಂ ಆಗಿದ್ದು, ಅವರೊಂದಿಗೆ ಇನ್ನೂ ಎರಡು ಡಿಸಿಎಂ ಹುದ್ದೆ ಸೃಷ್ಟಿಸಲಾಗುತ್ತಿದೆ ಎಂಬ ಮಾತು ಕೇಳಿಬರುತ್ತಿದೆ. ಈ ಬಗ್ಗೆ ಬೆಳಗಾವಿಯಲ್ಲಿ ಮಾಧ್ಯಮದವರ ಜತೆ ಮಾತನಾಡಿದ ಸಚಿವ ಸತೀಶ್ ಜಾರಕಿಹೊಳಿ, ನನಗೆ ಹಾಗೂ ಎಂ.ಬಿ. ಪಾಟೀಲ್ ಅವರಿಗೆ ಉಪಮುಖ್ಯಮಂತ್ರಿ ಹುದ್ದೆ ನೀಡುವ ಕುರಿತು ಪಕ್ಷದೊಳಗೆ ಚರ್ಚೆ ನಡೆದಿರುವುದು ನಿಜ. ಈ ವಿಚಾರದಲ್ಲಿ ಪಕ್ಷದ ಹೈಕಮಾಂಡ್ ಅಂತಿಮ ನಿರ್ಧಾರ ಕೈಗೊಳ್ಳಲಿದೆ ಎಂದರು.



ಉಪಮುಖ್ಯಮಂತ್ರಿ ಹುದ್ದೆ ನೀಡುವ ವಿಚಾರ ಪಕ್ಷದ ಹಿತದೃಷ್ಟಿಯಿಂದ ಚರ್ಚೆಯಾಗುತ್ತಿತ್ತು. ಆದರೆ ನಾವು ಯಾವುದೇ ಬೇಡಿಕೆ ಇಟ್ಟಿಲ್ಲ. ಪಕ್ಷವೇ ನಮ್ಮನ್ನು ಗುರುತಿಸಬೇಕು. ಈ ವಿಚಾರದಲ್ಲಿ ನಾವು ಯಾವುದೇ ರೀತಿಯ ಒತ್ತಡ ಹೇರುವುದಿಲ್ಲ ಎಂದು ಸ್ಪಷ್ಟಪಡಿಸಿದರು.

ನೂತನ 19 ಸಚಿವರಿಗೆ ಇದೇ 13ರೊಳಗಾಗಿ ಖಾತೆ ಹಂಚಿಕೆ ಪ್ರಕ್ರಿಯೆ ಪೂರ್ಣಗೊಳ್ಳುವ ಸಾಧ್ಯತೆ ಇದೆ. ಇನ್ನು ಎರಡು ದಿನಗಳಲ್ಲಿ ಅಧಿವೇಶನ ಆರಂಭವಾಗಲಿದ್ದು, ಅದಕ್ಕೂ ಮುನ್ನ ನೂತನ ಸಚಿವರಿಗೆ ಖಾತೆಗಳನ್ನು ಹಂಚಿಕೆ ಮಾಡಲಾಗುವುದು ಎಂದು ಹೇಳಿದರು.

ಯಾವುದೇ ಖಾತೆಗೆ ಬೇಡಿಕೆ ಇಟ್ಟಿಲ್ಲ ತಮ್ಮ ಸಚಿವ ಖಾತೆ ಬದಲಾವಣೆ ಮಾಡಲಾಗುತ್ತದೆ ಎಂಬ ವಿಚಾರದ ಕುರಿತು ಪ್ರತಿಕ್ರಿಯಿಸಿದ ಸತೀಶ್ ಜಾರಕಿಹೊಳಿ, ಖಾತೆ ಬದಲಾವಣೆ ಬಗ್ಗೆ ಯಾವುದೇ ಚರ್ಚೆ ನಡೆದಿಲ್ಲ. ತಾವು ಕೂಡ ಯಾವುದೇ ಖಾತೆಯನ್ನು ಕೇಳಿಲ್ಲ. ಯಾರಿಗೆ ಯಾವ ಖಾತೆ ನೀಡಬೇಕು ಎಂಬುದು ಪಕ್ಷದ ತೀರ್ಮಾನಕ್ಕೆ ಬಿಟ್ಟ ವಿಚಾರ. ಪಕ್ಷದ ನಾಯಕತ್ವ ಕೈಗೊಳ್ಳುವ ನಿರ್ಧಾರವನ್ನು ನಾವು ಗೌರವಿಸುತ್ತೇವೆ ಎಂದರು. ಸದ್ಯ ತಾವು ನಿರ್ವಹಿಸುತ್ತಿರುವ ಲೋಕೋಪಯೋಗಿ ಇಲಾಖೆಯಲ್ಲಿಯೇ ಮುಂದುವರಿಯುವುದಾಗಿ ಸ್ಪಷ್ಟಪಡಿಸಿದ ಅವರು, ತಮಗೆ ನೀಡಿರುವ ಲೋಕೋಪಯೋಗಿ ಇಲಾಖೆಯ ಜವಾಬ್ದಾರಿಯನ್ನೇ ಮುಂದುವರಿಸಿಕೊಂಡು ಹೋಗುವುದಾಗಿ ಹೇಳಿದರು. ಉಳಿದ ಖಾತೆಯನ್ನು ಮಹಿಳೆಯರಿಗೆ ನೀಡುವ ವಿಚಾರ ಈಗಾಗಲೇ ಪೂರ್ಣಗೊಂಡಿದ್ದು, ಯಾರಿಗೆ ಯಾವ ಜವಾಬ್ದಾರಿ ನೀಡಬೇಕು ಎಂಬುದನ್ನು ಪಕ್ಷವೇ ತೀರ್ಮಾನಿಸಲಿದೆ ಎಂದರು.

## ಮೈಸೂರಿನಲ್ಲಿ ಎಚ್.ಸಿ.ಮಹದೇವಪ್ಪ, ಕೆ.ವೆಂಕಟೇಶ್, ತನ್ವೀರ್‌ಸೇಠ್ ಮಾತುಕತೆ

# ನಮಗೆ ಅನ್ಯಾಯವಾಗಿದೆ, ಹೈಕಮಾಂಡ್ ಜತೆ ಚರ್ಚಿಸುತ್ತೇವೆ

ಮೈಸೂರು, ಆ.11: ಸಚಿವ ಸ್ಥಾನ ಕೈತಪ್ಪಿದ ಬೆನ್ನಲ್ಲೇ ಮೈಸೂರಿನ ಮೂವರು ಶಾಸಕರು ಮಂಗಳವಾರ ಒಟ್ಟಿಗೆ ಸಭೆ ನಡೆಸಿದ್ದು, ಕುತೂಹಲ ಮೂಡಿಸಿದೆ.



ಮಾಜಿ ಸಚಿವ ಡಾ. ಎಚ್.ಸಿ. ಮಹದೇವಪ್ಪ, ಕೆ.ವೆಂಕಟೇಶ್ ಹಾಗೂ ತನ್ವೀರ್ ಸೇಠ್ ನಗರದ ಸರ್ಕಾರಿ ಅತಿಥಿ ಗೃಹದಲ್ಲಿ ಗೌಪ್ಯ ಮಾತುಕತೆ ನಡೆಸಿದರು. ವಿಷಯ ತಿಳಿದು ಸಚಿವ ಡಾ. ಯತೀಂದ್ರ ಸಿದ್ದರಾಮಯ್ಯ ಸಹ ಅತಿಥಿಗೃಹಕ್ಕೆ ಧಾವಿಸಿ ಈ ಮೂವರು ಶಾಸಕರೊಂದಿಗೆ ಮಾತುಕತೆ ನಡೆಸಿದರು.

ಈ ಸಂದರ್ಭ ಮಾಧ್ಯಮಗಳಿಗೆ ಪ್ರತಿಕ್ರಿಯೆ ನೀಡಿದ ಶಾಸಕ ತನ್ವೀರ್ ಸೇಠ್, ಕಾಂಗ್ರೆಸ್‌ನಲ್ಲಿ ಎಲ್ಲವೂ ಸರಿ ಇದೆ ಎಂದು ಹೇಳುವುದಿಲ್ಲ. ನಮಗೆ ಅನ್ಯಾಯವಾಗಿದೆ. ಮೂವರು ಒಟ್ಟಾಗಿದ್ದೇವೆ. ನಮಗೆ ಯಾಕೆ ಅವಕಾಶ ಕೈತಪ್ಪಿತು ಎಂಬ ಬಗ್ಗೆ ಪಕ್ಷದ ಹೈಕಮಾಂಡ್ ಜೊತೆ ಮಾತನಾಡುತ್ತೇವೆ ಎಂದರು. ಎಲ್ಲಿ ತಪ್ಪಾಗಿದೆ ಎಂಬುದರ ಬಗ್ಗೆ ಚರ್ಚಿಸಿದ್ದೇವೆ. ಸದ್ಯ ರಾಜಕೀಯದ ಬಗ್ಗೆ ಮಾತನಾಡುವುದಿಲ್ಲ ಎಂದು ಡಾ. ಎಚ್.ಸಿ. ಮಹದೇವಪ್ಪ ಪ್ರತಿಕ್ರಿಯಿಸಿದರು. ಈ ಹಿಂದೆ ಈ ಜಿಲ್ಲೆಯವರೇ ಮುಖ್ಯಮಂತ್ರಿ ಆಗಿದ್ದರೂ ಇಬ್ಬರಿಗೆ ಸಚಿವ ಸ್ಥಾನ ನೀಡಿದ್ದರು. ಹೊಸ ಸಂಪುಟದಲ್ಲಿ ಯತೀಂದ್ರ ಅವರಿಗೆ ಅವಕಾಶ ನೀಡಿರುವುದಕ್ಕೆ ನಮಗೆ ಬೇಸರವಿಲ್ಲ. ಆದರೆ ಇನ್ನೊಬ್ಬರಿಗೆ ಅವಕಾಶ ಕೊಡಬೇಕಿತ್ತು ಎಂದು ಕೆ. ವೆಂಕಟೇಶ್ ಪ್ರತಿಕ್ರಿಯಿಸಿದರು.

### ಮುಂದಿನ ದಿನಗಳಲ್ಲಿ ತನ್ವೀರ್‌ಸೇಠ್‌ಗೂ ಅವಕಾಶ ಸಿಗಲಿದೆ: ಖಾದರ್

ಕಾಂಗ್ರೆಸ್ ಪಕ್ಷವು ಸದ್ಯ ರಾಜ್ಯದಲ್ಲಿ ನನ್ನನ್ನೂ ಒಳಗೊಂಡು ನಾಲ್ವರು ಅಲ್ಪಸಂಖ್ಯಾತ ನಾಯಕರಿಗೆ ಅವಕಾಶ ನೀಡಿದೆ. ಮುಂದೆ ತನ್ವೀರ್ ಸೇಠ್ ಅವರಿಗೂ ಖಂಡಿತ ಅವಕಾಶ ಸಿಗಲಿದೆ ಎಂದು ಆರೋಗ್ಯ ಸಚಿವ ಯು.ಟಿ. ಖಾದರ್ ಹೇಳಿದರು. ಮಂಗಳವಾರ ಮಾಧ್ಯಮಗಳಿಗೆ ಪ್ರತಿಕ್ರಿಯೆ ನೀಡಿದ ಅವರು, 'ಆರು ಬಾರಿ ಶಾಸಕರಾಗಿ ಆಯ್ಕೆ ಆಗಿರುವ ತನ್ವೀರ್ ಖಂಡಿತ ಸಚಿವ ಸ್ಥಾನಕ್ಕೆ ಅರ್ಹರಿದ್ದಾರೆ. ಭವಿಷ್ಯದಲ್ಲಿ ಅವರಿಗೆ ಪಕ್ಷವು ಸೂಕ್ತ ಸ್ಥಾನಮಾನ ನೀಡಲಿದೆ' ಎಂದರು. ಕಾಂಗ್ರೆಸ್ ವರಿಷ್ಠೆ ಸೋನಿಯಾ ಗಾಂಧಿ ತಮಗೆ ಒಲಿದು ಬಂದ ಪ್ರಧಾನಿ ಹುದ್ದೆಯನ್ನೇ ಮನಮೋಹನ್ ಸಿಂಗ್ ಅವರಿಗೆ ಬಿಟ್ಟುಕೊಟ್ಟರು. ಮೈಸೂರಿನವರೇ ಆದ ಸಿದ್ದರಾಮಯ್ಯ ಮುಖ್ಯಮಂತ್ರಿ ಸ್ಥಾನವನ್ನೇ ತ್ಯಾಗ ಮಾಡಿದ್ದಾರೆ. ಇವರೆಲ್ಲ ನಮಗೆ ಮಾದರಿ' ಎಂದರು.

# ನಾಗೇಂದ್ರ ಸಚಿವರಾಗಿರುವವರೆಗೂ ಅಧಿವೇಶನ ನಡೆಸಲು ಬಿಡಲ್ಲ: ಅಶೋಕ್

ಬೆಂಗಳೂರು, ಆ.11: ಬಿ.ನಾಗೇಂದ್ರ ಸಚಿವರಾಗಿರುವವರೆಗೂ ಅಧಿವೇಶನ ನಡೆಯಲು ಅವಕಾಶ ನೀಡಲ್ಲ. ಮುಖ್ಯಮಂತ್ರಿಗಳು ಕೂಡಲೇ ಅವರ ರಾಜೀನಾಮೆ ಪಡೆಯಲೇಬೇಕು ಎಂದು ಪ್ರತಿಪಕ್ಷ ನಾಯಕ ಆರ್.ಅಶೋಕ್ ಆಗ್ರಹಿಸಿದರು.



ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ಸದನದಲ್ಲಿ ಎಲ್ಲದಕ್ಕೂ ಮುಖ್ಯಮಂತ್ರಿಯೇ ಉತ್ತರ ಕೊಡುವುದಾದರೆ ಸಚಿವರು ಏಕೆ ಬೇಕು. ಜನರ ತೆರಿಗೆ ಹಣದಲ್ಲಿ ಸಚಿವರಿಗೆ ಕಾರು, ಮನೆ ಎಲ್ಲವನ್ನೂ ನೀಡುತ್ತಾರೆ. ಇದು ಚಕ್ರಾಧಿಪತ್ಯ ಅಲ್ಲ. ಬಾಬಾ ಸಾಹೇಬ್ ಅಂಬೇಡ್ಕರ್ ಅವರು ರಚಿಸಿದ ಸಂವಿಧಾನಕ್ಕೆ ಗೌರವ ನೀಡುವುದಾದರೆ ಸಚಿವರಿಗೆ, ಮುಖ್ಯಮಂತ್ರಿಗೆ ಯಾವ ಅಧಿಕಾರ ಇದೆ ಎಂದು ತಿಳಿದುಕೊಳ್ಳಬೇಕು. ಮುಖ್ಯಮಂತ್ರಿಯೇ ಉತ್ತರ ಕೊಡುವುದಾದರೆ ಎಲ್ಲ ಸಚಿವರನ್ನು ಅಧಿವೇಶನದಿಂದ ಹೊರಕ್ಕೆ ಹಾಕಬೇಕು. ಇದು ಸಿಎಂ ಡಿ.ಕೆ.ಶಿವಕುಮಾರ್ ಅವರ ಗೂಂಡಾಗಿರಿ ಸರ್ಕಾರ. ಅಧಿವೇಶನ ನಡೆಸುವ ಹೊಣೆ ಇದ್ದಲ್ಲಿ ಮೊದಲು ನಾಗೇಂದ್ರ ಅವರ ರಾಜೀನಾಮೆ ಪಡೆಯಬೇಕು ಎಂದರು.

ಬಿಡದಿ ಟೌನ್‌ಶಿಪ್, ಕೆಪಿಎಸ್‌ಸಿ ಮೊದಲಾದ ವಿಷಯಗಳ ಬಗ್ಗೆ ಚರ್ಚೆ ಮಾಡಬೇಕಿದೆ. ಚರ್ಚೆಗೂ ಮುನ್ನವೇ ಸಿಎಂ ಅವರು ನಾಗೇಂದ್ರ ರಾಜೀನಾಮೆ ಪಡೆಯಬೇಕು. ಈ ಸಂಬಂಧ ಬಿಜೆಪಿ ವತಿಯಿಂದ ಎಲ್ಲ ಜಿಲ್ಲಾಕೇಂದ್ರಗಳಿಂದ ಹೋರಾಟ ಆರಂಭಿಸಲಾಗುತ್ತಿದೆ. ಪ್ರತಿ ಜಿಲ್ಲಾಧಿಕಾರಿ ಕಚೇರಿ ಮುಂದೆ ಕಾರ್ಯಕರ್ತರು ಹೋರಾಟ ನಡೆಸುತ್ತಾರೆ. ವಿಧಾನಸಭೆ ಅಧಿವೇಶನದ ಒಳಗೆ ಹಾಗೂ ಹೊರಗೆ ಹೋರಾಟ ಮಾಡಲಾಗುವುದು. ಕಳೆದ ಬಾರಿ ಸಚಿವ ಬಿ.ನಾಗೇಂದ್ರ ಅವರನ್ನು ಕಿತ್ತುಹಾಕಿದ್ದು ಏಕೆ ಹಾಗೂ ಈಗ ಮರಳಿ ಸಚಿವರಾಗಿ ಮಾಡಿದ್ದೇಕೆ ಎಂದು ಸ್ಪಷ್ಟನೆ ನೀಡಬೇಕು ಎಂದು ಒತ್ತಾಯಿಸಿದರು.

**ಸ್ವಚ್ಛ ಬೆಂಗಳೂರು ಹೆಸರಲ್ಲಿ ಹೊಸ ಲೂಟಿ:**

ಸ್ವಚ್ಛ ಬೆಂಗಳೂರು ಹೆಸರಲ್ಲಿ ಕಾಂಗ್ರೆಸ್ ಹೊಸ ಲೂಟಿ ಶುರು ಮಾಡಿದೆ. ಪ್ರಧಾನಿ ನರೇಂದ್ರ ಮೋದಿ ಹಿಂದೆಯೇ ಸ್ವಚ್ಛ ಭಾರತ್ ಕಾರ್ಯಕ್ರಮ ಆರಂಭಿಸಿದ್ದರು. ರೀಲ್ಸ್ ಮಾಡಿಕೊಂಡಿರುವ ಸಚಿವ ಕೃಷ್ಣ ಭೈರೇಗೌಡ ಸ್ವಚ್ಛ ಮಾಡಲು ತೆರಿಗೆ ಹಾಕುತ್ತಿದ್ದಾರೆ. ಈಗಾಗಲೇ ಇರುವ ತೆರಿಗೆಯಲ್ಲೇ ಕಸದ ನಿರ್ವಹಣೆಯೂ ಸೇರಿರುತ್ತದೆ. ಖಾಲಿ ನಿವೇಶನದಲ್ಲಿ ಕಸ ಇದ್ದರೆ ವಿವಿಧ ರೀತಿಯ ತೆರಿಗೆ ದರಗಳನ್ನು ನಿಗದಿಪಡಿಸಲಾಗಿದೆ. ಬೆಂಗಳೂರಲ್ಲಿ ಅಭಿವೃದ್ಧಿ ಮಾಡದೆ ಜನರಿಂದ ತೆರಿಗೆ ಮಾತ್ರ ವಸೂಲಿ ಮಾಡಲಾಗುತ್ತಿದೆ ಎಂದು ಆರ್.ಅಶೋಕ್ ಕಿಡಿಕಾರಿದರು. ರಸ್ತೆ ಬದಿ ನಿಂತಿರುವ ಕಾರುಗಳನ್ನು ಖಾಲಿ ಮಾಡಿಸುತ್ತೇನೆ ಎಂದಿದ್ದರು. ಈ ರೀತಿ ಒಂದು ಲಕ್ಷಕ್ಕೂ ಅಧಿಕ ಕಾರುಗಳಿವೆ. ಅದನ್ನು ಏನು ಮಾಡಿದ್ದಾರೆ ಎಂದು ತಿಳಿದಿಲ್ಲ. ಪಾದಚಾರಿ ಮಾರ್ಗ ತೆರವು ಬೆಳಗ್ಗೆ ಮಾಡಿದರೆ, ಸಂಜೆ ಮತ್ತೆ ಬೀದಿಬದಿ ವ್ಯಾಪಾರಿಗಳು ಬಂದಿರುತ್ತಾರೆ. ಈಗ ಕಸದಿಂದ ಸ್ವಾತಂತ್ರ್ಯ ಎಂದು ಹೇಳಿ ತೆರಿಗೆ ಹಾಕುತ್ತಿದ್ದಾರೆ. ಕಸವಿಲ್ಲದ ಒಂದು ರಸ್ತೆಯೂ ನಗರದಲ್ಲಿಲ್ಲ. ಐದು ತಿಂಗಳಿಂದ 20 ಲಕ್ಷ ಫಲಾನುಭವಿಗಳಿಗೆ ಪಿಂಚಣಿಗಳನ್ನು ನೀಡಿಲ್ಲ. ಈ ರೀತಿ ಹಣವೇ ಇಲ್ಲದ ಸ್ಥಿತಿ ಇರುವಾಗ ಜನರಿಂದಲೇ ಹಣ ಲೂಟಿ ಮಾಡುತ್ತಿದ್ದಾರೆ ಎಂದರು. ನಗರದ ರಸ್ತೆಗಳಲ್ಲಿ ಇನ್ನೂ ಗುಂಡಿಗಳಿವೆ. 7 ಕಿ.ಮೀ. ಉದ್ದದ ರಸ್ತೆಯಲ್ಲಿ 300 ಗುಂಡಿಗಳಿವೆ. ಇದನ್ನು ದುರಸ್ತಿ ಮಾಡಿ ಜನರಿಗೆ ಅನುಕೂಲ ಮಾಡಿಕೊಡಲಿ. ಮನೆ ತೆರಿಗೆ ಸಂಗ್ರಹಿಸಿದ ನಂತರ ಬೇರೆ ಯಾವುದೇ ತೆರಿಗೆ ಹಾಕಬಾರದು.

ಇತ್ತೀಚೆಗೆ ಫ್ಲಾಟ್‌ಗಳಿಗೆ 40 ರೂ. ಇದ್ದ ಕಸದ ಶುಲ್ಕವನ್ನು 400 ರೂ.ಗೆ ಏರಿಸಿದ್ದಾರೆ. ಈಗ ಹೊಸ ಟೆಂಡರ್ ಕೂಡ ಮಾಡಿದ್ದಾರೆ. ಇದು ಸರ್ಕಾರವೇ ಮಾಡುತ್ತಿರುವ ದರೋಡೆಯಾಗಿದೆ. ಜಿಬಿಎ ಚುನಾವಣೆ ಬಂದರೆ ಕಾಂಗ್ರೆಸ್‌ನಿಂದ ಸ್ವಾತಂತ್ರ್ಯ ಎಂಬ ತೀರ್ಪನ್ನು ಜನರು ನೀಡುತ್ತಾರೆ ಎಂದರು.

### ನಾಗೇಂದ್ರ ವಿರುದ್ಧ 31 ಪ್ರಕರಣ ವಿಚಾರಣೆ ಹಂತದಲ್ಲಿವೆ

ನಾಗೇಂದ್ರ ಇನ್ನೂ ಆರೋಪಿಯಾಗಿದ್ದಾರೆ. ಸಿಬಿಐನಲ್ಲಿ ಮೂರು ಪ್ರಕರಣಗಳು ನಡೆಯುತ್ತಿದೆ. ಲೋಕಾಯುಕ್ತದಲ್ಲಿ ಐದು ಪ್ರಕರಣ ದಾಖಲಾಗಿದೆ. ಎಸ್‌ಐಟಿಯಲ್ಲಿ ಒಂದು ಪ್ರಕರಣ ಇದೆ. ಕಾರವಾರದಲ್ಲಿ ಸಿಐಡಿ ಪ್ರಕರಣವಿದೆ. ಚೆನ್ನೈನಲ್ಲೂ ಪ್ರಕರಣ ನಡೆಯುತ್ತಿದೆ. 31 ಪ್ರಕರಣಗಳು ವಿಚಾರಣೆಯಲ್ಲಿದೆ. ಹೀಗಿರುವಾಗ ಅವರು ವಿಧಾನಸೌಧಕ್ಕೆ ಯಾವಾಗ ಬರುತ್ತಾರೆ ಇಲಾಖೆಯ ಕೆಲಸ ಯಾವಾಗ ಮಾಡುತ್ತಾರೆ ಎಂದು ಅಶೋಕ್ ಪ್ರಶ್ನಿಸಿದರು.

ವಾಲ್ಮೀಕಿ ನಿಗಮದ ಪ್ರಕರಣದಲ್ಲಿ 187 ಕೋಟಿ ರೂ. ಹಗರಣದಲ್ಲಿ 89 ಕೋಟಿ ರೂ. ಅಕ್ರಮ ನಡೆದಿರುವುದನ್ನು ಮಾಜಿ ಸಿಎಂ ಸಿದ್ದರಾಮಯ್ಯ ಒಪ್ಪಿಕೊಂಡಿದ್ದರು. ಇದನ್ನು ಚುನಾವಣೆಗೆ ಬಳಸಿಕೊಂಡಿರುವುದು ಜಗಜ್ಜಾಹೀರಾಗಿತ್ತು. ದಲಿತರ ಈ ಹಣವನ್ನು ತಿಂದವರನ್ನು ಸಂಪುಟದಲ್ಲಿ ಇಟ್ಟುಕೊಂಡರೆ ಇಡೀ ಸಂಪುಟ ಕಳಂಕಿತ ಎಂದಾಗುತ್ತದೆ. ಬಹುಶಃ ನಾಗೇಂದ್ರ ಅವರು ಮುಖ್ಯಮಂತ್ರಿ, ಹೈಕಮಾಂಡ್ ಅನ್ನು ಬ್ಲ್ಯಾಕ್‌ಮೇಲ್ ಮಾಡಿರಬಹುದು ಎಂದರು.

## ವಾಹನ ಮಾಲೀಕರಿಗೆ ಕನಿಷ್ಠ 1 ಲಕ್ಷ ವಿಶೇಷ ಪ್ಯಾಕೇಜ್ ಘೋಷಿಸಿ

- ಡಾ.ಆನಂದ ಕುಮಾರ್



ಬೆಂಗಳೂರು,:ಆ.11: ವೈಜ್ಞಾನಿಕ ಪ್ರಯೋಗಗಳಿಲ್ಲದೇ ಪೆಟ್ರೋಲ್ ನಲ್ಲಿ ಶೇ 20 ರಷ್ಟು ಎಥನಾಲ್ ಮಿಶ್ರಣ ಮಾಡುತ್ತಿರುವುದು ದೇಶದ ಅತಿ ದೊಡ್ಡ ಹಗರಣವಾಗಿದ್ದು, ಇದರಿಂದ ದೇಶದ ಸಾಗಾಣೆ ವ್ಯವಸ್ಥೆಯೇ ಕುಸಿದು ಬೀಳಲಿದೆ. ವಾಹನಗಳ ಮೈಲೇಜ್ ತಗ್ಗುವ ಜೊತೆಗೆ ಕೋಟ್ಯಂತರ ವಾಹನಗಳು ಕೆಟ್ಟು ನಿಲ್ಲುವ ಆತಂಕ ಎದುರಾಗಿದೆ ಎಂದು ಎಐಸಿಸಿ ಎಸ್.ಸಿ ವಿಭಾಗದ ರಾಷ್ಟ್ರೀಯ ಸಂಯೋಜಕರು ಹಾಗೂ ಮಹಾರಾಷ್ಟ್ರ ಉಸ್ತುವಾರಿ ಡಾ. ಆನಂದ ಕುಮಾರ್ ಟೀಕಿಸಿದ್ದಾರೆ.

ಎಥೆನಾಲ್ ಮಿಶ್ರಣದ ಪೆಟ್ರೋಲ್ ಮಾರಾಟ ಅಳಿಸಲಾಗದ ಹಾನಿಯುಂಟು ಮಾಡಲಿದೆ. ಹೆಚ್ಚು ಉದ್ಯೋಗ ನೀಡಿರುವ ಸಾಗಾಣೆ ವಲಯಕ್ಕೆ ಇದು ಪ್ರತಿಕೂಲ ಪರಿಣಾಮ ಬೀರುತ್ತಿದೆ. ಎಥೆನಾಲ್ ಮಿಶ್ರಣದ ನಂತರವೂ ಪೆಟ್ರೋಲ್ ದರ ಕಡಿಮೆಯಾಗಿಲ್ಲ. "ಅದೇ ಬೆಲೆ, ಆದರೆ ದೂರ ಕಡಿಮೆ" ಎಂಬ ಪರಿಸ್ಥಿತಿ ನಿರ್ಮಾಣವಾಗಿದ್ದು, ದೇಶದ ಜನರ ಸಾವಿರಾರು ಕೋಟಿ ರೂ ತೈಲ ಕಂಪೆನಿಗಳ ಜೇಬಿಗೆ ಸೇರುತ್ತಿದೆ. ಕೋಟ್ಯಂತರ ವಾಹನಗಳ ಸಾಮರ್ಥ್ಯ ತಗ್ಗಿ ಕೆಟ್ಟು ನಿಲ್ಲಲಿದೆ. ಇದಕ್ಕೆ ಕೇಂದ್ರ ಸಚಿವ ನಿತಿನ್ ಗಡ್ಕರಿ ನೇರ ಹೊಣೆಯಾಗಿದ್ದಾರೆ. ಇದಕ್ಕಾಗಿಯೇ ಮ್ಯಾಕಾನಿಕಲ್ ಇಂಜಿನಿಯರಿಂಗ್ ಕೋರ್ಸ್‌ಗಳಿಗೆ ಇದೀಗ ಭಾರೀ ಬೇಡಿಕೆ ಕಂಡು ಬಂದಿದೆ. ಜನಸಾಮಾನ್ಯರ ಮೇಲೆ ಎಥೆನಾಲ್ ಪ್ರಯೋಗ ಸರಿಯಲ್ಲ. ಆತಂಕದಲ್ಲಿರುವ ಚಾಲಕರು, ವಾಹನ ಮಾಲೀಕರಿಗೆ ವಿಶೇಷ ಪ್ಯಾಕೇಜ್ ನಡಿ ಒಂದು ಲಕ್ಷ ರೂ ಪರಿಹಾರ ನೀಡಬೇಕು ಎಂದು ಆಗ್ರಹಿಸಿದ್ದಾರೆ. ಎಥೆನಾಲ್ ನಿಂದ ದೀರ್ಘಕಾಲಕ್ಕಿಂತ ತಕ್ಷಣದ ಪ್ರತಿಕೂಲ ಪರಿಣಾಮಗಳ ಬಗ್ಗೆ ವಾಹನ ಮಾಲೀಕರು ಚಿಂತಿತರಾಗಿದ್ದಾರೆ. ಉತ್ತರ ಭಾರತದಲ್ಲಿ ಎಥೆನಾಲ್ ವಿರುದ್ಧ ದೊಡ್ಡ ಮಟ್ಟದ ಆಕ್ರೋಶ ವ್ಯಕ್ತವಾಗಿದ್ದು, ದಕ್ಷಿಣದಲ್ಲಿ ಬಿಸಿ ತಟ್ಟುತ್ತಿದೆ. ದ್ವಿಚಕ್ರ, ಕಾರು, ಆಟೋ ಮತ್ತಿತರ ವಾಹನ ಚಾಲಕರಿಗೆ ನಮ್ಮ ವಾಹನದ ಎಂಜಿನ್ ಗತಿ ಏನು? ಕೆಟ್ಟು ನಿಂತರೆ ಯಾರು ಜವಾಬ್ದಾರರು ಎಂಬ ಆತಂಕ ಕಾಡುತ್ತಿದೆ. ಹಳೆಯ ಅಥವಾ ಇ20–ಗೆ ಹೊಂದಿಕೆಯಾಗದ ಎಂಜಿನ್ ಗಳಲ್ಲಿ ಉಂಟಾಗಬಹುದಾದ ಸಮಸ್ಯೆಗಳ ಬಗ್ಗೆ ಕಳವಳ ಉಂಟಾಗಿದೆ. ಪರಿಸರ ಉಳಿಸುವುದು ಒಂದು ನೆಪವಾಗಿದ್ದು, ಜನರ ಜೇಬಿಗೆ ಸರ್ಕಾರ ನೇರವಾಗಿ ಕೊಳ್ಳಿ ಇಟ್ಟಿದೆ. "ಹಸಿರು ಇಂಧನ" ಎಂದು ಬಿಂಬಿಸುತ್ತಿದ್ದು, ಈ ಹಸಿರು ನೀತಿಯ ಹೊರೆ ಹೊರುತ್ತಿರುವವರು ಸಾಮಾನ್ಯ ವಾಹನ ಮಾಲೀಕರು ಎಂದು ಹೇಳಿದ್ದಾರೆ.

ಹಳೆಯ ವಾಹನಗಳಲ್ಲಿ ರಬ್ಬರ್ ಪೈಪ್ ಗಳು, ಗ್ಯಾಸ್ಕೆಟ್ ಗಳು ಮತ್ತು ಪ್ಲಾಸ್ಟಿಕ್ ಭಾಗಗಳ ಮೇಲೆ ಎಥನಾಲ್ ನಿಂದ ಪರಿಣಾಮ ಬೀರಲಿದೆ. ಇಂಧನ ಸೋರಿಕೆ, ತುಕ್ಕು ಹಿಡಿಯುವ ಜೊತೆಗೆ ನಿರ್ವಹಣಾ ವೆಚ್ಚ ಹೆಚ್ಚಲಿದೆ. ಪರಿಸರ ಸಂರಕ್ಷಣೆ ನೆಪದಲ್ಲಿ ಸಾಮಾನ್ಯ ಜನರ ಮೇಲೆ ಪ್ರಯೋಗ ನಡೆಸುತ್ತಿರುವುದು ಸರಿ ಇಲ್ಲ. ಪರಿಸರವೂ ಉಳಿಯಬೇಕು, ವಾಹನಗಳ ಆಯುಷ್ಯ ಹೆಚ್ಚಾಗಬೇಕು. ಜನರ ಆರ್ಥಿಕ ಸ್ಥಿತಿಯೂ ಹದಗೆಡಬಾರದು. ಈ ಗುರಿಗಳನ್ನು ಸಮತೋಲನಗೊಳಿಸುವ ನೀತಿಯೇ ನಿಜವಾದ ಜನಪರ ಇಂಧನ ನೀತಿಯಾಗಬೇಕು. ಆದರೆ ಏಕಾಏಕಿ ಇ20 ನೀತಿ ಜಾರಿಗೆ ತಂದಿರುವುದರ ಹಿಂದೆ ಸಾಮಾನ್ಯ ಜನರ ಹಿತಾಸಕ್ತಿಯನ್ನು ಸಂಪೂರ್ಣವಾಗಿ ಕಡೆಗಣಿಸಲಾಗಿದೆ ಎಂದು ಡಾ. ಆನಂದ ಕುಮಾರ್ ಟೀಕಿಸಿದ್ದಾರೆ. ಇ20–ಗೆ ಹೊಂದಿಕೆಯಾಗದ ವಾಹನಗಳ ಪರಿವರ್ತನೆಗೆ ಆರ್ಥಿಕ ನೆರವು ನೀಡಬೇಕು. ಗ್ರಾಹಕರ ಹಿತಾಸಕ್ತಿಯ ರಕ್ಷಣೆ ಇಲ್ಲದಿದ್ದಲ್ಲಿ "ಎಥನಾಲ್ ಕ್ರಾಂತಿ" ಎಂಬ ಹೆಸರಿನಲ್ಲಿ ಸಾಮಾನ್ಯ ವಾಹನ ಸವಾರರೇ ಭಾರೀ ಬೆಲೆ ತೆರಬೇಕಾದ ಪರಿಸ್ಥಿತಿ ಉಂಟಾಗಬಹುದು. ಎಲ್ಲಾ ವಾಹನಗಳಿಗೆ ಒಂದೇ ರೀತಿಯ ಪರಿಹಾರ ಎಂದು ಪರಿಗಣಿಸುವುದು ವೈಜ್ಞಾನಿಕ ದೃಷ್ಟಿಯಿಂದ ಸರಿಯಲ್ಲ. ಎಥನಾಲ್ ನೀತಿಯ ಯಶಸ್ಸು ಕೇವಲ ಮಿಶ್ರಣದ ಪ್ರಮಾಣದಲ್ಲಲ್ಲ; ಅದು ವೈಜ್ಞಾನಿಕ ಸಂಶೋಧನೆ, ವಾಹನ ತಂತ್ರಜ್ಞಾನ, ಗ್ರಾಹಕರ ವಿಶ್ವಾಸ ಮತ್ತು ಪಾರದರ್ಶಕ ಅನುಷ್ಠಾನದ ಮೇಲೆ ಅವಲಂಬಿತವಾಗಬೇಕು ಎಂದು ಹೇಳಿದ್ದಾರೆ.

Managing Editor : SANDEEP RENU ✆ 99728 72151 | Executive Editor : SHARAT JYOTSNA B.R ✆ 9886766483 ✉ vaarthe@gmail.com
Published from: K10,'A'/4, Khriki Extension, Malviya Nagar, New Delhi-110 017. Phone: 95-120-3917916-20
Printed at: Jyoti Printers, E-94, Sector 6, Noida, UP. Phone: 0120-4232687 Off : E-94,Sector 6, Noida,UP | RNI No. DELKAN/2003/10363

# ರೆಡ್‌ಜೋನ್‌ನಿಂದ ಮುಕ್ತಿ: ಟೌನ್‌ಶಿಪ್‌ಗೆ ಭೂಮಿ ನೀಡಲು ಸಿದ್ಧ

**ಬೈರಮಂಗಲ, ಕಂಚುಗಾರನಹಳ್ಳಿ ಭೂಸ್ವಾಧೀನಕ್ಕೆ ಅಂತಿಮ ಅಧಿಸೂಚನೆ ಹೊರಡಿಸಿ: ಸಿಎಂಗೆ ಬಿಡದಿ ವ್ಯಾಪ್ತಿ ರೈತರ ನಿಯೋಗ ಮನವಿ**

**ಬೆಂಗಳೂರು, ಆ.11:** ರೆಡ್ ಜೋನ್‌ನಿಂದ ಮುಕ್ತಿ ಬೇಕು. ಬಿಡದಿ ಟೌನ್‌ಶಿಪ್‌ಗೆ ಭೂಮಿ ನೀಡಲು ಸಿದ್ಧರಿದ್ದೇವೆ. ಬೈರಮಂಗಲ ಹಾಗೂ ಕಂಚುಗಾರನಹಳ್ಳಿ ವ್ಯಾಪ್ತಿಯಲ್ಲಿ ಭೂಸ್ವಾಧೀನಕ್ಕೆ ಅಂತಿಮ ಅಧಿಸೂಚನೆ ಹೊರಡಿಸಿ ಸಂಕಷ್ಟಕ್ಕೆ ನೆರವಾಗಿ ಎಂದು ಬಿಡದಿಯ ಸುತ್ತಮುತ್ತಲ ರೈತರ ನಿಯೋಗ ಮುಖ್ಯಮಂತ್ರಿಗಳಿಗೆ ಮನವಿ ಮಾಡಿತು.

ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರನ್ನು ವಿಧಾನಸೌಧದಲ್ಲಿ ಮಂಗಳವಾರ ಭೇಟಿ ಮಾಡಿದ ನಿಯೋಗದ ಸದಸ್ಯರು, ರೆಡ್ ಜೋನ್‌ನಿಂದ ತಮಗಾಗಿರುವ ಕಷ್ಟ ವಿವರಿಸಿದರು. ಯಾರದೋ ರಾಜಕೀಯ ಆಟಕ್ಕೆ ನಾವು ಬಲಿ ಆಗುತ್ತಿದ್ದೇವೆ. ನಾವು ಜಮೀನು ಕೊಡಲು ಸಿದ್ಧ. ತಕ್ಷಣವೇ ಪರಿಹಾರ ಕೊಡಿ ಎಂದು ಮನವಿ ಮಾಡಿದರು.

ಮಾಜಿ ಸಿಎಂ ಕುಮಾರಸ್ವಾಮಿ ಅವರಿಗೆ ಹಲವು ಬಾರಿ ಮನವಿ ಮಾಡಿದ್ದರೂ ಅವರು ಸ್ಪಂದಿಸಲಿಲ್ಲ. ನೀವಾದರೂ ನಮ್ಮ ಕಷ್ಟ ಬಗೆಹರಿಸಿ ಎಂದು ಮನವಿ ಮಾಡಿದರು.

ಬೈರಮಂಗಲ ಗ್ರಾಮದ ಸುನೀಲ್ ಎಂಬುವವರು ಮಾತನಾಡಿ, "ಕಳೆದ 20 ವರ್ಷಗಳಿಂದ ನಾವು ರೆಡ್ ಜೋನ್ ನಿಂದ ಸಂಕಷ್ಟ ಅನುಭವಿಸಿದ್ದೇವೆ. ಅಲ್ಲಿ ವೃಷಭಾವತಿ ಕೊಳಚೆ ನೀರಿನಿಂದ ವ್ಯವಸಾಯ ಕಷ್ಟವಾಗಿದೆ. ಅಲ್ಲಿ ಕೆಲವು ಭಾಗದಲ್ಲಿ ತೆಂಗಿನತೋಟ ಮೇಲುನೋಟಕ್ಕೆ ಹಸಿರಾಗಿ ಕಾಣಬಹುದು ಆದರೆ, ಇಳುವರಿ ಬರುತ್ತಿಲ್ಲ. ಕುಡಿಯುವ ಹಾಲು ಕೂಡ ಕಲುಷಿತಗೊಂಡಿದೆ. ರೆಡ್‌ಜೋನ್ ಮಾಡಿರುವುದರಿಂದ ಅಭಿವೃದ್ಧಿ ಮಾಡಲು ಆಗುತ್ತಿಲ್ಲ. ಆಸ್ಪತ್ರೆ, ಕಲ್ಯಾಣಮಂಟಪ ನಿರ್ಮಾಣ ಸಾಧ್ಯವಿಲ್ಲ. ನಮ್ಮ ಪಕ್ಕದ ಊರುಗಳಲ್ಲಿ ಬ್ಯಾಂಕ್ ನಲ್ಲಿ ಜಮೀನಿಗೆ 1 ಕೋಟಿವರೆಗೆ ಸಾಲವ ಕೊಟ್ಟರೆ ನಮಗೆ 1ಲಕ್ಷರೂಪಾಯಿ ಕೂಡ ಸಾಲ ಸಿಗುತ್ತಿಲ್ಲ. ನಮಗೆ ಮದುವೆ ಹಾಗೂ ಕಷ್ಟಕಾಲದಲ್ಲಿ ನಮ್ಮ ಜಮೀನು ಮಾರಲು ಆಗುತ್ತಿಲ್ಲ. ಇವೆಲ್ಲವೂ ಅಂದಿನ ಮುಖ್ಯಮಂತ್ರಿಗಳಾಗಿದ್ದ ಕುಮಾರಸ್ವಾಮಿ ಅವರ ಕೊಡುಗೆ. ಹೀಗಾಗಿ ನಮಗೆ ಈ ಸಮಸ್ಯೆಗಳಿಂದ ಮುಕ್ತಿ ದೊರಕಿಸಬೇಕು" ಎಂದು ಮನವಿ ಮಾಡಿದರು.

ನಮ್ಮಲ್ಲಿ ಕೊಳಚೆನೀರಿನ ವಾಸನೆ, ಸೊಳ್ಳೆಗಳ ಕಾಟದಿಂದ ನೆಮ್ಮದಿ ಜೀವನ ನಡೆಸಲು ಆಗುತ್ತಿಲ್ಲ. ನಮಗೆ ಹಣ ಬೇಡ, ನಾವು ಈ ಯೋಜನೆಯಲ್ಲಿ ಅಭಿವೃದ್ಧಿಪಡಿಸಿದ ಭೂಮಿ ಪಡೆದು, ಯೋಜನೆಯ ಪಾಲುದಾರರಾಗುತ್ತೇವೆ" ಎಂದು ತಿಳಿಸಿದರು."ನಾವು ಜೆಡಿಎಸ್ ಕಾರ್ಯಕರ್ತರೆ, ಅಭಿವೃದ್ಧಿ ಮೊದಲು, ಪಕ್ಷ ಆಮೇಲೆ. ನಮಗೆ ಟೌನ್‌ಶಿಪ್ ಯೋಜನೆ ಬೇಕು. ಅಲ್ಲಿ ಹೋರಾಟ ಮಾಡುತ್ತಿರುವವರು ಬೇರೆ ಕ್ಷೇತ್ರಗಳಿಂದ ಕರೆ ತಂದಿರುವ ಪಕ್ಷದ ಕಾರ್ಯಕರ್ತರು. ನಮ್ಮಲ್ಲಿ ಬಹುತೇಕ ಜನರು ಟೌನ್‌ಶಿಪ್ ಯೋಜನೆಗೆ ಭೂಮಿ ನೀಡಲು ಸಿದ್ಧರಿದ್ದಾರೆ" ಎಂದು ವಿವರಿಸಿದರು.

ಯಾಲಕ್ಕಿ ಗೌಡ ಎಂಬ ಹಿರಿಯ ನಾಗರಿಕರು ಮಾತನಾಡಿ, "ನನಗೆ 80 ವರ್ಷ, ಕಳೆದ 40 ವರ್ಷಗಳಿಂದ ಜೆಡಿಎಸ್ ಪಕ್ಷದಲ್ಲಿದ್ದೆ. ಕಳೆದ 20 ವರ್ಷಗಳಿಂದ ನಮ್ಮ ಭಾಗವನ್ನು ರೆಡ್ ಜೋನ್ ನಿಂದ ಮುಕ್ತಿಗೊಳಿಸಿ ಎಂದು ಮನವಿ ಮಾಡಿದೆವು. ಆದರೆ ಕುಮಾರಸ್ವಾಮಿ ಅವರು ಮನಸ್ಸು ಮಾಡಲಿಲ್ಲ. ಅವರ ಉದ್ದೇಶ ನಮಗೆ ತಿಳಿಯುತ್ತಿಲ್ಲ. ನಮ್ಮಲ್ಲಿ ಕೇವಲ 1 ಲಕ್ಷಕ್ಕೆ ಜಮೀನು ಕಳೆದುಕೊಂಡವರನ್ನು ನೋಡಿದ್ದೇನೆ. ಎಲ್ಲರ ಬದುಕು ಅದ್ವಾನ ಆಗಿದೆ. ಈಗ ಈ ಪುಣ್ಯಾತ್ಮ ಡಿ.ಕೆ. ಶಿವಕುಮಾರ್ ಅವರ ಸರ್ಕಾರ ಎಲ್ಲವನ್ನೂ ಸರಿ ಮಾಡಲು ಮುಂದಾಗಿದೆ. ಈಗ ಇವರು ಇಲ್ಲದ ಕಾರಣ ಹುಡುಕಿ, ಕೆದಕಿ ತಕರಾರು ಮಾಡುತ್ತಿದ್ದಾರೆ. ಅವರು ಗೌಡರೇ, ಇವರೂ ಗೌಡರೇ, ನಾವು ಗೌಡರೇ ಆದರೆ ಕುಮಾರಣ್ಣನಿಗೆ ಎಲ್ಲರೂ ಚೆನ್ನಾಗಿರಬೇಕು ಎಂಬ ಆಸೆ ಇಲ್ಲ" ಎಂದು ಬೇಸರ ವ್ಯಕ್ತಪಡಿಸಿದರು.

ಯುವರೈತ ಹರೀಶ್ ರೆಡ್ಡಿ ಅವರು" ರೈತರ ಹಿತ ಕಾಪಾಡುವ ದೊಡ್ಡ ಮನಸ್ಸು ಕುಮಾರಸ್ವಾಮಿ ಅವರಿಗಿದ್ದಿದ್ದರೆ ರೆಡ್‌ಜೋನ್ ಮಾಡುತ್ತಿರಲಿಲ್ಲ. ರೆಡ್ ಜೋನ್ ತೆಗೆದುಬಿಡಿ ಎಂದು ನಾವೆಲ್ಲಾ ಅವರ ಮನೆಗೆ ಹೋಗಿ ಮನವಿ ಮಾಡಿದರೂ ನಮ್ಮ ಮಾತಿಗೆ ಕಿಮ್ಮತ್ತು ನೀಡಲಿಲ್ಲ. ಕುಮಾರಸ್ವಾಮಿಯವರ ಕನಸಿನ ಕೂಸು ಈಗ ನಮಗೆ ಪಾಪದ ಕೂಸಾಗಿದೆ. ಬೆಂಗಳೂರು ಸುತ್ತಮುತ್ತಲಿನ ಇತರೆ ಎಲ್ಲಾ ಪ್ರದೇಶಗಳನ್ನು ಗಮನಿಸಿ. ಎಲ್ಲವೂ ಶರವೇಗದಲ್ಲಿ ಅಭಿವೃದ್ಧಿಗೊಂಡಿವೆ, ಗೊಳ್ಳುತ್ತಿವೆ. ಆದರೆ, ಬಿಡದಿ ಮಾತ್ರ ಹಿಂದೆ ಬಿದ್ದಿದೆ. ಇವತ್ತು ಆ ಕುಮಾರಸ್ವಾಮಿ ಅವರ ಪಾಪದ ಕೂಸಿಗೆ ಲಾಲಿ ಹಾಡಬೇಕಾದ ಅನಿವಾರ್ಯ ನಮಗೆಲ್ಲ ಬಂದಿರುವುದು ದುರದೃಷ್ಟ ಮತ್ತು ದುರಂತ " ಎಂದು ತಮ್ಮ ಸಂಕಷ್ಟವನ್ನು ಎಳೆ ಎಳೆಯಾಗಿ ಬಿಡಿಸಿಟ್ಟರು.

### ಅಧಿಕಾರಿಗಳೊಂದಿಗೆ ಚರ್ಚಿಸಿ ಅಂತಿಮ ಅಧಿಸೂಚನೆ ಪ್ರಕಟ



**ಬಿಡದಿಯ ನೂರಾರು ರೈತರು ಇಂದು ನನ್ನನ್ನು ಭೇಟಿ ಮಾಡಿದ್ದಾರೆ. ಅಂತಿಮ ಅಧಿಸೂಚನೆ ನೀಡಿ, ನಮಗೆ ಸಮಸ್ಯೆಗಳಿದ್ದು, ಜಮೀನು ನೀಡಲು ಸಿದ್ಧರಿದ್ದೇವೆ ಎಂದು ಹೇಳಿದರು. ನಾವು ಸ್ವಲ್ಪ ಹಣ ಪರಿಹಾರ ಹಾಗೂ ಸ್ವಲ್ಪ ಭೂ ಪರಿಹಾರವನ್ನು ಪಡೆಯುತ್ತೇವೆ ಎಂದು ಹೇಳಿದ್ದಾರೆ. ನಾನು ಅಧಿಕಾರಿಗಳ ಜೊತೆಗೆ ಚರ್ಚೆಮಾಡಿ ಬಾಕಿ ಇರುವ ಗ್ರಾಮಗಳಿಗೆ ಅಂತಿಮ ಅಧಿಸೂಚನೆ ಹೊರಡಿಸುತ್ತೇವೆ. ಯಾರು ಸ್ವಇಚ್ಛೆಯಿಂದ ಜಮೀನು ನೀಡುತ್ತಾರೋ ಅವರಿಂದ ಪಡೆಯುತ್ತೇವೆ ಯಾರಿಗೂ ಬಲವಂತ ಮಾಡುವುದಿಲ್ಲ" ಎಂದು ಹೇಳಿದರು. ಪಾದಯಾತ್ರೆ ರೈತರ ವಿರೋಧದ ಬಗ್ಗೆ ಕೇಳಿದಾಗ, "ನಾನು ನೋಡಿದೆ. ಅಲ್ಲಿ ಕೆಲವು ರೈತರು ಮಾತ್ರ ಇದ್ದರು. ಉಳಿದವರು ಮಂಡ್ಯ, ಮೈಸೂರು, ತುಮಕೂರು ಭಾಗದ ಕ್ಷೇತ್ರಗಳಿಂದ ಜನರನ್ನು ಕರೆತಂದಿದ್ದರು. ರಾಜಕೀಯಕ್ಕಾಗಿ ಹೋರಾಟ ಮಾಡುವವರನ್ನು ಬೇಡ ಎನ್ನಲು ಸಾಧ್ಯವೇ? ಅವರು ಇವತ್ತು ಪಾದಯಾತ್ರೆ ಮಾಡಿದ್ದರೂ ನಾವು ಬೇಡ ಎನ್ನುತ್ತಿರಲಿಲ್ಲ. ದಿನಾ ಪಾದಯಾತ್ರೆ ಮಾಡಲಿ. ಅವರು ಎಷ್ಟಾದರೂ ನಡೆಯಲಿ ಅವರನ್ನು ತಡೆಯಬೇಡಿ ಎಂದು ಪೊಲೀಸರಿಗೆ ಹೇಳಿದ್ದೇನೆ" ಎಂದು ಹೇಳಿದರು. ವಿಜಯೇಂದ್ರ ಅವರ ಹೇಳಿಕೆ ಬಗ್ಗೆ ಕೇಳಿದಾಗ, "ಅವರು ಹೇಳಿರುವುದು ಸತ್ಯ. ಈಗಲೂ ರೈತರು ನಾವು ಭೂಮಿ ಕೊಡುತ್ತೇವೆ ನಮಗೆ ಪರಿಹಾರ ಬೇಕು ಎಂದು ಕೇಳುತ್ತಿದ್ದಾರೆ. ಬಿಜೆಪಿ ಆಡಳಿತದಲ್ಲಿ ಒಂದು ಸಾವಿರ ಎಕರೆಯನ್ನು ಸ್ವಾಧೀನಪಡಿಸಿಕೊಂಡಾಗ ರೈತರು 80–90 ಲಕ್ಷ ಪರಿಹಾರ ತೆಗೆದುಕೊಂಡರು. ಆಗ ಕುಮಾರಸ್ವಾಮಿ ಅವರು ಯಾಕೆ ಹೋರಾಟ ಮಾಡಲಿಲ್ಲ? ಈ ಬಗ್ಗೆ ಅಧಿವೇಶನದಲ್ಲಿ ಚರ್ಚೆ ಮಾಡಿ" ಎಂದು ಪ್ರಶ್ನಿಸಿದರು**

# ಸ್ವಾತಂತ್ರ್ಯೋತ್ಸವಕ್ಕೂ ಮುನ್ನ ಉಗ್ರರ ಪೋಸ್ಟರ್ ಬಿಡುಗಡೆ

**ನವದೆಹಲಿ, ಆ.11:** ಸ್ವಾತಂತ್ರ್ಯೋತ್ಸವಕ್ಕೆ ಇನ್ನು ಮೂರು ದಿನ ಮಾತ್ರ ಬಾಕಿ ಉಳಿದಿದೆ. ಈ ಹೊತ್ತಲ್ಲೇ ದೆಹಲಿ ಪೊಲೀಸರು ಅಘಾತಕಾರಿ ವಿಷಯವೊಂದನ್ನು ಬಹಿರಂಗ ಪಡಿಸಿದ್ದಾರೆ. 19 ಕಟ್ಟಾ ಉಗ್ರರ ಭಿತ್ತಿಪತ್ರಗಳನ್ನು ಪೊಲೀಸರು ಬಿಡುಗಡೆ ಮಾಡಿದ್ದು, ಸ್ವಾತಂತ್ರ್ಯೋತ್ಸವದ ಸಂಭ್ರಮದ ಜೊತೆ ಆತಂಕ ಸಹ ಮನೆ ಮಾಡಿದೆ.

ಮುನ್ನೆಚ್ಚರಿಕಾ ಕ್ರಮವಾಗಿ ದೆಹಲಿ ಪೊಲೀಸರು ಇಂಡಿಯನ್ ಮುಜಾಹಿದ್ದೀನ್, ಅಲ್–ಖೈದಾ ಮತ್ತು ಖಲಿಸ್ತಾನಿ ಭಯೋತ್ಪಾದಕರ ಪೋಸ್ಟರ್ಗಳನ್ನು ಬಿಡುಗಡೆ ಮಾಡಿದ್ದಾರೆ. ಪೋಸ್ಟರ್‌ನಲ್ಲಿ ಅವರ ವಿವರಗಳಿವೆ. ಅವರ ಬಗ್ಗೆ ಮಾಹಿತಿ ಸಿಕ್ಕರೆ ಕೂಡಲೇ ತಿಳಿಸುವಂತೆ ಪೊಲೀಸರು ಮನವಿ ಮಾಡಿದ್ದಾರೆ. ಉಗ್ರರ ಬಂಧನಕ್ಕೆ ಅನುಕೂಲವಾಗುವ ಮಾಹಿತಿ ಕೊಟ್ಟವರಿಗೆ ಸೂಕ್ತ ಬಹುಮಾನ ಸಹ ನೀಡುವುದಾಗಿ ಪೊಲೀಸರು ಘೋಷಿಸಿದ್ದಾರೆ. ಮಾಹಿತಿ ನೀಡಿದವರ ಗುರುತು ಬಹಿರಂಗ ಪಡಿಸುವುದಿಲ್ಲ ಎಂದು ಅಧಿಕಾರಿಗಳು ಭರವಸೆ ನೀಡಿದ್ದಾರೆ.

ದೆಹಲಿ ಪೊಲೀಸರು ಭದ್ರತಾ ಸಂಸ್ಥೆಗಳೊಂದಿಗೆ ಸಂಪರ್ಕದಲ್ಲಿದ್ದಾರೆ. ಅಲ್ಲದೇ ರಾಜಧಾನಿಯಲ್ಲಿ ಹೈ ಅಲರ್ಟ್ ಘೋಷಿಸಿದ್ದಾರೆ. ಸೂಕ್ಷ್ಮ ಪ್ರದೇಶಗಳು, ಪ್ರಮುಖ ಮಾರುಕಟ್ಟೆಗಳು, ರೈಲು ನಿಲ್ದಾಣಗಳು, ಬಸ್ ಟರ್ಮಿನಲ್ ಮತ್ತು ಇತರ ಪ್ರಮುಖ ಸ್ಥಳಗಳಲ್ಲಿ ಕಣ್ಗಾವಲು ಹೆಚ್ಚಿಸಲಾಗಿದೆ.

ಸ್ವಾತಂತ್ರ್ಯ ದಿನಾಚರಣೆಯ ವೇಳೆ ಸಂಭಾವ್ಯ ಭಯೋತ್ಪಾದಕ ಬೆದರಿಕೆಗಳನ್ನು ಗಮನದಲ್ಲಿಟ್ಟುಕೊಂಡು, ದೆಹಲಿ ಪೊಲೀಸರು ರಾಜಧಾನಿಯಾದ್ಯಂತ ಭದ್ರತೆಯನ್ನು ಬಿಗಿಗೊಳಿಸಿದ್ದಾರೆ. ಸಾರ್ವಜನಿಕ ಸ್ಥಳಗಳು ಮತ್ತು ಜನದಟ್ಟಣೆಯ ಮಾರುಕಟ್ಟೆಗಳಲ್ಲಿ 19 ಮೋಸ್ಟ್ ವಾಂಟೆಡ್ ಭಯೋತ್ಪಾದಕರ ಪೋಸ್ಟರ್‌ಗಳನ್ನು ಅಂಟಿಸಿದ್ದಾರೆ.




**ಪೋಸ್ಟರ್ನಲ್ಲಿರೋ ಮೋಸ್ಟ್ ವಾಂಟೆಡ್ ಉಗ್ರರು ಯಾರು?:** ದೆಹಲಿ ಪೊಲೀಸರು ಬಿಡುಗಡೆ ಮಾಡಿದ ಪೋಸ್ಟರ್‌ನಲ್ಲಿ ಇಂಡಿಯನ್ ಮುಜಾಹಿದ್ದೀನ್, ಅಲ್–ಖೈದಾ ಮತ್ತು ವಿವಿಧ ಖಲಿಸ್ತಾನಿ ಭಯೋತ್ಪಾದಕ ಸಂಘಟನೆಗಳೊಂದಿಗೆ ಸಂಪರ್ಕ ಹೊಂದಿರುವ ವಾಂಟೆಡ್ ಶಂಕಿತರ ಛಾಯಾಚಿತ್ರಗಳು ಮತ್ತು ಗುರುತಿನ ವಿವರಗಳಿವೆ.

ಇಂಡಿಯನ್ ಮುಜಾಹಿದ್ದೀನ್‌ನೊಂದಿಗೆ ಸಂಬಂಧ ಹೊಂದಿರುವ ರಿಯಾಜ್ ಭಟ್ಕಳ್ ಮತ್ತು ಶಬಂದ್ರಿ ಮೊಹಮ್ಮದ್ ಇಕ್ಬಾಲ್ ಅಲಿಯಾಸ್ ಇಕ್ಬಾಲ್ ಭಟ್ಕಳ್ ಸೇರಿದ್ದಾರೆ. ಅಲ್–ಖೈದಾದೊಂದಿಗೆ ಸಂಬಂಧ ಹೊಂದಿರುವ ಮೊಹಮ್ಮದ್ ಶಾರ್ಜೀಲ್ ಅಖ್ತರ್, ಅಬು ಸುಫಿಯಾನ್ ಮತ್ತು ಸೈಯದ್ ಮೊಹಮ್ಮದ್ ಅರ್ಷಿಯಾನ್ನ ಮಾಹಿತಿ ಪೋಸ್ಟರ್‌ನಲ್ಲಿ ಹಂಚಿಕೊಳ್ಳಲಾಗಿದೆ.

ಖಲಿಸ್ತಾನಿ ಭಯೋತ್ಪಾದಕರಲ್ಲಿ, ಖಲಿಸ್ತಾನ್ ಜಿಂದಾಬಾದ್ ಫೋರ್ಸ್‌ನ ರಂಜಿತ್ ಸಿಂಗ್ ಅಲಿಯಾಸ್ ನೀತಾ ಮತ್ತು ಪರಮಜಿತ್ ಸಿಂಗ್ ಪಮ್ಮಾ ಮತ್ತು ಖಲಿಸ್ತಾನ್ ಟೈಗರ್ ಫೋರ್ಸ್ನ ಅರ್ಶದೀಪ್ ಸಿಂಗ್ ಅಲಿಯಾಸ್ ಅರ್ಶ್ ದಲಾನನ್ನು ಪ್ರಮುಖವಾಗಿ ಹೆಸರಿಸಲಾಗಿದೆ. ಬಬ್ಬರ್ ಖಾಲ್ಸಾ ಇಂಟರ್ನ್ಯಾಷನಲ್ (ಬಿಕೆಐ) ನೊಂದಿಗೆ ಸಂಬಂಧ ಹೊಂದಿರುವ ಹರ್ವಿಂದರ್ ಸಿಂಗ್ ಸಂಧು ಅಲಿಯಾಸ್ ರಿಂಡಾ, ವಾಧವಾ ಸಿಂಗ್ ಬಬ್ಬರ್ ಮತ್ತು ಗುರ್ಮೀತ್ ಸಿಂಗ್ ಬಗ್ಗಾ ಸೇರಿದಂತೆ ಇತರ ವಾಂಟೆಡ್ ಭಯೋತ್ಪಾದಕರ ಬಗ್ಗೆ ಪೋಸ್ಟರ್‌ನಲ್ಲಿ ಉಲ್ಲೇಖಿಸಲಾಗಿದೆ.


**ಪೊಲೀಸರಿಂದ ಹೈ ಅಲರ್ಟ್:** ಆಗಸ್ಟ್ 15 ಮತ್ತು ಜನವರಿ 26 ರಂತಹ ರಾಷ್ಟ್ರೀಯ ಹಬ್ಬಗಳ ಸಮಯದಲ್ಲಿ ಭಯೋತ್ಪಾದಕ ದಾಳಿಯ ಸಾಧ್ಯತೆ ಇರುವುದರಿಂದ ಈ ಸಮಯದಲ್ಲಿ ಭಾರೀ ಭದ್ರತೆ ಕೈಗೊಳ್ಳಲಾಗುತ್ತದೆ. ವಿಶೇಷವಾಗಿ ಈ ಸಮಯದಲ್ಲಿ, ರೈಲ್ವೆ ನಿಲ್ದಾಣಗಳು, ಬಸ್ ನಿಲ್ದಾಣಗಳು, ಮಾರುಕಟ್ಟೆಗಳು, ಧಾರ್ಮಿಕ ಸ್ಥಳಗಳು ಮತ್ತು ಇತರ ಸೂಕ್ಷ್ಮ ಸ್ಥಳಗಳಲ್ಲಿ ಕಣ್ಗಾವಲು ಹೆಚ್ಚಿಸಲಾಗುತ್ತದೆ. ಶಂಕಿತರ ಬಗ್ಗೆ ಮಾಹಿತಿ ಸಿಕ್ಕರೆ ಪೊಲೀಸ್ ನಿಯಂತ್ರಣ ಕೊಠಡಿ ಸಂಖ್ಯೆ 112ಕ್ಕೆ ಮಾಹಿತಿ ನೀಡುವಂತೆ ಕೋರಲಾಗಿದೆ.

**ವಿರೋಧದ ನಡುವೆಯೂ ಮುಂದುವರಿದ ಕಂಬಳ ಸಿದ್ಧತೆ**

# ಮೈಸೂರು ದಸರಾದಲ್ಲಿ ಧೂಳೆಬ್ಬಿಸಲು ಸಜ್ಜಾದ 130 ಜೋಡಿ ಕೋಣಗಳು!

**ಮೈಸೂರು, ಆ.11:** ವಿಶ್ವವಿಖ್ಯಾತ ಮೈಸೂರು ದಸರಾ ಮಹೋತ್ಸವದಲ್ಲಿ ಈ ಬಾರಿ ಕರಾವಳಿಯ ಸಾಂಪ್ರದಾಯಿಕ ಹಾಗೂ ಜನಪ್ರಿಯ ಕ್ರೀಡೆಯಾದ ಕಂಬಳವನ್ನು ಆಯೋಜಿಸಲು ಕಂಬಳ ಸಮಿತಿ ಬಿರುಸಿನ ಸಿದ್ಧತೆ ನಡೆಸಿದೆ.


ಕೆಲವರಿಂದ ವಿರೋಧ ವ್ಯಕ್ತವಾಗಿದ್ದರೂ ಸಹ, ದಕ್ಷಿಣ ಕನ್ನಡ ಜಿಲ್ಲೆಯ ಕಂಬಳ ಸಮಿತಿಯು ಕೋಣಗಳ ಮಾಲೀಕರಿಗೆ ಅಧಿಕೃತ ವೇಳಾಪಟ್ಟಿಯನ್ನು ಹಂಚಿ ಕೊಂಡಿದ್ದು, ಸಿದ್ಧತೆ ಚುರುಕು ಗೊಳಿಸಿದೆ.



**ಎರಡು ದಿನಗಳ ಕಾಲ ಕಂಬಳ:** ಈ ವರ್ಷ ಒಟ್ಟು 28 ಸ್ಥಳಗಳಲ್ಲಿ ಕಂಬಳ ಉತ್ಸವ ನಡೆಯಲಿದ್ದು, ಅದರಲ್ಲಿ ಅತ್ಯಂತ ಪ್ರಮುಖವಾದ ಮೊದಲ ಕಂಬಳ ಉತ್ಸವವೇ ಮೈಸೂರಿನಲ್ಲಿ ಜರುಗಲಿದೆ. ನಿಗದಿತ ವೇಳಾಪಟ್ಟಿಯಂತೆ ಅಕ್ಟೋಬರ್ 18 ಮತ್ತು 19ರಂದು ಎರಡು ದಿನಗಳ ಕಾಲ ಮೈಸೂರಿನಲ್ಲಿ ಈ ವೈಭವದ ಕಂಬಳ ಉತ್ಸವ ನಡೆಯಲಿದೆ.

ಮೈಸೂರು ಹಾಗೂ ಹಳೇ ಮೈಸೂರು ಭಾಗದ ಜನರಿಗೆ ತುಳುನಾಡಿನ ಗ್ರಾಮೀಣ ಸಂಸ್ಕೃತಿ ಮತ್ತು ಕಂಬಳದ ರೋಮಾಂಚನವನ್ನು ನೇರವಾಗಿ ಉಣಬಡಿಸುವ ಸದುದ್ದೇಶವನ್ನು ಸಮಿತಿ ಹೊಂದಿದೆ.

# ವಿದ್ಯಾರ್ಥಿಗಳ ಪ್ರತಿಭಟನೆ ವಿಚಾರದಲ್ಲಿ ಕಾಂಗ್ರೆಸ್ ದ್ವಿಮುಖ ನೀತಿ: ಬೊಮ್ಮಾಯಿ



**ನವದೆಹಲಿ, ಆ.11:** ನೀಟ್ ಹಾಗೂ ವಿದ್ಯಾರ್ಥಿಗಳ ಪ್ರತಿಭಟನೆ ವಿಚಾರದಲ್ಲಿ ಕಾಂಗ್ರೆಸ್ ದ್ವಿಮುಖ ನೀತಿ ಅನುಸರಿಸುತ್ತಿದೆ. ಇದರಲ್ಲಿ ಅವರು ರಾಜಕೀಯ ಮಾಡುತ್ತಿದ್ದಾರೆ ಎಂದು ಮಾಜಿ ಮುಖ್ಯಮಂತ್ರಿ ಹಾಗೂ ಸಂಸದ ಬಸವರಾಜ ಬೊಮ್ಮಾಯಿ ಆರೋಪಿಸಿದ್ದಾರೆ.

ಪ್ರತಿಪಕ್ಷ ಕಾಂಗ್ರೆಸ್ ವಿರುದ್ಧ ದೆಹಲಿಯಲ್ಲಿ ಎನ್ ಡಿಎ ಸಂಸದರು ನಡೆಸಿದ ಪ್ರತಿಭಟನೆಯಲ್ಲಿ ಪಾಲ್ಗೊಂಡು ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, ಜಾರ್ಖಂಡ್‌ನಲ್ಲಿ ವಿದ್ಯಾರ್ಥಿಗಳ ಮೇಲೆ ಹಗಲು–ರಾತ್ರಿ ಭಾರಿ ಲಾಠಿ ಚಾರ್ಜ್ ನಡೆಯುತ್ತಿದೆ, ಆದರೆ ರಾಹುಲ್ ಗಾಂಧಿ ಮಾತನಾಡುತ್ತಿಲ್ಲ. ಅವರಿಗೆ ಬರೀ ಬಾಯಿ ಮಾತಿನ ಅನುಕಂಪ ತೋರಿಸಿದ್ದಾರೆ. ಅವರು ನಿಜವಾಗಿಯೂ ಗಂಭೀರವಾಗಿದ್ದರೆ, ಜಾರ್ಖಂಡ್‌ನ ಶಿಬು ಸೊರೇನ್ ಸರ್ಕಾರಕ್ಕೆ ನೀಡಿದ ಬೆಂಬಲವನ್ನು ವಾಪಸ್ ಪಡೆಯಬೇಕು. ಸಂಸತ್ತಿನಲ್ಲಿ ಈಗಲೂ ಕೂಡ ಕೇಂದ್ರ ಗೃಹ ಸಚಿವರು ಎಲ್ಲದಕ್ಕೂ ಉತ್ತರಿಸಲು ಸಿದ್ಧರಿದ್ದಾರೆ. ಆದರೆ, ಕಾಂಗ್ರೆಸ್‌ನವರು ಅವರ ಉತ್ತರ ಕೇಳಲು ಮುಂದೆ ಬರುತ್ತಿಲ್ಲ ಎಂದು ಆರೋಪಿಸಿದರು.

# ಕಲ್ಯಾಣ ಕರ್ನಾಟಕ ಅಭಿವೃದ್ಧಿಗೆ ಒತ್ತು



**■ ಕೇಂದ್ರ ಸಚಿವರಿಗೆ ಸಂಸದೆ ಡಾ.ಪ್ರಭಾ ಮಲ್ಲಿಕಾರ್ಜುನ್ ನೇತೃತ್ವದಲ್ಲಿ ಮನವಿ**

**ನವದೆಹಲಿ, ಆ.11:** ಕಲ್ಯಾಣ ಕರ್ನಾಟಕ ಭಾಗದ ಅಲ್ಪಸಂಖ್ಯಾತ ಸಮುದಾಯಗಳ ಶಿಕ್ಷಣ, ಆರೋಗ್ಯ ಹಾಗೂ ಮೂಲಸೌಕರ್ಯ ಅಭಿವೃದ್ಧಿಗೆ ಹೆಚ್ಚಿನ ಆದ್ಯತೆ ನೀಡುವಂತೆ ಕೋರಿ ದಾವಣಗೆರೆ ಸಂಸದರಾದ ಡಾ.ಪ್ರಭಾ ಮಲ್ಲಿಕಾರ್ಜುನ್ ನೇತೃತ್ವದಲ್ಲಿ ಕಲ್ಯಾಣ ಕರ್ನಾಟಕ ಭಾಗದ ಸಂಸದರು ಮಂಗಳವಾರ ನವದೆಹಲಿಯಲ್ಲಿ ಕೇಂದ್ರ ಅಲ್ಪಸಂಖ್ಯಾತ ವ್ಯವಹಾರಗಳ ಸಚಿವ ಕಿರಣ್ ರಿಜಿಜು ಅವರನ್ನು ಭೇಟಿಮಾಡಿ ಮನವಿ ಸಲ್ಲಿಸಿದ್ದಾರೆ.

ಪ್ರಧಾನಮಂತ್ರಿ ಜನವಿಕಾಸ ಕಾರ್ಯಕ್ರಮ (ಪಿಎಂಜೆವಿಕೆ) ಅಡಿಯಲ್ಲಿ ಕಲ್ಯಾಣ ಕರ್ನಾಟಕ ವ್ಯಾಪ್ತಿಗೆ ಒಳಪಡುವ ಹರಪನಹಳ್ಳಿ ತಾಲ್ಲೂಕಿನಲ್ಲಿ ಪ್ರಮುಖ ಅಭಿವೃದ್ಧಿ ಯೋಜನೆಗಳನ್ನು ಕೈಗೊಳ್ಳಲು ಅನುದಾನ ಹಾಗೂ ಮಂಜೂರಾತಿ ನೀಡುವಂತೆ ಸಂಸದರು ಈ ಸಂದರ್ಭದಲ್ಲಿ ಮನವಿ ಮಾಡಿದ್ದಾರೆ.

ವಿಶೇಷವಾಗಿ ಶಾಲಾ ಕಟ್ಟಡಗಳು, ಹೆಚ್ಚುವರಿ ತರಗತಿ ಕೊಠಡಿಗಳು, ಬಾಲಕ?ಬಾಲಕಿಯರ ವಸತಿ ನಿಲಯಗಳು, ಐಟಿಐ ಮತ್ತು ಪಾಲಿಟೆಕ್ನಿಕ್ ಸಂಸ್ಥೆಗಳು, ಕೌಶಲ್ಯಾಭಿವೃದ್ಧಿ ಕೇಂದ್ರಗಳು, ಪ್ರಾಥಮಿಕ ಹಾಗೂ ಸಮುದಾಯ ಆರೋಗ್ಯ ಕೇಂದ್ರಗಳು ಮತ್ತು ತಾಯಿ–ಮಕ್ಕಳ ಆರೋಗ್ಯ ಸೌಲಭ್ಯಗಳನ್ನು ಅಭಿವೃದ್ಧಿ ಪಡಿಸಲು ಅಗತ್ಯ ನೆರವು ನೀಡುವಂತೆ ನಿಯೋಗ ಒತ್ತಾಯಿಸಿದೆ.

ಕಲ್ಯಾಣ ಕರ್ನಾಟಕದ ಅಭಿವೃದ್ಧಿ ಅಂತರವನ್ನು ಕಡಿಮೆ ಮಾಡಿ, ಶಿಕ್ಷಣ ಮತ್ತು ಆರೋಗ್ಯ ಮೂಲಸೌಕರ್ಯವನ್ನು ಮತ್ತಷ್ಟು ಬಲಪಡಿಸುವ ಮೂಲಕ ಹರಪನಹಳ್ಳಿ ಸೇರಿದಂತೆ ಈ ಭಾಗದ ಜನರಿಗೆ ಉತ್ತಮ ಸೌಲಭ್ಯ ಮತ್ತು ಅವಕಾಶಗಳನ್ನು ಕಲ್ಪಿಸುವುದು ತಮ್ಮ ಆದ್ಯತೆಯಾಗಿದೆ ಎಂದು ನಿಯೋಗದ ಮುಖಂಡರು ತಿಳಿಸಿದರು.

ಸಂಸದರಾದ ರಾಧಾಕೃಷ್ಣ, ಸಾಗರ್ ಖಂಡ್ರೆ, ಜಿ. ಕುಮಾರ್ ನಾಯಕ್, ಕೆ. ರಾಜಶೇಖರ್ ಹಿಟ್ನಾಳ್ ಮತ್ತು ಇ. ತುಕಾರಾಂ ಇದ್ದರು.

# ಹವಾಮಾನ ಆಧಾರಿತ ಬೆಳೆವಿಮೆ ಮರು ಪರಿಷ್ಕರಣೆಗೆ ಒತ್ತಾಯ



**■ ತೋಟಗಾರಿಕಾ ಬೆಳೆಗಾರರ ಪರ ಧ್ವನಿಯೆತ್ತಿದ ಸಂಸದ ಕ್ಯಾ.ಚೌಟ**

**ನವದೆಹಲಿ, ಆ.11:** ದಕ್ಷಿಣ ಕನ್ನಡ ಸೇರಿದಂತೆ ಕರಾವಳಿ ಹಾಗೂ ಮಲೆನಾಡು ಭಾಗದ ಪ್ರಮುಖ ತೋಟಗಾರಿಕಾ ಬೆಳೆಗಳಾದ ಅಡಿಕೆ, ತೆಂಗು, ಕೋಕೋ ಮತ್ತು ಸಾಂಬಾರು ಬೆಳೆಗಳು ಎದುರಿಸುತ್ತಿರುವ ನಾನಾ ರೀತಿಯ ಹವಾಮಾನ ಸವಾಲುಗಳಿಗೆ ತಕ್ಕಂತೆ 'ಪುನರ್ ರಚಿತ ಹವಾಮಾನ ಆಧಾರಿತ ಬೆಳೆವಿಮೆ ಯೋಜನೆ' ರೂಪಿಸಬೇಕೆಂದು ದ.ಕ. ಸಂಸದ ಕ್ಯಾ. ಬ್ರಿಜೇಶ್ ಚೌಟ ಅವರು ಲೋಕಸಭೆಯಲ್ಲಿ ನಿಯಮ 377ರಡಿ ಕೇಂದ್ರ ಕೃಷಿ ಮತ್ತು ರೈತರ ಕಲ್ಯಾಣ ಸಚಿವಾಲಯವನ್ನು ಒತ್ತಾಯಿಸಿದ್ದಾರೆ.

ಸದನದಲ್ಲಿ ಈ ವಿಷಯವನ್ನು ಪ್ರಸ್ತಾಪಿಸಿದ ಸಂಸದರು, ಬಹು ವಾರ್ಷಿಕ ತೋಟಗಾರಿಕಾ ಬೆಳೆಗಳು ಸಾಮಾನ್ಯ ಋತುಮಾನದ ಬೆಳೆಗಳಿಗಿಂತ ಬಹಳ ವಿಭಿನ್ನ ಆಪತ್ತು ಎದುರಿಸುತ್ತವೆ. ನಿರಂತರ ಮಳೆ, ಆರ್ದ್ರತೆ, ರೋಗಬಾಧೆ ಹಾಗೂ ಪಾತಿಯಲ್ಲಿ ನೀರು ನಿಲ್ಲುವಿಕೆ ಮುಂತಾದ ಸ್ಥಳೀಯ ಹವಾಮಾನ ವ್ಯತ್ಯಾಸಗಳಿಂದ ಬೆಳೆಗಳಿಗೆ ಹಾನಿಯಾಗುತ್ತದೆ. ಹತ್ತಿರದ ಹವಾಮಾನ ಕೇಂದ್ರದಲ್ಲಿ ನಿಯಮಿತ ಮಳೆ ಅಥವಾ ತಾಪಮಾನದ ಮಿತಿ ದಾಟದಿದ್ದರೂ, ತೋಟಗಳಲ್ಲಿ ಬೆಳೆ ಸಂಪೂರ್ಣ ನಾಶವಾಗುವ ಸಾಧ್ಯತೆಗಳಿರುತ್ತವೆ. ಹೀಗಾಗಿ, ತೋಟಗಾರಿಕಾ ಬೆಳೆಗಳ ನೈಜನಷ್ಟದ ಸ್ವರೂಪಕ್ಕೆ ತಕ್ಕಂತೆ ವಿಮಾ ಯೋಜನೆಗಳನ್ನು ರೂಪಿಸುವುದು ಅತ್ಯಗತ್ಯ ಎಂದು ಅವರು ಹೇಳಿದ್ದಾರೆ.

ಸಂಸದರು ಸದನದಲ್ಲಿ ಮಂಡಿಸಿದ ವಿಷಯಗಳ ಪ್ರಕಾರ, ಕೇಂದ್ರ ಕೃಷಿ ಸಚಿವಾಲಯವು ಕೃಷಿ ವಿಜ್ಞಾನಿಗಳು ಹಾಗೂ ವಿಮಾ ಆಡಿಟರ್‌ಗಳ ಜಂಟಿ ಸಮಿತಿಯನ್ನು ರಚಿಸಿ, ಹವಾಮಾನ ಕೇಂದ್ರಗಳ ಸಾಂದ್ರತೆ, ಅಧಿಸೂಚಿತ ಯೂನಿಟ್ಗಳ ಗಾತ್ರ, ಮಳೆ–ಆರ್ದ್ರತೆಯ ಮಾನಿಟರಿಂಗ್ ವ್ಯವಸ್ಥೆ, ವಿಮಾ ಮೊತ್ತ ಮತ್ತು ಪರಿಹಾರ ಪಾವತಿಯ ಕಾಲಮಿತಿಗಳಂತಹ ತಾಂತ್ರಿಕ ಅಂಶಗಳನ್ನು ಒಳಗೊಂಡಂತೆ RWBCIS ಯೋಜನೆಯ ರೂಪುರೇಷೆ ಸಿದ್ಧಪಡಿಸಬೇಕು; ಈ ಪ್ರಕ್ರಿಯೆಯಲ್ಲಿ ICAR ಸಂಸ್ಥೆಗಳು, ಕೃಷಿ/ತೋಟಗಾರಿಕಾ ವಿಶ್ವವಿದ್ಯಾಲಯಗಳು, ವಿಮಾ ಕಂಪನಿಗಳು, ಕರ್ನಾಟಕ ಸರ್ಕಾರ ಹಾಗೂ ಬೆಳೆಗಾರರ ಒಕ್ಕೂಟಗಳನ್ನು ಸಕ್ರಿಯವಾಗಿ ತೊಡಗಿಸಿಕೊಳ್ಳಬೇಕು.

ಹವಾಮಾನ ಆಧಾರಿತ ಈ ಬೆಳೆ ವಿಮಾ ವ್ಯವಸ್ಥೆಯನ್ನು ರಾಷ್ಟ್ರಮಟ್ಟದಲ್ಲಿ ಜಾರಿಗೆ ತರುವ ಮುನ್ನ ಕರಾವಳಿ ಮತ್ತು ಮಲೆನಾಡಿನ ಆಯ್ದ ಜಿಲ್ಲೆಗಳಲ್ಲಿ ಇದನ್ನು ಬೆಳೆನಾಶ ಆಧರಿಸಿ ಅನುಷ್ಠಾನಗೊಳಿಸುವುದರ ಜೊತೆಗೆ ಟ್ರಿಗರ್ ಆಧಾರಿತ ಪಾವತಿಯ ಮಾಹಿತಿಯನ್ನು ಪಾರದರ್ಶಕವಾಗಿ ಪ್ರಕಟಿಸಬೇಕು. ಅಲ್ಲದೆ ರಾಜ್ಯ ಸರ್ಕಾರಗಳಿಗೆ ಸೂಕ್ತ ತೋಟಗಾರಿಕಾ ಬೆಳೆಗಳನ್ನು ವಿಮೆ ವ್ಯಾಪ್ತಿಗೆ ತರಲು ಮಾದರಿ ಅಧಿಸೂಚನೆ ಟೆಂಪ್ಲೇಟ್ ಮತ್ತು ಕಾಲಮಿತಿಯನ್ನು ಒದಗಿಸಿ ಕೊಡಬೇಕೆಂದು ಅವರು ಸಲಹೆ ನೀಡಿದ್ದಾರೆ.

# ಹಸಿರು ಬೆಂಗಳೂರಿಗೆ ಮತ್ತೊಂದು ಉದ್ಯಾನವನ ಕೊಡುಗೆ: ಸಚಿವ ಕೆ.ಜೆ. ಜಾರ್ಜ್

**ಕೆಪಿಟಿಸಿಎಲ್ ಸಿಎಸ್‌ಆರ್ ನಿಧಿಯಲ್ಲಿ ಸರ್ವಜ್ಞನಗರದಲ್ಲಿ ನಿರ್ಮಿಸಿರುವ ಕುವೆಂಪು ಥೀಮ್‌ಪಾರ್ಕ್ ಲೋಕಾರ್ಪಣೆ**

**ಬೆಂಗಳೂರು, ಆ.11:** ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತ (ಕೆಪಿಟಿಸಿಎಲ್) ತನ್ನ ಸಾಮಾಜಿಕ ಹೊಣೆಗಾರಿಕೆ ನಿಧಿಯಡಿ ನಿರ್ಮಿಸಿರುವ 'ಕುವೆಂಪು ಥೀಮ್ ಪಾರ್ಕ್' ಅನ್ನು ಇಂಧನ ಮತ್ತು ಪ್ರವಾಸೋದ್ಯಮ ಸಚಿವ ಕೆ.ಜೆ.ಜಾರ್ಜ್ ಮತ್ತು ಬೆಂಗಳೂರು ನಗರಾಭಿವೃದ್ಧಿ ಸಚಿವ ಸಿ.ಬಿ.ಕೃಷ್ಣಬೈರೇಗೌಡ ಅವರು ಮಂಗಳವಾರ ಉದ್ಘಾಟಿಸಿದರು.

ಸರ್ವಜ್ಞನಗರ ವಿಧಾನಸಭಾ ಕ್ಷೇತ್ರದ ಎಚ್‌ಬಿಆರ್ ಬಡಾವಣೆಯಲ್ಲಿ ಈ ಥೀಮ್ ಪಾರ್ಕ್ ನಿರ್ಮಿಸಿದೆ. ಉದ್ಯಾನ ಉದ್ಘಾಟಿಸಿ ಮಾತನಾಡಿದ ಸಚಿವ ಕೆ.ಜೆ.ಜಾರ್ಜ್, "ಹಸಿರು ಬೆಂಗಳೂರಿಗೆ ಈ ಥೀಮ್‌ಪಾರ್ಕ್ ಅತ್ಯುತ್ತಮ ಕೊಡುಗೆಯಾಗಿದ್ದು, ಸ್ವಚ್ಛ ಮತ್ತು ಹಸಿರು ಬೆಂಗಳೂರು ನಿರ್ಮಾಣದ ಸರ್ಕಾರದ ಬದ್ಧತೆಗೆ ಸಾಕ್ಷಿಯಾಗಿದೆ," ಎಂದರು.

ಕೆಪಿಟಿಸಿಎಲ್ ತನ್ನದೇ ಸ್ಥಳದಲ್ಲಿ ಸಿಎಸ್‌ಆರ್ ಅನುದಾನದಲ್ಲಿ ಈ ಸುಂದರ ಪಾರ್ಕ್ ನಿರ್ಮಿಸಿದೆ. ಇದರಿಂದಾಗಿ ಹೆಚ್‌ಬಿಆರ್ ಬಡಾವಣೆಯಲ್ಲಿ ಕುರುಚಲು ಕಾಡಿನಂತೆ ಇದ್ದ ಸ್ಥಳ ಈಗ ಆಕರ್ಷಕ ತಾಣವಾಗಿದೆ. ಈ ಪಾರ್ಕ್ ನಿರ್ಮಾಣಕ್ಕೆ ಸಹಕಾರ ನೀಡಿದ ಹಿಂದಿನ ಮುಖ್ಯಮಂತ್ರಿ ಸಿದ್ದರಾಮಯ್ಯ, ಈಗಿನ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಹಾಗೂ ಇದನ್ನು ಸುಂದರವಾಗಿ ನಿರ್ಮಿಸಲು ನೆರವಾದ ಕೆಪಿಟಿಸಿಎಲ್ ಅಧಿಕಾರಿಗಳು, ಸಿಬ್ಬಂದಿಗೆ ಕ್ಷೇತ್ರದ ಜನತೆ ಹಾಗೂ ಸಮಗ್ರ ಬೆಂಗಳೂರು ನಾಗರಿಕರ ಪರವಾಗಿ ಧನ್ಯವಾದ ಸಲ್ಲಿಸುತ್ತೇನೆ ಎಂದು ತಿಳಿಸಿದರು.



ಬೆಂಗಳೂರು ನಗರಾಭಿವೃದ್ಧಿ ಸಚಿವ ಕೃಷ್ಣ ಬೈರೇಗೌಡ ಮಾತನಾಡಿ, "ಸರ್ವಜ್ಞನಗರ ಕ್ಷೇತ್ರದ ಶಾಸಕರೂ ಆಗಿರುವ ಸಚಿವರಾದ ಕೆ.ಜೆ.ಜಾರ್ಜ್ ಅವರು ತಮ್ಮ ಇಲಾಖೆಯನ್ನು ಯಶಸ್ವಿಯಾಗಿ ನಡೆಸುತ್ತಿರುವುದಲ್ಲದೆ, ಸುಂದರ ಬೆಂಗಳೂರು ನಿರ್ಮಾಣಕ್ಕೂ ಹೆಚ್ಚಿನ ಸಹಕಾರ ನೀಡುತ್ತಿದ್ದಾರೆ. ಕೆಪಿಟಿಸಿಎಲ್ ತನ್ನದೇ ಆಸ್ತಿಯನ್ನು ಕ್ಷೇತ್ರದ ಜನತೆಗೆ ಮುಕ್ತವಾಗಿಸಿದ್ದು, ನಿಗಮದ ಸಹಕಾರದಿಂದ ಗಿಡಗಂಟೆಗಳಿದ್ದ ಸ್ಥಳ ಈಗ ಅತ್ಯುತ್ತಮ ಉದ್ಯಾನವಾಗಿ ರೂಪತಳೆದಿದೆ. ಮಕ್ಕಳು ಹಿರಿಯರಾದಿಯಾಗಿ ಎಲ್ಲರಿಗೂ ಸ್ಥಳ ಸಮುದಾಯ ಚಟುವಟಿಕೆ ಕೇಂದ್ರವಾಗಿ ಮುನ್ನಡೆಯಲಿದೆ. ಬೆಂಗಳೂರನ್ನು ಸುಂದರಗೊಳಿಸುವ ಈ ತಾಣ ಮುಖ್ಯವಾಗಲಿದೆ," ಎಂದು ಹೇಳಿದರು.ಉದ್ಯಾನ ಲೋಕಾರ್ಪಣೆ ಬಳಿಕ ಸಚಿವರಿಬ್ಬರೂ ಒಂದು ಸುತ್ತು ಹಾಕಿ ಪಾರ್ಕ್ ವಿಶೇಷಗಳನ್ನು ತಿಳಿದುಕೊಂಡರು. ಕಾರ್ಯಕ್ರಮದಲ್ಲಿ ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತದ ಯೋಜನೆಗಳ ವಿಭಾಗದ ನಿರ್ದೇಶಕ ಆರ್.ಜಯಕುಮಾರ್, ನಿಗಮದ ಹಿರಿಯ ಅಧಿಕಾರಿಗಳು ಹಾಗೂ ಸರ್ವಜ್ಞನಗರ ವಿಧಾನಸಭಾ ಕ್ಷೇತ್ರದ ಕಾಂಗ್ರೆಸ್ ಮುಖಂಡರು ಉಪಸ್ಥಿತರಿದ್ದರು.

**ಅಭಿವೃದ್ಧಿ ಕಾಮಗಾರಿಗಳಿಗೆ ಚಾಲನೆ:** ಸರ್ವಜ್ಞನಗರದ ವಿವಿಧಡೆ ನಡೆಯುತ್ತಿರುವ ನಾಗವಾರ ಮುಖ್ಯ ರಸ್ತೆಯ ವೈಟ್ ಟಾಪಿಂಗ್, ಕಾಚರಕನಹಳ್ಳಿ ಕೆರೆ ಪುನಶ್ಚೇತನ ಕಾಂಗಾರಿಗಳು ಹಾಗೂ ಕಸ ವಿಂಗಣೆ ಕೇಂದ್ರಕ್ಕೆ ಸಚಿವರಾದ ಕೆ.ಜೆ.ಜಾರ್ಜ್ ಮತ್ತು ಕೃಷ್ಣಬೈರೇಗೌಡ ಚಾಲನೆ ನೀಡಿದರು. ಲಿಡ್ಕರ್ ಘಟಕ ಹಾಗೂ ಬಾಣಸವಾಡಿ ಮುಖ್ಯ ರಸ್ತೆಯಲ್ಲಿ ಯೋಜಿಸಿರುವ ಮಾರುಕಟ್ಟೆ ಸ್ಥಳವನ್ನು ಪರಿಶೀಲನೆ ನಡೆಸಿದರು.

**ಥೀಮ್ ಪಾರ್ಕ್ ವಿಶೇಷತೆ**

**ಎಚ್‌ಬಿಆರ್ ಬಡಾವಣೆಯ 1500 ಚದರ ಅಡಿ ಪ್ರದೇಶವನ್ನು ಹಸಿರು ವಲಯವಾಗಿ ರೂಪಿಸಲಾಗಿದೆ. 700 ಮೀಟರ್ ನಡಿಗೆ ಮಾರ್ಗ, 100 ಜನರು ಕುಳಿತುಕೊಳ್ಳುವ ಬಯಲು ರಂಗಮಂದಿರ, ಕುಡಿಯುವ ನೀರಿನ ಘಟಕ, ಶೌಚಾಲಯ, ಧ್ವಜಸ್ಥಂಭ, ವಿಶ್ರಾಂತಿಗಾಗಿ ಗಜೀಬೋ, ನಂದಿನಿ ಹಾಲಿನ ಕೇಂದ್ರ ಹಾಗೂ ಹಾಪ್‌ಕಾಮ್ಸ್ ಮಳಿಗೆಗೆ ಸ್ಥಳವಾಕಾಶ ಕಲ್ಪಿಸಲಾಗಿದೆ. ಮಕ್ಕಳಿಗಾಗಿ ಆಟದ ಸಾಮಾಗ್ರಿಗಳು ಹಾಗೂ ಓಪನ್ ಜಿಮ್ ಉಪಕರಣಗಳು ಹಾಗೂ ವಿಶ್ರಾಂತಿಗಾಗಿ ಕಲ್ಲು ಬೆಂಚುಗಳು, ವಿಶೇಷ ತಳಿಯ ಸಸ್ಯಗಳು, ಸುಸಜ್ಜಿತ ದೀಪದ ವ್ಯವಸ್ಥೆ ಎಲ್ಲವೂ ಪಾರ್ಕ್‌ನಲ್ಲಿದೆ. ಸುಮಾರು 4.65 ಕೋಟಿ ರೂ. ವೆಚ್ಚದಲ್ಲಿ ಕೆಪಿಟಿಸಿಎಲ್ ಈ ಪಾರ್ಕ್ ಅಭಿವೃದ್ಧಿಪಡಿಸಿದೆ.**

# 10 ರೂ, 20 ರೂ. ಪಾಲಿಮರ್ ನೋಟುಗಳ ಪ್ರಾಯೋಗಿಕ ಬಳಕೆ: ಕೇಂದ್ರದ ಅನುಮೋದನೆ

**ನವದೆಹಲಿ, ಆಗಸ್ಟ್ 11:** 10 ರೂ. ಮತ್ತು 20 ರೂ. ಮುಖಬೆಲೆಯ ಪಾಲಿಮರ್ ನೋಟುಗಳನ್ನು ಪ್ರಾಯೋಗಿಕ ಆಧಾರದ ಮೇಲೆ ಪರಿಚಯಿಸುವ ಭಾರತೀಯ ರಿಸರ್ವ್ ಬ್ಯಾಂಕಿನ ಪ್ರಸ್ತಾವನೆಯನ್ನು ಕೇಂದ್ರವು ಅನುಮೋದಿಸಿದೆ ಎಂದು ಸಂಸತ್ತಿಗೆ ಮಂಗಳವಾರ ತಿಳಿಸಲಾಯಿತು. 10 ಮತ್ತು 20 ರೂ. ಮುಖಬೆಲೆಯ ತಲಾ 100 ಕೋಟಿ ಪಾಲಿಮರ್ ನೋಟುಗಳನ್ನು ಪರಿಚಯಿಸಲು ಆರ್‌ಬಿಐನ ಕೇಂದ್ರ ಮಂಡಳಿ ಶಿಫಾರಸು ಮಾಡಿದೆ ಎಂದು ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ಹೇಳಿದ್ದಾರೆ. 1934 ರ ಭಾರತೀಯ ರಿಸರ್ವ್ ಬ್ಯಾಂಕ್ ಕಾಯ್ದೆಯ ಸೆಕ್ಷನ್ 25 ರ ಅಡಿಯಲ್ಲಿ ಈ ಪ್ರಸ್ತಾವನೆಯನ್ನು ಸರ್ಕಾರಕ್ಕೆ ಸಲ್ಲಿಸಲಾಗಿದೆ. ಆರಂಭದಲ್ಲಿ ಪಾಲಿಮರ್ ನೋಟುಗಳನ್ನು ಕ್ಷೇತ್ರದಲ್ಲಿ ಪರೀಕ್ಷಿಸಲಾಗುತ್ತದೆ. ಪ್ರಯೋಗಗಳ ಫಲಿತಾಂಶಕ್ಕೆ ಒಳಪಟ್ಟು, ಈ ಮುಖಬೆಲೆಯ ನೋಟುಗಳಲ್ಲಿ ಅವುಗಳ ನಿಯಮಿತ ವಿತರಣೆಯತ್ತ ಸಾಗಲು ಆರ್‌ಬಿಐ ಯೋಜಿಸಿದೆ. ಹೊಸ ಪಾಲಿಮರ್ ಕರೆನ್ಸಿಯನ್ನು ಅಸ್ತಿತ್ವದಲ್ಲಿರುವ ಕಾಗದ ಆಧಾರಿತ ನೋಟುಗಳ ಜೊತೆಗೆ ಪ್ರಸಾರ ಮಾಡಲಾಗುವುದು ಎಂದು ಸೀತಾರಾಮನ್ ರಾಜ್ಯಸಭೆಗೆ ಲಿಖಿತ ಉತ್ತರದಲ್ಲಿ ತಿಳಿಸಿದ್ದಾರೆ. ಆರ್‌ಬಿಐ ಖರೀದಿ ಪ್ರಕ್ರಿಯೆಯನ್ನು ಪ್ರಾರಂಭಿಸಿದೆ, ಆದರೆ ಇದು ಪ್ರಸ್ತುತ ಆರಂಭಿಕ ಹಂತದಲ್ಲಿದೆ. ಪರಿಣಾಮವಾಗಿ, ಪಾಲಿಮರ್ ನೋಟುಗಳು ಯಾವಾಗ ಚಲಾವಣೆಗೆ ಬರುತ್ತವೆ ಅಥವಾ ವ್ಯಾಯಾಮದ ಒಟ್ಟಾರೆ ವೆಚ್ಚವನ್ನು ಅಂದಾಜು ಮಾಡುವ ಸ್ಥಿತಿಯಲ್ಲಿ ಸರ್ಕಾರ



ಇನ್ನೂ ಇಲ್ಲ ಎಂದು ಹಣಕಾಸು ಸಚಿವರು ಹೇಳಿದರು.




ಜಾರ್ಖಂಡ್‌ನಲ್ಲಿ ವಿದ್ಯಾರ್ಥಿಗಳ ಮೇಲೆ ನಡೆದ ಪೊಲೀಸ್ ಕ್ರಮವನ್ನು ಖಂಡಿಸಿ ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿ ಅವರನ್ನು ಗುರಿಯಾಗಿಸಿಕೊಂಡು ಎನ್‌ಡಿಎ ಸಂಸದರು ಮಂಗಳವಾರ ನವದೆಹಲಿಯಲ್ಲಿ ಸಂಸತ್ತಿನ ಆವರಣದಲ್ಲಿ ಪ್ರತಿಭಟನೆ ನಡೆಸಿದರು.

# ವಿದ್ಯಾರ್ಥಿಗಳ ಮೇಲೆ ಲಾಠಿ ಪ್ರಹಾರ; ಜಾರ್ಖಂಡ್ ಬಂದ್‌ಗೆ ಬಿಜೆಪಿ ಕರೆ

**ರಾಂಚಿ,, ಆಗಸ್ಟ್ 11:** ಜಾರ್ಖಂಡ್‌ನಲ್ಲಿ ವಿದ್ಯಾರ್ಥಿಗಳ ಪ್ರತಿಭಟನೆ ವೇಳೆ ನಡೆದ ಪೊಲೀಸ್ ಕ್ರಮ ಖಂಡಿಸಿ ಬಿಜೆಪಿ ರಾಜ್ಯಾದ್ಯಂತ ಬಂದ್‌ಗೆ ಕರೆ ನೀಡಿದೆ. ರಾಂಚಿಯಲ್ಲಿ ವಿಧಾನಸಭೆ ಮುತ್ತಿಗೆಗೆ ಯತ್ನಿಸಿದ್ದ ವಿದ್ಯಾರ್ಥಿಗಳ ಮೇಲೆ ಲಾಠಿ ಪ್ರಹಾರ, ಅಶ್ರುವಾಯು ಮತ್ತು ಜಲಫಿರಂಗಿ ಬಳಸಿದ ಕ್ರಮಕ್ಕೆ ಬಿಜೆಪಿ ತೀವ್ರ ಆಕ್ರೋಶ ವ್ಯಕ್ತಪಡಿಸಿದೆ. ಪ್ರತಿಭಟನೆಯ ವೇಳೆ ನೂರಾರು ವಿದ್ಯಾರ್ಥಿಗಳು ಗಾಯಗೊಂಡಿದ್ದಾರೆ ಎಂದು ಜಾರ್ಖಂಡ್ ಬಿಜೆಪಿ ಅಧ್ಯಕ್ಷ ಆದಿತ್ಯ ಸಾಹು ಆರೋಪಿಸಿದ್ದಾರೆ. ವಿದ್ಯಾರ್ಥಿಗಳ ಬೇಡಿಕೆಗಳನ್ನು ಹೇಮಂತ್ ಸೊರೇನ್ ಸರ್ಕಾರ ನಿರ್ಲಕ್ಷಿಸುತ್ತಿದೆ ಎಂದು ಅವರು ದೂರಿದ್ದಾರೆ.

ಬಿಜೆಪಿ ವಿರೋಧ ಪಕ್ಷದ ನಾಯಕ ಬಾಬುಲಾಲ್ ಮರಾಂಡಿ ಕೂಡ ಪೊಲೀಸ್ ಕ್ರಮವನ್ನು ಖಂಡಿಸಿದ್ದಾರೆ. ಜಾರ್ಖಂಡ್‌ನಲ್ಲಿ ಹೇಮಂತ್ ಸೊರೇನ್ ಸರ್ಕಾರಕ್ಕೆ ಕಾಂಗ್ರೆಸ್ ನೀಡುತ್ತಿರುವ ಬೆಂಬಲವನ್ನು ಹಿಂಪಡೆಯಬೇಕು ಎಂದು ಅವರು ಒತ್ತಾಯಿಸಿದ್ದಾರೆ.

ಜಾರ್ಖಂಡ್ ಸಾರ್ವಜನಿಕ ಸೇವಾ ಆಯೋಗ ಮತ್ತು ಜಾರ್ಖಂಡ್ ಸಿಬ್ಬಂದಿ ಆಯ್ಕೆ ಆಯೋಗ ಪರೀಕ್ಷೆಗಳಲ್ಲಿನ ಅಕ್ರಮಗಳ ವಿರುದ್ಧ ವಿದ್ಯಾರ್ಥಿಗಳು ಹಲವು ದಿನಗಳಿಂದ ಪ್ರತಿಭಟನೆ ನಡೆಸುತ್ತಿದ್ದಾರೆ. ಸೋಮವಾರ ಸಾವಿರಾರು ವಿದ್ಯಾರ್ಥಿಗಳು ರಾಂಚಿಯಲ್ಲಿ ವಿಧಾನಸಭೆಯತ್ತ ಮೆರವಣಿಗೆ ನಡೆಸಿದ್ದರು. ಈ ವೇಳೆ ಪೊಲೀಸರು ಬ್ಯಾರಿಕೇಡ್‌ಗ್ಗಳನ್ನು ಹಾಕಿ ವಿದ್ಯಾರ್ಥಿಗಳನ್ನು ತಡೆಯಲು ಪ್ರಯತ್ನಿಸಿದ್ದರು. ಪರಿಸ್ಥಿತಿ ಉದ್ವಿಗ್ನಗೊಂಡ ಬಳಿಕ ಲಾಠಿ ಪ್ರಹಾರ, ಅಶ್ರುವಾಯು ಹಾಗೂ ಜಲಫಿರಂಗಿ ಬಳಸಲಾಗಿತ್ತು.

ಇದಕ್ಕೂ ಮುನ್ನ ಸರ್ಕಾರ 14ನೇ JPSC ಸಂಯೋಜಿತ ನಾಗರಿಕ ಸೇವೆಗಳ ಪ್ರಾಥಮಿಕ ಪರೀಕ್ಷೆ ಸೇರಿದಂತೆ ಮೂರು ಪರೀಕ್ಷೆಗಳನ್ನು ರದ್ದುಗೊಳಿಸಲು ಒಪ್ಪಿಕೊಂಡಿತ್ತು. 14ನೇ JPSC ಪರೀಕ್ಷೆಯಲ್ಲಿನ ಆರ್ಥಿಕ ಅಕ್ರಮಗಳ ಬಗ್ಗೆ ಜಾರಿ ನಿರ್ದೇಶನಾಲಯ ತನಿಖೆ ನಡೆಸುವ ಬೇಡಿಕೆಗೂ ಸರ್ಕಾರ ಒಪ್ಪಿಗೆ ನೀಡಿದೆ. ಆದರೆ ಪ್ರಕರಣವನ್ನು ರಾಜ್ಯ CIDಯಿಂದ CBIಗೆ ವರ್ಗಾಯಿಸುವ ವಿದ್ಯಾರ್ಥಿಗಳ ಬೇಡಿಕೆಯನ್ನು ಸರ್ಕಾರ ಒಪ್ಪಿಲ್ಲ. ಇದೇ ವೇಳೆ, 14ನೇ ನಾಗರಿಕ ಸೇವಾ ಪರೀಕ್ಷೆಗೆ ಸಂಬಂಧಿಸಿದ ಆರೋಪಗಳ ತನಿಖೆ ನಡೆಸುತ್ತಿರುವ CID, JPSC ಮಾಜಿ ಅಧ್ಯಕ್ಷ ಎಲ್. ಖಿಯಾಂಗ್ಟೆ ಅವರನ್ನು ಬಂಧಿಸಿದೆ.



## 'ವಿದ್ಯಾರ್ಥಿಗಳ ಬೇಡಿಕೆ ಆಲಿಸಲು ಸಿದ್ಧ'; ಸೊರೇನ್



ವಿದ್ಯಾರ್ಥಿಗಳು ತಮ್ಮ ಸಮಸ್ಯೆಗಳನ್ನು ಮಾತುಕತೆಯ ಮೂಲಕ ಪರಿಹರಿಸಿಕೊಳ್ಳಬೇಕು ಎಂದು ಮುಖ್ಯಮಂತ್ರಿ ಹೇಮಂತ್ ಸೊರೇನ್ ಮನವಿ ಮಾಡಿದ್ದಾರೆ. ಸರ್ಕಾರ ವಿದ್ಯಾರ್ಥಿಗಳ ಬೇಡಿಕೆಗಳನ್ನು ಗಂಭೀರವಾಗಿ ಪರಿಗಣಿಸುತ್ತಿದ್ದು, ಪರೀಕ್ಷಾ ವ್ಯವಸ್ಥೆಯನ್ನು ಮತ್ತಷ್ಟು ಪಾರದರ್ಶಕ ಮತ್ತು ಸುರಕ್ಷಿತಗೊಳಿಸಲು ಕ್ರಮ ಕೈಗೊಳ್ಳುವುದಾಗಿ ಹೇಳಿದ್ದಾರೆ. ವಿದ್ಯಾರ್ಥಿಗಳ ಶಾಂತಿಯುತ ಪ್ರತಿಭಟನೆಯ ನಡುವೆ ವಿರೋಧ ಪಕ್ಷಗಳು ರಾಜಕೀಯ ಲಾಭಕ್ಕಾಗಿ ವಿದ್ಯಾರ್ಥಿಗಳನ್ನು ದಾರಿ ತಪ್ಪಿಸಲು ಪ್ರಯತ್ನಿಸುತ್ತಿವೆ ಎಂದು ಸೊರೇನ್ ಆರೋಪಿಸಿದ್ದಾರೆ. ವಿದ್ಯಾರ್ಥಿಗಳು ಯಾವುದೇ ರಾಜಕೀಯ ನಿರೂಪಣೆಗೆ ಒಳಗಾಗದೆ ಸರ್ಕಾರದೊಂದಿಗೆ ಮಾತುಕತೆ ನಡೆಸಬೇಕು ಎಂದು ಅವರು ಮನವಿ ಮಾಡಿದ್ದಾರೆ. ?ನೀವು ಜಾರ್ಖಂಡ್ನ ಭವಿಷ್ಯ. ನಿಮ್ಮ ಧ್ವನಿಯನ್ನು ನಿರ್ಲಕ್ಷಿಸುವುದಲ್ಲ, ಆಲಿಸಿ ಸಮಸ್ಯೆ ಪರಿಹರಿಸುವುದು ಸರ್ಕಾರದ ಜವಾಬ್ದಾರಿ? ಎಂದು ಸೊರೇನ್ ಹೇಳಿದ್ದಾರೆ. ಇತ್ತ ವಿದ್ಯಾರ್ಥಿಗಳ ಮೇಲಿನ ಪೊಲೀಸ್ ಕ್ರಮವನ್ನು ಕಾಂಗ್ರೆಸ್ ಸಂಸದ ರಾಹುಲ್ ಗಾಂಧಿ ಕೂಡ ಟೀಕಿಸಿದ್ದಾರೆ. ಹೀಗಾಗಿ ಜಾರ್ಖಂಡ್ನಲ್ಲಿ ವಿದ್ಯಾರ್ಥಿಗಳ ಪ್ರತಿಭಟನೆ ಇದೀಗ ರಾಜಕೀಯ ತಿರುವು ಪಡೆದುಕೊಂಡಿದ್ದು, ಬಿಜೆಪಿ ಕರೆ ನೀಡಿರುವ ಬಂದ್ ಹಿನ್ನೆಲೆಯಲ್ಲಿ ರಾಜ್ಯದಲ್ಲಿ ಪರಿಸ್ಥಿತಿ ಮತ್ತಷ್ಟು ಬಿಗಿಯಾಗುವ ಸಾಧ್ಯತೆ ಇದೆ.

# ಎಲ್ಲ ನಾಪತ್ತೆ ಪ್ರಕರಣಗಳಲ್ಲೂ ಎಫ್‌ಐಆರ್ ಕಡ್ಡಾಯ: ಸುಪ್ರೀಂ

**ನವದೆಹಲಿ, ಆ. 11:** ಕಾಣೆಯಾಗುವ ಮಕ್ಕಳ ಪ್ರಕರಣಗಳಿಗೆ ಮಾತ್ರ ಸೀಮಿತಗೊಳ್ಳದೆ, ವಯಸ್ಸು ಮತ್ತು ಲಿಂಗಭೇದವಿಲ್ಲದೆ ಯಾವುದೇ ವ್ಯಕ್ತಿ ನಾಪತ್ತೆಯಾದರೂ ವಿಳಂಬ ಮಾಡದೆ ತಕ್ಷಣವೇ ಪ್ರಥಮ ವರ್ತಮಾನ ವರದಿ (ಎಫ್‌ಐಆರ್) ದಾಖಲಿಸಬೇಕು ಎಂದು ಸುಪ್ರೀಂ ಕೋರ್ಟ್ ಮಹತ್ವದ ನಿರ್ದೇಶನ ನೀಡಿದೆ.

ಯಾವುದೇ ನಾಪತ್ತೆಯಾದ ವ್ಯಕ್ತಿ ಅಥವಾ ಮಗುವಿನ ಕುರಿತು ಮಾಹಿತಿ ಲಭ್ಯವಾದ ತಕ್ಷಣ, ಆ ಪ್ರಕರಣದ ಸ್ವರೂಪವನ್ನು ಆಧರಿಸಿ ಹೊಸ ಕ್ರಿಮಿನಲ್ ಕಾನೂನು ಭಾರತೀಯ ನ್ಯಾಯ ಸಂಹಿತೆಯ ಅಪಹರಣಕ್ಕೆ ಸಂಬಂಧಿಸಿದ ಸೂಕ್ತ ವಿಧಿಗಳ (ಸೆಕ್ಷನ್) ಅಡಿಯಲ್ಲಿಯೇ ಎಫ್‌ಐಆರ್ ದಾಖಲಿಸಬೇಕು ಎಂದು ಸರ್ವೋಚ್ಚ ನ್ಯಾಯಾಲಯ ಸ್ಪಷ್ಟವಾಗಿ ಸೂಚಿಸಿದೆ. ಇದರಿಂದಾಗಿ ನಾಪತ್ತೆ ಪ್ರಕರಣಗಳನ್ನು ಕೇವಲ ನಾಪತ್ತೆ ದೂರು ಎಂದು ಪರಿಗಣಿಸದೆ, ಆರಂಭದಿಂದಲೇ ಗಂಭೀರವಾಗಿ



ಪರಿಗಣಿಸಲು ಮತ್ತು ತ್ವರಿತ ತನಿಖೆ ಕೈಗೊಳ್ಳಲು ಪೊಲೀಸರಿಗೆ ಕಟ್ಟುನಿಟ್ಟಿನ ಸೂಚನೆ ರವಾನೆಯಾದಂತಾಗಿದೆ. ಮಕ್ಕಳು ನಾಪತ್ತೆಯಾದ ಪ್ರಕರಣಗಳಲ್ಲಿ ತಕ್ಷಣವೇ ಎಫ್‌ಐಆರ್ ದಾಖಲಿಸುವ ನಿಯಮ ಹಿಂದಿನಿಂದಲೂ ಅಸ್ತಿತ್ವದಲ್ಲಿತ್ತು. 2014ರಲ್ಲಿಯೇ ಸುಪ್ರೀಂ ಕೋರ್ಟ್ ನೀಡಿದ್ದ ನಿರ್ದೇಶನಗಳ ಹಿನ್ನೆಲೆಯಲ್ಲಿ, ಕೇಂದ್ರ ಗೃಹ ಸಚಿವಾಲಯವು ಮಕ್ಕಳ ನಾಪತ್ತೆ ಪ್ರಕರಣಗಳಲ್ಲಿ ಕಡ್ಡಾಯವಾಗಿ ಎಫ್‌ಐಆರ್ ದಾಖಲಿಸುವಂತೆ ಸಲಹೆ ನೀಡಿತ್ತು. ಇದೀಗ ನ್ಯಾಯಾಲಯವು ಈ ನಿಯಮವನ್ನು ವಯಸ್ಕರಿಗೂ (ಪುರುಷರು ಮತ್ತು ಮಹಿಳೆಯರು) ಅನ್ವಯವಾಗುವಂತೆ ಸ್ಪಷ್ಟಪಡಿಸಿದ್ದು, ಎಲ್ಲ ಪ್ರಕರಣಗಳಲ್ಲೂ ತಾರತಮ್ಯವಿಲ್ಲದೆ ತ್ವರಿತ ಕಾನೂನು ಕ್ರಮಕ್ಕೆ ಆದೇಶಿಸಿದೆ.

ಇದುವರೆಗೆ ವಯಸ್ಕರು ನಾಪತ್ತೆಯಾದಾಗ ದೂರು ನೀಡಲು ಬಂದವರ ಬಳಿ ಪ್ರಾಥಮಿಕ ವಿಚಾರಣೆ ನಡೆಸುವ ನೆಪದಲ್ಲಿ ಎಫ್‌ಐಆರ್ ದಾಖಲಿಸಲು ವಿಳಂಬ ಮಾಡುವ ಪ್ರವೃತ್ತಿ ಠಾಣೆಗಳಲ್ಲಿ ಸಾಮಾನ್ಯವಾಗಿತ್ತು. ಆದರೆ ಈ ಹೊಸ ನಿರ್ದೇಶನದ ಪ್ರಕಾರ, ನಾಪತ್ತೆ ಮಾಹಿತಿ ಬಂದ ಕೂಡಲೇ ಯಾವುದೇ ಪ್ರಾಥಮಿಕ ವಿಚಾರಣೆಗಾಗಿ ಕಾಯದೆ ತಕ್ಷಣ ಎಫ್‌ಐಆರ್ ದಾಖಲಿಸಿ ಶೋಧ ಕಾರ್ಯ ಆರಂಭಿಸಬೇಕು. ಈ ಮೂಲಕ ನಾಪತ್ತೆಯಾದ ಆರಂಭಿಕ ಗಂಟೆಗಳಲ್ಲಿ (ಗೋಲ್ಡನ್ ಅವರ್ಸ್) ಆಗಬಹುದಾದ ವಿಳಂಬವನ್ನು ತಪ್ಪಿಸಿ, ತ್ವರಿತಗತಿಯ ಮತ್ತು ಕಟ್ಟುನಿಟ್ಟಿನ ತನಿಖೆಗೆ ನ್ಯಾಯಾಲಯ ಒತ್ತು ನೀಡಿದೆ.

# ದೆಹಲಿ ಬಿಜೆಪಿ ಸರ್ಕಾರದ ವಿರುದ್ಧ 22,000 ಕೋಟಿ ರೂ. ಅಕ್ಕಿ ಹಗರಣ: ಕಾಂಗ್ರೆಸ್ ಗಂಭೀರ ಆರೋಪ



**ನವದೆಹಲಿ, ಆಗಸ್ಟ್ 11:** ಸಾರ್ವಜನಿಕ ವಿತರಣಾ ವ್ಯವಸ್ಥೆಗೆ ಮೀಸಲಾದ ಅಕ್ಕಿಯನ್ನು ವಾಣಿಜ್ಯ ಲಾಭಕ್ಕಾಗಿ ಬೇರೆಡೆಗೆ ತಿರುಗಿಸಲಾಗಿದೆ ಎಂದು ದೆಹಲಿ ಕಾಂಗ್ರೆಸ್ ಮಂಗಳವಾರ ಬಿಜೆಪಿ ಸರ್ಕಾರವನ್ನು ಆರೋಪಿಸಿದ್ದು, ರೇಖಾ ಗುಪ್ತಾ ನೇತೃತ್ವದ ಸರ್ಕಾರವು "ದೆಹಲಿಯನ್ನು ಅಪರಾಧದ ರಾಜಧಾನಿಯನ್ನಾಗಿ ಮಾತ್ರವಲ್ಲದೆ ಭ್ರಷ್ಟಾಚಾರದ ರಾಜಧಾನಿಯನ್ನಾಗಿಯೂ ಪರಿವರ್ತಿಸಿದೆ" ಎಂದು ದೆಹಲಿ ಪ್ರದೇಶ ಕಾಂಗ್ರೆಸ್ ಸಮಿತಿ ಅಧ್ಯಕ್ಷ ದೇವೇಂದರ್ ಯಾದವ್ ಹೇಳಿದ್ದಾರೆ. ದೆಹಲಿ ಸರ್ಕಾರದ ಆಹಾರ ಮತ್ತು ನಾಗರಿಕ ಸರಬರಾಜು ಇಲಾಖೆಯ ಶಿಫಾರಸಿನ ಮೇರೆಗೆ ಕಾರ್ಯನಿರ್ವಹಿಸುತ್ತಿರುವ ಭಾರತೀಯ ಆಹಾರ ನಿಗಮ (ಎಫ್‌ಸಿಐ) ಸಾರ್ವಜನಿಕ ವಿತರಣೆಗೆ ಮೀಸಲಾದ ಅಕ್ಕಿಯನ್ನು ಅಸ್ಸಾಂ ಕಾರ್ಪೊರೇಷನ್‌ಗೆ ತಿರುಗಿಸಿದೆ, ಅದು ಅದನ್ನು ಹರಿಯಾಣದ ಖಾಸಗಿ ಕಂಪನಿಗೆ ಗಣನೀಯ ಲಾಭದಲ್ಲಿ ಮಾರಾಟ ಮಾಡಿದೆ ಎಂದು ಯಾದವ್ ಆರೋಪಿಸಿದ್ದಾರೆ. "ಈ ವ್ಯವಸ್ಥೆಯಡಿಯಲ್ಲಿ ಪ್ರತಿ ವಾರ 31,000 ಮೆಟ್ರಿಕ್ ಟನ್ ಅಕ್ಕಿಯನ್ನು ಪೂರೈಸಲಾಗಿದೆ ಎಂಬುದು ಆಘಾತಕಾರಿ. ಮೂರು ವರ್ಷಗಳಲ್ಲಿ 22,000 ಕೋಟಿ ರೂ. ಮೌಲ್ಯದ ಅಕ್ಕಿಯನ್ನು ಮಾರಾಟ ಮಾಡಿ 11,000 ಕೋಟಿ ರೂ. ಕಮಿಷನ್ ಗಳಿಸುವ ಪ್ರಸ್ತಾವನೆ ಇತ್ತು" ಎಂದು ಯಾದವ್ ಆರೋಪಿಸಿದರು, ಈ ವಿಷಯವನ್ನು ಕೇಂದ್ರ ವಿಜಿಲೆನ್ಸ್ ಇಲಾಖೆ ಪತ್ತೆಹಚ್ಚಿದೆ ಎಂದು ಹೇಳಿದರು. ಜವಾಬ್ದಾರಿಯುತರ ವಿರುದ್ಧ ಕ್ರಮ ಕೈಗೊಳ್ಳುವ ಬದಲು, ದೆಹಲಿ ಸರ್ಕಾರ "ಒಬ್ಬ ಅಧಿಕಾರಿಯನ್ನು ಅಮಾನತುಗೊಳಿಸಿ ವಿಷಯವನ್ನು ಮುಚ್ಚಿಹಾಕಿದೆ" ಎಂದು ಅವರು ಹೇಳಿದ್ದಾರೆ. ಬಿಜೆಪಿ ಸರ್ಕಾರದ ಒಟ್ಟಾರೆ ದಾಖಲೆಯ ಬಗ್ಗೆ ಗುರಿಯಿಟ್ಟು ಮಾತನಾಡಿದ ಯಾದವ್, ಸ್ವಚ್ಛ ಆಡಳಿತದ ಭರವಸೆಗಳ ಮೇಲೆ ಅಧಿಕಾರಕ್ಕೆ ಬಂದಿದ್ದರೂ, ಅದು "ಕೇಜ್ರಿವಾಲ್ ಸರ್ಕಾರದಷ್ಟೇ ಭ್ರಷ್ಟವಾಗಿದೆ" ಎಂದು ಆರೋಪಿಸಿದರು. ಆರೋಗ್ಯ ಖರೀದಿ ಮತ್ತು ಬೈಸಿಕಲ್ ಖರೀದಿಯಲ್ಲಿನ ಅಕ್ರಮಗಳನ್ನು ಅವರು ಪ್ರಸ್ತುತ ಆಡಳಿತದಲ್ಲಿ ಭ್ರಷ್ಟಾಚಾರದ ಮಾದರಿ ಎಂದು ಅವರು ಕರೆದಿದ್ದಾರೆ.

# ಮತಾಂಧರು ಮಾನವ ಸಹಜ ನಡವಳಿಕೆಯನ್ನೇ ಮರೆತಿದ್ದಾರೆ: ತರೂರ್

**ನವದೆಹಲಿ, ಆ. 11:** ಸರ್ಕಾರಿ ಕಾರ್ಯಕ್ರಮಗಳಲ್ಲಿ "ವಂದೇ ಮಾತರಂ" ರಾಷ್ಟ್ರಗೀತೆಯನ್ನು ಸಂಪೂರ್ಣವಾಗಿ ಹಾಡುವುದನ್ನು ಕಡ್ಡಾಯಗೊಳಿಸಿರುವ ತಿದ್ದುಪಡಿ ಕಾಯ್ದೆಯನ್ನು ಕಾಂಗ್ರೆಸ್ ಸಂಸದ ಶಶಿ ತರೂರ್ ತೀವ್ರವಾಗಿ ಖಂಡಿಸಿದ್ದಾರೆ. "ಅತಿರೇಕದ ದೇಶಭಕ್ತರು (ಮತಾಂಧರು) ಮಾನವನ ಸಹಜ ನಡವಳಿಕೆ ಮತ್ತು ತಾಳ್ಮೆಯನ್ನೇ ಮರೆತಂತಿದೆ"ಎಂದಿದ್ದಾರೆ. ಸಂಸತ್ತಿನಲ್ಲಿ ಯಾವುದೇ ಚರ್ಚೆಯಿಲ್ಲದೆ ಅಂಗೀಕಾರಗೊಂಡು, ಈಗ ರಾಷ್ಟ್ರಪತಿಗಳ ಅಂಕಿತ ಪಡೆದಿರುವ ಈ ಹೊಸ ನಿಯಮದ ಪ್ರಾಯೋಗಿಕ ತೊಡಕುಗಳನ್ನು ತರೂರ್ ಬೆಟ್ಟು ಮಾಡಿದ್ದಾರೆ. ಸರ್ಕಾರಿ ಸಮಾರಂಭಗಳ ಆರಂಭ ಮತ್ತು ಅಂತ್ಯದಲ್ಲಿ ರಾಷ್ಟ್ರಗೀತೆ "ಜನ ಗಣ ಮನ" ಜೊತೆಗೆ "ವಂದೇ ಮಾತರಂ" ಗೀತೆಯನ್ನೂ ಪೂರ್ಣ ಪ್ರಮಾಣದಲ್ಲಿ ಹಾಡುವುದನ್ನು ಕಡ್ಡಾಯ ಗೊಳಿಸಲಾಗಿದೆ. ತಮಗೆ ಎರಡೂ ಗೀತೆಗಳ ಬಗ್ಗೆ ಅಪಾರ ಗೌರವವಿದೆ. ಆದರೆ, ರಾಷ್ಟ್ರಗೀತೆ "ಜನ ಗಣ ಮನ" ಹಾಡಲು ಕೇವಲ 52 ಸೆಕೆಂಡುಗಳು ಸಾಕು. ಆದರೆ, ವಂದೇ ಮಾತರಂ ಗೀತೆಯನ್ನು ಪೂರ್ಣವಾಗಿ ಹಾಡಲು 3 ನಿಮಿಷ 10 ಸೆಕೆಂಡುಗಳು ಬೇಕಾಗುತ್ತವೆ. ಇದಲ್ಲದೆ, ತಮಿಳುನಾಡಿನಂತಹ ರಾಜ್ಯಗಳು ಈ ಎರಡಕ್ಕೂ ಮುನ್ನ 2 ನಿಮಿಷಗಳ ತಮ್ಮ ರಾಜ್ಯಗೀತೆಯನ್ನು ಹಾಡಲು ನಿರ್ಧರಿಸಿವೆ. ಹೀಗಿರುವಾಗ ಪ್ರತಿಯೊಂದು ಕಾರ್ಯಕ್ರಮದ ಆರಂಭ ಮತ್ತು ಅಂತ್ಯದಲ್ಲಿ ಜನರು ಸತತ 6 ನಿಮಿಷಗಳ ಕಾಲ (ಒಟ್ಟು 12 ನಿಮಿಷ) ಎದ್ದು ನಿಲ್ಲಬೇಕು. ಇದು ಎಷ್ಟರಮಟ್ಟಿಗೆ ಸಾಧ್ಯ ಎಂದು ಪ್ರಶ್ನಿಸಿದ್ದಾರೆ. ಗೌರವ ಮತ್ತು ತಾಳ್ಮೆಯನ್ನು ಕಾನೂನಿನ ಮೂಲಕ ಹೇರಲು ಸಾಧ್ಯವೇ ರಾಷ್ಟ್ರೀಯಗೀತೆಯ ಮೇಲಿನ ಗೌರವವನ್ನು ಹೆಚ್ಚಿಸುವ



ಉದ್ದೇಶದಿಂದ ತರಲಾದ ಈ ಮಸೂದೆಯು, ಪ್ರಾಯೋಗಿಕವಾಗಿ ಜನರ ಮೇಲೆ ಗಂಟೆಗಟ್ಟಲೆ ನಿಲ್ಲುವ ಹೊರೆ ಹೊರಿಸುವ ಮೂಲಕ ತದ್ವಿರುದ್ಧ ಪರಿಣಾಮ ಬೀರಬಹುದು. ಕೇವಲ ನಿಯಮಗಳನ್ನು ಹೇರುವುದರಿಂದ ಜನರಲ್ಲಾಗಲಿ, ರಾಷ್ಟ್ರಪ್ರೇಮಿಗಳಲ್ಲಾಗಲಿ ನಿಜವಾದ ಗೌರವ ಮೂಡಲು ಸಾಧ್ಯವಿಲ್ಲ ಎಂದು ಅಭಿಪ್ರಾಯಪಟ್ಟಿದ್ದಾರೆ.

# ಸಿಜೆಪಿ ಸ್ಥಾಪಕ ಅಭಿಜೀತ್ ದಿಪ್ಕೆ ಆ.15ರಂದು ಗ್ರಾಮೀಣ ಸರ್ಕಾರಿ ಶಾಲೆಗಳ ರಾಷ್ಟ್ರವ್ಯಾಪಿ ಸಾಮಾಜಿಕ ಲೆಕ್ಕಪರಿಶೋಧನೆಗೆ ಚಾಲನೆ

**ನವದೆಹಲಿ, ಆಗಸ್ಟ್ 11:** ಭಾರತವು ಆಗಸ್ಟ್ 15 ರಂದು ತನ್ನ 80 ನೇ ಸ್ವಾತಂತ್ರ್ಯ ದಿನಾಚರಣೆಯನ್ನು ಆಚರಿಸಲು ಸಿದ್ಧವಾಗುತ್ತಿದ್ದಂತೆ, ಕಾಕ್ರೋಚ್ ಜನತಾ ಪಾರ್ಟಿ (ಸಿಜೆಪಿ) ಸಂಸ್ಥಾಪಕ ಅಭಿಜೀತ್ ದಿಪ್ಕೆ ಅವರು ಗ್ರಾಮೀಣ ಭಾರತದಾದ್ಯಂತ ಸರ್ಕಾರಿ ಶಾಲೆಗಳಲ್ಲಿನ ಮೂಲಭೂತ ಸೌಕರ್ಯಗಳನ್ನು ನಿರ್ಣಯಿಸಲು ಮತ್ತು ಸುಧಾರಿಸಲು ರಾಷ್ಟ್ರವ್ಯಾಪಿ ನಾಗರಿಕ ನೇತೃತ್ವದ ಅಭಿಯಾನವನ್ನು ಘೋಷಿಸಿದ್ದಾರೆ. ಈ ಉಪಕ್ರಮವು ನಾಗರಿಕರು, ಪೋಷಕರು ಮತ್ತು ಗ್ರಾಮದ ಮುಖಂಡರು ಒಟ್ಟಾಗಿ ಸೇರಿ ಮಕ್ಕಳಿಗೆ, ವಿಶೇಷವಾಗಿ ಕೃಷಿ ಮತ್ತು ಕೂಲಿ ಕಾರ್ಮಿಕರ ಕುಟುಂಬಗಳಿಗೆ ಸಂಪೂರ್ಣವಾಗಿ ಕಾರ್ಯನಿರ್ವಹಿಸುವ ಸರ್ಕಾರಿ ಶಾಲೆಗಳನ್ನು ಒತ್ತಾಯಿಸಲು ಪ್ರೋತ್ಸಾಹಿಸುತ್ತದೆ. ಈ ಅಭಿಯಾನವನ್ನು ಗ್ರಾಮೀಣ ಭಾರತವನ್ನು ಕೇಂದ್ರೀಕರಿಸಿದ ತಳಮಟ್ಟದ ಚಳವಳಿ ಎಂದು ಕರೆದ ದೀಪ್ಕ, "ನಿಜವಾದ ಭಾರತ ಹಳ್ಳಿಗಳಲ್ಲಿ ವಾಸಿಸುತ್ತದೆ" ಎಂದು ಹೇಳಿದರು. ಸ್ವಾತಂತ್ರ್ಯದ ನಂತರದ ದಶಕಗಳಲ್ಲಿ ದೇಶಾದ್ಯಂತ ಪ್ರಮುಖ ಮೂಲಸೌಕರ್ಯ ಅಭಿವೃದ್ಧಿಯ ಹೊರತಾಗಿಯೂ, ಅನೇಕ ಗ್ರಾಮೀಣ ಸರ್ಕಾರಿ ಶಾಲೆಗಳು ಮೂಲಭೂತ ಸೌಕರ್ಯಗಳೊಂದಿಗೆ ಹೋರಾಡುತ್ತಲೇ ಇವೆ ಎಂದು ಅಭಿಯಾನ ಸಂಘಟಕರು ಹೇಳಿದರು. ವಿದ್ಯುತ್, ಸುರಕ್ಷಿತ ಕುಡಿಯುವ ನೀರು ಮತ್ತು ಕ್ರಿಯಾತ್ಮಕ ಶೌಚಾಲಯಗಳ ಅಸಮರ್ಪಕ ಪ್ರವೇಶವನ್ನು ಅವರು ಸೂಚಿಸಿದರು, ಸರಿಯಾದ ನೈರ್ಮಲ್ಯದ ಕೊರತೆಯು ಹೆಣ್ಣು ಮಕ್ಕಳಿಗೆ ನಿರ್ದಿಷ್ಟ ತೊಂದರೆಗಳನ್ನು ಸೃಷ್ಟಿಸುತ್ತದೆ. ಈ ಅಭಿಯಾನವು ಹಿಂಗೋಲಿ ಗ್ರಾಮದಲ್ಲಿ ನೇರ–ಕಾರ್ಯ ಉಪಕ್ರಮದೊಂದಿಗೆ ಪ್ರಾರಂಭವಾಗಲಿದ್ದು, ಅಲ್ಲಿ ದೀಪಿಕೆ ಸ್ಥಳೀಯ ಸರಪಂಚರನ್ನು ಭೇಟಿ ಮಾಡಿ ಸರ್ಕಾರಿ ಶಾಲೆಗಳನ್ನು ಮೇಲ್ದರ್ಜೆಗೇರಿಸಲು ಮತ್ತು ಅವುಗಳನ್ನು ಸಂಪೂರ್ಣವಾಗಿ ಕ್ರಿಯಾತ್ಮಕಗೊಳಿಸಲು ಕ್ರಮಗಳನ್ನು ಕೋರಲು ಯೋಜಿಸಿದ್ದಾರೆ. ಶಾಲೆಗಳ ಮೂಲಸೌಕರ್ಯಗಳ ಮಾಹಿತಿಯನ್ನು ಹಂಚಿಕೊಳ್ಳಲು ಪೋಷಕರಿಗಾಗಿ ಸಿಜೆಪಿ ಶೀಘ್ರದಲ್ಲೇ ಒಂದು ನಮೂನೆಯನ್ನು ಬಿಡುಗಡೆ ಮಾಡುತ್ತದೆ, ಭರ್ತಿ ಮಾಡಿ ಇಮೇಲ್ ಮೂಲಕ ಕಳುಹಿಸುವಂತೆ ಸೂಚಿಸಿದ್ದಾರೆ. ಇತ್ತೀಚೆಗಷ್ಟೇ "ನೀಟ್" ಪ್ರಶ್ನೆಪತ್ರಿಕೆ ಸೋರಿಕೆ ಖಂಡಿಸಿ ದೆಹಲಿಯಲ್ಲಿ ವಿದ್ಯಾರ್ಥಿಗಳ ಬೃಹತ್ ಪ್ರತಿಭಟನೆಯನ್ನು ಮುನ್ನಡೆಸಿ ಗಮನ ಸೆಳೆದಿದ್ದಾರೆ. ದೀಪ್ಕೆ, ಇದೀಗ "ಕ್ಯಾ ಬೋಲ್ತಿ ಪಬ್ಲಿಕ್" ಅಭಿಯಾನದಡಿ ಶಿಕ್ಷಣ ಕ್ಷೇತ್ರದ ಸುಧಾರಣೆಗೆ ಮುಂದಾಗಿದ್ದಾರೆ.



**ದೇಶದಲ್ಲಿ ನೂತನ ಸಂಸತ್ ಭವನ ಹಾಗೂ ಪ್ರಧಾನಿ ನಿವಾಸವನ್ನು ನಿರ್ಮಿಸಲು ಸಾಧ್ಯವಾಗುವುದಾದರೆ, ಹಳ್ಳಿಗಳಲ್ಲಿ ಹೊಸ ಶಾಲೆಗಳನ್ನು ಏಕೆ ಕಟ್ಟಬಾರದು? ರೈತರು ಮತ್ತು ಕಾರ್ಮಿಕರನ್ನು ನಾವು ದೇಶದ ಭವಿಷ್ಯವನ್ನು ಪರಿಗಣಿಸುವುದಿಲ್ಲವೇ ಎಂದು ಅವರು ಪ್ರಶ್ನಿಸಿದ್ದಾರೆ. ಕಳೆದ 80 ವರ್ಷಗಳಿಂದ ಗ್ರಾಮೀಣ ಶಾಲೆಗಳನ್ನು ನಿರ್ಲಕ್ಷಿಸಲಾಗಿದೆ– ದೀಪ್ಕೆ.**

# ಕಾಮನ್ವೆಲ್ತ್ ಫೆನ್ಸಿಂಗ್ ಚಾಂಪಿಯನ್‌ಶಿಪ್: 2ನೇ ದಿನ ಭಾರತೀಯ ಕ್ರೀಡಾಪಟುಗಳಿಗೆ ಏಳು ಪದಕ

**ನವದೆಹಲಿ, ಆಗಸ್ಟ್ 11:** ನೈಜೀರಿಯಾದ ಲಾಗೋಸ್‌ನಲ್ಲಿ ನಡೆಯುತ್ತಿರುವ ಕಾಮನ್ವೆಲ್ತ್ ಫೆನ್ಸಿಂಗ್ ಚಾಂಪಿಯನ್ಶಿಪ್ನ ಹಿರಿಯರ ವೈಯಕ್ತಿಕ ಸ್ಪರ್ಧೆಗಳಲ್ಲಿ ಸ್ಪರ್ಧೆಯ ಎರಡನೇ ದಿನವೂ ಭಾರತ ಏಳು ಪದಕಗಳನ್ನು ಗೆಲ್ಲುವ ಮೂಲಕ ತನ್ನ ಅದ್ಭುತ ಪ್ರದರ್ಶನವನ್ನು ಮುಂದುವರಿಸಿದೆ. ಅಧಿಕೃತ ಪ್ರಕಟಣೆಯ ಪ್ರಕಾರ, ಭಾರತೀಯ ತಂಡವು ಹಿರಿಯ ಮಹಿಳೆಯರ ಸೇಬರ್, ಹಿರಿಯ ಮಹಿಳೆಯರ ಎಪೀ ಮತ್ತು ಹಿರಿಯ ಪುರುಷರ ಫಾಯಿಲ್‌ನಲ್ಲಿ ಒಂದು ಚಿನ್ನ, ಎರಡು ಬೆಳ್ಳಿ ಮತ್ತು ನಾಲ್ಕು ಕಂಚಿನ ಪದಕಗಳನ್ನು ಗೆದ್ದಿದೆ.




# ಎಸ್.ಡಿ.ಎಂ. ಕಾಲೇಜು ಹಿರಿಯ ವಿದ್ಯಾರ್ಥಿಗಳಿಗೆ ಸಂಘದ ವತಿಯಿಂದ ವಿದ್ಯಾರ್ಥಿವೇತನ ವಿತರಣೆ, ಹಿರಿಯ ವಿದ್ಯಾರ್ಥಿಗಳಿಗೆ ಸನ್ಮಾನ, ಮಧ್ಯಾಹ್ನದ ಭೋಜನ ವ್ಯವಸ್ಥೆಗೆ ದೇಣಿಗೆ ಹಸ್ತಾಂತರ

**ಮುಂಬಯಿ, ಆ.11:** ವಿದ್ಯೆ ಮತ್ತು ಮಾನವೀಯ ಮೌಲ್ಯಗಳಿಂದ ಸುಸಂಸ್ಕೃತ ಹಾಗೂ ಆರೋಗ್ಯಪೂರ್ಣ ಸಮಾಜ ನಿರ್ಮಾಣವಾಗುತ್ತದೆ ಎಂದು ನಾವೂರದ ಆರೋಗ್ಯ ಕ್ಲಿನಿಕ್‌ನ ಡಾ। ಪ್ರದೀಪ್ ಆಟಿಕುಕ್ಕೆ ಹೇಳಿದರು. ಅವರು ಮಂಗಳವಾರ ಉಜಿರೆಯಲ್ಲಿ ಎಸ್.ಡಿ.ಎಂ. ಕಾಲೇಜಿನ ಇಂದ್ರಪ್ರಸ್ಥ ಸಭಾಂಗಣದಲ್ಲಿ ಹಿರಿಯ ವಿದ್ಯಾರ್ಥಿ ಸಂಘದ ಆಶ್ರಯದಲ್ಲಿ ಆಯೋಜಿಸಿದ ಕಾಲೇಜಿನ ಹಿರಿಯ ವಿದ್ಯಾರ್ಥಿಗಳ ಸನ್ಮಾನ ಸಮಾರಂಭದಲ್ಲಿ ಸನ್ಮಾನಕ್ಕೆ ಕೃತಜ್ಞತೆ ವ್ಯಕ್ತಪಡಿಸಿ ಮಾತನಾಡಿದರು. ಎಸ್.ಡಿ.ಎಂ. ಶಿಕ್ಷಣ ಸಂಸ್ಥೆಗಳು ಶೈಕ್ಷಣಿಕ ಕ್ಷೇತ್ರದಲ್ಲಿ ಕ್ರಾಂತಿಕಾರಿ ಸುಧಾರಣೆ ಮಾಡಿ ಸಮಾಜದ ಸಭ್ಯ, ಸುಸಂಸ್ಕೃತ ನಾಗರಿಕರನ್ನು ರೂಪಿಸಿವೆ. ಪಠ್ಯೇತರ ಚಟುವಟಿಕೆಗಳು ಜೀವನ ಶಿಕ್ಷಣವನ್ನು ನೀಡುತ್ತವೆ ಎಂದರು. ಶುಭಾಶಂಸನೆ ಮಾಡಿದ ಎಸ್.ಡಿ.ಎಂ. ಶಿಕ್ಷಣ ಸಂಸ್ಥೆಗಳ ಕಾರ್ಯದರ್ಶಿ ಪ್ರೊ. ಎಸ್. ಸತೀಶ್ಚಂದ್ರ ಸಂಸ್ಥೆಯ ಹಿರಿಯ ವಿದ್ಯಾರ್ಥಿಗಳು ರಾಯಭಾರಿಗಳಾಗಿ ವಿವಿಧ ಕ್ಷೇತ್ರಗಳಲ್ಲಿ ಉನ್ನತ ಸೇವೆ, ಸಾಧನೆ ಮಾಡುತ್ತಿರುವ ಬಗ್ಗೆ ಕೃತಜ್ಞತೆ ಮತ್ತು ಮೆಚ್ಚುಗೆ ವ್ಯಕ್ತಪಡಿಸಿ, ಅಭಿನಂದಿಸಿದರು. ಹಿರಿಯ ವಿದ್ಯಾರ್ಥಿಗಳ ಸನ್ಮಾನ: ವೈದ್ಯರುಗಳಾಗಿ ವಿವಿಧ ಊರುಗಳಲ್ಲಿ ಸೇವೆ ಮಾಡುತ್ತಿರುವ ಕಾಲೇಜಿನ ಹಿರಿಯ ವಿದ್ಯಾರ್ಥಿಗಳಾದ ಡಾ. ಪ್ರಕಾಶ್, ಉಜಿರೆ, ಡಾ. ರಾಜಾರಾಮ್, ಉಪ್ಪಿನಂಗಡಿ, ಡಾ. ಎಂ.ಎಂ. ದಯಾಕರ, ಡಾ। ಸದಾನಂದ ಪೂಜಾರಿ, ಮಂಗಳೂರು, ಡಾ. ಶ್ರೀಹರಿ, ಗುರುವಾಯನಕೆರೆ, ಡಾ. ಪ್ರದೀಪ್ ಆಟಿಕುಕ್ಕೆ, ನಾವೂರು, ಡಾ. ಶಶಿಕಾಂತ್ ಡೋಂಗ್ರೆ, ಬೆಳ್ತಂಗಡಿ, ಡಾ. ರಂಜನ್ ಕುಮಾರ್, ಉಜಿರೆ, ಡಾ, ರೇಷ್ಮಾ, ಮೂಡಬಿದ್ರೆ ಮತ್ತು ಡಾ. ಶ್ರೀಹರ್ಷ, ಉಜಿರೆ ಅವರನ್ನು ಸನ್ಮಾನಿಸಲಾಯಿತು. ಹಿರಿಯ ವಿದ್ಯಾರ್ಥಿ ಸಂಘದ ವತಿಯಿಂದ ಕಾಲೇಜಿನ ಇಪ್ಪತ್ತು ವಿದ್ಯಾರ್ಥಿಗಳಿಗೆ ತಲಾ ಐದು ಸಾವಿರ ರೂ. ನಂತೆ ಒಂದು ಲಕ್ಷ ರೂ. ವಿದ್ಯಾರ್ಥಿವೇತನ ವಿತರಿಸಲಾಯಿತು. ನಿವೃತ್ತ ಎಸ್.ಪಿ. ಪೀತಾಂಬರ ಹೇರಾಜೆ ಅಧ್ಯಕ್ಷತೆ ವಹಿಸಿದರು. ಕಾಲೇಜಿನ ಪ್ರಾಂಶುಪಾಲ ಪ್ರೊ. ಪಿ. ವಿಶ್ವನಾಥ ಸ್ವಾಗತಿಸಿದರು. ವಕೀಲ ಬಿ.ಕೆ. ಧನಂಜಯ ರಾವ್ ಧನ್ಯವಾದವಿತ್ತರು. ಉಪನ್ಯಾಸಕರಾದ ದಿವಾ ಕೊಕ್ಕಡ ಮತ್ತು ದೀಕ್ಷಿತ್ ಕಾರ್ಯಕ್ರಮ ನಿರ್ವಹಿಸಿದರು.



# ನಾನು, ಸಚಿವರು ಸೇರಿ ಎಲ್ಲರೂ ಸರ್ಕಾರಿ ನೌಕರರು: ನಾವೆಲ್ಲಾ ಟೀಮ್ ಕರ್ನಾಟಕವಾಗಿ ಕೆಲಸ ಮಾಡೋಣ– ಸಿಎಂ ಡಿ.ಕೆ.ಶಿವಕುಮಾರ್



**ಬೆಂಗಳೂರು, ಆ. 11:** "ನಾನು ಸೇರಿದಂತೆ ನನ್ನ ಮಂತ್ರಿ ಮಂಡಲ, ಅಧಿಕಾರಿಗಳು ಎಲ್ಲರೂ ಸರ್ಕಾರಿ ನೌಕರರು. ನಮ್ಮದು ಟೀಮ್ ಕರ್ನಾಟಕ. ಎಲ್ಲರೂ ಒಟ್ಟಾಗಿ ಕೆಲಸ ಮಾಡೋಣ. ಜನರ ಸಮಸ್ಯೆಗಳಿಗೆ ಸ್ಪಂದಿಸಿ ಅವರ ಕಲ್ಯಾಣ ಮಾಡುವುದೇ ನಮ್ಮ ಗುರಿ" ಎಂದು ಸಿಎಂ ಡಿ ಕೆ ಶಿವಕುಮಾರ್ ಅವರು ಕರೆ ಕೊಟ್ಟರು. ವಿಧಾನಸೌಧದ ಬ್ಯಾಂಕ್ವೆಟ್ ಹಾಲ್‌ನಲ್ಲಿ ಮಂಗಳವಾರ ನಡೆದ ಸರ್ಕಾರಿ ನೌಕರರೊಂದಿಗೆ ಸಂವಾದ ಕಾರ್ಯ ಕ್ರಮದಲ್ಲಿ ಶಿವಕುಮಾರ್ ನೌಕರರನ್ನು ಉದ್ದೇಶಿಸಿ ಮಾತನಾಡಿದರು.

"ನಮ್ಮನ್ನು ಸೇರಿದಂತೆ ರಾಜ್ಯದ ಜನರ ಸೇವೆ ಮಾಡುವ ಅವಕಾಶ ಸಿಕ್ಕಿರುವುದು 5.50 ಲಕ್ಷ ಸರ್ಕಾರಿ ನೌಕರರಿಗೆ ಮಾತ್ರ. ನಾವು ನಮಗೆ ಸಿಕ್ಕ ಅವಕಾಶ ಬಳಸಿಕೊಳ್ಳಬೇಕು. ಕೆಂಗಲ್ ಹನುಮಂತಯ್ಯ ಅವರ ಕಾಲದಿಂದ ಇಲ್ಲಿಯವರೆಗೆ ಎಲ್ಲ ಸಿಎಂಗಳು ತಮ್ಮದೇ ರೀತಿಯಲ್ಲಿ, ತಮ್ಮದೇ ಅನುಭವ ಸಿದ್ಧಾಂತದ ಮೇಲೆ ಆಡಳಿತ ಮಾಡಿದ್ದಾರೆ. ಕೆಂಗಲ್ ಹನುಮಂತಯ್ಯ ಅವರು ಜೈಲಿನ ಖೈದಿಗಳಿಂದ ವಿಧಾನಸೌಧ ಕಟ್ಟಿಸಿದರು. ಆಗ ಕೆಲವು ಖೈದಿಗಳು ಹನುಮಂತಯ್ಯ ಅವರ ಮೇಲೆ ಚಪ್ಪಲಿ ಎಸೆದಿದ್ದರು. ವಿಶ್ವೇಶ್ವರಯ್ಯ ಅವರು 1 ಗೆ ಕೆಲಸ ಮಾಡುತ್ತಿದ್ದರು ಎಂಬ ಇತಿಹಾಸ ಇದೆ. ನಾನು ಈ ಹಿಂದಿನವರ ಕೆಲಸಗಳನ್ನು ಟೀಕೆ ಮಾಡುವುದಿಲ್ಲ. ಟೀಕೆಗಳು ಸಾಯುತ್ತವೆ, ನಮ್ಮ ಕೆಲಸಗಳು ಉಳಿಯುತ್ತವೆ" ಎಂದು ತಿಳಿಸಿದರು.

"ಅಂಬೇಡ್ಕರ್ ಅವರು ಇತಿಹಾಸ ಮರೆತವ ಇತಿಹಾಸ ಸೃಷ್ಟಿಸಲಾರ ಎಂದು ಹೇಳಿದ್ದಾರೆ. ನೀವು ಸಾಕಷ್ಟು ವಿದ್ಯೆ, ಅನುಭವ ಹೊಂದಿದ್ದೀರಿ. ನಾನು ಹೆಚ್ಚು ಓದಿಲ್ಲ, ಆದರೆ ಜಿಲ್ಲಾ ಪಂಚಾಯ್ತಿ ಸದಸ್ಯನಾಗಿ, ಶಾಸಕ, ಮಂತ್ರಿ, ಉಪಮುಖ್ಯಮಂತ್ರಿಯಾಗಿ ಅನುಭವ ಇದೆ. ನೀವು ಶ್ರಮಜೀವಿ, ಸರ್ಕಾರದ ನಾಡಿ ಮಿಡಿತ ಇಟ್ಟುಕೊಂಡು, ಜನ ಮತ್ತು ಸರ್ಕಾರದ ಸೇತುವೆಯಾಗಿದ್ದೀರಿ. ನಾವು ಅಧಿಕಾರದಲ್ಲಿ ಇದ್ದಾಗ ಯಾವ ಸಾಕ್ಷಿಗುಡ್ಡೆ ಬಿಟ್ಟು ಹೋಗುತ್ತೇವೆ ಎಂಬುದು ಮುಖ್ಯ" ಎಂದು ಕರೆ ಕೊಟ್ಟರು. "ನಮ್ಮ ನಿಮ್ಮ ಮೇಲೆ ಜನರ ಬದುಕಿನಲ್ಲಿ, ಬದಲಾವಣೆ ತರುವ ಜವಾಬ್ದಾರಿ ಇದೆ. ನಾನು ಇತಿಹಾಸ ಓದಲು ಬರೆಯಲು ಇಚ್ಛಿಸುವುದಿಲ್ಲ. ಇತಿಹಾಸ ಸೃಷ್ಟಿಸಲು ಬಯಸುತ್ತೇನೆ. ಸರ್ಕಾರಿ ನೌಕರರ ಸೇವೆಯಿಂದಲೇ ನಮ್ಮ ರಾಜ್ಯ ಈ ಹಂತಕ್ಕೆ ಬೆಳೆದಿದೆ" ಎಂದರು.

**ಮಹಾರಾಜರ ಕಾಲದಿಂದ ಪರಿಶುದ್ಧ ಆಡಳಿತದಿಂದ ರಾಜ್ಯದ ಪ್ರಗತಿ:** "ಮೈಸೂರಿನ ಕಾರ್ಯಕ್ರಮದಲ್ಲಿ ನಾನು ಪ್ರಧಾನಮಂತ್ರಿಗಳ ಬಳಿ ಒಂದು ಮಾತು ಹೇಳಿದ್ದೆ. ಅಟಲ್ ಬಿಹಾರಿ ವಾಜಪೇಯಿ ಅವರು ಇದೆ ಹಾಲ್ ನಲ್ಲಿ, ವಿಶ್ವದ ನಾಯಕರು ಮೊದಲು ದೆಹಲಿಗೆ ಬಂದು ನಂತರ ದೇಶದಲ್ಲಿ ಬೇರೆ ನಗರಗಳಿಗೆ ಹೋಗುತ್ತಿದ್ದರು. ಆದರೆ ಈಗ ಮೊದಲು ಬೆಂಗಳೂರಿಗೆ ಬಂದು ನಂತರ ಬೇರೆ ನಗರಗಳಿಗೆ ಹೋಗುತ್ತಿದ್ದಾರೆ ಎಂದು ಹೇಳಿದ್ದರು. ಇದು ಕೇವಲ ಕಾಂಗ್ರೆಸ್ ಸರ್ಕಾರದ ಸಾಧನೆ ಎಂದು ನಾನು ಹೇಳಲ್ಲ. ರಾಜ ಮಹಾರಾಜರ ಕಾಲದಿಂದ ಪರಿಶುದ್ಧ ಆಡಳಿತದ ಪರಿಣಾಮ, ನಮ್ಮ ವಿದ್ಯಾರ್ಥಿಗಳ ಜ್ಞಾನ, ಪ್ರತಿಭಾನ್ವಿತ ಮಾನವ ಸಂಪನ್ಮೂಲಗಳ ಕಾರಣ.ಮಹಾರಾಜರು ಬೆಂಗಳೂರಿನಲ್ಲೇ ಇಂಡಿಯನ್ ಇನ್ಸ್ಟಿಟ್ಯೂಟ್ ಆಫ್ ಸೈನ್ಸ್ ಆರಂಭಿಸಿದರು"."ಪೋಲೆಂಡ್ ಪ್ರಧಾನಿಯನ್ನು ಭೇಟಿ ಮಾಡಿದಾಗ, ಸಿಲಿಕಾನ್ ವ್ಯಾಲಿಯಲ್ಲಿ 3ರಲ್ಲಿ ಇಬ್ಬರು ಭಾರತದವರು. ಹೀಗಾಗಿ ಬೆಂಗಳೂರಿ ನಲ್ಲಿ ಹೂಡಿಕೆ ಮಾಡಲು ಮುಂದಾಗಿ ದ್ದೇವೆ ನಮಗೆ 60% ಉಳಿತಾಯವಾಗಿದೆ ಎಂದರು. ಗ್ಯಾರಂಟಿ ಯೋಜನೆಯಲ್ಲಿ ದುರ್ಬಳಕೆ ಮಾಡಿಕೊಂಡಿರುವ ಬಗ್ಗೆ ಪರಿಶೀಲನೆ ಮಾಡಲಾಗುತ್ತಿದೆ. ನಮ್ಮ ರಾಜ್ಯದವರಿಗೆ ನಾವು ಯೋಜನೆ ನೀಡಬೇಕು. ಬೇರೆಯವರಿಗೆ ನೀಡುವ ಅಗತ್ಯವಿಲ್ಲ" ಎಂದರು.

**ಆತ್ಮಸಾಕ್ಷಿಗೆ ಒಪ್ಪುವಂತೆ ಕೆಲಸ ಮಾಡಿ:** "ನಮ್ಮಲ್ಲಿರುವ ಶಿಕ್ಷಣ, ಆರೋಗ್ಯ ಸೌಲಭ್ಯ ಬೇರೆ ಎಲ್ಲೂ ಇಲ್ಲ. ನಾನು ನನ್ನ ಮೇಲೆ ಕಣ್ಣು ಇಟ್ಟುಕೊಂಡಿದ್ದೇನೆ. ತಾಲ್ಲೂಕು ಮಟ್ಟದಲ್ಲಿ ಅಧಿಕಾರಿಗಳು ಹಾಗೂ ಶಾಸಕರು ಯಾವ ರೀತಿ ಕೆಲಸ ಮಾಡುತ್ತಿದ್ದಾರೆ ಎಂದು ಪರಿಶೀಲನೆ ಮಾಡುತ್ತೇವೆ. ನಾವು ಕೆಲಸ ಮಾಡು ವುದೇ ಜನರಿಗಾಗಿ. ಬೇರೆಯವರಿಗೆ ಒಪ್ಪಿಸದಿದ್ದರೂ ನಿಮ್ಮ ಆತ್ಮಸಾಕ್ಷಿಗೆ ಒಪ್ಪುವಂತೆ ಕೆಲಸ ಮಾಡಿ" "ಅಧಿಕಾರ ಜವಾಬ್ದಾರಿ ಸಂಕೇತ. ಇದು ಸಿಂಹಾಸನ ಅಲ್ಲ, ಅವಕಾಶ. ಮೂರ್ತಿಗೆ ಬೆಲೆ ಕಟ್ಟಿದರೂ ಭಗವಂತನಿಗೆ ಬೆಲೆ ಕಟ್ಟಲು ಆಗಲ್ಲ. ಜನರಲ್ಲೇ ದೇವರನ್ನು ಕಾಣಬಹುದು. ಗ್ಯಾರಂಟಿ ಬಗ್ಗೆ ಶಾಸಕರು, ವಿರೋಧ ಪಕ್ಷದವರು ಟೀಕೆ ಮಾಡುತ್ತಿದ್ದಾರೆ. ಪ್ರಧಾನಮಂತ್ರಿ ಗಳು ಟೀಕಿಸಿದರೂ ನಂತರ ಅವರೇ ಪಾಲಿಸುವಂತಾಗಿದೆ. ನಮ್ಮ ಮಾದರಿ ದೇಶಕ್ಕೆ ಮಾದರಿಯಾಗಿದೆ" ಎಂದರು.

**ಕಾನೂನು ಚೌಕಟ್ಟಿನಲ್ಲಿ ಜನರ ಸಮಸ್ಯೆಗೆ ಸ್ಪಂದಿಸಿ:** ಸರ್ಕಾರ ನೌಕರರ ಸಂಘದವರು ಗ್ಯಾರಂಟಿ ಯೋಜನೆ ತ್ಯಜಿಸುವ ನಿರ್ಧಾರಕ್ಕೆ ಬಂದಿದ್ದಾರೆ. ಅವರಿಗೆ ಅಭಿನಂದನೆಗಳು. ಕೇಂದ್ರ ಕಚೇರಿಯಲ್ಲಿ ಇದ್ದು ಕೆಲಸ ಮಾಡದಿದ್ದರೆ ಮತ್ತೆ ನಿಮಗೆ ಈ ಜವಾಬ್ದಾರಿ ಯಾಕೆ ಪ್ರತಿ ತಾಲ್ಲೂಕಿನಲ್ಲಿ ಎಲ್ಲಾ ಅಧಿಕಾರಿಗಳು ಅಲ್ಲೇ ವಾಸ ಇರಬೇಕು. ಇಂದು 750 ಕಡೆ ಸಭೆ ಈ ಕಾರ್ಯ ಕ್ರಮ ನಡೆಯುತ್ತಿದೆ. ರಾಜ್ಯದ ಪ್ರಮುಖ ನೌಕರನಾಗಿ ಸರ್ಕಾರದ ಚಿಂತನೆ, ಮುಂದಿನ ದಿನಗಳಲ್ಲಿ ಸಾಗಬೇಕಾದ ದಾರಿ ಬಗ್ಗೆ ಮಾರ್ಗದರ್ಶನ ನೀಡಲು ಬಂದಿರುವೆ. ಮನಸ್ಸು ಶುದ್ಧವಾಗಿ, ಪಾರದರ್ಶಕವಾಗಿ ಕೆಲಸ ಮಾಡಿದರೆ ಸಮಸ್ಯೆಗೆ ಪರಿಹಾರ ನೀಡಬಹುದು.

"ಪ್ರಜಾಸೇವೆ ಇಲಾಖೆ ಮೂಲಕ ಜಿಲ್ಲಾ ಮಂತ್ರಿ, ಶಾಸಕರು 2 ವಾರಕ್ಕೆ ಒಮ್ಮೆ ತಾಲ್ಲೂಕಿಗೆ ಹೋಗಿ ಪ್ರಜಾಸೇವೆ ಕೆಲಸ ಮಾಡಬೇಕು. ತಿಂಗಳ ಮೊದಲ ಹಾಗೂ ಮೂರನೇ ಶನಿವಾರ. ನಂತರ ಪಂಚಾಯ್ತಿ ಮಟ್ಟದಲ್ಲಿ ಮಾಡಬೇಕು. ಶಾಸಕರು ಹೋಬಳಿ ಮಟ್ಟದಲ್ಲಿ ಮಾಡಬೇಕು. ಜನರ ಸಂಕಷ್ಟಕ್ಕೆ ಕಾನೂನು ಚೌಕಟ್ಟಿನಲ್ಲಿ ಸಹಾಯ ಮಾಡಿ. ನೀವು ಕೇಂದ್ರ ಸ್ಥಳದಲ್ಲಿದ್ದು, ಅಲ್ಲಿನ ಪ್ರದೇಶಗಳಿಗೆ ಭೇಟಿನೀಡಿ ಪರಿಶೀಲನೆ ಮಾಡಬೇಕು. ಆಗ ವಾಸ್ತವ ಪರಿಸ್ಥಿತಿ ಅರಿಯಬಹುದು. ಬೆಂಗಳೂರಿನಲ್ಲಿ 25 ಲಕ್ಷ ಇ ಖಾತೆ, ಗ್ರಾಮೀಣ ಭಾಗದ ಜನರಿಗೆ ಪಟ್ಟಾ ದಾಖಲೆ ಉಚಿತವಾಗಿ ನೀಡಲಾಗಿದೆ. ಲಂಚ ಇಲ್ಲದೆ ಮನೆ ಬಾಗಿಲಿಗೆ ಆಸ್ತಿ ದಾಖಲೆ ನೀಡುತ್ತಿರುವುದು ನಿಮ್ಮ ಸರ್ಕಾರದಿಂದ ಸಾಕಾರವಾಗಿದೆ. ಇದು ನಮ್ಮ ಸರ್ಕಾರದ 6ನೇ ಗ್ಯಾರಂಟಿ. ಮುಂದಿನ 6–7 ತಿಂಗಳಲ್ಲಿ ಇದನ್ನು ರಾಜ್ಯದ ಎಲ್ಲೆಡೆ ವಿಸ್ತರಣೆ ಮಾಡಿ" ಎಂದು ಸೂಚಿಸಿದರು.

**Sharing and caring ಮಂತ್ರ ಅನುಸರಿಸಿ:** "ಬಡವರಿಗೆ ಸೂರಿನ ಆಧಾರ ನೀಡುತ್ತಿದ್ದೇವೆ. ಅವರು ಕಷ್ಟ ಪಟ್ಟು ಸಂಪಾದಿಸಿದ ಆಸ್ತಿಗೆ ಭದ್ರತೆ ನೀಡುತ್ತಿದ್ದೇವೆ. ಜನ ಸೇವೆ ನಮ್ಮ ನಿಮ್ಮ ಮೂಲ ಉದ್ದೇಶವಾಗಿರಬೇಕು. Sharing and caring ಮಂತ್ರ ಅನುಸರಿಸಿ. ಸ್ಥಳೀಯ ಮಟ್ಟದ ಸಮಸ್ಯೆಗೆ ಅಲ್ಲೇ ಪ್ರಜಾಸೇವೆ ಮೂಲಕ ಬಗೆಹರಿಸಿ. ಸಮಸ್ಯೆಯನ್ನು ಬೇರೆ ಕಡೆಗೆ ಸ್ಥಳಾಂತರಿಸಬೇಡ. ಭಾರತ ಜೋಡೋ ಯುವ ಸಂಘ ಕ್ರಾಂತಿಕಾರಿ ಯೋಜನೆ. ಯುವಕರಿಗೆ ಶಕ್ತಿ ತುಂಬಬೇಕು, ದೇಶ ಸೇವೆ ಬಗ್ಗೆ ಅರಿವು ಮೂಡಿಸಬೇಕು. ಅವರಲ್ಲಿ ಪ್ರತಿಭೆಗೆ ವೇದಿಕೆ ಕಲ್ಪಿಸುವುದು ಇದರ ಉದ್ದೇಶ.

**ಭ್ರಷ್ಟಾಚಾರ ವಿಚಾರದಲ್ಲಿ ರಾಜಿ ಇಲ್ಲ, ಡಬಲ್ ಬಿಲ್, ನಕಲಿ ಬಿಲ್ ಮಾಡುವವರನ್ನು ಬಡಿದು ಹಾಕುವೆ:** "ಭ್ರಷ್ಟಾಚಾರ ವಿಚಾರದಲ್ಲಿ ನಾನು ರಾಜಿ ಇಲ್ಲ. ಅಧಿಕಾರಿಗಳ ಪ್ರತಿ ಹೆಜ್ಜೆ ಪರಿಶೀಲಿಸುತ್ತೇನೆ. ಪ್ರತಿ ಫಲಾನುಭವಿ ಮಾಹಿತಿ ಇಟ್ಟುಕೊಳ್ಳಬೇಕು. ಅವರು ಅದನ್ನು ಹೇಗೆ ಬಳಸುತ್ತಿದ್ದಾರೆ ಎಂದು ನೋಡಬೇಕು. ನಮ್ಮಲ್ಲಿ ಡಬಲ್ ಬಿಲ್ ಮಾಡುವ ಕೆಲಸ ಮಾಡುತ್ತಿದ್ದಾರೆ. ನಾನು ಅಂತಹವರನ್ನು ಬಡಿದು ಹಾಕುತ್ತೇನೆ. ನಕಲಿ ಬಿಲ್‌ಗಳಿಗೆ ಅವಕಾಶ ಇಲ್ಲ. ದಾಖಲೆ ತಿದ್ದುವುದಕ್ಕೆ ಬ್ರೇಕ್ ಹಾಕಲು ಆಸ್ತಿ ದಾಖಲೆ ಡಿಜಿಟಲೀಕರಣ ಮಾಡಲಾಗುತ್ತಿದೆ" ಎಂದರು. "ಪ್ರತಿ ತಾಲ್ಲೂಕು ಅಧಿಕಾರಿಗಳು ತಮ್ಮ ದಿನದ ಕಾರ್ಯಕ್ರಮದ ವಿವರ ಹಿರಿಯ ಅಧಿಕಾರಿಗಳಿಗೆ ನೀಡಬೇಕು. ಸಹಕಾರ, ಕಂದಾಯ ಅಧಿಕಾರಿಗಳಿಗೆ ನ್ಯಾಯ ನೀಡುವ ಅಧಿಕಾರ ಇರುತ್ತದೆ. ನ್ಯಾಯ ಪೀಠದಿಂದ ಅನ್ಯಾಯ ಆಗಬಾರದು. ಯಾರ ಒತ್ತಡಕ್ಕೂ ಮಣಿಯದೆ ಕೆಲಸ ಮಾಡಿ. ವಿಧಾನಸಭೆ ಆದ ಮೇಲೆ ಪ್ರತಿ ತಾಲ್ಲೂಕಿಗೂ ನಾನು ಭೇಟಿ ನೀಡುತ್ತೇನೆ. ಖಾಸಗಿ ಶಾಲೆಗಳು ಸೇರಿ ಎಲ್ಲಾ ಶಾಲೆಗಳು ಸ್ವಾತಂತ್ರ್ಯ ದಿನಾಚರಣೆ ಕಾರ್ಯಕ್ರಮದಲ್ಲಿ ಭಾಗವಹಿಸುವಂತೆ ನೋಡಿಕೊಳ್ಳಿ" ಎಂದು ಸೂಚಿಸಿದರು.



ಬೆಂಗಳೂರಿನ ನಂದಿನಿ ಲೇಔಟ್‌ನ ಕಂಠೀರವ ಸ್ಟುಡಿಯೋ ಬಳಿಯ ಅಂಡರ್‌ಪಾಸ್ ನಿರ್ಮಾಣ ಸ್ಥಳದಲ್ಲಿ ಮಂಗಳವಾರ ಬೃಹತ್ ಮಣ್ಣಿನ ಗೋಡೆ ಕುಸಿದುಬಿದ್ದ ಪರಿಣಾಮ, ಇಬ್ಬರು ವಲಸೆ ಕಾರ್ಮಿಕರು ಮೃತಪಟ್ಟರು ಮತ್ತು ಇತರ ಮೂವರು ಗಾಯಗೊಂಡರು.

# ಮತದಾನ ಮಾಡಿದ್ದ ಕ್ಷೇತ್ರದಿಂದಲೇ ನನ್ನ ಹೆಸರು ಡಿಲೀಟ್: ಪ್ರಕಾಶ್ ರೈ ಮಾಹಿತಿ

**ಬೆಂಗಳೂರು, ಆ.11:** ವಿಶೇಷ ತೀವ್ರ ಮತದಾರರ ಪಟ್ಟಿ ಪರಿಷ್ಕರಣೆಯ ಪ್ರಕ್ರಿಯೆಯು ರಾಜ್ಯದಲ್ಲಿ ಚಾಲ್ತಿಯಲ್ಲಿದೆ. ಇದರ ಭಾಗವಾಗಿ ಬೆಂಗಳೂರಿನ ಮತದಾರರ ಪಟ್ಟಿಯಲ್ಲಿದ್ದ ನಟ ಹಾಗೂ ವಿಚಾರವಾದಿ ಪ್ರಕಾಶ್‌ರೈ ಅವರ ಹೆಸರನ್ನು ತೆಗೆದು ಹಾಕಲಾಗಿದೆ. ಈ ಕುರಿತು ಸ್ವತಃ ಪ್ರಕಾಶ್‌ರೈ ಅವರೇ ತಮ ಇನ್‌ಸ್ಟಾಗ್ರಾಂ ಮೂಲಕ ಮಾಹಿತಿ ಹಂಚಿಕೊಂಡಿದ್ದು, ತೀವ್ರ ಅಸಮಾಧಾನ ವ್ಯಕ್ತಪಡಿಸಿದ್ದಾರೆ.



ಬೆಂಗಳೂರಿನ ಶಾಂತಿನಗರ ವಿಧಾನಸಭಾ ಕ್ಷೇತ್ರದಿಂದ ಮತದಾರರ ಹಕ್ಕು ಹೊಂದಿದ್ದ ಪ್ರಕಾಶ್‌ರೈ ಅವರ ಹೆಸರು ಎಸ್‌ಐಆರ್ ಅಭಿಯಾನದಡಿ ಕೈಬಿಡಲಾಗಿದೆ. ನಾನು ಹುಟ್ಟಿ ಬೆಳೆದ ಕ್ಷೇತ್ರದಿಂದ ಹಾಗೂ ಕಳೆದ ಲೋಕಸಭೆ ಚುನಾವಣೆಯಲ್ಲಿ ಸ್ಪರ್ಧಿಸಿ, ಮತದಾನ ಮಾಡಿದ್ದ ಕ್ಷೇತ್ರದಿಂದಲೇ ನನ್ನ ಹೆಸರನ್ನು ತೆಗೆದುಹಾಕಲಾಗಿದೆ. ಇದು ಜೋಕ್ ಅಲ್ಲದೆ ಮತ್ತೇನು ಎಂದು ಇನ್‌ಸ್ಟಾಗ್ರಾಂ ವೀಡಿಯೋದಲ್ಲಿ ಪ್ರಶ್ನಿಸಿದ್ದಾರೆ.

ನನ್ನ ಮತ ಡಿಲೀಟ್ ಆಗಿದೆ, ಅದನ್ನು ಮರಳಿ ಪಡೆಯಲು ಏನೇನು ಕಾನೂನು ಪ್ರಕ್ರಿಯೆ ಮಾಡಬೇಕೋ ಅದೆಲ್ಲವನ್ನೂ ಮಾಡುತ್ತೇನೆ. ಅಗತ್ಯವಿರುವ ಎಲ್ಲಾ ದಾಖಲೆಗಳನ್ನು ಒದಗಿಸುತ್ತೇನೆ ಎಂದು ಸ್ಪಷ್ಟಪಡಿಸಿದ್ದಾರೆ.

ಒಂದಕ್ಕಿಂತ ಹೆಚ್ಚು ಕಡೆಗಳಲ್ಲಿ ಮತದಾರರ ಗುರುತಿನ ಚೀಟಿ ಹೊಂದಿದ್ದಾರೆಂಬ ಆರೋಪದ ಹಿನ್ನೆಲೆಯಲ್ಲಿ ಈ ಹಿಂದೆಯೇ ಅವರ ವಿರುದ್ಧ ದೂರು ದಾಖಲಾಗಿತ್ತು. ಪ್ರಕಾಶ್ ರೈ ಬೆಂಗಳೂರಿನ ಶಾಂತಿನಗರ ಮಾತ್ರವಲ್ಲದೆ, ತಮಿಳು ನಾಡಿನ ಚೆನ್ನೈ (ವೇಲಾಚೇರಿ) ಹಾಗೂ ತೆಲಂಗಾಣದ ಸೆರಿಲಿಂಗಪಲ್ಲಿ ಕ್ಷೇತ್ರಗಳ ಮತದಾರರ ಪಟ್ಟಿಯಲ್ಲೂ ಹೆಸರು ಹೊಂದಿದ್ದಾರೆಂಬ ಆರೋಪ ವಿತ್ತು.

2019ರ ಲೋಕಸಭೆ ಚುನಾವಣೆ ಸಂದರ್ಭದಲ್ಲಿ ಈ ಬಗ್ಗೆ ಸಾರ್ವಜನಿಕ ವಾಗಿ ಮತ್ತು ಚುನಾವಣಾ ಆಯೋಗಕ್ಕೆ ದೂರುಗಳು ಸಲ್ಲಿಕೆಯಾಗಿದ್ದವು. ಈ ಪ್ರಕರಣಕ್ಕೆ ಸಂಬಂಧಿಸಿದಂತೆ ನ್ಯಾಯಾಲಯದ ವಿಚಾರಣೆಗೆ ಗೈರುಹಾಜರಾಗಿದ್ದರಿಂದ ಬೆಂಗಳೂರು ನ್ಯಾಯಾಲಯವು ಕಳೆದ ಜೂನ್ ತಿಂಗಳಲ್ಲಿ ಅವರ ವಿರುದ್ಧ ಜಾಮೀನು ರಹಿತ ವಾರೆಂಟ್ ಕೂಡ ಹೊರಡಿಸಿತ್ತು. ಬಳಿಕ ಅವರು 2026ರ ಜುಲೈ 10ರಂದು ಷರತ್ತುಬದ್ಧ ಜಾಮೀನು ಪಡೆದುಕೊಂಡಿದ್ದರು.

ಚುನಾವಣಾ ಆಯೋಗವು ಈಗ ಕೈಗೊಂಡಿರುವ ಕಟ್ಟುನಿಟ್ಟಿನ ಎಸ್‌ಐಆರ್ ಪರಿಷ್ಕರಣೆ ವೇಳೆ ಒಂದಕ್ಕಿಂತ ಹೆಚ್ಚು ಕಡೆ ಮತದಾನದ ಹಕ್ಕು ಹಾಗೂ ಇತರೆ ವಿಳಾಸಗಳ ದೋಷಗಳು ಮುನ್ನೆಲೆಗೆ ಬಂದ ಹಿನ್ನೆಲೆಯಲ್ಲಿ ಈ ಕ್ರಮ ಕೈಗೊಳ್ಳಲಾಗಿದೆ ಎನ್ನಲಾಗಿದೆ. ಕಾನೂನು ಹೋರಾಟ ಹಾಗೂ ಎಸ್‌ಐಆರ್ ಪರಿಶೀಲನೆಯ ಬಿಸಿ ಈಗ ಸೆಲೆಬ್ರಿಟಿಗಳಿಗೂ ತಟ್ಟಿರುವುದು ರಾಜ್ಯ ರಾಜಕೀಯ ಹಾಗೂ ಸಾರ್ವಜನಿಕ ವಲಯದಲ್ಲಿ ವ್ಯಾಪಕ ಚರ್ಚೆಗೆ ಗ್ರಾಸವಾಗಿದೆ.

# ಸಿಡಬ್ಲ್ಯುಆರ್‌ಸಿ ಸೂಚನೆ ನಂತರ ಕಬಿನಿ ಜಲಾಶಯದಿಂದ 16 ಟಿಎಂಸಿ ನೀರು ಹರಿದಿದೆ

**ಬೆಂಗಳೂರು, ಆ.11:** ತಮಿಳು ನಾಡಿಗೆ ನಿತ್ಯ 12 ಸಾವಿರ ಕ್ಯೂಸೆಕ್ ನೀರು ಹರಿಸಬೇಕು ಎಂದು ಕಾವೇರಿ ನೀರು ಮೇಲುಸ್ತುವಾರಿ ಸಮಿತಿ ಸೂಚನೆ ನೀಡಿದ್ದು, ಇದರ ನಡುವೆ ಆಗಸ್ಟ್ ತಿಂಗಳಿನಲ್ಲಿ ಮೈಸೂರು ಜಿಲ್ಲೆಯ ಕಬಿನಿ ಜಲಾಶಯದಿಂದ ಹೆಚ್ಚಿನ ನೀರು ಹರಿದು ಹೋಗಿದೆ.



ಸುಮಾರು 15 ದಿನದವರೆಗೂ ಸತತ 3500 ಕ್ಯೂಸೆಕ್‌ನಂತೆ 4.50 ಟಿಎಂಸಿ ನೀರು ಹರಿಸಬೇಕು ಎಂದು ಸಮಿತಿ ಕಳೆದ ತಿಂಗಳು ತಿಳಿಸಿತ್ತು. ಅದರಂತೆ ಕಬಿನಿ ಜಲಾಶಯದಿಂದ ನಿರಂತರವಾಗಿ ನೀರು ಹರಿಸಲಾಗಿದೆ. ಕಬಿನಿ ಜಲಾಶಯದ ಹಿರಿಯ ಇಂಜಿನಿಯರ್ ನೀಡಿರುವ ಮಾಹಿತಿ ಪ್ರಕಾರ, ಸಮಿತಿ ಹಿಂದೆ ಸೂಚನೆ ನೀಡಿದ ನಂತರವೇ 16 ಟಿಎಂಸಿ ನೀರು ಕಬಿನಿ ಜಲಾಶಯದಿಂದ ಹರಿದು ಹೋಗಿದೆ.

ಅದರಲ್ಲೂ ಆಗಸ್ಟ್ ತಿಂಗಳ 10 ದಿನದಲ್ಲೇ ಅಂದಾಜು 13 ಟಿಎಂಸಿ ನೀರು ಹರಿಬಿಡಲಾಗಿದೆ. ಕೆಲವೊಂದು ದಿನ 11 ಸಾವಿರ ಕ್ಯೂಸೆಕ್ ನೀರು ಹೊರ ಹೋಗಿದೆ. ಕೆಲವು ದಿನ ಒಳಹರಿವು ಅಧಿಕವಾಗಿದ್ದಾಗ 27 ಸಾವಿರ ಕ್ಯೂಸೆಕ್ ನೀರು ನದಿ ಮೂಲಕ ಹರಿದು ಹೋಗಿದೆ. ಸದ್ಯ 10 ಸಾವಿರ ಕ್ಯೂಸೆಕ್ ನೀರು ಜಲಾಶಯಕ್ಕೆಹರಿದು ಬರುತ್ತಿದ್ದು, ಅಷ್ಟೇ ಪ್ರಮಾಣದಲ್ಲಿ ಹರಿಸಲಾಗುತ್ತಿದೆ ಎಂದು ಮಾಹಿತಿ ನೀಡಿದ್ದಾರೆ.

ಈ ತಿಂಗಳ ಅಂತ್ಯದವರೆಗೆ ಕಬಿನಿ ನದಿ ಪಾತ್ರದ ಪ್ರದೇಶಗಳಲ್ಲಿ ಮಳೆಯಾಗುವ ಮುನ್ಸೂಚನೆಯಿದೆ. ಅದರಲ್ಲೂ ಕೇರಳದ ವಯನಾಡು ಭಾಗದಲ್ಲಿ ಮಳೆಯಾಗಬಹುದು ಎಂದು ತಿಳಿಸಲಾಗಿದೆ. ಓಣಂವರೆಗೂ ಮಳೆಯಾಗುವ ಸೂಚನೆ ಇರುವುದ ರಿಂದ ಕಬಿನಿ ಜಲಾಶಯಕ್ಕೆ ಇನ್ನೂ ಕೆಲವು ದಿನ ಒಳಹರಿವು ಇರಲಿದೆ. ಜಲಾಶಯ ಭರ್ತಿ ಯಾಗಿರುವುದರಿಂದ ಸುರಕ್ಷತೆ ದೃಷ್ಟಿಯಿಂದ ಹೆಚ್ಚಿನ ನೀರನ್ನು ಹೊರ ಹರಿಸಬೇಕಾಗುತ್ತದೆ. ಕಬಿನಿ ಜಲಾಶಯದಿಂದ ಹೊರ ಬಿಡುತ್ತಿರುವ ನೀರಿನ ಪ್ರಮಾಣದಲ್ಲಿ ನಿತ್ಯ 2 ಸಾವಿರ ಕ್ಯೂಸೆಕ್ ನೀರನ್ನು ಕೆರೆಗಳನ್ನು ತುಂಬಿಸಲು ಹಾಗೂ ಕುಡಿಯುವ ನೀರಿಗಾಗಿ ಬಳಸಲಾಗುತ್ತಿದೆ. ಉಳಿಕೆ ನೀರು ನದಿ ಮೂಲಕ ತಮಿಳುನಾಡಿಗೆ ಹೋಗಿರಬಹುದು ಎನ್ನುತ್ತಾರೆ

ಅಧಿಕಾರಿಗ'ಳ'. ಮೊದಲಿನಿಂದಲೂ ತಮಿಳುನಾಡು ವಿವಾದ ಏರ್ಪಟ್ಟಾಗ ಕಬಿನಿ ಜಲಾಶಯದಿಂದಲೇ ಹೆಚ್ಚಿನ ನೀರು ಹರಿಸಿಕೊಂಡು ಬರಲಾಗುತ್ತಿದೆ. ಕೆಲವು ವರ್ಷಗಳಲ್ಲಿ ಉತ್ತಮ ಮಳೆಯಾದಾಗ ಹೆಚ್ಚಿನ ನೀರು ಜಲಾಶಯದಿಂದ ಹರಿದು ಹೋಗಿರುವ ಉದಾಹರಣೆಯೂ ಇದೆ. ಈ ವರ್ಷ ಜುಲೈ.15ರವರೆಗೂ ಜಲಾಶಯಕ್ಕೆ ಕಡಿಮೆ ಒಳಹರಿವು ಇತ್ತು. ಆನಂತರ ಕೇರಳದಲ್ಲಿ ಮಳೆ ಹೆಚ್ಚಾಗಿ ಒಳಹರಿವು ಹೆಚ್ಚಿತ್ತು. ಈಗಲೂ ನೀರಿನ ಒಳಹರಿವು ಜಲಾಶಯಕ್ಕೆ ಉತ್ತಮವಾಗಿದೆ. ಜಲಾಶಯ ತುಂಬಿರುವ ಕಾರಣ ದಿಂದ ಹೆಚ್ಚುವರಿ ನೀರು ನದಿ ಮೂಲಕ ಹರಿದು ಹೋಗುತ್ತಿದೆ.

## ರಾಜ್ಯದಲ್ಲಿ ವಿ ಬಿಜಿ ರಾಮ್ ಜಿ ಯೋಜನೆಗೆ ನೀರಸ ಪ್ರತಿಕ್ರಿಯೆ

# ಜಾರಿಯಾದ ಮೊದಲ ತಿಂಗಳಲ್ಲೇ ಶೇ.78.77ರಷ್ಟು ಕಡಿಮೆ ಮಾನವ ದಿನಗಳ ಸೃಜನೆ

**ಬೆಂಗಳೂರು, ಆ.11:** ಉದ್ಯೋಗ ಖಾತ್ರಿ ಯೋಜನೆಯ ಸ್ವರೂಪ ಬದಲಿಸಿ ಅನುಷ್ಠಾನಗೊಳಿಸಲಾಗಿರುವ ವಿಬಿಜಿ ರಾಮ್‌ಜಿ ಯೋಜನೆ ರಾಜ್ಯದಲ್ಲಿ ಜಾರಿಯಾದ ಮೊದಲ ತಿಂಗಳಲ್ಲೇ ಕಳೆದ ವರ್ಷಕ್ಕಿಂತ ಶೇ.78.77ರಷ್ಟು ಮಾನವ ದಿನಗಳ ಸೃಜನೆಯಾಗಿದೆ. ಆ ಮೂಲಕ ಯೋಜನೆಗೆ ಭಾರಿ ಹಿನ್ನಡೆ ಯುಂಟಾಗಿದೆ.

ಜು.1ರಿಂದ ವಿಬಿಜಿ ರಾಮ್‌ಜಿ ಕಾಯ್ದೆ ದೇಶದೆಲ್ಲೆಡೆ ಜಾರಿಯಾಗಿದೆ. ನೂತನ ಕಾಯ್ದೆಯಂತೆ ನರೇಗಾ ಯೋಜನೆಗಿಂತ ಜನರಿಗೆ ಹೆಚ್ಚಿನ ಅನುಕೂಲವಾಗಲಿದೆ ಎಂದು ಕೇಂದ್ರ ಸರ್ಕಾರ ತಿಳಿಸಿತ್ತು. ಆದರೆ, ವಿಬಿ ಜಿ ರಾಮ್ ಜಿ ಜಾರಿಯಾದ ಮೊದಲ ತಿಂಗಳಲ್ಲಿಯೇ ಮಾನವ ದಿನಗಳ ಸೃಜನೆಯಲ್ಲಿ ಭಾರೀ ಕಡಿತವಾಗಿದೆ. ಕಳೆದ ವರ್ಷದ ಜುಲೈಗೆ ಹೋಲಿಸಿದರೆ ಈ ವರ್ಷ ಕೆಲಸ ಸೃಷ್ಟಿ ಪ್ರಮಾಣ ಕಡಿಮೆಯಾಗಿದೆ.

ಕೇಂದ್ರ ಸರ್ಕಾರ ಗುರುತಿಸಿರುವಂತೆ ರಾಜ್ಯದ 5,958 ಗ್ರಾಮಗಳ 4,991 ಗ್ರಾಪಂಗಳಲ್ಲಿ ಒಟ್ಟು 11,555 ಕೆಲಸಗಳ ಅನುಷ್ಠಾನ ಮಾಡಲಾಗುತ್ತಿದೆ. ಅದರ ಮೂಲಕ ಜು.1 ರಿಂದ 31ರವರೆಗೆ 13.06 ಲಕ್ಷ ಮಾನವ ದಿನಗಳು ಸೃಷ್ಟಿಯಾಗಿವೆ. ಅದೇ 2025ರ ಜುಲೈ ತಿಂಗಳಲ್ಲಿ ಮನ್ರೇಗಾ ಯೋಜನೆ

**ವಿಬಿ-ಜಿ ರಾಮ್ ಜಿ ಯೋಜನೆ ಜಾರಿ**

ಅಡಿ ಜುಲೈ ತಿಂಗಳಲ್ಲಿ 61.49 ಲಕ್ಷ ಮಾನವ ದಿನಗಳನ್ನು ಸೃಷ್ಟಿಸಲಾಗಿತ್ತು. ಒಟ್ಟಾರೆ ಕಳೆದ ವರ್ಷದ ಜುಲೈಗೆ ಹೋಲಿಸಿದರೆ ಈ ವರ್ಷದ ಜುಲೈನಲ್ಲಿ ಶೇ. 78.77ರಷ್ಟು ಕಡಿಮೆ ಮಾನವ ದಿನಗಳು ಸೃಜನೆಯಾಗಿದೆ.

ಸರ್ಕಾರ ಹೊಸದಾಗಿ ಆರಂಭಿಸಿದ ವಿಬಿ ಜಿ ರಾಮ್ ಜಿ(ಗ್ರಾಮೀಣ ಉದ್ಯೋಗ) ಕಾರ್ಯಕ್ರಮದಡಿ ಮೊದಲ ತಿಂಗಳಲ್ಲೇ ದೇಶದಲ್ಲಿ ಅರ್ಧದಷ್ಟು ಉದ್ಯೋಗ ಸೃಷ್ಟಿ ಕುಸಿದಿದ್ದು, ಜುಲೈನಲ್ಲಿ 7.67 ಕೋಟಿಗೆ ಇಳಿದಿರುವ ಮಾನವ ದಿನಗಳ ಕೆಲಸ ಕಳೆದ ವರ್ಷ ಇದೇ ತಿಂಗಳಲ್ಲಿ 15.33 ಕೋಟಿಯಷ್ಟಿತ್ತು. ಅಧಿಕೃತ ಅಂಕಿಅಂಶಗಳನ್ನು ಗಮನಿಸಿ ದರೆ ಉದ್ಯೋಗ ಖಾತರಿಯಾಗ ಬೇಕಾಗಿದ್ದ ವಿಬಿಜಿ ರಾಮ್‌ಜಿ ಗ್ರಾಮೀಣ ಭಾರತದ ಬಡವರ ಪಾಲಿಗೆ ಉರುಳಾಗಿ ಪರಿಣಮಿಸಿದೆ. ಕೇಂದ್ರ ಸರ್ಕಾರ ವಿಕಸಿತ್ ಭಾರತ್–ಗ್ಯಾರಂಟಿ ಫಾರ್ ರೋಜ್‌ಗಾರ್ ಮತ್ತು ಅಜೀವಿಕಾ ಮಿಷನ್(ಗ್ರಾಮೀಣ)ಯನ್ನು ಅನುಷ್ಠಾನಗೊಳಿಸಿದ ಕೆಲವೇ ವಾರಗಳಲ್ಲಿ ಶೇ.49.94ರಷ್ಟು ಉದ್ಯೋಗ ಕುಸಿತವಾಗಿರುವುದು ಕಂಡುಬಂದಿದೆ.

ಕಾನೂನಿನಲ್ಲಿ ಬರೆದಿರುವ ಗರಿಷ್ಠ ದಿನಗಳ ಸಂಖ್ಯೆಯಿಂದ ಮಾತ್ರವಲ್ಲ; ಎಷ್ಟು ಕುಟುಂಬಗಳು ಕೆಲಸ ಕೇಳಿದವು, ಅವರಲ್ಲಿ ಎಷ್ಟು ಕುಟುಂಬಗಳಿಗೆ ಕೆಲಸ ಸಿಕ್ಕಿತು, ಸರಾಸರಿ ಎಷ್ಟು ದಿನ ಕೆಲಸ ಸಿಕ್ಕಿತು, ಎಷ್ಟು ಮಾನವ ದಿನಗಳು ಸೃಷ್ಟಿಯಾದವು, ಕೆಲಸ ಕೇಳಿದ ನಂತರ ಎಷ್ಟು ದಿನಗಳಲ್ಲಿ ಉದ್ಯೋಗ ನೀಡಲಾಯಿತು, ಕೂಲಿ ಎಷ್ಟು ದಿನಗಳಲ್ಲಿ ಪಾವತಿಸಲಾಯಿತು ಮತ್ತು ಕೆಲಸ ಸಿಗದವರಿಗೆ ನಿರುದ್ಯೋಗ ಭತ್ಯೆ ದೊರೆಯಿತೇ ಎಂಬ ನೆಲಮಟ್ಟದ ಸೂಚಕಗಳಿಂದ ಕಾಯ್ದೆಯ ಯಶಸ್ಸು ಸಾಬೀತಾಗುತ್ತದೆ.

ಇದೇ ಕಾರಣಕ್ಕೆ 2026ರ ಜುಲೈ ಅಂಕಿಅಂಶಗಳು ಮಹತ್ವ ಪಡೆಯುತ್ತವೆ. ಒಂದೆಡೆ ಉದ್ಯೋಗ ಖಾತರಿಯನ್ನು 100 ದಿನಗಳಿಂದ 125 ದಿನಗಳಿಗೆ ಹೆಚ್ಚಿಸಲಾಗಿದೆ ಎಂಬ ಘೋಷಣೆ ಇದ್ದರೆ, ಮತ್ತೊಂದೆಡೆ ಮೊದಲ ತಿಂಗಳ ಉದ್ಯೋಗ ವರ್ಷದಿಂದ ವರ್ಷಕ್ಕೆ 15.33 ಕೋಟಿಯಿಂದ 7.67 ಕೋಟಿಗೆ ಕುಸಿದಿರುವ ಮಾಪನವಿದೆ. ಅಂದರೆ ಕಾಗದದ ಮೇಲೆ ಶೇ.25ರಷ್ಟು ಹೆಚ್ಚು ದಿನಗಳ ಭರವಸೆ ಇದ್ದರೂ, ಹೋಲಿಕೆಯ ತಿಂಗಳಲ್ಲಿ ವಾಸ್ತವವಾಗಿ ಸೃಷ್ಟಿಯಾದ ಮಾನವ ದಿನಗಳು ಸುಮಾರು ಶೇ.50ರಷ್ಟು ಕುಸಿದಿವೆ. ಈ ವಿರೋಧಾಭಾಸವೇ ಈಗ ಉತ್ತರಿಸಬೇಕಾದ ಮುಖ್ಯಪ್ರಶ್ನೆಯಾಗಿದೆ.

**ಗ್ರಾಮೀಣ ಭಾಗದಲ್ಲಿ ಉದ್ಯೋಗ ಸೃಷ್ಟಿಗೆ ವಿ ಬಿಜಿ ರಾಮ್ ಜಿ ಯೋಜನೆಯನ್ನು ಸಮರ್ಪಕ ವಾಗಿ ಬಳಸಿಕೊಳ್ಳಬೇಕು. ಕೆಲವು ಜಿಲ್ಲೆಗಳಲ್ಲಿ ಉದ್ಯೋಗ ಸೃಷ್ಟಿಯಾಗದೆ, ಜನರು ಬೇರೆ ಕಡೆಗೆ ವಲಸೆ ಹೋಗುತ್ತಿರುವುದು ಕಂಡುಬರುತ್ತಿದೆ. ಇದನ್ನು ಸರ್ಕಾರ ಗಂಭೀರವಾಗಿ ಪರಿಗಣಿಸಿದ್ದು, ಉದ್ಯೋಗ ಸೃಷ್ಟಿಸದ ಪಿಡಿಒಗಳ ವಿರುದ್ಧ ಕಠಿಣಕ್ರಮ ಕೈಗೊಳ್ಳುತ್ತೇವೆ.–ಡಿ.ಕೆ. ಶಿವಕುಮಾರ್, ಮುಖ್ಯಮಂತ್ರಿ.**



## ಕರ್ನಾಟಕದಂತಹ ರಾಜ್ಯಕ್ಕೆ ಈ ಪ್ರಶ್ನೆ ಇನ್ನಷ್ಟು ಮುಖ್ಯ

**ರಾಜ್ಯದ ಅನೇಕ ಜಿಲ್ಲೆಗಳ ಕೃಷಿ ಇನ್ನೂ ಮಳೆಯ ಮೇಲೆ ಅವಲಂಬಿತವಾಗಿದೆ. ಉತ್ತರ ಕರ್ನಾಟಕದ ಬರಪೀಡಿತ ಪ್ರದೇಶಗಳಲ್ಲಿ ಮಳೆ ವಿಫಲವಾದರೆ ರೈತನಷ್ಟೇ ಅಲ್ಲದೆ ಕೃಷಿ ಕಾರ್ಮಿಕ, ಸಣ್ಣ ವ್ಯಾಪಾರಿ, ಗ್ರಾಮೀಣ ಮಹಿಳೆ, ಕೂಲಿ ಕುಟುಂಬ ಎಲ್ಲರೂ ಒಂದೇ ಆರ್ಥಿಕ ಆಘಾತಕ್ಕೆ ಸಿಲುಕುತ್ತಾರೆ. ಇಂತಹ ಪ್ರದೇಶಗಳಲ್ಲಿ ಉದ್ಯೋಗ ಖಾತರಿ ಯೋಜನೆ ಕೆರೆ ಹೂಳೆತ್ತುವುದು, ಜಲ ಸಂರಕ್ಷಣೆ, ಮಣ್ಣಿನ ಸಂರಕ್ಷಣೆ, ಕೃಷಿ ಹೊಂಡ, ನೀರು ಹರಿವಿನ ಕಾಲುವೆ ಮುಂತಾದ ಕೆಲಸಗಳನ್ನು ಕೈಗೊಳ್ಳುವುದರಿಂದ ಎರಡು ರೀತಿಯ ಪ್ರಯೋಜನವಾಗುತ್ತದೆ. ತಕ್ಷಣಕ್ಕೆ ಕಾರ್ಮಿಕನ ಕೈಗೆ ಕೂಲಿ ಸಿಗುತ್ತದೆ; ದೀರ್ಘಾವಧಿಯಲ್ಲಿ ಬರವನ್ನು ಎದುರಿಸಲು ಗ್ರಾಮಕ್ಕೆ ಅಗತ್ಯವಾದ ನೀರು ಮತ್ತು ಭೂಸಂಪನ್ಮೂಲ ಆಸ್ತಿಗಳು ನಿರ್ಮಾಣವಾಗುತ್ತವೆ. ಹೀಗಾಗಿ ಉದ್ಯೋಗ ಖಾತರಿಯನ್ನು ದುರ್ಬಲಗೊಳಿಸುವುದು ಕೇವಲ ಇಂದಿನ ಕಾರ್ಮಿಕನ ಕೂಲಿಯನ್ನು ಕಡಿಮೆ ಮಾಡುವ ಪ್ರಶ್ನೆಯಲ್ಲ; ಭವಿಷ್ಯದ ಬರ ನಿರ್ವಹಣೆಯ ಮೇಲೂ ಪರಿಣಾಮ ಬೀರುವ ಸಾಧ್ಯತೆ ಇದೆ.**

# ನೂತನ ಜವಳಿ ನೀತಿಯಲ್ಲಿ ರಫ್ತು ಉತ್ತೇಜನಕ್ಕೆ ವಿಶೇಷ ಒತ್ತು: ಜವಳಿ ಆಯುಕ್ತ ಎ.ಬಿ. ಬಸವರಾಜ್

**ಬೆಂಗಳೂರು, ಆ.11:** ರಾಜ್ಯದಲ್ಲಿ ಸದ್ಯದಲ್ಲೇ ಜಾರಿಗೊಳ್ಳಲಿರುವ ನೂತನ ಕರ್ನಾಟಕ ಜವಳಿ ಮತ್ತು ಉಡುಪು ನೀತಿಯಲ್ಲಿ ಕೈಮಗ್ಗ ಮತ್ತು ಜವಳಿ ಕ್ಷೇತ್ರದ ರಫ್ತು ಉತ್ತೇಜನಕ್ಕೆ ವಿಶೇಷ ಆದ್ಯತೆ ನೀಡಲಾಗಿದೆ ಎಂದು ಜವಳಿ ಅಭಿವೃದ್ಧಿ ಆಯುಕ್ತ ಎ.ಬಿ. ಬಸವರಾಜ್ ತಿಳಿಸಿದ್ದಾರೆ.



ರಾಜ್ಯದ ಕೈಮಗ್ಗ ಮತ್ತು ಜವಳಿ ಉತ್ಪನ್ನಗಳಿಗೆ ದೇಶೀಯ ಮಾರುಕಟ್ಟೆ ಯೊಂದಿಗೆ ಜಾಗತಿಕ ಮಾರುಕಟ್ಟೆಯಲ್ಲೂ ಹೆಚ್ಚಿನ ಅವಕಾಶಗಳನ್ನು ಕಲ್ಪಿಸುವ ನಿಟ್ಟಿನಲ್ಲಿ, ಇಲಾಖೆಯ ಅಧಿಕಾರಿಗಳು ರಫ್ತು ಪ್ರಕ್ರಿಯೆಗಳು, ಮಾರುಕಟ್ಟೆ ಅವಕಾಶಗಳು ಹಾಗೂ ಅಂತರರಾಷ್ಟ್ರೀಯ ವ್ಯಾಪಾರದ ಅಗತ್ಯತೆಗಳ ಕುರಿತು ಸಮಗ್ರ ಜ್ಞಾನ ಹೊಂದುವುದು ಅಗತ್ಯ .ಬೆಂಗಳೂರಿನ ವಿಶ್ವೇಶ್ವರಯ್ಯ ಟ್ರೇಡ್ ಪ್ರಮೋಷನ್ ಸೆಂಟರ್‌ನಲ್ಲಿ ಆಗಸ್ಟ್ 10ರಿಂದ 12ರವರೆಗೆ ಆಯೋ ಜಿಸಲಾಗಿರುವ ಇಲಾಖೆಯ ಅಧಿಕಾರಿ ಗಳ ಮೂರು ದಿನಗಳ ರಫ್ತುಮುಖಿ ತರಬೇತಿ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿ, ರಾಜ್ಯದ ಕೈಮಗ್ಗ ಮತ್ತು ಜವಳಿ ಉತ್ಪನ್ನಗಳಿಗೆ ಜಾಗತಿಕ ಮಾರುಕಟ್ಟೆಯಲ್ಲಿ ಹೆಚ್ಚಿನ ಅವಕಾಶ ಗಳಿದ್ದು, ಆ ಅವಕಾಶಗಳನ್ನು ಬಳಸಿಕೊಳ್ಳಲು ಅಗತ್ಯವಾದ ರಫ್ತು ಪ್ರಕ್ರಿಯೆಗಳು, ಮಾರುಕಟ್ಟೆ ಪ್ರವೇಶ, ಅಂತರರಾಷ್ಟ್ರೀಯ ಮಾರುಕಟ್ಟೆಯ ಅವಶ್ಯಕತೆಗಳು ಹಾಗೂ ರಫ್ತು ವ್ಯವಹಾರದ ಕುರಿತು ಇಲಾಖೆಯ ಅಧಿಕಾರಿಗಳ ಸಾಮರ್ಥ್ಯವನ್ನು ಹೆಚ್ಚಿಸುವುದು ತರಬೇತಿಯ ಪ್ರಮುಖ ಉದ್ದೇಶವಾಗಿದೆ ಎಂದು ತಿಳಿಸಿದ್ದಾರೆ.

ಅಧಿಕಾರಿಗಳ ಜ್ಞಾನ ನೇಕಾರರಿಗೆ ತಲುಪಬೇಕು–ತರಬೇತಿಯ ಮೂಲಕ ಅಧಿಕಾರಿಗಳು ಪಡೆದುಕೊಳ್ಳುವ ಜ್ಞಾನ ಕೇವಲ ಇಲಾಖೆಯ ಮಟ್ಟಕ್ಕೆ ಸೀಮಿತವಾಗದೆ, ಕ್ಷೇತ್ರದಲ್ಲಿ ಕಾರ್ಯ ನಿರ್ವಹಿಸುತ್ತಿರುವ ನೇಕಾರರು, ಕುಶಲಕರ್ಮಿಗಳು ಹಾಗೂ ಜವಳಿ ಉದ್ಯಮಿಗಳಿಗೆ ತಲುಪಬೇಕು ಎಂದು ಆಯುಕ್ತರು ಕರೆ ನೀಡಿದರು.

ರಫ್ತು ಮಾರುಕಟ್ಟೆಯ ಅವಕಾಶ ಗಳು, ಅಗತ್ಯ ಮಾನದಂಡಗಳು ಮತ್ತು ಪ್ರಕ್ರಿಯೆಗಳ ಕುರಿತು ನೇಕಾರರು ಹಾಗೂ ಉದ್ಯಮಿಗಳಿಗೆ ಸೂಕ್ತ ಮಾರ್ಗದರ್ಶನ ದೊರೆತರೆ, ಕರ್ನಾಟಕದ ಕೈಮಗ್ಗ ಮತ್ತು ಜವಳಿ ಉತ್ಪನ್ನ ಗಳ ರಫ್ತು ಪ್ರಮಾಣವನ್ನು ಮತ್ತಷ್ಟು ಹೆಚ್ಚಿಸಲು ಸಾಧ್ಯವಾಗಲಿದೆ. "ನಮ್ಮ ರಾಜ್ಯದ ಕೈಮಗ್ಗ–ಜವಳಿ ಉತ್ಪನ್ನಗಳಿಗೆ ಇರುವ ವಿಶಿಷ್ಟ ಗುಣಮಟ್ಟ ಮತ್ತು ಪರಂಪರೆಯನ್ನು ಜಾಗತಿಕ ಮಾರುಕಟ್ಟೆಯ ಬೇಡಿಕೆಗಳೊಂದಿಗೆ ಸಂಪರ್ಕಿಸುವುದು ಅಗತ್ಯ. ಇಲಾಖೆಯ ಅಧಿಕಾರಿಗಳು ರಫ್ತು ಕ್ಷೇತ್ರದ ಜ್ಞಾನವನ್ನು ಪಡೆದು ಅದನ್ನು ನೇಕಾರರು ಮತ್ತು ಉದ್ಯಮಿ ಗಳಿಗೆ ತಲುಪಿಸುವ ಮೂಲಕ ರಫ್ತು ವಿಸ್ತರಣೆಗೆ ಸ'ೀತ'ುವ'ೆಯ'ುಾಗಿ ಕಾರ್ಯನಿರ್ವಹಿಸಬೇಕು," ಎಂದರು.

# ವಿಧಾನಮಂಡಲ ಅಧಿವೇಶನ ಹಿನ್ನೆಲೆಯಲ್ಲಿ ವಿಧಾನಸೌಧದ ಸುತ್ತ ನಿಷೇಧಾಜ್ಞೆ: ಪೊಲೀಸ್ ಆಯುಕ್ತ ಸೀಮಂತ್‌ಕುಮಾರ್ ಸಿಂಗ್

**ಬೆಂಗಳೂರು, ಆ.11:** ವಿಧಾನಸಭೆ ಮತ್ತು ವಿಧಾನ ಪರಿಷತ್ ಅಧಿವೇಶನ ಆ.13 ರಿಂದ 27ರವರೆಗೆ ನಡೆಯಲಿರುವ ಹಿನ್ನಲೆಯಲ್ಲಿ ವಿಧಾನಸೌಧದ ಸುತ್ತಲು 2 ಕಿ.ಮೀ ವ್ಯಾಪ್ತಿಯಲ್ಲಿ ನಿಷೇಧಾಜ್ಞೆ ಜಾರಿ ಮಾಡಿ ನಗರ ಪೊಲೀಸ್ ಆಯುಕ್ತ ಸೀಮಂತ್‌ಕುಮಾರ್ ಸಿಂಗ್ ಆದೇಶಿಸಿದ್ದಾರೆ.



ಈ ಸಂದರ್ಭದಲ್ಲಿ ವಿವಿಧ ರಾಜಕೀಯ ಪಕ್ಷಗಳು ಮತ್ತು ವಿವಿಧ ಸಂಘಟನೆಗಳು ತಮ ಬೇಡಿಕೆಗಳಿಗೆ ಒತ್ತಾಯಿಸಿ ಪ್ರತಿಭಟನೆ, ಧರಣಿ, ವಿಧಾನಸೌಧ ಮುತ್ತಿಗೆ ಕಾರ್ಯಕ್ರಮಗಳನ್ನು ಹಮಿಕೊಳ್ಳುವ ಸಾಧ್ಯತೆ ಇರುತ್ತದೆ.

ಹಾಗಾಗಿ ಅಧಿವೇಶನ ಕಾರ್ಯ ಕಲಾಪಗಳಿಗೆ ಅಡಚಣೆ ಉಂಟಾಗುವುದಲ್ಲದೇ ಸಾರ್ವಜನಿಕ ನೆಮದಿಗೆ ಭಂಗ ಹಾಗೂ ಸುಮಗ ಸಂಚಾರಕ್ಕೆ ತೊಂದರೆ ಉಂಟಾಗುವ ಸಾಧ್ಯತೆ ಇರುವುದರಿಂದ ವಿಧಾನ ಸೌಧದ ಸುತ್ತ ನಿಷೇಧಾಜ್ಞೆ ಹೊರಡಿಸಲಾಗಿದೆ. ಆ.15 ರಂದು ವಿಧಾನ ಸೌಧದಲ್ಲಿ ಫ್ರೀಡಂ ಹಬ್ಬದ ಸಂಭ್ರಮಾಚರಣೆ ಕಾರ್ಯಕ್ರಮ ಹೊರತುಪಡಿಸಿ ನಿಷೇಧಾಜ್ಞೆ ವಿಧಿಸಲಾಗಿದೆ ಎಂದು ಅವರು ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಈ ಸಂದರ್ಭದಲ್ಲಿ ವಿವಿಧ ರಾಜಕೀಯ ಪಕ್ಷಗಳು ಮತ್ತು ವಿವಿಧ ಸಂಘಟನೆಗಳು ತಮ ಬೇಡಿಕೆಗಳಿಗೆ ಒತ್ತಾಯಿಸಿ ಪ್ರತಿಭಟನೆ, ಧರಣಿ, ವಿಧಾನಸೌಧ ಮುತ್ತಿಗೆ ಕಾರ್ಯಕ್ರಮಗಳನ್ನು ಹಮಿಕೊಳ್ಳುವ ಸಾಧ್ಯತೆ ಇರುತ್ತದೆ.

# ಒಂದೇ ದಿನ 11.19 ಲಕ್ಷ ಜನರ ಪ್ರಯಾಣ: ಹೊಸ ದಾಖಲೆ ಸೃಷ್ಟಿಸಿದ ಬೆಂಗಳೂರು ಮೆಟ್ರೋ



ಬೆಂಗಳೂರು, ಆ.11: ಒಂದೇ ದಿನ 11.19 ಲಕ್ಷ ಜನ ಮೆಟ್ರೋದಲ್ಲಿ ಪ್ರಯಾಣಿಸುವ ಮೂಲಕ ಹಳೆಯ ದಾಖಲೆ ಉಡೀಸ್ ಮಾಡಿ, 'ನಮ್ಮ ಮೆಟ್ರೋ' ಇತಿಹಾಸದಲ್ಲಿ ಹೊಸ ದಾಖಲೆ ಸೃಷ್ಟಿಯಾಗಿದೆ.

ಆ.10ರಂದು ಸೋಮವಾರ ಒಂದೇ ದಿನ ನಮ್ಮ ಮೆಟ್ರೋದಲ್ಲಿ 11,19,815 ಜನರು ಸಂಚರಿಸಿದ್ದಾರೆ. ಈ ಮೂಲಕ ಹಳೆಯ ರೆಕಾರ್ಡ್ ಉಡೀಸ್ ಮಾಡಿದ್ದು, ಅತಿ ಹೆಚ್ಚಿನ ರೈಡರ್ ಶಿಪ್ ದಾಖಲೆ ಬರೆದಿದೆ.

ಬೆಂಗಳೂರು ಮೆಟ್ರೋ ರೈಲು ನಿಗಮ ಅಧಿಕಾರಿಗಳ ಅಧಿಕೃತ ಮಾಹಿತಿಯ ಪ್ರಕಾರ, ನಿನ್ನೆ ಒಂದೇ ದಿನ 96.1 ಕಿಲೋಮೀಟರ್ ವ್ಯಾಪ್ತಿಯ ಮೆಟ್ರೋ ಜಾಲದ ಮೂರೂ ಮಾರ್ಗಗಳಲ್ಲಿ ಬರೋಬ್ಬರಿ 11,19, 815 ಮಂದಿ ಪ್ರಯಾಣ ಮಾಡಿದ್ದಾರೆ. ಕಳೆದ 5 ತಿಂಗಳ ಹಿಂದಷ್ಟೇ ಅಂದರೆ ಯುಗಾದಿ ಸಂದರ್ಭದಲ್ಲಿ 15 ವರ್ಷಗಳ 'ನಮ್ಮ ಮೆಟ್ರೋ' ಇತಿಹಾಸದಲ್ಲಿ 10.73 ಲಕ್ಷ ಜನರು ಪ್ರಯಾಣಿಸಿದ್ದು, ದಾಖಲೆಯಾಗಿತ್ತು. ಇದೀಗ ಈ ದಾಖಲೆ ಮುರಿದು ಹೊಸ ದಾಖಲೆ ಸೃಷ್ಟಿಯಾಗಿದೆ.



ಕಳಸಾ-ಬಂಡೂರಿ ಯೋಜನೆ ಅನುಷ್ಠಾನಕ್ಕೆ ಆಗ್ರಹಿಸಿ ಮಂಗಳವಾರ ಹುಬ್ಬಳ್ಳಿಯ ಕೆ.ಸಿ.ವೃತ್ತದಲ್ಲಿ ಕನ್ನಡ ಹೋರಾಟಗಾರ ವಾಟಾಳ್ ನಾಗರಾಜ್ ಹಾಗೂ ರೈತರು ಪ್ರತಿಭಟನೆ ನಡೆಸಿದರು.

# ಮುಂದಿನ 10 ತಿಂಗಳು ಬರ ಎದುರಿಸಲು ಸಿದ್ಧರಾಗಿ, ಸಮರ್ಥ ನಿರ್ವಹಣೆಗೆ ಸೂಕ್ತ ಕ್ರಿಯಾಯೋಜನೆ ರೂಪಿಸಿ: ಪ್ರಿಯಾಂಕ್ ಖರ್ಗೆ

**ಕಲಬುರಗಿ, ಆ. 11:** ಪ್ರಸ್ತುತ ಬರಗಾಲ ಹಿಂದಿನ ಬರಗಾಲಕ್ಕೆ ಅಜಗಜಾಂತರ ವ್ಯತ್ಯಾಸವಿದೆ. ಸೂಪರ್ ಎಲ್‌ನಿನೋದಿಂದ ಬರದ ಛಾಯೆ ಮುನ್ಸೂಚನೆಯ ಕಾರಣ ಕುಡಿಯುವ ನೀರು, ಜಾನುವಾರುಗಳಿಗೆ ಮೇವು ಹಾಗೂ ನಿರಂತರ ಬೀಸುವ ಬಿಸಿಗಾಳಿ ಎಲ್ಲವನ್ನೂ ಸಮರ್ಥವಾಗಿ ಎದುರಿಸಲು ಮುಂದಿನ 10 ತಿಂಗಳಿಗೆ ಬೇಕಾದ ಕ್ರಿಯಾ ಯೋಜನೆ ರೂಪಿಸಬೇಕು ಎಂದು ಗೃಹ, ಐ.ಟಿ-ಬಿ.ಟಿ, ಇ.-ಆಡಳಿತ ಮತ್ತು ಜಿಲ್ಲಾ ಉಸ್ತುವಾರಿ ಸಚಿವ ಪ್ರಿಯಾಂಕ್ ಖರ್ಗೆ ಎಂದರು.

ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಬರ ಪರಿಸ್ಥಿತಿ, ಕುಡಿಯುವ ನೀರು, ಜಾನುವಾರುಗಳಿಗೆ ಮೇವು, ಕೃಷಿ ಚಟುವಟಿಕೆ ಕುರಿತು ಮುಂಗಾರು ಹಂಗಾಮಿನ ಪ್ರಗತಿ ಪರಿಶೀಲನಾ ಸಭೆಯಲ್ಲಿ ಮಾತನಾಡಿ, ಇನ್ನೂ ಮಳೆಗಾಲ ಪೂರ್ಣಗೊಳ್ಳದ ಕಾರಣ ಎನ್.ಡಿ.ಆರ್.ಎಫ್. ನಿಯಮಾವಳಿ ಪ್ರಕಾರ ಘೋಷಣೆ ಮಾಡಲಾಗುವದಿಲ್ಲ. ಮುಂದಿನ ದಿನದಲ್ಲಿ ಇದು ಹೀಗೇ ಮುಂದುವರೆದರೆ ಬರ ಘೋಷಿಸಿದಲ್ಲಿ ಅದಕ್ಕೆ ಪೂರಕವಾಗಿ ತಳಹಂತದಿಂದ ಕೆಲಸ ಕಾರ್ಯ ಮಾಡಲು ಎಲ್ಲಾ ಅಧಿಕಾರಿಗಳು ಸಮನ್ವಯದಿಂದ ಕಾರ್ಯನಿರ್ವಹಿಸಲು ಸಿದ್ಧರಿರಬೇಕು ಎಂದರು.

ಈ ಸಂದರ್ಭದಲ್ಲಿ ಜನ ಮತ್ತು ಜಾನುವಾರುಗಳಗೆ ನೀರು-ಮೇವು ಮತ್ತು ಜನರಿಗೆ ಆಹಾರ ಪೂರೈಕೆ ನಮ್ಮ ಆದ್ಯತೆ ಯಾಗಿರಬೇಕು. ಜಾನುವಾರುಗಳಿಗೆ ಮೇವು ಕೊರತೆಯಾಗದಂತೆ ನೋಡಿಕೋಳ್ಳುವುದರ ಜೊತೆಗೆ ಗೋಶಾಲಾ ತೆರೆಯಲು ಈಗಿಂದಲೇ



ಊರು ಗುರತಿಸಬೇಕು. ಅಲ್ಲಿ ಅಗತ್ಯ ವ್ಯವಸ್ಥೆಗಳನ್ನು ಮಾಡಿಕೊಳ್ಳಬೇಕು ಎಂದ ಅವರು, ಗೋಶಾಲೆಗಳು ಆರಂಭಿಸುವಾಗ ನೀರಿನ ಲಭ್ಯತೆಯನ್ನು ಮುಖ್ಯವಾಗಿ ಪರಿಗಣಿಸ ಬೇಕು. ಈ ಸಂದರ್ಭದಲ್ಲಿ ವಿಶೇಷವಾಗಿ ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆಯ ಅಧಿಕಾರಿಗಳು ನೀರಿನ ಸಮಸ್ಯೆ ಇರುವ ಹಳ್ಳಿಗಳಿಗೆ ಹೋಗಿ ಅವರ ಸಮಸ್ಯೆ ಆಲಿಸಬೇಕು. ಚಿತ್ತಾಪುರ, ಸೇಡಂ, ಚಿಂಚೋಳಿ ಯಿಂದ ಕುಡಿಯುವ ನೀರಿನ ಸಮಸ್ಯೆ ಕುರಿತು ಅಲ್ಲಿನ ಜನ ನನಗೆ ಕರೆ ಮಾಡುತ್ತಾರೆ. ಅನೇಕ ಅಧಿಕಾರಿಗಳು ಮೊಬೈಲ್ ಕರೆ ಸ್ವೀಕರಿಸಿಲ್ಲ ಎಂಬ ಆರೋಪವಿದೆ. ಸಚಿವನಾಗಿರುವ ನಾನೇ ಕರೆ ಸ್ವೀಕರಿಸಿ ಅವರ ಸಮಸ್ಯೆ ಆಲಿಸಬೇಕಾದರೆ ನಿಮಗೇನು ತೊಂದರೆ ಎಂದು ಅಧಿಕಾರಿಗಳನ್ನು ಖಾರವಾಗಿ ಪ್ರಶ್ನಿಸಿದ ಸಚಿವರು, ಸಾರ್ವಜನಿಕರ ಸಮಸ್ಯೆಗಳಿಗೆ ಆದ್ಯತೆ ಮೇಲೆ ಸ್ಪಂದಿಸುವ ಮತ್ತು ಮಾನವೀಯತೆ ಯಿಂದ ಕಾರ್ಯನಿರ್ವಹಿಸುವ ಗುಣ ಅಧಿಕಾರಿಗಳು ಹೊಂದುವುದು ಅವಶ್ಯಕತೆ ಇದೆ ಎಂದರು.

ಹಿಂದಿನ ಬರದ ಸಂದರ್ಭದಲ್ಲಿ ನೀರು ಪೂರೈಸಿದ ಖಾಸಗಿ ಬೋರವೇಲ್ ಮಾಲೀಕರಿಗೆ ಇನು ಹಣ ಪಾವತಿಸಿಲ್ಲ ಎಂದು ಅರಿತು ತೀವ್ರ ಅಸಮಾಧಾನ್ಯ ವಯಕ್ತಪಡಿಸಿದ ಅವರು, ಹಿಂದಿನ ವರ್ಷದ ಪಾವತಿ ಬಾಕಿ ಇದ್ದರೆ ಈಗ ನಿಮಗೆ ನೀರು ಕೊಡೋರ್‍ಯಾರು? ಕಾರ್ಯಪಡೆ ಆದೇಶದಂತೆ ಕಾರ್ಯನಿರ್ವಹಿಸುವುದಲ್ಲದೆ ತಕ್ಷಣವೇ ಬಿಲ್ಲು ಪಾವತಿ ಸಹ ಮಾಡಬೇಕು. ಸಮಸ್ಯೆ ಇರುವ ಕಡೆ ಮೊದಲು ಬಾಡಿಗೆ ಬೋರವೆಲ್ ಪಡೆಬೇಕು, ನಂತರ ಫ್ಲಶ್ಶಿಂಗ್ ಮಾಡಬೇಕು. ಅದು ಸಾಧ್ಯವಾಗದಿದ್ದಲ್ಲಿ ಹೊಸದಾಗಿ ಕೊಳವೆ ಬಾವಿ ಕೊರೆಯಬೇಕು. ಈ ಹಿಂದೆ ಆರ್.ಡಿ.ಪಿ.ಆರ್. ಸಚಿವನಾಗಿದ್ದಾಗಿ ಎಸ್.ಓ.ಪಿ ನೀಡಿದ್ದು, ಅದನ್ನು ಕಟ್ಟುನಿಟ್ಟಾಗಿ ಪಾಲಿಸಿ ಎಂದು ಸೂಚನೆ ನೀಡಿದರು.

ಜಿಲ್ಲಾ ಪಂಚಾಯತ್ ಸಿ.ಇ.ಓ ರಾಹುಲ್ ಸಂಕನೂರ ಮಾತನಾಡಿ ಜಿಲ್ಲೆಯ 8 ತಾಲೂಕುಗಳ 35 ಗ್ರಾಮ ಪಂಚಾಯತಿಗಳ ವ್ಯಾಪ್ತಿಯ 41 ಗ್ರಾಮಗಳಲ್ಲಿ ಕುಡಿಯುವ ನೀರಿನ ಸಮಸ್ಯೆ ಇದ್ದು, 5 ಟ್ಯಾಂಕರ್ ಮೂಲಕ 5 ಗ್ರಾಮಗಳಿಗೆ ಮತ್ತು 4 ಖಾಸಗಿ ಕೊಳವೆ ಬಾವಿ ಬಾಡಿಗೆಗೆ ಪಡೆದು 36 ಗ್ರಾಮಗಳಿಗೆ ನೀರು ಪೂರೈಕೆ ಮಾಡಲಾಗುತ್ತಿದೆ. ಮುಂದಿನ ದಿನದಲ್ಲಿ ಬರದ ಕ್ಷಾಮ ಹೆಚ್ಚಾದಲ್ಲಿ ಅದಕ್ಕೂ ಬೇಕಾದ ಕ್ರಿಯಾ ಯೋಜನೆ ರೂಪಿಸಲಾಗುತ್ತಿದೆ ಎಂದರು.

**ಆ.14 ರೊಳಗೆ ವರದಿ ಕೊಡಿ:** ಕಲಬುರಗಿ ನಗರದ ಸುಮಾರು 35 ವಾರ್ಡ್‌ಗಳಲ್ಲಿ ಇನ್ನೂ ಕುಡಿಯುವ ನೀರಿನ ಸಮಸ್ಯೆ ಇದೆ. ಜುಲೈ ಅಂತ್ಯದ ವರೆಗೆ ಸಮರ್ಪಕವಾಗಿ ಟ್ಯಾಂಕರ್ ಮೂಲಕ ನೀರು ಪೂರೈಕೆ ಮಾಡಲಾಗುತ್ತಿತ್ತು. ಆಗಸ್ಟ್ 1 ರಿಂದ ಟ್ಯಾಂಕರ್ ನೀರು ಸ್ಥಗಿತಗೊಳಿಸಿದ್ದರಿಂದ ಸಮಸ್ಯೆಯಾಗಿದೆ ಎಂದು ಶಾಸಕ ಅಲ್ಲಮಪ್ರಭು ಪಾಟೀಲ ಮತ್ತು ಕನೀಜ್ ಫಾತಿಮಾ ಸಚಿವರ ಗಮನಕ್ಕೆ ತಂದರು. ಪಾಲಿಕೆ ಆಯುಕ್ತ ಅವಿನಾಶ ಶಿಂಧೆ ಅವರು, ನಗರದಲ್ಲಿ ಬೇಡಿಕೆ ಇರುವ ವಾರ್ಡ್‌ಗಳಿಗೆ ಪ್ರತಿದಿನ 50 ಟ್ರಿಪ್ ಮೂಲಕ ನೀರು ಪೂರೈಕೆ ಮಾಡಲಾಗುತ್ತಿದೆ. ಎಲ್ ಅಂಡ್ ಟಿ ಕಂಪನಿಯವರು ಟ್ಯಾಂಕರ್ ಮೂಲಕ ನೀರು ಪೂರೈಕೆ ನಿಲ್ಲಿಸಿದ್ದರಿಂದ ಕೆಲವು ಬಡಾವಣೆಯಲ್ಲಿ ಸಮಸ್ಯೆ ಉದ್ಭವವಾಗಿದೆ ಎಂದರು.

ಇಷ್ಟೊಂದು ದೊಡ್ಡ ನಗರಕ್ಕೆ 50 ಟ್ಯಾಂಕ್ ನೀರು ಯಾವುದಕ್ಕೂ ಸಾಲುವುದಿಲ್ಲ. ಶಾಸಕರ ಸೂಚನೆಯಂತೆ ನೀರು ಪೂರೈಸಬೇಕು. ಪ್ರಸ್ತುತ ನಗರದಲ್ಲಿನ ಕುಡಿಯುವ ನೀರಿನ ಸಮಸ್ಯೆ ಪರಿಹಾರಕ್ಕೆ ಸಮಗ್ರವಾಗಿ ವರದಿ ಇದೇ ಆಗಸ್ಟ್ 14 ರೊಳಗೆ ನೀಡಿದಲ್ಲಿ ಅದಕ್ಕೆ ಸರ್ಕಾರದ ಹಂತದಲ್ಲಿ ಹೆಚ್ಚಿನ ಅನುದಾನ ಪಡೆದು ಪರಿಹಾರ ಕಂಡುಕೊಳ್ಳಲಾಗುವುದು. ಇನ್ನು ನೀರು ಪೂರೈಸಲು ವಿಫಲರಾಗಿರುವ ಎಲ್ ಅಂಡ್ ಟಿ ಕಂಪನಿ ಮೇಲೆ ಕೂಡಲೆ ಕಾನೂನು ಕ್ರಮ ಕೈಗೊಳ್ಳಿ ಎಂದರು.

## ಕೋಲಾರ ಜಿಲ್ಲೆಯಲ್ಲಿ ಬರ ಪರಿಸ್ಥಿತಿ ಎದುರಿಸಲು ಆದ್ಯತೆ: ಉಸ್ತುವಾರಿ ಸಚಿವ ರಾಮಲಿಂಗಾರೆಡ್ಡಿ

**ಕೋಲಾರ, ಆ.11:** ಜಿಲ್ಲೆಯಲ್ಲಿ ಉಂಟಾಗಿರುವ ಮಳೆ ಕೊರತೆ ಹಾಗೂ ಬರ ಪರಿಸ್ಥಿತಿಯನ್ನು ಎದುರಿಸಲು ಕುಡಿಯುವ ನೀರು ಮತ್ತು ಜಾನುವಾರುಗಳಿಗೆ ಮೇವಿನ ಪೂರೈಕೆಗೆ ಸರಕಾರ ಮೊದಲ ಆದ್ಯತೆ ನೀಡುತ್ತಿದೆ ಎಂದು ಜಿಲ್ಲಾ ಉಸ್ತುವಾರಿ ಸಚಿವ ರಾಮಲಿಂಗಾರೆಡ್ಡಿ ಹೇಳಿದರು.



ಸುದ್ದಿಗಾರರೊಂದಿಗೆ, ಕೋಲಾರ ಜಿಲ್ಲೆಯ ಬರ ಪರಿಸ್ಥಿತಿ, ಸಮಗ್ರ ಅಭಿವೃದ್ಧಿ ಹಾಗೂ ಎತ್ತಿನಹೊಳೆ ಯೋಜನೆಯ ಪ್ರಗತಿಗೆ ವೇಗ ನೀಡಲಾಗಿದೆ.ಬೇಲೂರು ತಾಲೂಕಿನಲ್ಲಿ ಸುಮಾರು 800 ಮೀಟರ್ ವ್ಯಾಪ್ತಿಯ ಭೂಸ್ವಾಧೀನ ಸಮಸ್ಯೆಯನ್ನು ಸಚಿವ ಸಂಪುಟದ ಮೂಲಕ ವಿಶೇಷ ಪರಿಹಾರ ಮಂಜೂರು ಮಾಡಿ ಇತ್ಯರ್ಥ ಪಡಿಸಲಾಗಿದೆ. ಈ ಭಾಗದ ಕಾಮಗಾರಿ ಶೀಘ್ರ ಪೂರ್ಣಗೊಳ್ಳಲಿದೆ ಎಂದರು.ಗುಬ್ಬಿ ತಾಲೂಕಿನಲ್ಲಿ 1.8 ಕಿ.ಮೀ ಅರಣ್ಯ ಭೂಮಿ ಹಸ್ತಾಂತರ ಪ್ರಕ್ರಿಯೆಯೂ ಪೂರ್ಣಗೊಂಡಿದ್ದು, ಮುಂದಿನ ಎರಡು-ಮೂರು ತಿಂಗಳಲ್ಲಿ ಕಾಮಗಾರಿ ಮುಕ್ತಾಯಗೊಳ್ಳುವ ನಿರೀಕ್ಷೆಯಿದೆ. ಕಾಮಗಾರಿಗಳು ಪೂರ್ಣಗೊಂಡರೆ ಈ ವರ್ಷದ ಅಂತ್ಯದ ವೇಳೆಗೆ ದೊಡ್ಡಬಳ್ಳಾಪುರದವರೆಗೆ ಎತ್ತಿನಹೊಳೆ ನೀರು ತಲುಪಲಿದೆ. ಮುಂದಿನ ವರ್ಷ ಕೋಲಾರ, ಚಿಕ್ಕಬಳ್ಳಾಪುರ ಸೇರಿದಂತೆ ಸುತ್ತಮುತ್ತಲ ಜಿಲ್ಲೆಗಳ ಸುಮಾರು 300 ಕೆರೆಗಳಿಗೆ ನೀರು ತುಂಬಿಸುವ ಗುರಿ ಹೊಂದಲಾಗಿದೆ. ಜಿಲ್ಲೆಯಲ್ಲಿ ಈ ಬಾರಿ ನಿರೀಕ್ಷಿತ ಪ್ರಮಾಣದಲ್ಲಿ ಮಳೆಯಾಗದ ಹಿನ್ನೆಲೆಯಲ್ಲಿ ಬಿತ್ತನೆ ಕಾರ್ಯ ಕುಂಠಿತಗೊಂಡಿದೆ. ಜನರಿಗೆ ಕುಡಿಯುವ ನೀರಿನ ಸಮಸ್ಯೆ ಎದುರಾಗದಂತೆ ಮುನ್ನೆಚ್ಚರಿಕೆ ಕ್ರಮ ಕೈಗೊಳ್ಳುವಂತೆ ಅಧಿಕಾರಿಗಳಿಗೆ ಸೂಚಿಸಲಾಗಿದೆ. ಜಾನುವಾರುಗಳಿಗೆ ಮೇವಿನ ಕೊರತೆಯಾಗದಂತೆ ಅಗತ್ಯ ವ್ಯವಸ್ಥೆ ಮಾಡಲಾಗುವುದು ಎಂದರು.

ರಾಜ್ಯದಲ್ಲಿ ಬರ ಪರಿಸ್ಥಿತಿ ತೀವ್ರವಾಗುತ್ತಿದ್ದು, ಕೇಂದ್ರ ಸರಕಾರದ ಮಾನದಂಡಗಳ ಅನ್ವಯ ಬರಪೀಡಿತ ತಾಲೂಕುಗಳನ್ನು ಗುರುತಿಸಲಾಗುತ್ತಿದೆ. ಸದ್ಯ 75 ರಿಂದ 80 ತಾಲೂಕುಗಳನ್ನು ಬರಪೀಡಿತವೆಂದು ಗುರುತಿಸಲಾಗಿದ್ದು, ಆಗಸ್ಟ್ ಅಂತ್ಯದ ವೇಳೆಗೆ ಈ ಸಂಖ್ಯೆ 100ಕ್ಕೂ ಅಧಿಕವಾಗುವ ಸಾಧ್ಯತೆಯಿದೆ. ಬಳಿಕ ಅಧಿಕೃತ ಘೋಷಣೆ ಹೊರ ಬೀಳಲಿದೆ ಎಂದು ಹೇಳಿದರು.

## ರಾಯಚೂರು ಡಿಸಿ ಕಚೇರಿಯಲ್ಲಿ ಬರ ಪರಿಸ್ಥಿತಿ ಸಭೆ

## ಬೆಳೆನಾಶದ ಭೀಕರತೆ ಬಿಚ್ಚಿಟ್ಟ ಸಚಿವ ಡಾ.ಅಜಯ್ ಸಿಂಗ್

**ರಾಯಚೂರು, ಆ. 11:** ಜಿಲ್ಲೆಯಲ್ಲಿ ಬಿತ್ತನೆ ಆಗಿರುವ ಬೆಳೆಗಳಲ್ಲಿ ಶೇ.82 ರಷ್ಟು ಬೆಳೆ ಹಾನಿಯಾಗಿರುವುದು ಕಂಡುಬರುತ್ತಿದೆ. ಇತ್ತೀಚೆಗೆ ಆದ ಮಳೆಯಿಂದ ಜಮೀನುಗಳು ಹಸಿರಾಗಿ ಕಂಡುಬಂದರೂ ಬೆಳೆಗಳ ಬೆಳವಣಿಗೆ ಅವಧಿ ಬಹುತೇಕ ಮುಕ್ತಾಯದ ಹಂತಕ್ಕೆ ಬಂದಿರುವ ಕಾರಣಕ್ಕೆ ಇಳುವರಿ ಬರುವುದಕ್ಕೆ ಸಾಧ್ಯವಾಗುವುದಿಲ್ಲ ಎಂದು ಸಚಿವ ಡಾ.ಅಜಯ್ ಸಿಂಗ್ ಹೇಳಿದರು.

ಜಿಲ್ಲಾಧಿಕಾರಿಗಳ ಕಛೇರಿ ಸಭಾಂಗಣದಲ್ಲಿ ಜಿಲ್ಲೆಯ ಬರ ಪರಿಸ್ಥಿತಿ, ಕುಡಿಯುವ ನೀರಿನ ಸಮಸ್ಯೆಗಳು, ಮುಂಗಾರು ಹಂಗಾಮಿನ ಬಿತ್ತನೆ ಮತ್ತು ರಸಗೊಬ್ಬರ ಬೇಡಿಕೆಗಳು ಹಾಗೂ ಮೇವಿನ ಲಭ್ಯತೆ ಕುರಿತು ಅಧಿಕಾರಿಗಳೊಂದಿಗೆ ಸಭೆಯ ನಂತರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದರು.

ಬ್ಯಾಂಕ್ ಮತ್ತು ಸೊಸೈಟಿಗಳಲ್ಲಿ ಬೆಳೆ ವಿಮೆಯನ್ನು ರೈತರೇ ನೇರವಾಗಿ ತುಂಬಿದರೆ ಅದಕ್ಕೆ ಬೆಳೆ ಹಾನಿಯ ಹಣವನ್ನು ವಿಮಾ ಕಂಪನಿಗಳು ನೀಡುವುದಿಲ್ಲ. ಆದರೆ, ಎಜೆಂಟರ ಮೂಲಕ ವಿಮೆ ಮಾಡಿಸಿದರೆ ಅದಕ್ಕೆ ವಿಮಾ ಕಂಪನಿಗಳು ಹಣವನ್ನು ನೀಡುತ್ತವೆ. ಎಜೆಂಟರಿಂದ ಮಾಡಿಸಿದ ವಿಮೆಗೆ ರೈತರ ವಂತಿಕೆಯನ್ನು ಎಜೆಂಟರೇ ಭರ್ತಿ ಮಾಡುತ್ತಾರೆ.

ಆ ನಂತರ ವಿಮೆ ಹಣದಲ್ಲಿ ರೈತರಿಗೆ



ಅರ್ಧ ಎಜೆಂಟರಿಗೆ ಅರ್ಧ ಹಂಚಿಕೊಳ್ಳುತ್ತಾರೆ ಎನ್ನುವುದು ಆಘಾತಕಾರಿ ವಿಷಯವೇ. ಈ ಗಂಭೀರವಾದ ವಿಷಯ ಕುರಿತು ವಿಮಾ ಕಂಪನಿಗಳೊಂದಿಗೆ ಚರ್ಚಿಸುವಂತೆ ಮುಖ್ಯಮಂತ್ರಿಗಳಿಗೆ ತಿಳಿಸುವುದಾಗಿ ಕೇಳಿದ ಪ್ರಶ್ನೆಯೊಂದಕ್ಕೆ ಪ್ರತಿಕ್ರಿಯಿಸಿದರು.

ಕುಡಿಯುವ ನೀರಿನ ಯೋಜನೆಗಾಗಿ ಹನ್ನೊಂದು ಕೋಟಿ ಯೋಜನೆಯನ್ನು ಅನುಷ್ಠಾನಗೊಳಿಸಲಾಗುತ್ತಿದೆ. ಇದರಲ್ಲಿ ಐದು ಕೋಟಿ ಅನುದಾನ ಬಿಡುಗಡೆಯಾಗಿದೆ ಅನುಷ್ಠಾನ ವಿಳಂಬ ಮಾಡುತ್ತಿರುವ ಕಂಪನಿಗಳ ವಿರುದ್ಧ ಕ್ರಮ ಜರುಗಿಸಲಾಗುವುದು ಎಂದರು.

ಜಿಲ್ಲಾ ಕೇಂದ್ರದಲ್ಲಿ ಕೆಕೆಆರ್‌ಡಿಬಿಯಿಂದ ಕೆಲ ಅಭಿವೃದ್ಧಿ ಕಾರ್ಯಗಳನ್ನು ಕೈಗೊಳ್ಳಲಾಗುತ್ತಿದೆ. ಈ ಯೋಜನೆಗಳಿಗೆ ಇನ್ನು ಅನುದಾನ ನೀಡುವುದಿದೆ ಈಗಲೂ ಕೆಕೆಆರ್‌ಡಿಬಿಯ ಅಧ್ಯಕ್ಷ ನಾಗಿರುವುದರಿಂದ ಸದ್ಯದಲ್ಲಿ ಅನುದಾನವನ್ನು ಬಿಡುಗಡೆ ಮಾಡಲಾಗುವುದು ಎಂದು ತಿಳಿಸಿದರು.

ಜಿಲ್ಲೆಯಲ್ಲಿ ವಿವಿಧ ತಾಲೂಕುಗಳಿಗೆ ಭೇಟಿ ನೀಡಿ ಬರ ಪರಿಸ್ಥಿತಿ ಪರಿಶೀಲಿಸಿದ್ದು, ಜಿಲ್ಲೆಯಲ್ಲಿ ಉಂಟಾಗಿರುವ ಬರ ಪರಿಸ್ಥಿತಿಯನ್ನು ಖುದ್ದಾಗಿ ಪರಿಶೀಲಿಸಿ, ರೈತರ ಸಂಕಷ್ಟವನ್ನು ಅರಿಯುವ ಉದ್ದೇಶದಿಂದ ಮುಖ್ಯಮಂತ್ರಿ ಅವರ ಸೂಚನೆಯಂತೆ ಜಿಲ್ಲೆಗೆ ಭೇಟಿ ನೀಡಿದ್ದೇನೆ ಎಂದರು.

ಮುಂಬರುವ ದಿನಗಳಲ್ಲಿ ಬಿತ್ತನೆ ಆಗುವ ಬೆಳೆಗೆ ಅಗತ್ಯವಿರುವ ರಸಾಯನಿಕ ಗೊಬ್ಬರ ದಾಸ್ತಾನಿಗೆ ಕ್ರಮ ಕೈಗೊಳ್ಳಲಾಗುವುದು. ರಸಾಯನಿಕ ಗೊಬ್ಬರ ಜಿಲ್ಲೆಯಿಂದ ತೆಲಂಗಾಣ ಮತ್ತು ಆಂಧ್ರಪ್ರದೇಶಕ್ಕೆ ಅಕ್ರಮ ಕಳ್ಳಸಾಗಾಣಿಕೆ ಆಗುವುದನ್ನು ತಪ್ಪಿಸುವುದಕ್ಕೆ ಅಗತ್ಯ ಕ್ರಮ ಕೈಗೊಳ್ಳುವುದಕ್ಕೆ ಅಧಿಕಾರಿಗಳಿಗೆ ಕಟ್ಟುನಿಟ್ಟಿನ ಸೂಚನೆಯನ್ನು ನೀಡಲಾಗುವುದು ಎಂದು ಹೇಳದರು.ರಾಯಚೂರು ಗ್ರಾಮೀಣ, ದೇವದುರ್ಗ, ಲಿಂಗಸುಗೂರು, ಸಿಂಧನೂರು, ಮಸ್ಕಿ ಹಾಗೂ ಮಾನ್ವಿ ಸೇರಿದಂತೆ ವಿವಿಧ ತಾಲೂಕುಗಳ ಗ್ರಾಮಗಳಿಗೆ ಜನಪ್ರತಿನಿಧಿಗಳು, ಜಿಲ್ಲಾಧಿಕಾರಿಗಳು ಹಾಗೂ ಅಧಿಕಾರಿಗಳನ್ನು ಭೇಟಿ ನೀಡಿ ಸ್ಥಳ ಪರಿಶೀಲನೆ ನಡೆಸಲಾಗಿದೆ. ರೈತರ ಜಮೀನುಗಳಿಗೆ ತೆರಳಿ ಬೆಳೆಗಳ ಪರಿಸ್ಥಿತಿಯನ್ನು ನೇರವಾಗಿ ವೀಕ್ಷಿಸಲಾಗಿದೆ ನಮ್ಮ ರೈತರು ಬಹಳ ಸಂಕಷ್ಟದಲ್ಲಿದ್ದಾರೆ ಎನ್ನುವುದು ಮನವರಿಕೆ ಆಗಿದೆ ಎಂದು ಹೇಳಿದರು.

ಈ ಸಂದರ್ಭದಲ್ಲಿ ಮಾಜಿ ಸಚಿವ ಎನ್.ಎಸ್.ಭೋಸರಾಜು, ಸಂಸದ ಜಿ.ಕುಮಾರ ನಾಯಕ, ಶಾಸಕರಾದ ಬಸನಗೌಡ ದದ್ದಲ, ಆರ್.ಬಸನಗೌಡ ತುರ್ವಿಹಾಳ, ಜಿ.ಹಂಪಯ್ಯ ನಾಯಕ, ಬಸನಗೌಡ ಬಾದರ್ಲಿ, ಜಿಲ್ಲಾಧಿಕಾರಿಗಳಾದ ಪೂವಿತಾ ಎಸ್ ಇದ್ದರು.

## ಸರ್ಕಾರಿ ಕಾರ್ಯಕ್ರಮಗಳ ಅನುಷ್ಠಾನ -ಗುಣಮಟ್ಟದ ಜನಸೇವೆಗೆ ಡಿಸಿ ಕೆ.ನಾಗೇಂದ್ರ ಪ್ರಸಾದ್ ಕಟ್ಟುನಿಟ್ಟಿನ ಸೂಚನೆ

ಬಳ್ಳಾರಿ,ಆ.11.ರಾಜ್ಯ ಸರ್ಕಾರದ ವಿನೂತನ ಯೋಜನೆಗಳಾದ ಪ್ರಜಾ ಸೇವೆ', ಭಾರತ್ ಜೋಡೋ ಸಂಘಗಳ ರಚನೆ ಹಾಗೂ ಮಾದಕದ್ರವ್ಯ ವಿರೋಧಿ ಜಾಗೃತಿ ಮತ್ತು ಕಾರ್ಯಾಚರಣೆ ಅಭಿಯಾನಗಳಾದ ಬೇಡ ಬ್ರೋ' ಮತ್ತು ಆಪರೇಷನ್ ರೈಸ್' ಕಾರ್ಯಕ್ರಮಗಳನ್ನು ತಾಲೂಕು ಮತ್ತು ಜಿಲ್ಲಾಮಟ್ಟದಲ್ಲಿ ಅತ್ಯಂತ ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸುವಂತೆ ಜಿಲ್ಲಾಧಿಕಾರಿ ಕೆ. ನಾಗೇಂದ್ರ ಪ್ರಸಾದ್ ಅವರು ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.

ಪ್ರತಿ ತಿಂಗಳ ಮೊದಲ ಮತ್ತು ಮೂರನೇ ಶನಿವಾರದಂದು ತಾಲೂಕು ಹಾಗೂ ಜಿಲ್ಲಾ ಮಟ್ಟದಲ್ಲಿ ಪ್ರಜಾಸೇವೆ' ಆಂದೋಲನವನ್ನು ಕಡ್ಡಾಯವಾಗಿ ಆಯೋಜಿಸಲು ತೀರ್ಮಾನಿಸಲಾಗಿದೆ. ಮುಖ್ಯಮಂತ್ರಿಗಳ ಆಶಯದಂತೆ ಸಾರ್ವಜನಿಕರ ಅರ್ಜಿಗಳನ್ನು ಕೇವಲ ಮೇಲಾಧಿಕಾರಿಗಳಿಗೆ ಫಾರ್ವರ್ಡ್ ಮಾಡಿ ಕ್ಲೋಸ್ ಮಾಡುವುದರಿಂದ ಸಮಸ್ಯೆಗೆ ಪರಿಹಾರ ಸಿಗುವುದಿಲ್ಲ. ಸಾರ್ವಜನಿಕರ ಕುಂದುಕೊರತೆಗಳಿಗೆ ನೈಜ ಹಾಗೂ ಗುಣಮಟ್ಟದ ಪರಿಹಾರ ನೀಡಿ ಅರ್ಜಿಗಳನ್ನು ವಿಲೇವಾರಿ ಮಾಡಬೇಕು. ಈ ಆಂದೋಲನ ನಡೆಯುವ ಶನಿವಾರಗಳಂದು ಜಿಲ್ಲಾಧಿಕಾರಿಗಳು ಸೇರಿದಂತೆ ಎಲ್ಲಾ ತಾಲೂಕು ಮಟ್ಟದ ಅಧಿಕಾರಿಗಳು ಕಡ್ಡಾಯವಾಗಿ ತಮ್ಮ ಕೇಂದ್ರ ಸ್ಥಾನದಲ್ಲಿಯೇ ಉಪಸ್ಥಿತರಿರಬೇಕು ಎಂದರು.

ಕಂದಾಯ ಮತ್ತು ನಗರಾಭಿವೃದ್ಧಿ ಇಲಾಖೆಗಳು ಜಂಟಿಯಾಗಿ ಎಸ್‌ಐಆರ್ ಪ್ರಕ್ರಿಯೆಯನ್ನು ಕೈಗೆತ್ತಿಕೊಂಡಿದ್ದು, ಈಗಾಗಲೇ ಅಸಂಗತತೆಗಳನ್ನು ಗಣನೀಯವಾಗಿ ಕಡಿಮೆಗೊಳಿಸಲಾಗಿದೆ. ಸಾರ್ವಜನಿಕರಿಂದ ಸ್ವೀಕರಿಸಲಾದ ಅರ್ಜಿಯ ದೋಷಗಳನ್ನು ಸರಿಪಡಿಸಲು ಜಂಟಿ ಕ್ರಿಯಾ ಯೋಜನೆ ರೂಪಿಸಿ ಪ್ರಕ್ರಿಯೆಯನ್ನು ಪೂರ್ಣಗೊಳಿಸಲಾಗುತ್ತಿದೆ. ಈ ಪ್ರಕ್ರಿಯೆಯನ್ನು ತ್ವರಿತವಾಗಿ ಪೂರ್ಣಗೊಳಿಸಬೇಕು ಎಂದರು.

ಗೃಹ ಸಚಿವರ ನಿರ್ದೇಶನದಂತೆ ನಶಾ ಮುಕ್ತ ಭಾರತ್' ಅಭಿಯಾನದಡಿ ಜಿಲ್ಲೆಯಲ್ಲಿ ಅಪರೇಷನ್ ರೈಸ್' ಮತ್ತು ಬೇಡ ಬ್ರೋ' ಎಂಬ ಎರಡು ವಿಶೇಷ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ. ಅಬಕಾರಿ ಇಲಾಖೆ, ಪೊಲೀಸ್ ಇಲಾಖೆ ಹಾಗೂ ಸಂಬಂಧಪಟ್ಟ ಇತರ ಇಲಾಖೆಗಳು ಜಂಟಿಯಾಗಿ ಈ



ಕಾರ್ಯಕ್ರಮದಡಿ ಅತ್ಯುತ್ತಮ ಸಾಧನೆ ಮಾಡಿದ್ದು, ಇದನ್ನು ಮುಂಬರುವ ದಿನಗಳಲ್ಲಿ ಮತ್ತಷ್ಟು ಕ್ರಿಯಾಶೀಲವಾಗಿ ಮುಂದು ವರಿಸಬೇಕು ಎಂದು ನಿರ್ದೇಶನ ನೀಡಿದರು. ಅಧಿಕಾರಿಗಳು ಕೇವಲ ತಮ್ಮ ಇಲಾಖೆಗೆ ಮಾತ್ರ ಸೀಮಿತವಾಗದೆ, ಉತ್ತಮ ಭಾವನೆಯಿಂದ ಕೆಲಸ ಮಾಡಬೇಕಿದೆ. ಸಾರ್ವಜನಿಕರ ಹಿತದೃಷ್ಟಿಯಿಂದ ನೀಡಲಾಗುವ ಯಾವುದೇ ಹೆಚ್ಚುವರಿ ಜವಾಬ್ದಾರಿಗಳನ್ನು ವಹಿಸಿಕೊಳ್ಳಲು ಮನೋಭಾವನೆಯನ್ನು ಹೊಂದಿರಬೇಕು. ಇಲಾಖೆಗಳ ನಡುವಿನ ಸಮನ್ವಯತೆಯಿಂದ ಜಿಲ್ಲೆಯಾದ್ಯಂತ ಉತ್ತಮ ಆಡಳಿತ ನೀಡಲು ಅಧಿಕಾರಿಗಳು ಒಗ್ಗಟ್ಟಿನಿಂದ ಶ್ರಮಿಸಬೇಕೆಂದು ಕರೆ ನೀಡಿದರು.

## ಕೋಳೂರು ಜೈನಧರ್ಮದ ತಾಣ ಆಗಿತ್ತೇ?: ವಿಜಯನಗರ ತಿರುಗಾಟ ಸಂಶೋಧನಾ ತಂಡದ ಶೋಧ

**ಬಳ್ಳಾರಿ ಆ 11.** ಬಳ್ಳಾರಿ ಜಿಲ್ಲೆಯ ಬಳ್ಳಾರಿಯಿಂದ 18 ಕಿ. ಮೀಟರ್ ದೂರದಲ್ಲಿರುವ ಕೋಳೂರು ಗ್ರಾಮದ ಹೊರ ವಲಯದ ಹೊಲದ ಅಗ್ನೇಯ, ಈಶಾನ್ಯ, ನೈರುತ್ಯ, ವಾಯುವ್ಯ ದಿಕ್ಕಿಗೆ ಒಂದೊಂದು ಸುಂದರ ವಾದ ನಾಲ್ಕು ಸಲ್ಲೇಖನ ವ್ರತದ ಜಿನಮೂರ್ತಿ ಶಿಲ್ಪಗಳನ್ನು ವಿಜಯನಗರ ತಿರುಗಾಟ ಸಂಶೋಧನ ತಂಡದ ಪ್ರೊ ಎಚ್. ತಿಪ್ಪೇಸ್ವಾಮಿ, ಡಾ.ಗೋವಿಂದ, ಡಾ.ಕೃಷ್ಣೆಗೌಡ, ಸಂಶೋಧಕರಾದ ಇಸ್ಮಾಹಿಲ್ ಸಿದ್ದಿಕಿ, ಅಶೋಕ ನಾಯಕ ದಿದ್ದಿಗಿ, ಕೆ.ಶಿವರಾಮಪ್ಪ, ಬಂಡ್ರಿಯ ಪಾಪಯ್ಯ ಅವರುಗಳು ಸ್ಥಳೀಯರಾದ ವಕೀಲ ಕೆ. ಲಕ್ಷ್ಮಣ, ಮಲ್ಲಿಕಾರ್ಜುನ ಅವರುಗಳ ಸಹಕಾರದಿಂದ ಪತ್ತೆ ಮಾಡಲಾಗಿದೆ.




ಜೈನಧರ್ಮದ ಪ್ರಸರಣ ಕೇಂದ್ರ ಕೋಳೂರು: ಗ್ರಾಮದಲ್ಲಿರುವ ಸೂರ್ಯ ನಾರಾಯಣ ದೇಗುಲ ಹಾಗೂ ಊರಲ್ಲಿಯ ಇತರೆ ಸ್ಥಳಗಳಲ್ಲಿ ನಾಲ್ಕು ಶಾಸನಗಳು ದೊರಕಿರುವುದರಿಂದ ಈ ಗ್ರಾಮವು ಐತಿಹಾಸಿಕವಾಗಿಯೂ ಪ್ರಸಿದ್ದಿಯನ್ನು ಹೊಂದಿದೆ ಎಂದು ತಿಳಿದುಬರುತ್ತದೆ. ಸೂರ್ಯನಾರಾಯಣ ಗುಡಿಯಲ್ಲಿ ಬೃಹತ್ ಶಿಲಾಶಾಸನವಿದೆ. ದೇಗುಲದ ನವರಂಗ ಮಂಟಪದಲ್ಲಿ ದಕ್ಷಿಣ ದಿಕ್ಕಿಗೆ ನಿಲ್ಲಿಸಿರುವ ಶಾಸನವು103 ಸಾಲಿನಲ್ಲಿದೆ. ಶಿಲಾ ಶಾಸನದ ಎರಡು ಬದಿಗೆ ಸಂಸ್ಕೃತ ಭಾಷೆಯ ಕನ್ನಡ ಲಿಪಿಯಲ್ಲಿ ಬರೆಸಲಾಗಿದೆ. ಈ ಶಾಸನವು ಚಾಲುಕ್ಯ ಜಗದೇಕಮಲ್ಲನ ಕಾಲಾವಧಿಯ ಪಾಳೆಯಗಾರನಾಗಿದ್ದ ಇಮ್ಮಡಿ ಭೀಮರಸನಿಗೆ ಸಂಬಂಧಿಸಿದು ದಾಗಿದೆ. ಇದು ಬಳ್ಳಾರಿ ಜಿಲ್ಲಾ ಶಾಸನ ಸಂಪುಟದಲ್ಲಿ ಪ್ರಕಟವಾಗಿದೆ. ಈ ಶಾಸನದಲ್ಲಿ ನಂದ ಮತ್ತು ಮೌರ್ಯರ ಉಲ್ಲೇಖವಾಗಿರುವುದನ್ನು ಗಮನಿಸಿದ ನಮ್ಮ ತಂಡವು ನಂದ ಮತ್ತು ಮೌರ್ಯರ ಕಾಲದ ಕುರುಹುಗಳು ಊರಲ್ಲಿ ಸಿಗಬಹುದೆಂದು ಕ್ಷೇತ್ರಕಾರ್ಯಕ್ಕೆ ಹೋದಾಗ ಜೈನಧರ್ಮ ಸಂಸ್ಕೃತಿಯ ಪ್ರತೀಕವಾದ ನಾಲ್ಕು ಜಿನ ಮೂರ್ತಿ ಶಿಲ್ಪಗಳು ಪತ್ತೆಯಾದವು. ಇವು ಆಗಿನ ಧರ್ಮ ಮತ್ತು ಸಂಸ್ಕೃತಿಯ ಮಾಹಿತಿ ನೀಡುವ ತುಂಬಾ ಮಹತ್ವದ ಜಿನಮೂರ್ತಿ ಶಿಲ್ಪಗಳೆಂದು ತಿಳಿದು ಬಂದವು. ಈ ಶಿಲ್ಪದಿಂದ ಜಿನ ಮುನಿಯೊಬ್ಬ ಸಲ್ಲೇಖನ ವ್ರತವನ್ನು ಕೈಗೊಂಡಿರುವ ಕುರಿತಾಗಿ ತಿಳಿಸುತ್ತದೆ. ಆದರೆ ಗ್ರಾನೈಟ್ ಕಲ್ಲಿನಲ್ಲಿ ಕೆತ್ತಿದ ಜಿನಮೂರ್ತಿ ಶಿಲ್ಪಗಳನ್ನು ಆ ಊರಿನ ಜನರು ಮಾತ್ರ ಒಂದೊಂದಕ್ಕೂ ಒಂದೊಂದು ಹೆಸರು ಇಟ್ಟು ಗದ್ದೆಯ ಒಡೆಯರು ಇಂದಿಗೂ ಪೂಜೆ ಸಲ್ಲಿಸುತ್ತಿದ್ದಾರೆ.

ಮೊದಲು ಪತ್ತೆಯಾದ ಶಿಲ್ಪಕ್ಕೆ ವೀರಭದ್ರ, ನಂತರ ಪತ್ತೆಯಾದ ಜಿನಮೂರ್ತಿ ಶಿಲ್ಪಗಳಿಗೆ ಖಾಜಾ ಪೀರ, ದೊಡ್ಡ ಸಂಕ್ರಮ್ಮ, ಸಣ್ಣ ಸಂಕ್ರಮ್ಮ ಎಂದು ಕರೆಯಲಾಗುತ್ತಿದೆ. ಇದರಿಂದ ಈ ಭಾಗದಲ್ಲಿ ಮೌರ್ಯರ ಕಾಲಾವಧಿಯಲ್ಲಿ ಜೈನ ಧರ್ಮಕ್ಕೆ ಪ್ರೋತ್ಸಾಹ ನೀಡಿದ ಬಗ್ಗೆ ಇದುವರೆಗೂ ನಿಗೂಢವಾಗಿದ್ದ ಧರ್ಮ, ಇತಿಹಾಸ ವನ್ನು ನಮ್ಮ ತಂಡವು ಬೆಳಕಿಗೆ ತರುವಲ್ಲಿ ಯಶಸ್ವಿಯಾಗಿದೆ. ಮುಂಬರುವ ದಿನದಲ್ಲಿ ಸಂಬಂಧಪಟ್ಟ ಇಲಾಖೆಯು ಈ ಕುರಿತು ವಿಶೇಷ ಅಧ್ಯಯನ ಮಾಡಿ, ಉತ್ಖನನ ಕೈಗೊಂಡರೆ ಜೈನ ಧರ್ಮದ ಕುರಿತಾದ ಮಹತ್ವದ ದಾಖಲೆ ಸಿಗಬಹುದು ಎಂದು ವಿಜಯನಗರ ಶ್ರೀ ಕೃಷ್ಣದೇವರಾಯ ವಿಶ್ವವಿದ್ಯಾಲಯದ ಸ್ನಾತಕೋತ್ತರ ಕೇಂದ್ರದ ನಿರ್ದೇಶಕರಾದ ಪ್ರೊ. ಹೆಚ್.ತಿಪ್ಪೇಸ್ವಾಮಿ ತಿಳಿಸಿದ್ದಾರೆ.

## ಕರಾಟೆ ಪ್ರದರ್ಶನಲ್ಲಿ ಬಿ.ಯಶಸ್ವಿ, ಬಿ.ಹೃತ್ವಿಕ್ ಸಾಯಿ ಗಿನ್ನಿಸ್ ವಿಶ್ವ ದಾಖಲೆ: ಮಾಜಿ ಶಾಸಕ ಸೋಮಶೇಖರರೆಡ್ಡಿ ಶುಭ ಹಾರೈಕೆ

**ಬಳ್ಳಾರಿ,ಆ.11:** ಇತ್ತೀಚೆಗೆ ನಡೆದ 1212 ಮಂದಿ ಭಾಗವಹಿಸಿದ ಅತಿದೊಡ್ಡ ಕರಾಟೆ ಪ್ರದರ್ಶನಲ್ಲಿ ಬಳ್ಳಾರಿಯಿಂದ ಭಾಗವಹಿಸಿದ್ದ ಬಿ. ಯಶಸ್ವಿ ಹಾಗೂ ಬಿ. ಹೃತ್ವಿಕ್ ಸಾಯಿ ಅವರು ಗಿನ್ನಿಸ್ ವರ್ಲ್ಡ್ ರೆಕಾರ್ಡ್ ಸಾಧಿಸಿರುವುದು ಹೆಮ್ಮೆಯ ವಿಷಯ ಎಂದು ಬಳ್ಳಾರಿ ಮಾಜಿ ಶಾಸಕ ಗಾಲಿ ಸೋಮಶೇಖರರೆಡ್ಡಿ ತಿಳಿಸಿದರು.



ತಮ್ಮ ಗೃಹ ಕಚೇರಿಗೆ ಭೇಟಿ ನೀಡಿದ್ದ ಬಿ.ಯಶಸ್ವಿ ಹಾಗೂ ಬಿ.ಹೃತ್ವಿಕ್ ಸಾಯಿ ಅವರನ್ನು ಆತ್ಮೀಯವಾಗಿ ಸನ್ಮಾನಿಸಿ ಶುಭ ಕೋರಿದ ಮಾಜಿ ಶಾಸಕರು, ನಿಮ್ಮ ಪರಿಶ್ರಮ, ಶಿಸ್ತು, ಸಮರ್ಪಣೆ ಮತ್ತು ಪ್ರತಿಭೆ ಇನ್ನಷ್ಟು ಎತ್ತರಕ್ಕೆ ಕೊಂಡೊಯ್ಯಲಿ. ಭವಿಷ್ಯದಲ್ಲಿ ದೇಶ-ವಿದೇಶಗಳಲ್ಲಿ ಮತ್ತಷ್ಟು ಸಾಧನೆಗಳನ್ನು ಮಾಡಲಿ ಎಂದು ಹಾರೈಸಿದರು.

## ಬಳ್ಳಾರಿ: ಮತದಾರರ ಪಟ್ಟಿ ಪರಿಷ್ಕರಣೆಗೆ ಹೊಸ ವೇಳಾಪಟ್ಟಿ

## ಆ.24ರಂದು ಕರಡುಪಟ್ಟಿ ಪ್ರಕಟ; ಸೆ.23ರವರೆಗೆ ಆಕ್ಷೇಪಣೆ ಸಲ್ಲಿಕೆಗೆ ಅವಕಾಶ-ಡಿಸಿ.ನಾಗೇಂದ್ರಪ್ರಸಾದ್

**ಬಳ್ಳಾರಿ,ಆ.11.**ಭಾರತ ಚುನಾವಣಾ ಆಯೋಗವು ಮತದಾರರ ಪಟ್ಟಿ ವಿಶೇಷ ಸಮಗ್ರ ಪರಿಷ್ಕರಣೆ ಕಾರ್ಯಕ್ಕೆ ಪರಿಷ್ಕೃತ ವೇಳಾಪಟ್ಟಿ ಪ್ರಕಟಿಸಿದ್ದು, ಬಳ್ಳಾರಿ ಜಿಲ್ಲೆಯ ಐದು ವಿಧಾನಸಭಾ ಕ್ಷೇತ್ರಗಳಲ್ಲಿ ಮತದಾರರ ಪಟ್ಟಿಯ ಪರಿಷ್ಕರಣೆ ಪ್ರಕ್ರಿಯೆ ಚುರುಕುಗೊಳ್ಳಲಿದೆ.

ಜಿಲ್ಲೆಯ 1,227 ಮತಗಟ್ಟೆಗಳಿಗೆ ಸಂಬಂಧಿಸಿದಂತೆ ಎಸ್‌ಐಆರ್ ವ್ಯಾಪ್ತಿಯಲ್ಲಿ ಬರುವ ಮತದಾರರ ಮಾಹಿತಿಯನ್ನು ಪರಿಶೀಲಿಸುವ ಕಾರ್ಯ ನಡೆಯುತ್ತಿದ್ದು, ಪರಿಷ್ಕೃತ ವೇಳಾಪಟ್ಟಿಯಂತೆ ಆ.24ರಂದು ಕರಡು ಮತದಾರರ ಪಟ್ಟಿ ಪ್ರಕಟವಾಗಲಿದೆ. ಕರಡು ಪಟ್ಟಿ ಪ್ರಕಟವಾದ ದಿನದಿಂದ ಸೆ.23ರವರೆಗೆ ಸಾರ್ವಜನಿಕರು ಅಹವಾಲು ಮತ್ತು ಆಕ್ಷೇಪಣೆಗಳನ್ನು ಸಲ್ಲಿಸಬಹುದಾಗಿದೆ.

***ಐದು ಕ್ಷೇತ್ರಗಳಲ್ಲಿ 12.29 ಲಕ್ಷಕ್ಕೂ ಹೆಚ್ಚು ಮತದಾರರು**: ಬಳ್ಳಾರಿ ಜಿಲ್ಲೆಯ ಐದು ವಿಧಾನಸಭಾ ಕ್ಷೇತ್ರಗಳಲ್ಲಿ ಒಟ್ಟು 12,27,958 ಮತದಾರರು ಇದ್ದಾರೆ. ಈ ಪೈಕಿ ಬಳ್ಳಾರಿ ನಗರ ಕ್ಷೇತ್ರದಲ್ಲಿ 2,79,144. ಬಳ್ಳಾರಿ ಗ್ರಾಮೀಣ ಕ್ಷೇತ್ರದಲ್ಲಿ 2,51,325. ಸಿರುಗುಪ್ಪ ಕ್ಷೇತ್ರದಲ್ಲಿ 2,28,277. ಕಂಪ್ಲಿ ಕ್ಷೇತ್ರದಲ್ಲಿ 2,28,666 ಹಾಗೂ ಸಂಡೂರು ಕ್ಷೇತ್ರದಲ್ಲಿ 2,42,174 ಮತದಾರರಿದ್ದಾರೆ. SIR ಪ್ರಕ್ರಿಯೆಯಲ್ಲಿ Absentee, Shifted, Dead, Duplicate ಹಾಗೂ Other ವಿಭಾಗಗಳಿಗೆ ಸೇರಿದ ಮತದಾರರ ಮಾಹಿತಿಯನ್ನು ಗುರುತಿಸಿ ಪರಿಶೀಲಿಸಲಾಗುತ್ತಿದೆ. ಈ ಪಟ್ಟಿಗೆ ಸಂಬಂಧಿಸಿದ ಮಾಹಿತಿ ಸಾರ್ವಜನಿಕರ ಪರಿಶೀಲನೆಗೆ ಲಭ್ಯವಾಗುವಂತೆ ಮಾಡಲಾಗಿದೆ.



***ಆ.17ರವರೆಗೆ BLOಗಳಿಗೆ ಮಾಹಿತಿ ನೀಡಲು ಅವಕಾಶ:*** SIR ಪಟ್ಟಿಯಲ್ಲಿ ಹೆಸರು ಇರುವ ಅಥವಾ ಈ ಪಟ್ಟಿಗೆ ಸಂಬಂಧಿಸಿದಂತೆ ಯಾವುದೇ ಮಾಹಿತಿ ಹೊಂದಿರುವವರು ತಮ್ಮ ವ್ಯಾಪ್ತಿಯ ಮತಗಟ್ಟೆಯ ಃಐಔ (ಮತಗಟ್ಟೆ ಮಟ್ಟದ ಅಧಿಕಾರಿ)ಗಳಿಗೆ ಮಾಹಿತಿ ನೀಡಬಹುದಾಗಿದೆ. ನಿಯಮಾನುಸಾರ ಪರಿಶೀಲನೆ ನಡೆಸಿ, ಸಂಬಂಧಪಟ್ಟ ಮತದಾರರ ದಾಖಲೆಗಳನ್ನು ಡಿಜಿಟೈಸ್ ಮಾಡುವ ಕಾರ್ಯಕ್ಕೆ ಆ.17ರವರೆಗೆ ಕಾಲಾವಕಾಶ ನೀಡಲಾಗಿದೆ.

***ಹೊಸದಾಗಿ ಹೆಸರು ಸೇರ್ಪಡೆಗೂ ಅವಕಾಶ:*** ಕರಡು ಮತದಾರರ ಪಟ್ಟಿ ಪ್ರಕಟವಾದ ಬಳಿಕ ಆ.24ರಿಂದ ಸೆ.23ರವರೆಗೆ ಹೊಸದಾಗಿ ಮತದಾರರ ಪಟ್ಟಿಯಲ್ಲಿ ಹೆಸರು ಸೇರ್ಪಡೆ ಮಾಡಿಕೊಳ್ಳಲು ಅವಕಾಶವಿದೆ. ಅರ್ಹ ಮತದಾರರು ನಮೂನೆ-6, ನಿಗದಿಪಡಿಸಿರುವ ದಾಖಲೆಗಳು ಹಾಗೂ ಘೋಷಣಾ ನಮೂನೆಯನ್ನು ಸಲ್ಲಿಸಿ ನೋಂದಣಿ ಮಾಡಿಸಿಕೊಳ್ಳಬಹುದು. ಜಿಲ್ಲೆಯ SIR ಪಟ್ಟಿಯನ್ನು ಜಿಲ್ಲಾಡಳಿತದ ಅಧಿಕೃತ ವೆಬ್‌ಸೈಟ್ ಹಾಗೂ ಮುಖ್ಯ ಚುನಾವಣಾಧಿಕಾರಿಗಳ ಕರ್ನಾಟಕದ ಅಧಿಕೃತ ವೆಬ್‌ಸೈಟ್‌ನಲ್ಲಿ ಪ್ರಕಟಿಸಲಾಗಿದೆ. ಸಾರ್ವಜನಿಕರು ಪಟ್ಟಿಯನ್ನು ಪರಿಶೀಲಿಸಿ ತಮ್ಮ ಹೆಸರು ಹಾಗೂ ವಿವರಗಳನ್ನು ಖಚಿತಪಡಿಸಿಕೊಳ್ಳಬಹುದಾಗಿದೆ.

ಅರ್ಹ ಮತದಾರರು ಹೆಚ್ಚಿನ ಆಸಕ್ತಿ ವಹಿಸಿ ಮತದಾರರ ಪಟ್ಟಿಯಲ್ಲಿ ತಮ್ಮ ಹೆಸರು ನೋಂದಾಯಿಸಿಕೊಳ್ಳುವ ಮೂಲಕ ಸುಭದ್ರ ಹಾಗೂ ಪ್ರಜಾಪ್ರಭುತ್ವ ವ್ಯವಸ್ಥೆಯನ್ನು ಬಲಪಡಿಸುವಲ್ಲಿ ಸಕ್ರಿಯವಾಗಿ ಪಾಲ್ಗೊಳ್ಳಬೇಕು ಎಂದು ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ಚುನಾವಣಾಧಿಕಾರಿ ಕೆ. ನಾಗೇಂದ್ರ ಪ್ರಸಾದ್ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಪಡಿತರ ಅಕ್ಕಿ ಎಂದು ಜೋಳದ ವಾಹನವನ್ನು ಠಾಣೆಗೆ ತಂದ ಪೊಲೀಸರು: ಬೇಸರಗೊಂಡ ಮಾಲೀಕರು

**ಬಳ್ಳಾರಿ ಆ 11.** ಜಿಲ್ಲೆಯಲ್ಲಿ ಕೆಲ ಠಾಣೆಗಳು ಸಾರ್ವಜನಿಕರಿಗೆ ವಿನಾಕಾರಣ ತೊಂದರೆ ಕೊಡುತ್ತಾ ಇದ್ದಾರೆ. ಈಗಾಗಲೇ ಠಾಣೆಗಳು ಪಂಚಾಯತಿ ಕಟ್ಟೆಗಳು ಆಗಿದಾವೆ. ಮಧ್ಯವರ್ತಿಗಳ ಹಾವಳಿ ಜಾತಿ ಲೆಕ್ಕಾಚಾರದಲ್ಲಿ ಠಾಣೆ ಅಧಿಕಾರಿಗಳ ವರ್ತನೆ ಇದೇ ಅನ್ನುವ ಆರೋಪ ಲಂಚ ಬೇಡಿಕೆ ವಿನಾಕಾರಣ ವಿಚಾರಣೆ ತಾಸುಗಟ್ಟಲೆ ಠಾಣೆಗಳ ಮುಂದೆ ದೂರುದಾರರು ಕಾದುಕೊಂಡು ಇರೋದು. ಸುಳ್ಳು ಪ್ರಕರಣಗಳು ಆಗುತ್ತಾನೇ ಇದ್ದಾವೆ. ಇದರ ಮಧ್ಯೆ ಅಕ್ರಮ ದಂಧೆಗಳು ಅಪರಾಧ ಪ್ರಮಾಣ ಬೆಳೆದು ನಿಂತಿದೆ. ದಿನನಿತ್ಯ ಆಗುತ್ತಿರುವ ಘಟನೆಗಳು ಕಣ್ಣು ಮುಂದೆ ಕಾಣುತ್ತ ಇದ್ದಾವೆ. ಇದರ ಮಧ್ಯದಲ್ಲಿ ಪಡಿತರ ಅಕ್ಕಿ ಕಾಳಸಂತೆ ದಂಧೆ , ನಿಲ್ಲೋದು ಸಾಧ್ಯವಿಲ್ಲ. ಪೊಲೀಸ್ ಇಲಾಖೆ ಒಂದೇ ಅಲ್ಲ ಸಂಬಂದಿತ ಎಲ್ಲಾ ಇಲಾಖೆ ಗಳು ವಿಫಲವಾಗಿವೆ.


ಪಡಿತರ ಅಕ್ರಮ ಅಕ್ಕಿ ಎಂದು ಗ್ರಾಮೀಣ ಠಾಣೆಯ ಅಧಿಕಾರಿಗಳು ಕಳೆದ ಬುಧವಾರ ಆಟೋ ಒಂದು ರಲ್ಲಿ ಪಡಿತರ ಅಕ್ಕಿ ಕಾಳಸಂತೆಗೆ ಹೋಗುತ್ತಾ ಇದ್ದಾವೆ ಅನ್ನುವ ಮಾಹಿತಿ ಹಿನ್ನೆಲೆ ಒಂದು ಆಟೋ ಹಿಡಿಯುತ್ತಾರೆ ಆದರೇ ಹಿಂದೆಯೇ ಮತ್ತೊಂದು ದಾವಣಗೆರೆ ಮೂಲದ ಆಟೋ ಒಂದು ಬಳ್ಳಾರಿ ಕೃಷಿ ಮಾರುಕಟ್ಟೆದಿಂದ ಬಿಲ್ ಪಡೆದು ನಟರಾಜ್ & ಕೋ,ಅವರ ಅಂಗಡಿ ಬಿಲ್ ಮೂಲಕ ಸರಿಯಾದ ದಾಖಲೆ ಮೂಲಕ ಜೋಳವನ್ನು ದಾವಣಗೆರೆಗೆ ಪುಷ್ಪವತಿ ಅನ್ನುವ ಅವರೆಗೆ ತಗದುಕೊಂಡು ಹೋಗುತಾ ಇತ್ತು ಅಷ್ಟೇ ಹಿಂದೆ ಮುಂದೆ ನೋಡದೆ ಠಾಣೆಗೆ ತಂದು ಇಟ್ಟು ಕೂತುಕೊಂಡರು. ಜೋಳ ಸರಬರಾಜು ಮಾಡುತ್ತಿರುವ ಮಾಲೀಕರು ಗಾಬರಿಯಾಗಿ ಏನು ಬಂತಪ್ಪ ಕಾಲ ತಿನ್ನುವ ಜೋಳ ದಾಖಲೆ ಎಲ್ಲಾ ಸರಿಯಾಗಿ ಇದ್ದು ಪೊಲೀಸ್ ರು ಹಿಡಿಕೊಳ್ಳೋದು



ಏನು ಎಂದು ಓಡಿ ಬಂದ್ರು ಏನು ಪ್ರಾಬ್ಲಮ್ ಸರ್ ಎಂದು ಕೇಳಿದರು ಪೊಲೀಸ್ ರು ಹೇಳಿದ್ದು ಮೇಲಿನ ಅಧಿಕಾರಿಗಳು ಆದೇಶ ಇದು ಪಡಿತರ ಜೋಳ ಅಂದರು. ಅಯ್ಯೋ ಶಿವನೇ, ನಾವು ಅಂತಾ ಕೆಲಸ ಮಾಡಲ್ಲ ನಮ್ಮ ಅಂಗಡಿಗೆ ಒಳ್ಳೆಯ ಹೆಸರು ಇದೇ ನಾವು ಟೆಂಡರ್‌ನಲ್ಲಿ ಖರೀದಿ ಮಾಡುತ್ತಿವಿ ದಯವಿಟ್ಟು ತಮಗೆ ರಾಂಗ್ ಮೆಸೇಜ್ ಆಗಿದೆ ಗಾಡಿ ಬಿಡಿ ಎಂದು ಗಂಟೆ ಗಟ್ಟಲೆ ಕಾದು ಬಿಟ್ಟರು ಸಾಯಂಕಾಲ ಕೊನೆಗೆ ಆಹಾರ ಸರಬರಾಜು ಇಲಾಖೆ ಅಧಿಕಾರಿಗಳನ್ನು ಕರೆಸಿ ಚೆಕ್ ಮಾಡದ ಮೇಲೆ ವಾಹನವನ್ನು ಬಿಟ್ಟರು.

ಅಂದರೇ ಪೊಲೀಸರು ಅಂದುಕೊಂಡರೇ ಏನಾದರು ಮಾಡಬಹುದಾ.. ಹಿರಿಯ ಅಧಿಕಾರಿಗಳು ಇದ್ದು ಈ ರೀತಿ ಮಾಡಿದರೆ ಸಾರ್ವಜನಿಕ ವಲಯದಲ್ಲಿ ಏನು ಸಂದೇಶ ಹೋಗುತ್ತೆ ಡಿಪಾರ್ಟ್ಮೆಂಟ್ ಕುರಿತು ಈಗಾಗಲೇ ಇದೇ ಠಾಣೆನಲ್ಲಿ ಮತ್ತೊಂದು ಅಧಿಕಾರಿ ಲಂಚ ಬೇಡಿಕೆ ಇಟ್ಟಿದ್ದ ಸುದ್ದಿ ಕೂಡ ಆಗಿತ್ತು ಆದರೇ ಶರವೇಗದ ಅಧಿಕಾರಿಗಳು ದಿಟ್ಟ ಅಧಿಕಾರಿಗಳು ಎಂದು ಜಿಲ್ಲೆಯೇ ಜನತೆ ಮನಸುನಲ್ಲಿ ಇತ್ತು,

# ಬೆಳೆವಿಮೆ ಪರಿಹಾರ, ಗ್ರಾಮೀಣ ಕ್ಷೇತ್ರಕ್ಕೆ ಅನ್ಯಾಯ ಖಂಡಿಸಿ ಶಾಸಕ ಮತ್ತಿಮಡು ಪ್ರತಿಭಟನೆ




**ಕಲಬುರಗಿ, ಆ. 11:** ಬೆಳೆವಿಮೆ ಪರಿಹಾರ ವಿತರಿಸುವಲ್ಲಿ ಕಲಬುರಗಿ ಗ್ರಾಮೀಣ ಕ್ಷೇತ್ರಕ್ಕೆ ಅನ್ಯಾಯ ಮಾಡಿರುವುದು ಖಂಡಿಸಿ, ಜಿಲ್ಲೆಯನ್ನು ಬರಪೀಡಿತ ಎಂದು ಘೋಷಣೆ ಮಾಡಬೇಕು ಎಂದು ಒತ್ತಾಯಿಸಿ, ಬಿಜೆಪಿ ಶಾಸಕ ಮತ್ತಿಮಡು ನೇತೃತ್ವದಲ್ಲಿ ಗ್ರಾಮೀಣ ಮಂಡಲದಿಂದ ಕಮಲಾಪುರ ಬಸ್ ನಿಲ್ದಾಣದ ಎದುರಿನ ರಾಷ್ಟ್ರೀಯ ಹೆದ್ದಾರಿಯಲ್ಲಿ ಸಂಚಾರ ತಡೆದು ಬೃಹತ್ ಪ್ರತಿಭಟನೆ ನಡೆಸಲಾಯಿತು.

ಕಳೆದ ವರ್ಷ ಅತಿವೃಷ್ಟಿಯಿಂದ ರೈತರು ಸಂಕಷ್ಟ ಎದುರಿಸಿದ್ದರು. ಇದೀಗ ಬೆಳೆವಿಮೆ ಎರಡನೇ ಕಂತಿನ ಪರಿಹಾರ ವಿತರಣೆಯಲ್ಲಿ ರೈತರಿಗೆ ಅನ್ಯಾಯ ಮಾಡಲಾಗಿದೆ. ಮುಂಗಾರು ಕೈಕೊಟ್ಟಿದ್ದು, ಅನ್ನದಾತರು ಅಕ್ಷರಶ ಬೀದಿಗೆ ಬಂದಿದ್ದಾರೆ. ಕೂಡಲೇ ಸರ್ಕಾರ ಜಿಲ್ಲೆಯನ್ನು ಬರಪೀಡಿತ ಎಂದು ಘೋಷಣೆ ಮಾಡಬೇಕು.

ಆ.13ರೊಳಗೆ ಮನವಿಗೆ ಸ್ಪಂದಿಸದಿದ್ದರೆ ವಿಧಾನಸೌಧದ ಒಳಗೆ ಮತ್ತು ಹೊರಗೆ ಪ್ರತಿಭಟನೆ ಮಾಡುತ್ತೇನೆ ಎಂದು ಮತ್ತಿಮಡು ಎಚ್ಚರಿಕೆ ನೀಡಿದರು. ಜಿಲ್ಲಾ ಪಂಚಾಯತ್ ಮಾಜಿ ಅಧ್ಯಕ್ಷ ಶಿವಪ್ರಭು ಪಾಟೀಲ್ ಮಾತನಾಡಿ, ಕೃಷಿ, ಕಂದಾಯ, ವಿಮೆ ಕಂಪನಿ ಅಧಿಕಾರಿಗಳ ನಿರ್ಲಕ್ಷದಿಂದಾಗಿ ರೈತರಿಗೆ ವಿಮೆ ಪರಿಹಾರದಲ್ಲಿ ಅನ್ಯಾಯವಾಗಿದೆ.

ಹೀಗಾಗಿ ತಪಿತಸ್ಥರ ವಿರುದ್ಧ ಕ್ರಮಕೈಗೊಳ್ಳಬೇಕು. ರೈತರಿಗೆ ನ್ಯಾಯ ಕಲ್ಪಿಸಬೇಕು. ಬಿಜೆಪಿ ಜಿಲ್ಲಾಧ್ಯಕ್ಷ ಅಶೋಕ ಬಗಲಿ ಮಾತನಾಡಿ, ಕಾಂಗ್ರೆಸ್ ಸರ್ಕಾರಕ್ಕೆ ರೈತರ ಕಾಳಜಿಯಿಲ್ಲ. ಹೈಕಮಾಂಡ್ ಭೇಟಿ, ಮಂತ್ರಿ ಮಂಡಲ ರಚನೆಯಲ್ಲಿ ತಲ್ಲೀನವಾಗಿದೆ. ಸಂಕಷ್ಟದಲ್ಲಿರುವ ರೈತರು ಬಾರುಕೋಲಿನ ಚಾಟಿ ಬೀಸಿದರೆ ಸರ್ಕಾರವೇ ಅಲುಗಾಡುತ್ತದೆ ಎಂದು ಎಚ್ಚರಿಕೆ ನೀಡಿದರು.

ಎರಡು ಗಂಟೆ ಹೆದ್ದಾರಿ ಸ್ಥಗಿತ ಕಲಬುರಗಿ–ಬೀದರ್ ರಾಷ್ಟ್ರೀಯ ಹೆದ್ದಾರಿಯಲ್ಲಿ ಸಂಚಾರ ತಡೆದು ಬಿಜೆಪಿ ಪ್ರತಿಭಟನೆ ನಡೆಸಿದ್ದರಿಂದ ಪ್ರಯಾಣಿಕರು ಹಾಗೂ ವಾಹನ ಸವಾರರು ಪರದಾಡಿದರು. ಬೆಳಗ್ಗೆ 10.30ಕ್ಕೆ ಆರಂಭವಾದ ಹೋರಾಟ ಮಧ್ಯಾಹ್ನ 12.30ಕ್ಕೆ ಮುಕ್ತಾಯವಾಯಿತು. ಪ್ರಮುಖ ಮಾರ್ಗ ಇದಾಗಿದ್ದರಿಂದ ರಸ್ತೆಯ ಎರಡು ಮಾರ್ಗದಲ್ಲಿ ನೂರಾರು ವಾಹನಗಳು ಸರದಿ ಸಾಲಿನಲ್ಲಿ ನಿಂತಿದ್ದವು. ಹೋರಾಟ ಮುಗಿಯುತ್ತಿದ್ದಂತೆ ಪೊಲೀಸರು ಸುಗಮ ಸಂಚಾರಕ್ಕೆ ಅನುವು ಮಾಡಿಕೊಟ್ಟರು.

**ಕೃಷಿ ಅಧಿಕಾರಿಗಳು ಆಗಮಿಸಬೇಕೆಂದು ಪಟ್ಟು:** ಕೃಷಿ ಇಲಾಖೆ ಜಂಟಿ ನಿರ್ದೇಶಕರು ಅಥವಾ ಸಹಾಯಕ ನಿರ್ದೇಶಕರು ಸ್ಥಳಕ್ಕಾಗಮಿಸಿ ನಮ್ಮ ಸಮಸ್ಯೆ ಆಲಿಸುವವರೆಗೂ ಹೋರಾಟ ಕೈಬಿಡುವುದಿಲ್ಲ ಎಂದು ಪ್ರತಿಭಟನಾಕಾರರು ಪಟ್ಟುಹಿಡಿದರು.

ಸಿಪಿಐ ಶಿವಶಂಕರ ಸಾಹು, ಪಿಎಸ್ಐ ಸುಖಾನಂದ ಸಿಂಗೆ ಅವರು ಹೋರಾಟ ಕೈಬಿಡುವಂತೆ ಮನವಿ ಮಾಡಿದರೂ ಕೇಳಲಿಲ್ಲ. ಕೊನೆಗೆ ತಹಸೀಲ್ದಾರ್ ಮಹಮ್ಮದ್ ಯುನೂಸ್ ಅವರು ಮನವಿಪತ್ರ ಸ್ವೀಕರಿಸಿ, ನಿಮ್ಮೆಲ್ಲ ಬೇಡಿಕೆ ಕೃಷಿ ಅಧಿಕಾರಿಗಳಿಗೆ ತಿಳಿಸಲಾಗುವುದು ಎಂದು ಭರವಸೆ ನೀಡಿದ್ದರಿಂದ ಪ್ರತಿಭಟನೆ ಮೊಟಕು ಗೊಳಿಸಿದರು.

### ಕೇವಲ 16 ಗಂಟೆಗಳಲ್ಲಿ ಪ್ರಯಾಣ ಪೂರ್ಣಗೊಳ್ಳುವ ನಿರೀಕ್ಷೆ

# ಕಲಬುರಗಿ ಮೂಲಕ ಬೆಂಗಳೂರು–ಮುಂಬೈ ವಂದೇಭಾರತ್ ಸ್ಲೀಪರ್ ರೈಲು

**ಕಲಬುರಗಿ, ಆ. 11:** ಕಲ್ಯಾಣ ಕರ್ನಾಟಕದ ರಾಯಚೂರು, ಯದಗಿರಿ ಮತ್ತು ಕಲಬುರಗಿ ಮೂರು ಜಿಲ್ಲೆಗಳನ್ನು ಸಂಪರ್ಕಿಸುವ ಬಹುನಿರೀಕ್ಷಿತ ಬೆಂಗಳೂರು–ಮುಂಬೈ ನಡುವಿನ ವಂದೇ ಭಾರತ್ ಸ್ಲೀಪರ್ ರೈಲು ಸಂಚಾರಕ್ಕೆ ಸಿದ್ಧತೆ ಅಂತಿಮ ಹಂತ ತಲುಪಿದೆ. ಕರ್ನಾಟಕ ಪ್ರಧಾನ ಕಚೇರಿಯ ರೈಲ್ವೆ ವಲಯವು ಬೆಂಗಳೂರಿನ ಬಿಇಎಂಎಲ್ ನಿಂದ ತಯಾರಿಸಲ್ಪಟ್ಟ ಎರಡು 16–ಕೋಚ್ ರೇಕ್‌ಗಳನ್ನು ಹೊಂದಿರುವ ರೈಲನ್ನು ರೈಲ್ವೆ ಇಲಾಖೆ ಸ್ವೀಕರಿಸಿದೆ. ಇವುಗಳನ್ನು ಚೆನ್ನೈನ ಇಂಟಿಗ್ರಲ್ ಕೋಚ್ ಫ್ಯಾಕ್ಟರಿ ನೇತೃತ್ವದ ಕಾರ್ಯಕ್ರಮದಡಿ ನಿಯೋಜಿಸಲಾಗಿದೆ.

ವ್ಯಾಪಕ ಪರೀಕ್ಷೆಗಳು ಮತ್ತು ಪರಿಶೀಲನೆಗಳ ನಂತರ, ರೈಲು ಸೆಟ್‌ಗಳನ್ನು ಈಗ ನಿಯೋಜಿಸ ಲಾಗಿದೆ ಎಂದು ಕಲಬುರಗಿಗೆ ಭೇಟಿ ನೀಡಿದ ಬೆಂಗಳೂರಿನ ವಿಭಾಗೀಯ ರೈಲ್ವೆ ವ್ಯವಸ್ಥಾಪಕ ಆಶುತೋಷ್ ಕುಮಾರ್ ಸಿಂಗ್ ಮಾಧ್ಯಮಗಳಿಗೆ ಮಾಹಿತಿ ನೀಡಿದ ಅವರು, ನಾವು ಬೆಂಗಳೂರು–ಮುಂಬೈ ಮಾರ್ಗದಲ್ಲಿ ವಂದೇ ಭಾರತ್ ರೈಲು ಸಂಚಾರಕ್ಕೆ ಸಿದ್ಧರಾಗುತ್ತಿದ್ದೇವೆ ಮತ್ತು ವೇಳಾಪಟ್ಟಿಯನ್ನು ಶೀಘ್ರದಲ್ಲೇ ತಿಳಿಸಲಾಗುವುದು ಎಂದು ಅವರು ಹೇಳಿದರು.ಪ್ರಯಾಣದ ಸಮಯವನ್ನು ನಿರ್ಣಯಿಸಲು ಮತ್ತು ವೇಗ ಪ್ರಯೋಗಗಳನ್ನು ಸುಗಮಗೊಳಿಸಲು ಅನುಮೋದಿತ ಮಾರ್ಗದಲ್ಲಿ ಶೀಘ್ರದಲ್ಲೇ ಪ್ರಾಯೋಗಿಕ ಸಂಚಾರ ನಡೆಸಲಾಗುವುದು ಎಂದು ಬೆಂಗಳೂರಿನ ಹೆಚ್ಚುವರಿ ವಿಭಾಗೀಯ ರೈಲ್ವೆ ವ್ಯವಸ್ಥಾಪಕ ಪರೀಕ್ಷಿತ್ ಮೋಹನ್ ಪುರಿಯಾ ತಿಳಿಸಿದರು.

ಕೆಆರ್‌ಎಸ್ ಬೆಂಗಳೂರು ಮತ್ತು ಸಿಎಸ್‌ಟಿ ಮುಂಬೈ ನಡುವೆ ರೈಲು ಓಡಿಸುವುದು ಪ್ರಬಲ ದೃಷ್ಟಿಕೋನವಾಗಿದ್ದರೂ, ಎಸ್‌ಎಂವಿಟಿ ಬೆಂಗಳೂರಿನಿಂದ ಸೇವೆಯನ್ನು ಪ್ರಾರಂಭಿಸುವ ಸಾಧ್ಯತೆಯನ್ನು ಸಹ ಪರಿಗಣಿಸಲಾಗುತ್ತಿದೆ ಎಂದು ಮೋಹನ್ ಪುರಿಯಾ ಹೇಳಿದರು. ಪ್ರಾಥಮಿಕ ರೇಕ್ ನಿರ್ವಹಣೆಯನ್ನು ಬೆಂಗಳೂರಿನಲ್ಲಿ ಕೈಗೊಳ್ಳಲಾಗುವುದು. ಸಿಂಗ್ ಅವರ ಪ್ರಕಾರ, ರೈಲು ರಾತ್ರಿಯಲ್ಲಿ ಬೆಂಗಳೂರು ಮತ್ತು ಮುಂಬೈ ಎರಡರಿಂದಲೂ ಹೊರಡುತ್ತದೆ ಮತ್ತು ಪ್ರಯಾಣ ಅವಧಿ ಒಟ್ಟು ಸುಮಾರು 16 ಗಂಟೆಗಳನ್ನು ತೆಗೆದು ಕೊಳ್ಳುತ್ತದೆ. ವಿಮಾನ ಟಿಕೆಟ್‌ಗಳಿಗಿಂತ ದರ ಗಣನೀಯವಾಗಿ ಕಡಿಮೆಯಿರುತ್ತದೆ. ಸೇವೆ ಯಶಸ್ವಿಯಾಗುತ್ತದೆ ಎಂದು ವಿಶ್ವಾಸ ವ್ಯಕ್ತಪಡಿಸಿದರು.




## ಟಿಕೆಟ್ ದರ ಎಷ್ಟು

16–ಕೋಚ್ ರೈಲಿನಲ್ಲಿ 11 3ಎಸಿ ಕೋಚ್‌ಗಳು, ನಾಲ್ಕು 2 ಎಸಿ ಕೋಚ್‌ಗಳು ಮತ್ತು ಒಂದು 1 ಎಸಿ ಕೋಚ್ ಇರಲಿದೆ. 3 ಎಸಿ ದರವು ಆನ್–ಬೋರ್ಡ್ ಊಟವೂ ಒಳಗೊಂಡಂತೆ 3,000 ರೂ. ಆಗುವ ನಿರೀಕ್ಷೆಯಿದೆ.

## ಕಲ್ಯಾಣ ಕರ್ನಾಟಕ ಭಾಗಕ್ಕೂ ಸಂಪರ್ಕ

ಈ ರೈಲು ಕಲ್ಯಾಣ ಕರ್ನಾಟಕದ ರಾಯಚೂರು, ಯಾದಗಿರಿ ಮತ್ತು ಕಲಬುರಗಿ ಮೂಲಕ ಚಲಿಸಲಿದ್ದು, ಈ ಭಾಗದ ಜನರಿಗೆ ಮುಂಬಯಿ ಮತ್ತು ಬೆಂಗಳೂರು ತಲುಪಲು ಸುಲಭ ಸೌಕರ್ಯವಾಗಲಿದೆ. ಭಾರತದ ಎರಡು ಪ್ರಮುಖ ನಗರಗಳ ನಡುವೆ ವೇಗದ ರೈಲು ಸಂಪರ್ಕಕ್ಕಾಗಿ ದೀರ್ಘಕಾಲದಿಂದ ಬಾಕಿ ಉಳಿದಿರುವ ಬೇಡಿಕೆ ಈಡೇರಿಸಲಿದೆ. ಪ್ರಸ್ತುತ, ಕೇವಲ ಎರಡು ಮೀಸಲಾದ ರೈಲುಗಳು (ಉದ್ಯಾನ ಎಕ್ಸ್‌ಪ್ರೆಸ್ ಮತ್ತು ಎಸ್‌ಎಂವಿಟಿ ಬೆಂಗಳೂರು–ಎಲ್‌ಟಿಟಿ ಮುಂಬೈ ಎಕ್ಸ್‌ಪ್ರೆಸ್) ಮಾತ್ರ ಈ ಮಾರ್ಗದಲ್ಲಿ ಕಾರ್ಯನಿರ್ವಹಿಸುತ್ತವೆ. ಆದರೆ ಅವು ಸುಮಾರು 24–25 ಗಂಟೆಗಳನ್ನು ತೆಗೆದುಕೊಳ್ಳುತ್ತವೆ. ಹೊಸ ವಂದೇ ಭಾರತ್ ಸ್ಲೀಪರ್ ಸೇವೆ ಆರಂಭವಾದರೆ ಪ್ರಯಾಣದ ಅವಧಿ ಗಣನೀಯವಾಗಿ ಕಡಿಮೆಯಾಗಲಿದೆ.

ಕರ್ನಾಟಕದ ಒಳನಾಡಿಗೆ ಉತ್ತಮ ಸೇವೆ ಸಲ್ಲಿಸಲು ವಂದೇ ಭಾರತ್ ಸ್ಲೀಪರ್ ಅನ್ನು ಹುಬ್ಬಳ್ಳಿ ಮೂಲಕ ಓಡಿಸಬೇಕೆಂದು ಸಾರ್ವಜನಿಕ ಪ್ರತಿನಿಧಿಗಳು ಮತ್ತು ರೈಲ್ವೆ ಕಾರ್ಯಕರ್ತರು ಒತ್ತಾಯಿಸಿದ್ದರು. ಆದರೆ ಅದರ ತುಲನಾತ್ಮಕವಾಗಿ ಮಾರ್ಗದ ದೂರ (1,216 ಕಿಮೀ) ಮತ್ತು ಸಿಂಗಲ್ ಹಳಿಗಳು ಮತ್ತು ಕೆಲವು ವಿಭಾಗಗಳಲ್ಲಿ ವೇಗದ ನಿರ್ಬಂಧಗಳನ್ನು ನೀಡಿರುವುದರಿಂದ ಈ ಆಯ್ಕೆಯನ್ನು ಪರಿಗಣಿಸಲಾಗಿಲ್ಲ.

# ಸಿಡಬ್ಲ್ಯುಆರ್‌ಸಿ ಶಿಫಾರಸಿಗೆ ಆಕ್ರೋಶ ಮಂಡ್ಯದಲ್ಲಿ ರೈತರ ಭಾರಿ ಪ್ರತಿಭಟನೆ



**ಮಂಡ್ಯ, ಆ.11:** ತಮಿಳುನಾಡಿಗೆ ಮುಂದಿನ 15 ದಿನಗಳ ಕಾಲ ದಿನಂಪ್ರತಿ 12,000 ಕ್ಯೂಸೆಕ್ ನೀರನ್ನು ಹರಿಸುವಂತೆ ಕಾವೇರಿ ನದಿ ನೀರು ನಿಯಂತ್ರಣ ಸಮಿತಿ ಶಿಫಾರಸು ಮಾಡಿದ ಬೆನ್ನಲ್ಲೇ ಕಾವೇರಿ ಜಲಾನಯನ ಪ್ರದೇಶದ ಜನರಲ್ಲಿ ಆಕ್ರೋಶ ಭುಗಿಲೆದ್ದಿದೆ.

ಮಂಡ್ಯ ನಗರದ ಪ್ರಮುಖ ಕೇಂದ್ರವಾದ ಸಂಜಯ ವೃತ್ತದಲ್ಲಿ ಜಮಾಯಿಸಿದ ನೂರಾರು ರೈತರು ಹಾಗೂ ಕನ್ನಡಪರ ಸಂಘಟನೆಗಳ ಕಾರ್ಯಕರ್ತರು ಕೇಂದ್ರ ಸರ್ಕಾರ ಮತ್ತು ಸಿಡಬ್ಲ್ಯುಆರ್‌ಸಿ ವಿರುದ್ಧ ತೀವ್ರ ಆಕ್ರೋಶ ವ್ಯಕ್ತಪಡಿಸಿದರು. ಆಕ್ರೋಶಗೊಂಡ ಪ್ರತಿಭಟನಾಕಾರರು ಬೆಂಗಳೂರು–ಮೈಸೂರು ಹೆದ್ದಾರಿಯಲ್ಲೇ ಮಲಗಿ ಧರಣಿ ನಡೆಸಿದರು.ಬಾಯಿ ಬಡಿದುಕೊಂಡು, ಅಧಿಕಾರಿಗಳ ಹಾಗೂ ಸರ್ಕಾರದ ವಿರುದ್ಧ ಧಿಕ್ಕಾರದ ಕೂಗು ಕೂಗಿದ ರೈತರು, ನೆಲದ ವಾಸ್ತವ ಅರಿಯದೆ ನೀಡಿರುವ ಈ ನಿರ್ದೇಶನವು 'ಕನ್ನಡಿಗರಿಗೆ ಬರೆದ ಮರಣ ಶಾಸನ' ಎಂದು ಖಂಡಿಸಿದರು.

ತಿಳುವಳಿಕೆ ಇಲ್ಲದವರು ಮಾಡುವಂತೆ ಸಮಿತಿ ಆದೇಶ ಹೊರಡಿಸಿದೆ ಎಂದು ಕಿಡಿಕಾರಿದ ಪ್ರತಿಭಟನಾಕಾರರು, ಕಾವೇರಿ ನೀರು ನಿರ್ವಹಣಾ ಪ್ರಾಧಿಕಾರ ತಕ್ಷಣವೇ ಈ ಶಿಫಾರಸ್ಸನ್ನು ಅಮಾನತಿನಲ್ಲಿಡಬೇಕು ಎಂದು ಆಗ್ರಹಿಸಿದರು.

ಸರ್ಕಾರ ಯಾವುದೇ ಕಾರಣಕ್ಕೂ ನೀರು ಬಿಡಬಾರದು, ರಾಜ್ಯದಲ್ಲಿ ತೀವ್ರ ಮಳೆಯ ಅಭಾವವಿದ್ದು, ಬೆಂಗಳೂರು, ಮೈಸೂರು ಹಾಗೂ ಮಂಡ್ಯ ಸೇರಿದಂತೆ ಹಲವು ನಗರಗಳ ಕುಡಿಯುವ ನೀರಿಗೇ ಕಂಠಕ ಎದುರಾಗಿದೆ.ಇಂತಹ ಸಂಕಷ್ಟದ ಪರಿಸ್ಥಿತಿಯಲ್ಲಿ 16 ಟಿಎಂಸಿ ನೀರನ್ನು ಹೊರಹರಿಸಿದರೆ ರಾಜ್ಯದ ಜನತೆ ಏನು ಮಾಡಬೇಕು ಎಂದು ರೈತರು ಪ್ರಶ್ನಿಸಿದ್ದಾರೆ.ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರೇ, ಯಾವುದೇ ಒತ್ತಡಕ್ಕೆ ಮಣಿದು ತಮಿಳುನಾಡಿಗೆ ನೀರು ಹರಿಸಬೇಡಿ. ರಾಜ್ಯದ ರೈತರು ಹಾಗೂ ಜನತೆಯ ಹಿತವನ್ನು ಕಾಪಾಡುವುದು ನಿಮ್ಮ ಮೊದಲ ಕರ್ತವ್ಯ" ಎಂದು ಹೋರಾಟಗಾರರು ಸರ್ಕಾರಕ್ಕೆ ಬಹಿರಂಗವಾಗಿ ಮನವಿ ಮಾಡಿದರು. ರಾಜ್ಯ ಸರ್ಕಾರ ತಕ್ಷಣವೇ ಪ್ರಾಧಿಕಾರದ ಮುಂದೆ ಆಕ್ಷೇಪಣೆ ಸಲ್ಲಿಸಿ, ಈ ಆದೇಶಕ್ಕೆ ತಡೆ ತರಲು ಕಾನೂನು ಸಮರ ಮುಂದು ವರಿಸಬೇಕೆಂದು ಒತ್ತಾಯಿಸಿದರು.

# ಹಳೇ ಪಿಂಚಣಿ ಯೋಜನೆ ಮರು ಜಾರಿಗೊಳಿಸಿ: ಶಾಸಕ ಡಾ.ಬೆಲ್ದಾಳೆ




**ಬೀದರ್, ಆ.11:** ರಾಜ್ಯ ಸರ್ಕಾರ ಶಿಕ್ಷಕರಿಗೆ ಹಳೆಯ ಪಿಂಚಣಿ ಯೋಜನೆಯನ್ನೇ ಮರು ಜಾರಿಗೊಳಿಸಬೇಕು ಎಂದು ಶಾಸಕ ಡಾ.ಶೈಲೇಂದ್ರ ಬೆಲ್ದಾಳೆ ಒತ್ತಾಯಿಸಿದರು.

ಕನ್ನಡ ಸಾಹಿತ್ಯ ಪರಿಷತ್ ಬೀದರ್ ಉತ್ತರ ಘಟಕದಿಂದ ಆಯೋಜಿಸಿದ್ದ ಎರಡು ದಿನಗಳ ಪ್ರಥಮ ಶೈಕ್ಷಣಿಕ ಸಾಹಿತ್ಯ ಸಮ್ಮೇಳನದ ಸಮಾರೋಪ ಸಮಾರಂಭದಲ್ಲಿ ಸ್ಮರಣ ಸಂಚಿಕೆ ಬಿಡುಗಡೆಗೊಳಿಸಿ ಮಾತನಾಡಿದ ಅವರು, ಹಳೆಯ ಪಿಂಚಣಿ ಯೋಜನೆ ಜಾರಿ ಸಂಬಂಧ ಅಧಿವೇಶನದಲ್ಲಿ ಧ್ವನಿ ಎತ್ತುವೆ. ಕರ್ನಾಟಕ ಮಾಧ್ಯಮಿಕ ಶಿಕ್ಷಕರ ಸಂಘದ ಅಧ್ಯಕ್ಷ ಸಂದೀಪ್? ಬೂದಿಹಾಳ ಸಮ್ಮೇಳನ ಉದ್ಘಾಟಿಸಿ ಮಾತನಾಡಿ, ಶಿಕ್ಷಣ ಕ್ಷೇತ್ರದ ಕುರಿತು ಚಿಂತನ– ಮಂಥನಕ್ಕೆ ವೇದಿಕೆ ಕಲ್ಪಿಸುವ ಶೈಕ್ಷಣಿಕ ಕನ್ನಡ ಸಾಹಿತ್ಯ ಸಮ್ಮೇಳನಗಳು ರಾಜ್ಯದ ಎಲ್ಲೆಡೆ ನಡೆಯುವಂತಾಗಬೇಕು. ಕನ್ನಡ ಭಾಷೆಯನ್ನು ಉಳಿಸಿ ಬೆಳೆಸುವ ಕಾರ್ಯ ಹಿಂದಿಗಿಂತಲೂ ಈಗ ಹೆಚ್ಚು ಆಗಬೇಕಾಗಿದೆ ಎಂದರು.

ನಾರಂಜಾ ಸಹಕಾರ ಸಕ್ಕರೆ ಕಾರ್ಖಾನೆಯ ಅಧ್ಯಕ್ಷ ಸೂರ್ಯಕಾಂತ ನಾಗಮಾರಪಳ್ಳಿ ಮಾತನಾಡಿ, ನಮ್ಮ ಸಾಧನೆಗಳೇ ಮಾತಾಡಬೇಕು. ವಿಜಯಕುಮಾರ ಪಾಟೀಲ್ ಕನ್ನಡ ಹೋರಾಟಗಾರರು. ಅವರ ಬದುಕು ಎಲ್ಲರಿಗೂ ಪ್ರೇರಣೆ. ಬೆಂಗಳೂರಿನಲ್ಲಿ ಹೋರಾಟ ನಡೆಸಿ, ಸಾವಿರಾರು ಕನ್ನಡ ಶಿಕ್ಷಕರಿಗೆ ನ್ಯಾಯ ದೊರಕಿಸಿಕೊಟ್ಟ ಶ್ರೇಯ ಅವರಿಗೆ ಸಲ್ಲುತ್ತದೆ ಎಂದು ತಿಳಿಸಿದರು.

**ಕನ್ನಡ ಶಾಲೆಗಳ ಸ್ಥಿತಿ ಶೋಚನೀಯವಾಗಿದೆ. ಹೀಗಾಗಿ ಸರ್ಕಾರ ಕನ್ನಡ ಶಾಲೆಗಳ ಉಳಿವಿಗೆ ವಿಶೇಷ ಕಾಳಜಿ ತೋರಬೇಕು. ಕನ್ನಡ ಶಾಲೆಗಳಿಗೆ ಅಗತ್ಯ ಸೌಕರ್ಯ ಕಲ್ಪಿಸಬೇಕು. – ಬಾಬು ವಾಲಿ, ಬಿಡಿಎ ಮಾಜಿ ಅಧ್ಯಕ್ಷ**

## ನಾಸಿರ್ ಹುಸೇನ್‌ಗೆ ಧನ್ಯವಾದ ತಿಳಿಸಿದ ಪರಮೇಶ್ವರ ನಾಯಕ್



**ನವದೆಹಲಿ ಆ.11:** ಎಐಸಿಸಿ ಅಧ್ಯಕ್ಷರು ಹಾಗೂ ರಾಜ್ಯಸಭಾ ಪ್ರತಿಪಕ್ಷ ನಾಯಕರಾದ ಮಲ್ಲಿಕಾರ್ಜುನ ಖರ್ಗೆ ಮತ್ತು ರಾಜ್ಯಸಭಾ ಸದಸ್ಯರು ಹಾಗೂ ಎಐಸಿಸಿ ಪ್ರಧಾನ ಕಾರ್ಯದರ್ಶಿಗಳೂ ಆದ ಸೈಯದ್ ನಾಸಿರ್ ಹುಸೇನ್ ಅವರನ್ನು ಭೇಟಿ ಮಾಡಿದ ಪಿ.ಟಿ.ಪರಮೇಶ್ವರನಾಯ್ಕರವರು ರಾಜ್ಯ ಗ್ಯಾರಂಟಿ ಯೋಜನೆ ಅನುಷ್ಠಾನ ಪ್ರಾಧಿಕಾರದ ಉಪಾಧ್ಯಕ್ಷರಾಗಿ ನೇಮಕ ಮಾಡಿದ್ದಕ್ಕೆ ಧನ್ಯವಾದಗಳನ್ನು ತಿಳಿಸಿದರು.


## ಕೈಗಾರಿಕಾ ಅಪಘಾತಗಳ ತಡೆ - ತುರ್ತು ನಿರ್ವಹಣೆಗೆ ಕಟ್ಟುನಿಟ್ಟಿನ ಕ್ರಮ: ಕೈಗಾರಿಕೆ ಇಲಾಖೆ ಕಟ್ಟುನಿಟ್ಟಿನ ಸೂಚನೆ

**ಬೆಂಗಳೂರು, ಆಗಸ್ಟ್ 11–**ರಾಜ್ಯದ ಕೈಗಾರಿಕಾ ಪ್ರದೇಶಗಳಲ್ಲಿ ಹಾಗೂ ವಿವಿಧ ಜಿಲ್ಲೆಗಳಲ್ಲಿ ಕಾರ್ಯಾಚರಿಸುತ್ತಿರುವ ಕೈಗಾರಿಕೆಗಳಲ್ಲಿ ಸಂಭವಿಸುವ ಆಕಸ್ಮಿಕ ಅಪಘಾತಗಳನ್ನು ಪರಿಣಾಮಕಾರಿಯಾಗಿ ನಿರ್ವಹಿಸಲು ಮತ್ತು ತನಿಖಾ ಪ್ರಕ್ರಿಯೆಗಳನ್ನು ಚುರುಕುಗೊಳಿಸಲು ಕರ್ನಾಟಕ ಸರ್ಕಾರದ ಕೈಗಾರಿಕೆ ಮತ್ತು ವಾಣಿಜ್ಯ ಇಲಾಖೆ ಕಟ್ಟುನಿಟ್ಟಿನ ಕ್ರಮಗಳಿಗೆ ಮುಂದಾಗಿದ್ದು, ಈ ಕುರಿತು ರಾಜ್ಯದ ಎಲ್ಲಾ 30 ಜಿಲ್ಲೆಗಳ ಜಿಲ್ಲಾ ಕೈಗಾರಿಕಾ ಕೇಂದ್ರಗಳ ಜಂಟಿ ನಿರ್ದೇಶಕರಿಗೆ ಹಾಗೂ ಜಿಲ್ಲಾಧಿಕಾರಿಗಳಿಗೆ ಇಲಾಖೆಯ ಆಯುಕ್ತರು ಹಾಗೂ ನಿರ್ದೇಶಕರು ಮುಖ್ಯ ಸೂಚನೆ ನೀಡಿ ಆದೇಶ ಹೊರಡಿಸಲಾಗಿದೆ.

ಇತ್ತೀಚೆಗೆ ಅಂದರೆ, 2026 ನೇ ಆಗಸ್ಟ್ 05 ರಂದು ಯಾದಗಿರಿ ಜಿಲ್ಲೆಯ ಕಡಚೂರು ಕೈಗಾರಿಕಾ ಪ್ರದೇಶದಲ್ಲಿ ಸ್ಥಾಪಿತವಾಗಿರುವ M/s CIL Labouratories Pvt Ltd ಘಟಕದಲ್ಲಿ ತಡರಾತ್ರಿ ಸಂಭವಿಸಿದ ಭೀಕರ ದುರಂತದಲ್ಲಿ ಮೂವರು ಕಾರ್ಮಿಕರು ಮೃತಪಟ್ಟು, ಇಬ್ಬರು ತೀವ್ರವಾಗಿ ಗಾಯಗೊಂಡಿದ್ದರು. ಈ ದುರಂತದ ಹಿನ್ನೆಲೆಯಲ್ಲಿ ಜಾಗೃತಗೊಂಡಿರುವ ಇಲಾಖೆಯು, ಕೈಗಾರಿಕೆಗಳಲ್ಲಿ ನಡೆಯುವ ಆಕಸ್ಮಿಕ ಅವಘಡಗಳ ನಿರ್ವಹಣೆ ಮತ್ತು ಸುರಕ್ಷತಾ ನಿಯಮಗಳ ಅನುಷ್ಠಾನಕ್ಕೆ ಸಂಬಂಧಿಸಿದಂತೆ ತುರ್ತು ಕಾರ್ಯಚರಣಾ ಮಾರ್ಗಸೂಚಿಯನ್ನು ಸಿದ್ಧಪಡಿಸಿದೆ.ಶಾಸನಬದ್ಧ ಇಲಾಖೆಗಳು ಹಾಗೂ ಅವುಗಳ ಜವಾಬ್ದಾರಿಗಳು: ಕೈಗಾರಿಕಾ ಸುರಕ್ಷತೆ ಮತ್ತು ಮಾಲಿನ್ಯ ನಿಯಂತ್ರಣಕ್ಕೆ ಸಂಬಂಧಿಸಿದಂತೆ ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿ, ಕಾರ್ಖಾನೆಗಳು, ಬಾಯ್ಲರ್, ಕೈಗಾರಿಕಾ ಸುರಕ್ಷತೆ ಮತ್ತು ಸ್ವಾಸ್ಥ್ಯ ಇಲಾಖೆ, ಕಾರ್ಮಿಕ ಇಲಾಖೆ ಮತ್ತು ಕರ್ನಾಟಕ ರಾಜ್ಯ ಅಗ್ನಿಶಾಮಕ ಮತ್ತು ತುರ್ತು ಸೇವೆಗಳ ಶಾಸನಬದ್ಧ ಇಲಾಖೆ/ಸಂಸ್ಥೆಗಳಾಗಿ ಕಾರ್ಯನಿರ್ವಹಿಸುತ್ತಿವೆ. ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿ: ಕೈಗಾರಿಕೆಗಳ ಸ್ಥಾಪನೆಗೂ ಮುನ್ನ ಪರಿಸರ ಇಲಾಖೆ ಹಾಗೂ ಮಾಲಿನ್ಯ ನಿಯಂತ್ರಣ ಮಂಡಳಿಯ ನಿಗದಿತ ಮಾನದಂಡಗಳ ಅನುಸರಣೆಯನ್ನು ಕಡ್ಡಾಯವಾಗಿ ಖಾತರಿಪಡಿಸುವುದು.

### ಕರ್ನಾಟಕ ಬಂದ್‌ಗೆ ಬೆಂಬಲ ವಿಚಾರದಲ್ಲಿ ಗೊಂದಲ, ವಿರೋಧ

# ನಿರ್ಧಾರದಿಂದ ಹಿಂದೆ ಸರಿಯುವುದಿಲ್ಲ ವಾಟಾಳ್ ನಾಗರಾಜ್ ಸ್ಪಷ್ಟನೆ



**ಹುಬ್ಬಳ್ಳಿ, ಆ.11:** ಕಾವೇರಿ ನೀರು ಹಂಚಿಕೆ ವಿಚಾರವಾಗಿ ಕನ್ನಡಪರ ಸಂಘಟನೆಗಳು ಕರೆ ನೀಡಿರುವ ರಾಜ್ಯ ಬಂದ್‌ಗೆ ದಿನಗಣನೆ ಶುರು ವಾಗುತ್ತಿದ್ದಂತೆ, ಬಂದ್ ಬೆಂಬಲಿಸುವ ವಿಚಾರದಲ್ಲಿ ತೀವ್ರ ಗೊಂದಲ ಮತ್ತು ವಿರೋಧಗಳು ವ್ಯಕ್ತವಾಗುತ್ತಿವೆ. ಇತ್ತೀಚೆಗೆ ಸುರಿದ ಉತ್ತಮ ಮಳೆ ಯಿಂದಾಗಿ ಕಾವೇರಿ ಜಲಾನಯನ ಪ್ರದೇಶದಲ್ಲಿ ನೀರಿನ ಅಭಾವ ಕೊಂಚ ತಗ್ಗಿದ್ದು, ಎರಡೂ ರಾಜ್ಯಗಳ ರೈತರಲ್ಲಿ ಸದ್ಯಕ್ಕೆ ಸಮಾಧಾನ ಮೂಡಿದೆ. ಈ ಹಿನ್ನೆಲೆಯಲ್ಲಿ "ಸದ್ಯಕ್ಕೆ ನೀರಿನ ಸಮಸ್ಯೆ ಬಗೆಹರಿದಿರುವುದರಿಂದ ಬಂದ್ ಅಗತ್ಯವಿಲ್ಲ" ಎಂದು ಕೆಲವು ಕನ್ನಡಪರ ಸಂಘಟನೆಗಳು, ವ್ಯಾಪಾರಸ್ಥರು ಹಾಗೂ ಸಂಸ್ಥೆಗಳು ಹೋರಾಟದಿಂದ ಹಿಂದೆ ಸರಿದಿವೆ. ಹುಬ್ಬಳ್ಳಿಯಲ್ಲೂ ಕೂಡ ಈ ಬಂದ್ ವಿರುದ್ಧ ಬಹಿರಂಗ ಅಪಸ್ವರಗಳು ಕೇಳಿಬಂದಿವೆ. ಇತ್ತ ಬಂದ್‌ಗೆ ಬೆಂಬಲ ಕಡಿಮೆಯಾಗುತ್ತಿದ್ದರೂ, ಕನ್ನಡ ಒಕ್ಕೂಟದ ಅಧ್ಯಕ್ಷ ವಾಟಾಳ್ ನಾಗರಾಜ್ ಮಾತ್ರ ತಮ್ಮ ನಿರ್ಧಾರದಿಂದ ಹಿಂದೆ ಸರಿಯಲು ನಿರಾಕರಿಸಿದ್ದಾರೆ.

ಯಾರೇ ಬೆಂಬಲ ನೀಡಲಿ ಅಥವಾ ನೀಡದಿರಲಿ, ಪೂರ್ವ ನಿರ್ಧಾರಿತವಾಗಿ ಕರೆ ನೀಡಿರುವಂತೆ ಇದೇ 13ರಂದು ರಾಜ್ಯ ಬಂದ್ ನಡೆಸೇ ತೀರುತ್ತೇವೆ ಎಂದು ಅವರು ಪಟ್ಟು ಹಿಡಿದಿದ್ದಾರೆ. ಕಾವೇರಿ ಜಲವಿವಾದ ಮಾತ್ರವಲ್ಲದೆ, ಕಾವೇರಿ ಮೇಲಿನ ಮೇಕೆದಾಟು ಯೋಜನೆ ಅನುಷ್ಠಾನ ಹಾಗೂ ಉತ್ತರ ಕರ್ನಾಟಕದ ಜೀವನಾಡಿ ಯಾಗಿರುವ ಮಹದಾಯಿ ಯೋಜನೆಯ ವಿಳಂಬದ ವಿರುದ್ಧವೂ ನ್ಯಾಯ ಸಿಗಬೇಕಿದೆ. ಹೀಗಾಗಿ ಈ ಹೋರಾಟ ಅನಿವಾರ್ಯ ಎಂಬುದು ಅವರ ಪ್ರತಿಪಾದನೆಯಾಗಿದೆ.ಆದರೆ, ರಾಜಧಾನಿ ಬೆಂಗಳೂರು ಸೇರಿದಂತೆ ರಾಜ್ಯದ ವಿವಿಧ ಭಾಗಗಳ ಪ್ರಮುಖ ಕನ್ನಡಪರ ಸಂಘಟನೆಗಳು, ಖಾಸಗಿ ಶಾಲಾ ಆಡಳಿತ ಮಂಡಳಿಗಳು ಹಾಗೂ ಸಾರಿಗೆ ಮತ್ತು ವ್ಯಾಪಾರ ವಹಿವಾಟುದಾರರ ಸಂಘಗಳು ಬಂದ್‌ಗೆ ತಮ್ಮ ಬೆಂಬಲವಿಲ್ಲ ಎಂದು ಈಗಾಗಲೇ ಸ್ಪಷ್ಟಪಡಿಸಿವೆ.

ಕಾವೇರಿ ಜಲಾನಯನ ಪ್ರದೇಶದಲ್ಲಿ ಪರಿಸ್ಥಿತಿ ತಿಳಿಯಾಗಿರುವಾಗ ಬಂದ್ ನಡೆಸಿ ಸಾರ್ವಜನಿಕರಿಗೆ ತೊಂದರೆ ಕೊಡುವುದು ಸೂಕ್ತವಲ್ಲ ಎಂಬುದು ಬಹುತೇಕ ಸಂಘಟನೆಗಳ ಅಭಿಪ್ರಾಯವಾಗಿದೆ. ಒಂದೆಡೆ ನಾಯಕರ ಪಟ್ಟು, ಇನ್ನೊಂದೆಡೆ ಒಗ್ಗಟ್ಟಿನ ಕೊರತೆ ಯಿಂದಾಗಿ ಈ ಬಾರಿಯ ರಾಜ್ಯ ಬಂದ್ ಸಾರ್ವಜನಿಕರಲ್ಲಿ ಭಾರೀ ಗೊಂದಲ ಮೂಡಿಸಿದೆ.

# ತುಳುನಾಡಿನ ಯುವಪೀಳಿಗೆ ಸರ್ಕಾರದ ಉನ್ನತ ಹುದ್ದೆಗಳತ್ತ ಆಸಕ್ತಿ ಬೆಳೆಸಬೇಕು- ವಾಲ್ಟರ್ ನಂದಳಿಕೆ



**ಮುಂಬೈ, ಆ.11:** ಬುದ್ಧಿವಂತರ ಜಿಲ್ಲೆ ಎಂದುಹೆಸರಾದ ತುಳುನಾಡಿನಲ್ಲಿ ಭಾರತ ಸರಕಾರದ ಐಎಎಸ್, ಐಪಿಎಸ್‌ಮುಂತಾದ ಹುದ್ದೆಗಳಲ್ಲಿ ತುಳುವರ ಸಾಧನೆ ಹೇಳಿಕೊಳ್ಳುವಂತಿಲ್ಲ. ಆ ನೆಲೆಯಲ್ಲಿ ತುಳುನಾಡಿನ ಇಂದಿನ ಯುವಪೀಳಿಗೆ ಸ್ಪರ್ಧಾತ್ಮಕ ಪರೀಕ್ಷೆಗಳಿಗೆ ಹಾಜರಾಗಿ ಸರ್ಕಾರದ ಉನ್ನತ ಹುದ್ದೆಗಳತ್ತ ಆಸಕ್ತಿ ಬೆಳೆಸುವಂತಾಗಬೇಕು ಎಂದು ಡೈಜಿವರ್ಲ್ಡ್ ಸಮೂಹದ ಸಂಸ್ಥಾಪಕ, ಆಡಳಿತ ನಿರ್ದೇಶಕ ವಾಲ್ಟರ್ ನಂದಳಿಕೆ ಹೇಳಿದರು.

ಅವರು ಇತ್ತೀಚೆಗೆ ನವದೆಹಲಿಯ ಲೋಧಿ ಎಸ್ಟೇಟ್‌ನಲ್ಲಿರುವ ದೆಹಲಿ ಕನ್ನಡ ಶಿಕ್ಷಣ ಸಂಸ್ಥೆಯಲ್ಲಿ ದೆಹಲಿ ತುಳುಸಿರಿ ಆಯೋಜಿಸಿದ ಆಟಿದ ಗೇನ ಕಾರ್ಯಕ್ರಮವನ್ನು ಹಿಂಗಾರ ಅರಳಿಸಿ ಉದ್ಘಾಟಿಸಿ, ತುಳುನಾಡಿನ ಮಹನೀಯರು ಬ್ಯಾಂಕ್, ಶಿಕ್ಷಣ, ಹೋಟೆಲ್ ಉದ್ಯಮಗಳಲ್ಲಿ ಹಾಗೂ ವೈದ್ಯಕೀಯ ಕ್ಷೇತ್ರಗಳಲ್ಲಿ ಗಣನೀಯ ಸಾಧನೆಗೈದವರು. ಇಂದು ನಗರಜೀವನದಲ್ಲಿ ಬದುಕುತ್ತಿರುವ ನಮಗೆ ಹಿರಿಯರ ಜೀವನಕ್ರಮ ಆದರ್ಶವಾದುದು. ಹಿರಿಯರ ಪ್ರತಿಯೊಂದು ಆಚರಣೆಯಲ್ಲಿ ಸತ್ವವಿದೆ.ಬದುಕಿನ ನೆಲೆಯನ್ನು ಕಂಡುಕೊಂಡು ಹೊರನಾಡಿಗೆ, ವಿದೇಶಗಳಿಗೆ ವಲಸೆಹೋದ ತುಳುವರು ತಮ್ಮ ಮಣ್ಣಿನ ಮೂಲ ಸಂಸ್ಕೃತಿಯನ್ನು ಮರೆಯಲಾರರು. ಜಾತಿ, ಧರ್ಮವನ್ನು ಮೀರಿ ಭಾಷೆಯ ನೆಲೆಯಲಿ ಒಂದಾಗುವವರು ತುಳುವರು. ತುಳುವರ ಆಟಿ ತಿಂಗಳ ಹಿನ್ನೆಲೆ, ಮಹತ್ವದಕುರಿತು ಮಾತನಾಡಿದ ಮುಖ್ಯಅತಿಥಿ ಕೇಂದ್ರಾಡಳಿತ ಪ್ರದೇಶ ಚಂಡೀಗಢ ಇಲ್ಲಿನ ಮುಖ್ಯ ಕಾರ್ಯದರ್ಶಿ ಹೆಚ್. ರಾಜೇಶ್ ಪ್ರಸಾದ್ ಐಎಎಸ್‌ಅವರು ನಮ್ಮ ಹಿರಿಯರಿಗೆ ಆಟಿ ತಿಂಗಳು ಕಷ್ಟದ ತಿಂಗಳಲ್ಲ, ಅದುಅವರ ಬದುಕಾಗಿತ್ತು. ಆ ಸಮಯದಲ್ಲಿ ಪ್ರಕೃತಿ ದತ್ತವಾದ ಔಷಧೀಯ ಹಿನ್ನೆಲೆಯುಳ್ಳ ಆಹಾರ ಪದಾರ್ಥಗಳನ್ನು ಸೇವಿಸಿ ಆರೋಗ್ಯವನ್ನು ಕಾಪಾಡಿಕೊಳ್ಳುತ್ತಿದ್ದುದು ವಿಶೇಷವಾದುದು.ಈ ಕಾರಣಕ್ಕಾಗಿಯೇ ಇಂದಿಗೂ ಆಟಿ ತಿಂಗಳು ಮಹತ್ವ ಪಡೆದಿವೆ ಎಂದರು.

ಭಾರತ ಸರ್ಕಾರದಲ್ಲಿ ಸೇವೆ ಸಲ್ಲಿಸುತ್ತಿರುವ ತುಳುನಾಡಿನ ಹೆಮ್ಮೆಯ ಅಧಿಕಾರಿ ರಕ್ಷಣಾ ಸಚಿವಾಲಯ ಭಾರತ ಸರ್ಕಾರ ಜಂಟಿ ನಿಯಂತ್ರಕರಾದ ಡಾ.ಅಕ್ಷತಾ ಎ.ರಾವ್ ಐಡಿಎಎಸ್ ನಮ್ಮ ನೆಲದ ಸಂಸ್ಕೃತಿ, ಆಹಾರ ಪದ್ಧತಿ ವೈವಿಧ್ಯಮಯ ಹಾಗೂ ಸತ್ವಯುತವಾಗಿದೆ ಎಂಬುವುದಕ್ಕೆ ಈ ಕಾರ್ಯಕ್ರಮವೇ ಸಾಕ್ಷಿ. ರಾಷ್ಟ್ರ ರಾಜಧಾನಿಯಲ್ಲಿ ತುಳುನಾಡಿನ ಮಣ್ಣಿನಕಂಪನ್ನು ಪಸರಿಸುತ್ತಿರುವ ದೆಹಲಿ ತುಳುಸಿರಿಯ ಕಾರ್ಯಅನುಕರಣೀಯ ಎಂದರು.

ಅಧ್ಯಕ್ಷತೆ ವಹಿಸಿ ಮಾತನಾಡಿದ ದೆಹಲಿ ತುಳುಸಿರಿ ಅಧ್ಯಕ್ಷ ವಸಂತಶೆಟ್ಟಿ ಬೆಳ್ಳಾರೆ ಅವರು ನಮ್ಮ ಹಿರಿಯರ ಬದುಕಿನಗುರುತನ್ನು ಯುವಪೀಳಿಗೆಗೆ ತೆರೆದಿಡುವ ಆಶಯವನ್ನು ಹೊತ್ತು ಈ ಕಾರ್ಯಕ್ರಮವನ್ನು ಕಳೆದ ಮೂರು ವರ್ಷಗಳಿಂದೀಚೆಗೆ ಆಯೋಜಿಸಲಾಗುತ್ತಿದೆ. ದಿಲ್ಲಿಯಲ್ಲೂ ನಮ್ಮ ಹಳ್ಳಿಯ ಸೊಗಡನ್ನು ಬಿತ್ತರಿಸುವಲ್ಲಿ ದೆಹಲಿ ತುಳುಸಿರಿ ನಿರಂತರವಾಗಿ ಶ್ರಮಿಸುತ್ತಿದೆ. ಕರ್ನಾಟಕರಾಜ್ಯ ಸರ್ಕಾರವು ತುಳು ಭಾಷೆಯನ್ನುಅಧಿಕೃತ ಭಾಷೆಯೆಂದು ಮಾನ್ಯತೆಗೊಳಿಸಬೇಕು. ತದನಂತರ ದೆಹಲಿಯಲ್ಲಿರುವ ಕರಾವಳಿಯ ಉನ್ನತ ಅಧಿಕಾರಿಗಳ, ಜನಪ್ರತಿನಿಧಿಗಳ ಜೊತೆಗೂಡಿ ತುಳುಭಾಷೆಯನ್ನು ಎಂಟನೇ ಪರಿಚ್ಛೇದಕ್ಕೆ ಸೇರಿಸುವ ಪ್ರಕ್ರಿಯೆಯ ಹೋರಾಟಕ್ಕೆ ಮರುಚಾಲನೆ ನೀಡುತ್ತೇವೆ ಎಂದು ಈ ಸಂದರ್ಭದಲ್ಲಿ ಹೇಳಿದರು.

**ಆಟಿಯ ಊಟದಲ್ಲಿ 38 ಬಗೆ!**

ತುಳುನಾಡಿನಲ್ಲಿ ಆಟಿ ತಿಂಗಳಲ್ಲಿ ವಿಶೇಷವಾಗಿತಯಾರಿಸುವ ಪತ್ರೊಡೆ, ಹಲಸಿನ ಗಟ್ಟಿ, ಕಣಿಲೆ ಹೆಸರುಕಾಳು ಗಸಿ, ಕೊಟ್ಟಿಗೆ, ಅರಸಿನ ಗಟ್ಟಿ, ತಿಮರೆಚಟ್ನಿ, ನೀರು ಮಾವಿನಕಾಯಿ ಚಟ್ನಿ, ಮೆಂತೆಗಂಜಿ ಹೀಗೆ 38 ಬಗೆಯ ಸವಿರುಚಿಯ ಖಾದ್ಯಗಳನ್ನು ದೆಹಲಿ ಹಾಗೂ ಎನ್‌ಸಿಆರ್ ತುಳುವರು ತಮ್ಮತಮ್ಮ ಮನೆಯಲ್ಲಿಯೇ ತಯಾರಿಸಿ 250 ಜನರಿಗೆ ಉಣಬಡಿಸಿದರು. ವೇದಿಕೆಯನ್ನು ಹಸಿರು ತೋರಣದ ಸಾಂಪ್ರದಾಯಿಕ ಶೈಲಿಯಲ್ಲಿ ಸಿಂಗರಿಸಲಾಗಿತ್ತು.

ತುಳುನಾಡಿನ ಸಾಂಪ್ರದಾಯಿಕ ಜನಜೀವನದ ಹಿರಿಮೆಯನ್ನು ನೆನಪಿಸುವ ಹಳೆಯ ಪರಿಕರಗಳ ಪ್ರದರ್ಶನ'ಕಾರ್ಯಕ್ರಮಕ್ಕೆ ವಿಶೇಷ ಮೆರುಗು ನೀಡಿತ್ತು.ಗಣ್ಯರಿಗೆ ವೀಳ್ಯದೆಲೆ, ಅಡಿಕೆ ನೀಡಿ ಸ್ವಾಗತಿಸಲಾಯಿತು. ಕು.ವೈಷ್ಣವಿ ತುಳು ಜನಪದ ನೃತ್ಯವನ್ನು, ಮೋಹನ್‌ದಾಸ್, ಮೆಲ್ವಿನ್ ಜಿ. ಲೋಬೊ, ಬಳಗ ತುಳು ಜನಪದ ಗೀತೆಗಳನ್ನು ಪ್ರಸ್ತುತಪಡಿಸಿ, ಮಕ್ಕಳಿಗೆ, ಮಹಿಳೆಯರಿಗೆ, ಪುರುಷರಿಗೆ ಮೂರು ವಿಭಾಗಗಳಲ್ಲಿ ಕರಾವಳಿಯ ಜನಪದ ಕ್ರೀಡೆಗಳನ್ನು ಆಯೋಜಿಸಲಾಗಿತ್ತು.

# ಗಾಂಜಾಮಿಶ್ರಿತ ಚಾಕೋಲೇಟ್ ಮಾರಾಟಕ್ಕೆ ಯತ್ನ: ಓರ್ವನ ಬಂಧನ

**ಬೆಳಗಾವಿ, ಆ.11:** ನಗರದ ಕಾಲೇಜೊಂದರ ಸಮೀಪ ಅಕ್ರಮವಾಗಿ ಗಾಂಜಾ ಮಿಶ್ರಿತ ಚಾಕೊಲೇಟ್ ಮಾರಾಟ ಮಾಡಲು ಯತ್ನಿಸುತ್ತಿದ್ದ ಖತರ್ನಾಕ್ ಆರೋಪಿಯೊಬ್ಬನನ್ನು ಬಂಧಿಸುವಲ್ಲಿ ಬೆಳಗಾವಿ ಪೊಲೀಸರು ಯಶಸ್ವಿಯಾಗಿದ್ದಾರೆ.

ಮೂಲತಃ ಉತ್ತರ ಪ್ರದೇಶದವನಾಗಿದ್ದು, ಪ್ರಸ್ತುತ ನಗರದ ಹನುಮಾನ್ ನಗರದಲ್ಲಿ ವಾಸವಿದ್ದ ಪಾನ್ ಅಂಗಡಿ ಮಾಲೀಕ ಬೋಲು ಪ್ರಜಾಪತಿ (39) ಬಂಧಿತ ವ್ಯಕ್ತಿಯಾಗಿದ್ದಾನೆ.ಕಾಲೇಜು ವಿದ್ಯಾರ್ಥಿಗಳನ್ನು ಹಾಗೂ ಸಾರ್ವಜನಿಕರನ್ನು ಗುರಿಯಾಗಿಸಿಕೊಂಡು ಈ ಅಕ್ರಮ ಜಾಲ ನಡೆಸಲಾಗುತ್ತಿತ್ತು ಎಂಬ ಮಾಹಿತಿ ಲಭ್ಯವಾಗಿದೆ.

ಉದ್ಯಮಬಾಗ ಪೊಲೀಸ್ ಠಾಣೆಯ ವ್ಯಾಪ್ತಿಯಲ್ಲಿ ಆರೋಪಿಯು ಸಾರ್ವಜನಿಕ ರಸ್ತೆಯಲ್ಲಿ ನಿಂತು ಈ ನಿಷೇಧಿತ ಚಾಕೊಲೇಟ್‌ಗಳನ್ನು ಮಾರಾಟ ಮಾಡುತ್ತಿದ್ದಾಗ, ಖಚಿತ ಮಾಹಿತಿ ಆಧರಿಸಿ ಪೊಲೀಸರು ತಕ್ಷಣ ದಾಳಿ ನಡೆಸಿದ್ದಾರೆ.

# ತುಂಗಭದ್ರಾ ಜಲಾಶಯಕ್ಕೆ ದಾಖಲೆ ಒಳಹರಿವು



**ಹೊಸಪೇಟೆ, ಆ.11:** ರಾಜ್ಯದ ಅತೀ ದೊಡ್ಡ ಜಲಾಶಯಗಳಲ್ಲಿ ಒಂದಾದ ಕರ್ನಾಟಕ ಸೇರಿ ಮೂರು ರಾಜ್ಯಗಳಿಗೆ ನೀರಾವರಿ ಹಾಗೂ ಕುಡಿಯಲು ನೀರೊದಗಿಸುವ ತುಂಗಭದ್ರಾ ಜಲಾಶಯದಲ್ಲಿ ಭಾರೀ ಒಳಹರಿವು ದಾಖಲಾಗಿದೆ. ಡ್ಯಾಂಗೆ ಹೊಸದಾಗಿ ಕ್ರಸ್ಟ್‌ಗೇಟ್ ಅಳವಡಿಸಿದ ಬಳಿಕ ಹೆಚ್ಚಿನ ಪ್ರಮಾಣದಲ್ಲಿ ನೀರು ಸಂಗ್ರಹಿಸಲಾಗುತ್ತಿತ್ತು.ಹೀಗಾಗಿ ಹೊರಗೆ ಹೆಚ್ಚಿನ ಪ್ರಮಾಣದ ನೀರು ಬಿಡುತ್ತಿರಲಿಲ್ಲ. ಇದೀಗ ಡ್ಯಾಂ ಬಹುತೇಕ ಭರ್ತಿ ಹಂತಕ್ಕೆ ಬಂದಿದ್ದು ನೀರು ಬಿಡುಗಡೆಗೆ ರಾಜ್ಯ ಸರ್ಕಾರ ತೀರ್ಮಾನಿಸಿದೆ. ಕೊಪ್ಪಳ ಜಿಲ್ಲಾ ಉಸ್ತುವಾರಿ ಸಚಿವರೂ ಆದ ನೀರಾವರಿ ಸಲಹಾ ಸಮಿತಿ ಅಧ್ಯಕ್ಷ ಶಿವರಾಜ್ ತಂಗಡಗಿ ತುಂಗಭದ್ರಾ ಡ್ಯಾಂ ನೀರು ಬಿಡುಗಡೆ ಬಗ್ಗೆ ಮಾಹಿತಿ ನೀಡಿದರು.

90 ದಿನ ನಿತ್ಯ 4100 ಕ್ಯೂಸೆಕ್ ನೀರು ಬಿಡುಗಡೆ ತುಂಗಭದ್ರಾ ಜಲಾಶಯದಲ್ಲಿನ ನೀರಿನ ಲಭ್ಯತೆ ಆಧಾರದ ಮೇಲೆ 90 ದಿನಗಳ ಕಾಲ 4100 ಕ್ಯೂಸೆಕ್ ನಂತೆ ಕಾಲುವೆಗಳಿಗೆ ಇಂದಿನಿಂದಲೇ ನೀರು ಹರಿಸಲು ತೀರ್ಮಾನಿಲಾಗಿದೆ.

ಪ್ರಸ್ತುತ 82 ಟಿಎಂಸಿ ನೀರಿನ ಸಂಗ್ರಹ ಇದ್ದು, ಮುಂದಿನ ದಿನಗಳಲ್ಲಿ 16 ಟಿಎಂಸಿ ನೀರು ಜಲಾಶಯಕ್ಕೆ ಹರಿದು ಬರುವ ಸಾಧ್ಯತೆ ಇದೆ ಎಂದು ಅಂದಾಜಿಸಲಾಗಿದೆ. ಮುಂದಿನ ತಿಂಗಳು ಸೆಪ್ಟೆಂಬರ್ 11ರಂದು ಮತ್ತೊಂದು ನೀರಾವರಿ ಸಲಹಾ ಸಮಿತಿ ಸಭೆ ಕರೆಯಲಾಗುವುದು ಎಂದು ತಿಳಿಸಿದರು.

GOLDEN JUBILEE CELEBRATION 50 SATHYA SAI GRAMA, MUDDENAHALLI

# an Evening Divine

*The Roots of Love, The Reach of Grace*

*50 Years of Sathya Sai Grama*

**Date:** Friday, 14 August 2026

**Venue:** Chamara Vajra, Chamundi Hotel Private Limited, Bengaluru, Karnataka — 560006

GOLDEN JUBILEE CELEBRATION 50 SATHYA SAI GRAMA, MUDDENAHALLI

## Programme Schedule

4:30 PM: Guest Arrival & Registration
5:00 PM: Vedic Invocation
5:10 PM: Welcome Address & Introduction
5:20 PM: Beneficiary Sharing
5:35 PM: District Service Highlights Video Presentation

5:45 PM: Fireside Chat with
**Sadguru Sri Madhusudan Sai**
Founder, One World One Family Mission

An intimate conversation on the vision, values and humanitarian initiatives o f the One World One Family Mission.

6:30 PM: Sathya Sai Grama Golden Jubilee Special Message
6:40 PM: Musical Extravaganza by Sai Symphony Orchestra
7:45 PM: Vote of Thanks
8:00 PM: Dinner & Fellowship



ONE WORLD ONE FAMILY MISSION

## About The Evening

In conjunction with the Golden Jubilee celebrations marking fifty years of selfless love and service at Sathya Sai Grama, Muddenahalli, Karnataka, we cordially invite you to An Evening Divine with Sadguru Sri Madhusudan Sai, Founder of the One World One Family Mission and a global humanitarian leader whose work today extends across more than 100 countries.

Over five decades, what began as values-based education at Sathya Sai Grama has evolved into a global initiative, extending it's services to 100 countries by addressing some of society's most pressing needs through free nutrition, education, healthcare and rural development programmes. Anchored in the spirit of selfless service, the Mission continues to create sustained impact across millions of lives.

As part of this special gathering, Sadguru Sri Madhusudan Sai will engage in an exclusive fireside session, bringing forward a closer understanding of the Mission's journey while opening conversations on how collective leadership and purposeful action can contribute meaningfully to the progress of your district. Sustainable national progress begins at the district level, where local leadership and collective effort translate intent into measurable change.

The evening will also feature a performance by beneficiaries of the Mission, individuals whose lives have been meaningfully transformed through equitable access to essential services and opportunities.

We look forward to your presence and invite you to attend this event to learn about the Mission, exchange perspectives and explore opportunities for collaboration.

Contact Details
Sri Sunil Narang : +91 9845000765
Sri Anand K Kadali : +91 9901999196

RSVP Requested

Click or Scan to Register

**Sai Symphony Orchestra**

